ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಆಗಸ್ಟ್ 19 ಸೋಮವಾರ 2024

₹4

ಸಂಪುಟ: 45 | ಸಂಚಿಕೆ: 124 | ಪುಟಗಳು: 10

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, *website: www.mysurumithra.com*

ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಮಹದೇವಪ್ಪ ನೇತೃತ್ವದಲ್ಲಿ ಮೈಸೂರು ಮೆಡಿಕಲ್ ಕಾಲೇಜು ಶತಮಾನೋತ್ಸವ ಸಮಾರೋಪ ಸಂಭ್ರಮಾಚರಣೆ ಸಂಬಂಧ ಸಭೆ



ಮೈಸೂರು, ಆ.18(ಎಂಕೆ)– ಶತಮಾನೋತ್ಸವ ಪೂರೈಸಿರುವ ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಶತಮಾನೋತ್ಸವ ಸಮಾರೋಪ ಸಂಭ್ರಮಾಚರಣೆ ಕುರಿತು ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಿ, ಚರ್ಚಿಸಲಾಯಿತು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಕಳೆದೊಂದು ವರ್ಷದಲ್ಲಿ ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯಲ್ಲಿ ಕೈಗೊಂಡ ಕಾರ್ಯಕ್ರಮಗಳು ಕುರಿತು ಮಾಹಿತಿ ಪಡೆದ ಸಚಿವರು, ಸೆ.27, 28 ಹಾಗೂ 29ರಂದು ನಡೆಯುವ ಶತಮಾನೋತ್ಸವ ಸಮಾರೋಪ ಸಂಭ್ರಮ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸುವಂತೆ ಸೂಚಿಸಿದರು.

ಈ ವೇಳೆ ಮಾತನಾಡಿದ ಎಂಎಂಸಿ ಆರ್‌ಐ ಡೀನ್ ಮತ್ತು ನಿರ್ದೇಶಕಿ ಡಾ.ಕೆ.ಆರ್.ದಾಕ್ಷಾಯಿಣಿ ಮೂರು ದಿನಗಳ ಶತಮಾನೋತ್ಸವ ಸಮಾರೋಪದಲ್ಲಿ

ಕೆ.ಆರ್.ಆಸ್ಪತ್ರೆ, ಚೆಲುವಾಂಬ ಇನ್ನಿತರೆ ಕಟ್ಟಡಗಳ ನವೀಕರಣ ಕಾಮಗಾರಿ ಕುರಿತು ಮಾಹಿತಿ ಪಡೆದ ಸಚಿವರು, ನವೀಕರಣ ಕಾಮಗಾರಿ ಗುಣಮಟ್ಟದ ಜೊತೆಗೆ ತ್ವರಿತವಾಗಿ ಪೂರ್ಣಗೊಳಿಸಿ ಎಂದು ಸೂಚಿಸಿದರು

ವಿದೇಶದಲ್ಲಿ ವೈದ್ಯರಾಗಿ ಸೇವೆ ಸಲ್ಲಿಸುತ್ತಿರುವ ಹಳೇ ವೈದ್ಯಕೀಯ ವಿದ್ಯಾರ್ಥಿಗಳಿಂದ ಉಪನ್ಯಾಸ ಕಾರ್ಯಕ್ರಮಗಳು ಇರಲಿದೆ. ವಿದ್ಯಾರ್ಥಿಗಳಿಂದ ಅರಮನೆ ಕೋಟೆ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನ ಎದುರಿನಿಂದ ಕೆ.ಆರ್.ಆಸ್ಪತ್ರೆವರೆಗೆ ಕಾಲ್ನಡಿಗೆ ಜಾಥಾ ನಡೆಯಲಿದೆ ಎಂಬಿತ್ಯಾದಿ ಮಾಹಿತಿ ನೀಡಿದರು.

ಸಭೆಯಲ್ಲಿ ಶಾಸಕರಾದ ಜಿ.ಟಿ.ದೇವೇಗೌಡ, ಕೆ.ಹರೀಶ್‌ಗೌಡ, ಜಿಲ್ಲಾಧಿಕಾರಿ ಲಕ್ಷ್ಮಿಕಾಂತ್ ರೆಡ್ಡಿ, ಜಿಪಂ ಸಿಇಓ ಕೆ.ಎಂ.ಗಾಯತ್ರಿ, ಮೈಸೂರು ಮೆಡಿಕಲ್ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ವಿವಿಧ ಆಸ್ಪತ್ರೆಗಳ ವೈದ್ಯಕೀಯ ಅಧೀಕ್ಷಕರಾದ ಡಾ.ರಾಜೇಂದ್ರ ಡಾ.ಪಾಟೀಲ್, ಡಾ.ಶೋಭಾ, ಡಾ.ಪ್ರಶಾಂತ್, ಡಾ.ಮೋಹನ್, ಅಲುಮ್ನಿ ಅಸೋಸಿಯೇಷನ್‌ನ(ಮಾ) ಡಾ.ಶಶಿಧರ್, ನೋಡಲ್ ಅಧಿಕಾರಿಗಳು ಇದ್ದರು.

ನಗರ ಸ್ಥಳೀಯ ಸಂಸ್ಥೆ ಚುನಾವಣೆ: ಮೈಸೂರಲ್ಲಿ ಬಿಜೆಪಿ ಪೂರ್ವಭಾವಿ ಸಭೆ



ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ನಡೆಯಿತು.

ಮೈಸೂರು, ಆ.18(ಎಸ್‌ಬಿಡಿ)– ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯ್ತಿ ಅಧ್ಯಕ್ಷ ಸ್ಥಾನದ ಚುನಾವಣೆ ಹಿನ್ನೆಲೆಯಲ್ಲಿ ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಪೂರ್ವಭಾವಿ ಸಭೆ ನಡೆಸಲಾಯಿತು.

ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ನಂಜನಗೂಡು ವಿಧಾನಸಭಾ ಕ್ಷೇತ್ರ, ತಿ.ನರಸೀಪುರ, ಹೆಚ್.ಡಿ.ಕೋಟೆ, ಹುಣಸೂರು ವಿಧಾನಸಭಾ ಕ್ಷೇತ್ರದ ಸ್ಥಳೀಯ ಸಂಸ್ಥೆಗಳ ಹಾಲಿ ಸದಸ್ಯರು ಪಾಲ್ಗೊಂಡಿದ್ದರು.

ಈ ವೇಳೆ ಎಲ್.ಆರ್.ಮಹದೇವಸ್ವಾಮಿ ಮಾತನಾಡಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ಸೂಚನೆಯಂತೆ ಮೈಸೂರು ಗ್ರಾಮಾಂತರ ವಿಭಾಗದ ಮಂಡಲದ ಪ್ರಮುಖರೊಂದಿಗೆ ಸಭೆ ನಡೆಸಲಾಗಿದೆ. ಈಗಿನಿಂದಲೇ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯ್ತಿ ಸದಸ್ಯರು ಜಾಗೃತರಾಗಬೇಕು. ಬಿಜೆಪಿ–ಜೆಡಿಎಸ್ ಸದಸ್ಯರು ಸಮನ್ವಯದೊಂದಿಗೆ ಮುಂದುವರೆಯಬೇಕು. ಆಯಾ ಕ್ಷೇತ್ರದ ಮಂಡಲ ಅಧ್ಯಕ್ಷರು ಹಾಗೂ ಸದಸ್ಯರ ಸಲಹೆ ಹಾಗೂ ಅಭಿಪ್ರಾಯಗಳನ್ನು ಪಡೆದು ಚುನಾವಣೆ ಎದುರಿಸಬೇಕು. ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯ್ತಿ ಅಧ್ಯಕ್ಷ ಚುನಾವಣೆಯಲ್ಲಿ ಯಶಸ್ವಿಯಾಗುವ ನಿಟ್ಟಿನಲ್ಲಿ ಎಲ್ಲರೂ ಒಮ್ಮತದಿಂದ ಕೆಲಸ ಮಾಡಬೇಕು ಎಂದು ತಿಳಿಸಿದರು.

ನಂಜನಗೂಡು ಮಾಜಿ ಶಾಸಕ ಹರ್ಷವರ್ಧನ್ ಮಾತನಾಡಿ, ಜೆಡಿಎಸ್ ಪಕ್ಷದವರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಯಾವುದೇ ಗೊಂದಲಕ್ಕೆ ಅವಕಾಶವಾಗದಂತೆ ಚುನಾವಣೆಯನ್ನು ಎದುರಿಸಬೇಕಿದೆ ಎಂದು ಸಲಹೆ ನೀಡಿದರು.

ಮುಖಂಡ ಎಸ್.ಮಹದೇವಯ್ಯ ಮಾತನಾಡಿ, ಕಳೆದ ಲೋಕಸಭಾ ಚುನಾವಣೆಯಿಂದಲೂ ಬಿಜೆಪಿ ಹಾಗೂ ಜೆಡಿಎಸ್ ಮುಖಂಡರು ಒಗ್ಗಟ್ಟಾಗಿ ಕೆಲಸ ಮಾಡಿದ್ದರಿಂದ ಉಭಯ ಪಕ್ಷಗಳ ಬಲವರ್ಧನೆ ಸಾಧ್ಯವಾಗಿದೆ. ಮುಂದೆಯೂ ನಮ್ಮ ಹೋರಾಟ ಪ್ರಾಮಾಣಿಕವಾಗಿರುತ್ತದೆ ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಲಕೃಷ್ಣ, ಮಹೇಶ್ ಮಡವಾಡಿ, ಜಿಲ್ಲಾ ಉಪಾಧ್ಯಕ್ಷ ರಮೇಶ್ ಕುಮಾರ್, ಗಣೇಶ್ ಕುಮಾರಸ್ವಾಮಿ, ಹುಣಸೂರು ನಗರಾಧ್ಯಕ್ಷ ಟಿ.ಡಿ.ನಾರಾಯಣ್, ಹೆಚ್.ಡಿ.ಕೋಟೆ ಅಧ್ಯಕ್ಷ ಶಂಭೇಗೌಡ, ಸರಗೂರು ಅಧ್ಯಕ್ಷ ಗುರುಸ್ವಾಮಿ, ನಂಜನಗೂಡು ನಗರಸಭೆ ಮಾಜಿ ಅಧ್ಯಕ್ಷ ಮಹದೇವಸ್ವಾಮಿ, ಮಾಜಿ ಉಪಾಧ್ಯಕ್ಷೆ ನಾಗಮಣಿ ಶಂಕರಪ್ಪ, ಓಬಿಸಿ ಜಿಲ್ಲಾಧ್ಯಕ್ಷ ರಾಮಚಂದ್ರು, ಗಿರೀಶ್, ಮಂಜುನಾಥ್, ಕಾರ್ಯಾಲಯ ಕಾರ್ಯದರ್ಶಿ ಪಾಪಣ್ಣ ಮತ್ತಿತರರು ಭಾಗವಹಿಸಿದ್ದರು.

ಶ್ರೀ ಲಕ್ಷ್ಮಿ ವೆಂಕಟರಮಣ ಸ್ವಾಮಿ ದೇವಸ್ಥಾನದಲ್ಲಿ ಲಡ್ಡು ವಿತರಣೆ



ಶ್ರಾವಣ ಶನಿವಾರ ಪ್ರಯುಕ್ತ ಶ್ರೀನಿವಾಸ ಭಕ್ತ ಮಂಡಳಿ ವತಿಯಿಂದ ಮೈಸೂರಿನ ಒಂಟಿಕೊಪ್ಪಲು ಲಕ್ಷ್ಮಿವೆಂಕಟರಮಣಸ್ವಾಮಿ ದೇವಸ್ಥಾನದಲ್ಲಿ ಭಕ್ತರಿಗೆ 10 ಸಾವಿರ ಲಾಡು ವಿತರಣೆಗೆ ಶಾಸಕ ಕೆ.ಹರೀಶ್ ಗೌಡ ಚಾಲನೆ ನೀಡಿದರು.

ಮೈಸೂರು, ಆ.18–ಶ್ರಾವಣ ಶನಿವಾರ ಪ್ರಯುಕ್ತ ಶ್ರೀನಿವಾಸ ಭಕ್ತ ಮಂಡಳಿ ವತಿಯಿಂದ ಒಂಟಿಕೊಪ್ಪಲು ಲಕ್ಷ್ಮಿ ವೆಂಕಟರಮಣಸ್ವಾಮಿ ದೇವಸ್ಥಾನದಲ್ಲಿ ಭಕ್ತರಿಗೆ 10 ಸಾವಿರ ಲಾಡು ವಿತರಣೆಗೆ ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್ ಗೌಡ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಶ್ರಾವಣ ಮಾಸದ ಶನಿವಾರದಂದು ವೆಂಕಟೇಶ್ವರ ಸನ್ನಿಧಿಯಲ್ಲಿ ಭಕ್ತಸಮೂಹ ಧಾರ್ಮಿಕ ಸೇವೆ, ಪ್ರಾರ್ಥನೆ, ಸಂಕಲ್ಪ ನೆರವೇರಿಸುತ್ತಾರೆ, ಶ್ರೀನಿವಾಸ ಭಕ್ತ ಮಂಡಳಿ ವತಿಯಿಂದ ದೇವರಿಗೆ ಪ್ರಿಯವಾದ ಲಾಡು ವಿತರಣೆಯಂತಹ ಸೇವಾ ಕಾರ್ಯ ಶ್ಲಾಘನೀಯ. ಮುಂದಿನ ದಿನದಲ್ಲಿ ಭರತನಾಟ್ಯ, ಭಜನೆ, ಸಂಗೀತ ಕಾರ್ಯಕ್ರಮಗಳು, ಶ್ರೀನಿವಾಸ ಕಲ್ಯಾಣ, ತಿರುಪತಿ ಪ್ರವಾಸ ಹಮ್ಮಿಕೊಳ್ಳಲು ಶ್ರೀನಿವಾಸ ಭಕ್ತ ಮಂಡಳಿ ವತಿಯಿಂದ ಸಮಿತಿ ರಚಿಸಿ ಕಾರ್ಯ ರೂಪಕ್ಕೆ ತರಲಾಗುವುದು ಎಂದರು,

ದೇವಸ್ಥಾನದ ಅಧ್ಯಕ್ಷ ಕೆ.ಆರ್. ಮೋಹನ್ ಕುಮಾರ್, ಟ್ರಸ್ಟಿ ರಾಮಣ್ಣ, ಯುವ ಮುಖಂಡ ಎನ್.ಎಂ.ನವೀನ್‌ಕುಮಾರ್, ಉದ್ಯಮಿ ಸ್ವೀಟ್ ಮಹೇಶ್, ಮಹೇಶ್ ಶೆಣೈ, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ರವಿ ಮಂಚೇಗೌಡನ ಕೊಪ್ಪಲು, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ವಿಕ್ರಂ ಅಯ್ಯಂಗಾರ್, ರಾಕೇಶ್, ಅಜಯ್ ಶಾಸ್ತ್ರಿ, ಜಿ.ರಾಘವೇಂದ್ರ ವಿನಯ್ ಕುಮಾರ್, ದುರ್ಗಾ ಪ್ರಸಾದ್, ರಾಜೇಶ್, ಚೇತನ್ ಕಾಂತರಾಜು, ಭೈರತಿ ಲಿಂಗರಾಜು, ಸುಚಿಂದ್ರ ಇನ್ನಿತರರು ಇದ್ದರು

ಶಾಸಕ ಜಿಟಿಡಿಯಿಂದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ, ಲ್ಯಾಪ್‌ಟಾಪ್ ಖರೀದಿಸಲು ಸಹಾಯ ಧನ ವಿತರಣೆ



ಶಾಸಕ ಜಿ.ಟಿ.ದೇವೇಗೌಡರು ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ, ಲ್ಯಾಪ್‌ಟಾಪ್ ಖರೀದಿಸಲು ಸಹಾಯ ಧನ, ಅಂಗವಿಕಲರಿಗೆ ಪೋಷಣಾ ಭತ್ಯೆ, ಜೀವ ವಿಮೆ ಪಾಲಿಸಿ ಹಾಗೂ ಚಾಲನಾ ಪರವಾನಗಿ ವಿತರಿಸಿದರು.

ಮೈಸೂರು, ಆ.18(ಜಿಎ)–ಬೋಗಾದಿ ಪಟ್ಟಣ ಪಂಚಾಯಿತಿ ವತಿಯಿಂದ ಎಸ್‌ಎಫ್‌ಸಿ ಮುಕ್ತನಿಧಿ ಮತ್ತು ಪಟ್ಟಣ ಪಂಚಾಯಿತಿ ಅನುದಾನದಿಂದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ, ಲ್ಯಾಪ್‌ಟಾಪ್ ಖರೀದಿಸಲು ಸಹಾಯ ಧನ, ಅಂಗವಿಕಲರಿಗೆ ಪೋಷಣಾ ಭತ್ಯೆ, ಜೀವ ವಿಮೆ ಪಾಲಿಸಿ ಹಾಗೂ ಚಾಲನಾ ಪರವಾನಗಿ ವಿತರಿಸಲಾಯಿತು.

ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಬೋಗಾದಿ ಪಟ್ಟಣ ಪಂಚಾಯಿತಿ ಕಚೇರಿಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಶಾಸಕ ಜಿ.ಟಿ.ದೇವೇಗೌಡ ಪರಿಶಿಷ್ಟ ಜಾತಿ, ಪಂಗಡ ಹಾಗೂ ಹಿಂದುಳಿದ 10 ವಿದ್ಯಾರ್ಥಿಗಳಿಗೆ 62,000 ರೂ. ವಿದ್ಯಾಭ್ಯಾಸ ಪ್ರೋತ್ಸಾಹ ಧನ, ಲ್ಯಾಪ್‌ಟಾಪ್ ಖರೀದಿಸಲು 40,000 ರೂ., 20 ಅಂಗವಿಕಲರಿಗೆ 1 ಲಕ್ಷ ರೂ. ಪೋಷಣಾ ಭತ್ಯೆ, 10 ಮಂದಿ ಫಲಾನುಭವಿಗಳಿಗೆ 3 ಲಕ್ಷ ರೂ. ಜೀವ ವಿಮೆ ಪಾಲಿಸಿ ಹಾಗೂ ಲಘು ವಾಹನ ತರಬೇತಿ ಪಡೆದ ಯುವಕ, ಯುವತಿಯರಿಗೆ 1 ಲಕ್ಷ ರೂ ವಿತರಿಸಿದರು.

ಈ ವೇಳೆ ಪಂಚಾಯಿತಿ ಮುಖ್ಯಾಧಿಕಾರಿ ಎಂ.ಬಸವರಾಜು, ಕಂದಾಯ ನಿರೀಕ್ಷಕ ಡಿ.ಎನ್.ವಿಜಯಕುಮಾರ್, ಸಹಾಯಕ ಅಭಿಯಂತರ ಹರ್ಷ, ಆರೋಗ್ಯ ನಿರೀಕ್ಷಕ ಪುನೀತ್ ಕುಮಾರ್, ಸಮುದಾಯ ಸಂಘಟನಾಧಿಕಾರಿ ಕಾಮರಾಜು ಮತ್ತಿತರರು ಉಪಸ್ಥಿತರಿದ್ದರು.

ಮಾಹಿತಿ ಹಕ್ಕು ಕಾಯ್ದೆ ದುರುಪಯೋಗ ಆರೋಪ

ಆರ್‌ಟಿಐ ಕಾರ್ಯಕರ್ತರ ಆಸ್ತಿ ತನಿಖೆಗೆ ದಸಂಸ ಆಗ್ರಹ

ಮೈಸೂರು,ಆ.18(ಜಿಎ)–ಮಾಹಿತಿ ಹಕ್ಕು ಕಾಯ್ದೆಯನ್ನು ಕೆಲವರು ದುರುಪಯೋಗ ಪಡಿಸಿಕೊಳ್ಳುತ್ತಿದ್ದಾರೆ. ಈ ಮೂಲಕ ಅಪಾರ ಪ್ರಮಾಣದ ಆಸ್ತಿ ಪಾಸ್ತಿಗಳನ್ನು ಅಕ್ರಮವಾಗಿ ಸಂಪಾದಿಸುತ್ತಿದ್ದು, ಮುಡಾ ಹಗರಣ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರಿಗೆ ದೂರು ನೀಡಿರುವ ಟಿ.ಜೆ. ಅಬ್ರಹಾಂ, ಸ್ನೇಹಮಯಿ ಕೃಷ್ಣ ಹಾಗೂ ಗಂಗರಾಜು ಅವರು ಎಷ್ಟೆಷ್ಟು ಆಸ್ತಿ ಗಳಿಸಿದ್ದಾರೆ ಎಂಬ ಬಗ್ಗೆ ತನಿಖೆ ನಡೆಸಬೇಕೆಂದು ದಲಿತ ಸಂಘರ್ಷ ಸಮಿತಿ ರಾಜ್ಯ ಸಂಚಾಲಕ ದೇವಗಳ್ಳಿ ಸೋಮಶೇಖರ್ ಆಗ್ರಹಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಾರದರ್ಶಕತೆ ಇರಬೇಕು, ಎಲ್ಲರೂ ಮಾಹಿತಿ ತಿಳಿಯಬೇಕು ಎಂಬ ಕಾರಣದಿಂದ ಆರ್‌ಟಿಐ ಕಾಯ್ದೆ ಇದೆ. ಆದರೆ ಮುಡಾ ಹಗರಣದಲ್ಲಿ ಸಿಎಂ ಅವರಿಂದ ಯಾವುದೇ ಅನ್ಯಾಯ ಆಗಿರದಿದ್ದರೂ, ಯಾರ ಆಸ್ತಿಯನ್ನು ಕಬಳಿಸದಿದ್ದರೂ ಆರ್‌ಟಿಐ ಕಾರ್ಯಕರ್ತ ನೀಡಿದ ದೂರಿನ ಮೇರೆಗೆ ಏಕಾಏಕಿ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದು ಸರಿಯಲ್ಲ ಎಂದರು.

ಸಿಎಂ ವಿರುದ್ಧ ಯಾವುದೇ ಗುರುತರ ಆರೋಪ ಇಲ್ಲದಿದ್ದರೂ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದು ಕೇಂದ್ರ ಸರ್ಕಾರ ಸಂವಿಧಾನ ಹಾಗೂ ಸಾಮಾಜಿಕ ನ್ಯಾಯದ ಮೇಲೆ ನಡೆಸುತ್ತಿರುವ ದಬ್ಬಾಳಿಕೆ ಆಗಿದೆ. ರಾಜ್ಯಪಾಲರು ಸಹ ಸಂವಿಧಾನ ಬದ್ಧವಾಗಿ ನಡೆಯದೇ ಕೇವಲ ಬಿಜೆಪಿ ನಾಯಕರ ಕೈಗೊಂಬೆಯಂತೆ ವರ್ತಿಸಿದ್ದು, ರಾಜ್ಯಪಾಲರಾಗಿ ಮುಂದುವರಿಯುವ ನೈತಿಕತೆ ಹೊಂದಿಲ್ಲ. ಹೀಗಾಗಿ ಅವರು ಕೂಡಲೇ ರಾಜ್ಯದಿಂದ ವಾಪಸಾಗಬೇಕು ಎಂದು ಒತ್ತಾಯಿಸಿದರು.

ಶೋಷಿತರ ಪರ, ಸಂವಿಧಾನ ಪರ ಇರುವ ಸಿದ್ದರಾಮಯ್ಯ ಅವರನ್ನು ಬಲಿಪಶು ಮಾಡುವುದಕ್ಕೆ ರಾಜ್ಯದ ಜನತೆ ಬಿಡುವುದಿಲ್ಲ. ಹೀಗಾಗಿ ಅವರು ಸಿಎಂ ಸ್ಥಾನಕ್ಕೆ ಯಾವುದೇ ಕಾರಣದಿಂದಲೂ ರಾಜೀನಾಮೆ ನೀಡಬಾರದೆಂದು ಕೋರಿದರು. ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಶಾದನಹಳ್ಳಿ ನಾರಾಯಣ, ಕಾಂತರಾಜು ಅರ್ಜುನಹಳ್ಳಿ, ಪ್ರಸನ್ನ ತಳೂರು, ಬೆಲವತ್ತ ರಾಮಚಂದ್ರ ಉಪಸ್ಥಿತರಿದ್ದರು.

ಬೌದ್ಧ ಧರ್ಮದ ವಿಧಿ ವಿಧಾನದಂತೆ ಪ್ರೊ.ಮಹೇಶ್‌ಚಂದ್ರ ಗುರು ಅಂತ್ಯಕ್ರಿಯೆ



ಗುಂಡ್ಲುಪೇಟೆ, ಆ.18(ಎಂಕೆ)– ಮೈಸೂರು ವಿವಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ಅಧ್ಯಯನ ವಿಭಾಗದ ನಿವೃತ್ತ ಪ್ರಾಧ್ಯಾಪಕರೂ ಆದ ಪ್ರಗತಿಪರ ಚಿಂತಕ ಪ್ರೊ.ಬಿ.ಪಿ.ಮಹೇಶ್ ಚಂದ್ರಗುರು ಅವರ ಅಂತ್ಯ ಸಂಸ್ಕಾರ ಬೌದ್ಧ ಧರ್ಮದ ವಿಧಿ ವಿಧಾನದಂತೆ ಭಾನುವಾರ ನೆರವೇರಿತು.

ಗುಂಡ್ಲುಪೇಟೆಯ ಊಟಿ ರಸ್ತೆ ಸಮೀಪ ದಲ್ಲಿರುವ ಅವರ ಜಮೀನಿನಲ್ಲಿ ಬೌದ್ಧ ಭಿಕ್ಕುಗಳ ಸಮ್ಮುಖದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು. ಇದಕ್ಕೂ ಮುನ್ನ ಮೈಸೂರಿನ ವಿಜಯನಗರ 2ನೇ ಹಂತದಲ್ಲಿರುವ ಮನೆಯಲ್ಲಿ ಅವರ ಅಪಾರ ಶಿಷ್ಯ ವೃಂದ, ಸ್ನೇಹಿತರು, ಬಂಧು–ಮಿತ್ರರು ಅಂತಿಮ ದರ್ಶನ ಪಡೆದರು.

ಅಂತ್ಯಕ್ರಿಯೆ ವೇಳೆ ಶಾಸಕರಾದ ಗಣೇಶ್ ಪ್ರಸಾದ್, ನರೇಂದ್ರಸ್ವಾಮಿ, ಕಾಂಗ್ರೆಸ್ ಮುಖಂಡೆ ಪುಷ್ಪಾ ಅಮರನಾಥ್, ಮಾಜಿ ಮೇಯರ್ ಪುರುಷೋತ್ತಮ್, ನಂಜುಂಡ ಪ್ರಸಾದ್, ನವೀನ್ ಮೌರ್ಯ, ಉಲ್ಲಾಸ್, ದೀಲಿಪ್ ನರಸಯ್ಯ, ಪುರಸಭಾ ಸದಸ್ಯ ರಾಜ್‌ಗೋಪಾಲ್ ಸೇರಿದಂತೆ ಹಲವರು ಭಾಗವಹಿಸಿದ್ದರು.

ಇಂದು ಉಚಿತ ಸಾಮೂಹಿಕ ಯಜುರುಪಾಕರ್ಮ

ಮೈಸೂರು: ಶ್ರೀರಾಮಚಂದ್ರಾಪುರ ಮಠದ ಹವ್ಯಕ ಮಹಾಮಂಡಲ ಮೈಸೂರು ವಲಯದ ವತಿಯಿಂದ ಆ.19ರ ಬೆಳಗ್ಗೆ 7 ಗಂಟೆಗೆ ಉಚಿತ ಸಾಮೂಹಿಕ ಯಜುರುಪಾಕರ್ಮವನ್ನು ಬೋಗಾದಿಯ ಸಾಯಿ ಸರಸ್ವತಿ ವಿದ್ಯಾ ಕೇಂದ್ರದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಭಾಗವಹಿಸುವವರು ಪಂಚಪಾತ್ರೆ, ಉದ್ದರಣೆ, ಚಾಪೆ, ಪೂಜಾ ಸಾಮಗ್ರಿಗಳು, ಜನಿವಾರ ಹಾಗೂ ದಾನಾದಿಗಳನ್ನು ತರಬೇಕು. ಎಲ್ಲಾ ತ್ರಿಮತಸ್ಥ ಬ್ರಾಹ್ಮಣರು ಭಾಗವಹಿಸಬಹುದು. ಮಾಹಿತಿಗೆ ರಾಕೇಶ್ ಭಟ್ (ಮೊ.9916221184) ಸಂಪರ್ಕಿಸಿ.

ಆ.22ರಿಂದ ಬ್ಯಾಸ್ಕೆಟ್ ಬಾಲ್ ಕ್ರೀಡಾಕೂಟ

ಮೈಸೂರು,ಆ.18(ಪಿಎಂ)– ನ್ಯಾಷನಲ್ ಸ್ಪೋರ್ಟ್ಸ್ ಕ್ಲಬ್ ವತಿಯಿಂದ ಆ.22ರಿಂದ 24ರವರೆಗೆ ಪ್ರಾಥಮಿಕ ಶಾಲೆ, ಪ್ರೌಢ ಶಾಲೆ ಹಾಗೂ ಪಿಯುಸಿಯ ಬಾಲಕ ಮತ್ತು ಬಾಲಕಿಯರಿಗೆ ಬ್ಯಾಸ್ಕೆಟ್‌ಬಾಲ್ ಕ್ರೀಡಾಕೂಟ ಆಯೋಜಿಸಲಾಗಿದೆ. ಸುಬ್ಬರಾಯನಕೆರೆಯ ಸ್ವಾತಂತ್ರ್ಯ ಹೋರಾಟ ಗಾರರ ಉದ್ಯಾನವನದಲ್ಲಿರುವ ಕ್ಲಬ್‌ನ ಅಂಕಣದಲ್ಲಿ ಕ್ರೀಡಾಕೂಟ ನಡೆಯಲಿದೆ. ಮಾಹಿತಿಗಾಗಿ ಮೊ.ಸಂ.93421 17430, 98455 54450 ಸಂಪರ್ಕಿಸಬಹುದು.

ಕರಾವಳಿ ಪಡೆ ಮಹಾನಿರ್ದೇಶಕ ರಾಕೇಶ್ ಪಾಲ್ ನಿಧನ



ಚೆನ್ನೈ, ಆ.18– ಭಾರತೀಯ ಕರಾವಳಿ ಪಡೆಯ ಮಹಾನಿರ್ದೇಶಕ ರಾಕೇಶ್ ಪಾಲ್ ಅವರು ಚೆನ್ನೈನ ಸರ್ಕಾರಿ ಆಸ್ಪತ್ರೆಯಲ್ಲಿ ಭಾನುವಾರ ಹೃದಯಾಘಾತದಿಂದ ನಿಧನರಾದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕರಾವಳಿ ಪಡೆಯು ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಅವರು ಚೆನ್ನೈಗೆ ಬಂದಿದ್ದರು. ಬೆಳಿಗ್ಗೆ ಆರೋಗ್ಯದಲ್ಲಿ ಏರುಪೇರು ಕಾಣಿಸಿಕೊಂಡದ್ದರಿಂದ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಮೃತದೇಹವನ್ನು ನವದೆಹಲಿಗೆ ಕೊಂಡೊಯ್ಯಲು ವ್ಯವಸ್ಥೆ ಮಾಡಲಾಗುವುದು ಎಂದು ಹೇಳಿದ್ದಾರೆ. ರಾಕೇಶ್ ಪಾಲ್ ಅವರು ಕರಾವಳಿ ಪಡೆಯ 25ನೇ ಮಹಾನಿರ್ದೇಶಕರಾಗಿ ಕಳೆದ ವರ್ಷ ಜುಲೈ 19ರಂದು ಅಧಿಕಾರ ವಹಿಸಿಕೊಂಡಿದ್ದರು. 34 ವರ್ಷಗಳ ವೃತ್ತಿಜೀವನದಲ್ಲಿ ಅವರು ನೌಕಾಪಡೆ ಮತ್ತು ಕರಾವಳಿ ಪಡೆಯಲ್ಲಿ ಹಲವು ಪ್ರಮುಖ ಹುದ್ದೆಗಳನ್ನು ನಿಭಾಯಿಸಿದ್ದಾರೆ.

ಮಾದಶೆಟ್ಟಿ ನಿಧನ



ಚಾಮರಾಜನಗರ, ಆ.18– ತಾಲೂಕಿನ ಬಂಡಿಗೆರೆ ಗ್ರಾಮದ ನಿವಾಸಿ ಮಾದಶೆಟ್ಟಿ(77) ಅವರು ಅನಾರೋಗ್ಯದಿಂದ ಭಾನುವಾರ ನಿಧನರಾದರು. ಇವರು ಪುತ್ರ ಪ್ರಜಾವಾಣಿ ಹಿರಿಯ ವರದಿಗಾರ ಎಂ.ಮಹೇಶ್, ಪುತ್ರಿ, ಸೊಸೆ, ಅಳಿಯ, ಸಹೋದರಿ ಹಾಗೂ ನಾಲ್ವರು ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಸೋಮವಾರ ಬೆಳಗ್ಗೆ(ಆ.19) ಸ್ವಗ್ರಾಮದಲ್ಲಿ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ನಾಗರತ್ನಮ್ಮ



ಮೈಸೂರು, ಆ.18– ಮೈಸೂರಿನ ಕುವೆಂಪುನಗರ ಸಿ ಅಂಡ್ ಡಿ ಬ್ಲಾಕ್ 3ನೇ ಕ್ರಾಸ್ ನಿವಾಸಿ ನಾಗರತ್ನಮ್ಮ (76) ಭಾನುವಾರ ನಿಧನರಾದರು. ದಿ.ಕೆ.ಭೋಗೇಶ್ ಅವರ ಪತ್ನಿಯಾದ ನಾಗರತ್ನಮ್ಮ ಪುತ್ರ ಪುತ್ರಿ, ಅಳಿಯ, ಸೊಸೆ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಆ.19ರ ಸೋಮವಾರ ಮಧ್ಯಾಹ್ನ 12 ಗಂಟೆಗೆ ಜಯನಗರದ ಸ್ಮಶಾನದಲ್ಲಿ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶಿವಲಿಂಗಸ್ವಾಮಿ



ಮೈಸೂರು,ಆ.18– ಮೈಸೂರಿನ ಶ್ರೀನಗರ 2ನೇ ಕ್ರಾಸ್ ನಿವಾಸಿ ಹೆಚ್.ಎಸ್.ಶಿವಲಿಂಗಸ್ವಾಮಿ (ಹೊಳಲು ರಾಜಣ್ಣ) (82) ಭಾನುವಾರ ನಿಧನರಾದರು. ಮೃತರು ಪತ್ನಿ ಸುಂದ್ರಮ್ಮ, ಇಬ್ಬರು ಪುತ್ರರು, ಸೊಸೆಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಆ.19ರ ಸೋಮವಾರ ಮಧ್ಯಾಹ್ನ 12.30ಕ್ಕೆ ವಿದ್ಯಾರಣ್ಯಪುರಂನ ವೀರಶೈವ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

19.08.2024 ಸೋಮವಾರ, ಮಳೆ ನಕ್ಷತ್ರ: ಮಖ 17.08.2024ರಿಂದ 30.08.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಶ್ರಾವಣ ಮಾಸ, ಶುಕ್ಲ ಪಕ್ಷ,
ತಿಥಿ: ಹುಣ್ಣಿಮೆ, ನಕ್ಷತ್ರ: ಶ್ರವಣ, ರಾಹುಕಾಲ: ಬೆಳಗ್ಗೆ 7.30ರಿಂದ 9ರವರೆಗೆ

■ **ಶ್ರೀ ಅವಧೂತ ದತ್ತ ಪೀಠ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ:** ದತ್ತ ಪೀಠಾಧಿಪತಿ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಮತ್ತು ದತ್ತಪೀಠ ಉತ್ತರಾಧಿಕಾರಿ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿಯವರ 21ನೇ ಚಾತುರ್ಮಾಸ್ಯ ವ್ರತ ದೀಕ್ಷಾ ಮಹೋತ್ಸವ, ರಾಖಿ ಹುಣ್ಣಿಮೆ, ಹಯಗ್ರೀವ ಜಯಂತಿ, ಪವಮಾನ ಹೋಮ, ಶ್ರೀ ಸಚ್ಚಿದಾನಂದೇಶ್ವರ ಸ್ವಾಮಿಗೆ ಶ್ರಾವಣ ಮಾಸದ ಪ್ರಯುಕ್ತ ಏಕಾದಶಿ ರುದ್ರಾಭಿಷೇಕ, ಸ್ಥಳ: ಆಶ್ರಮದ ಆವರಣ, ನಂಜನಗೂಡು ರಸ್ತೆ, ಬೆಳಗ್ಗೆಯಿಂದ.

■ **ಶ್ರೀ ಶಂಕರ ನಾರಾಯಣ ಸ್ವಾಮಿ ದೇವಸ್ಥಾನ ಟ್ರಸ್ಟ್ :** ಯಜುರುಪಾಕರ್ಮ ಮತ್ತು ಋಗುಪಾಕರ್ಮ ಸ್ಥಳ: ದೇವಸ್ಥಾನದ ಆವರಣ, ಚಾಮುಂಡಿಪುರಂ, ಬೆಳಗ್ಗೆ 6.30ಕ್ಕೆ.

■ **ಹೆಬ್ಬಾರ್ ಶ್ರೀ ವೈಷ್ಣವ ಉಪಸಭಾ:** ಯಜುರುಪಾಕರ್ಮ, ಯಜ್ಞೋಪವಿತ ಧಾರಣೆ ಮತ್ತು ಅಧ್ಯಯನ ಹೋಮ, ಸ್ಥಳ: ಶ್ರೀರಾಮಮಂದಿರ, ಕೃಷ್ಣಮೂರ್ತಿಪುರಂ, ಬೆಳಗ್ಗೆ 7.30ರಿಂದ.

■ **ಮೈಸೂರು ಜಿಲ್ಲಾ ಪತ್ರಕರ್ತರ ಸಂಘ:** ವಿಶ್ವ ಛಾಯಾಗ್ರಹಣ ದಿನಾಚರಣೆ, ಉದ್ಘಾಟನೆ: ಮೈಸೂರು ನಗರಪಾಲಿಕೆ ಆಯುಕ್ತ ಅಸಾದ್ ಉರ್ ರೆಹಮಾನ್ ಶರೀಫ್, ಅಧ್ಯಕ್ಷತೆ: ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ದೀಪಕ್, ಸ್ಥಳ: ಪತ್ರಕರ್ತರ ಭವನ, ಬೆಳಗ್ಗೆ 11 ಗಂಟೆಗೆ

■ **ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳವರ ಮಠ :** ಶ್ರೀ ರಾಘವೇಂದ್ರ ತೀರ್ಥ ಗುರು ಸಾರ್ವಭೌಮರ 353ನೇ ಆರಾಧನಾ ಮಹೋತ್ಸವ, ಬೆಳಗ್ಗೆ 6 ಗಂಟೆಗೆ ಋಗ್ವೇದ ನಿತ್ಯ ನೂತನ ಉಪಾಕರ್ಮ, ಬೆಳಗ್ಗೆ 9.30ಕ್ಕೆ ಯಜುರ್ವೇದ ನಿತ್ಯನೂತನ ಉಪಾಕರ್ಮ, ಬೆಳಗ್ಗೆ 10 ಗಂಟೆಗೆ ಸಾಮೂಹಿಕ ಸತ್ಯನಾರಾಯಣ ಪೂಜೆ, ಸಂಜೆ 6ಕ್ಕೆ ಪ್ರಾರ್ಥನೋತ್ಸವ, ಗೋಪೂಜೆ, ಧ್ವಜಾರೋಹಣ, ಧಾನ್ಯ ಪೂಜೆ, ಮಹಾಮಂಗಳಾರತಿ, ಸ್ವಸ್ತಿವಾಚನ, ಸ್ಥಳ: ಮಠದ ಆವರಣ, ಸುಬ್ಬರಾಯನಕೆರೆ, ನಾರಾಯಣಶಾಸ್ತ್ರಿ ರಸ್ತೆ.

■ **ಬ್ರಾಹ್ಮಣ ಧರ್ಮ ಸಹಾಯ ಸಭಾ:** ವೇ॥ ಬ್ರ॥ ಶ್ರೀ ಕೃಷ್ಣಸ್ವಾಮಿ ಶಾಸ್ತ್ರಿಗಳು ಮತ್ತು ವೇ॥ ಬ್ರ॥ ಶ್ರೀ ಶ್ರೀನಾಥ ಶಾಸ್ತ್ರಿಗಳ ನೇತೃತ್ವದಲ್ಲಿ ಋಗ್ ಉಪಾಕರ್ಮ ಹಾಗೂ ಯಜುರ್ ಉಪಾಕರ್ಮ, ಸ್ಥಳ: ಕಲ್ಯಾಣ ಭವನ, ತ್ಯಾಗರಾಜ ರಸ್ತೆ, ಕೆ.ಆರ್.ಮೊಹಲ್ಲಾ, ಬೆಳಗ್ಗೆ 9.30ರಿಂದ.

■ **ಮೈಸೂರು ವಿಶ್ವವಿದ್ಯಾನಿಲಯ, ಜೆನೆಟಿಕ್ಸ್ ಮತ್ತು ಜಿನೋಮಿಕ್ಸ್ ಅಧ್ಯಯನ ವಿಭಾಗ :** ಪುಸ್ತಕಗಳ ಲೋಕಾರ್ಪಣೆ ಕಾರ್ಯಕ್ರಮ, ದಿವ್ಯ ಸಾನ್ನಿಧ್ಯ: ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾ ಸ್ವಾಮೀಜಿ, ಉದ್ಘಾಟನೆ: ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಪುಸ್ತಕ ಬಿಡುಗಡೆ: ಡಾ.ಸಿ.ಎನ್.ಮಂಜುನಾಥ್, ಅಭಿನಂದನಾ ಗ್ರಂಥ (ಸಂಪಾದಕರು: ಡಾ.ಸುಕನ್ಯಾ ಸೂನಗಹಳ್ಳಿ) 'ಆಧುನಿಕ ಧನ್ವಂತರಿ, ಡಾ.ಸುತ್ತೂರು ಎಸ್.ಮಾಲಿನಿಯವರ ಪುರುಷರ ಲೈಂಗಿಕ ಆರೋಗ್ಯ, ಮಹಿಳೆಯರ ಲೈಂಗಿಕ ಆರೋಗ್ಯ ಪುಸ್ತಕ ಬಿಡುಗಡೆ, ಸ್ಥಳ: ವಿಜ್ಞಾನ ಭವನ, ಮಾನಸಗಂಗೋತ್ರಿ, ಬೆಳಗ್ಗೆ 10.30ಕ್ಕೆ.

■ **ವೀರಭದ್ರಸ್ವಾಮಿ ಹಾಗೂ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನ:** ಶ್ರೀ ವೀರಭದ್ರೇಶ್ವರಸ್ವಾಮಿಯ ಜಯಂತ್ಯುತ್ಸವ, ಮಹಾರಥೋತ್ಸವ ಹಾಗೂ ಶ್ರಾವಣ ಮಾಸದ ಪೂಜಾ ಕಾರ್ಯಕ್ರಮ, ಸ್ಥಳ: ದೇವಸ್ಥಾನದ ಪ್ರಾಂಗಣ, ಡಿ.ಬನುಮಯ್ಯ ರಸ್ತೆ, ಕೆ.ಆರ್.ಮೊಹಲ್ಲಾ, ಬೆಳಗ್ಗೆಯಿಂದ.

■ **ಕರ್ನಾಟಕ ಜಾನಪದ ಅಕಾಡೆಮಿ, ಬೆಂಗಳೂರು, ಪ್ರಾದೇಶಿಕ ಜಾನಪದ ಅಧ್ಯಯನ ಮತ್ತು ಜನಪದ ಕಲಿಕಾ ಕೇಂದ್ರ, ಕರ್ನಾಟಕ ಜಾನಪದ ವಿಶ್ವವಿದ್ಯಾನಿಲಯ, ಏಕತಾರಿ ಸಾಂಸ್ಕೃತಿಕ ಸಂಘಟನೆ :** ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಜನಪದ ನೃತ್ಯಗಳು ಮತ್ತು ಜನಪದ ಗೀತೆಗಳ ಕಲಿಕಾ ತರಬೇತಿ ಶಿಬಿರ, ಸ್ಥಳ: ಕಿರು ರಂಗಮಂದಿರ ಆವರಣ, ಕಲಾಮಂದಿರ, ಸಂಜೆ 4 ರಿಂದ.

■ **ಬಸವ ಭಾರತ ಪ್ರತಿಷ್ಠಾನ, ಸಮಸ್ತ ಬಸವಪರ ಸಂಘಟನೆಗಳ ಸಹಭಾಗಿತ್ವ :** ಬಸವ ಧರ್ಮ ಜಾಗೃತಿ, ಅಭಿಯಾನ, ಇಷ್ಟಲಿಂಗ ಧಾರಣೆ ಶಿವಯೋಗ, ವಚನ ಪಠಣ, ಶ್ರಾವಣ ಮಾಸದ ಪ್ರವಚನ ಕಾರ್ಯಕ್ರಮ, ಶ್ರೀ ಬಸವ ಯೋಗಿ ಪ್ರಭು ಸ್ವಾಮಿಗಳಿಂದ ವಚನಗಳಲ್ಲಿ ವ್ಯಕ್ತಿತ್ವ ವಿಕಸನ ಕುರಿತು ಉಪನ್ಯಾಸ, ಸ್ಥಳ: ಡಾ. ಮಾತೆ ಬಸವಾಂಜಲಿ, ಬಸವ ಜ್ಞಾನಮಂದಿರ, ಮುನೇಶ್ವರನಗರ, ಸಂಜೆ 5.30ಕ್ಕೆ.

■ **ದೀಕ್ಷಿತ್ ಆರೋಗ್ಯಧಾಮ, ಆಯುರ್ವೇದ ಪಂಚಕರ್ಮ ಆಸ್ಪತ್ರೆ:** ರಕ್ಷಾ ಬಂಧನ ವಿಶೇಷ ಮಾಸದ ಆನಂದ ಆರೋಗ್ಯ ಕಾರ್ಯಕ್ರಮ, ಗಾಯನ: ವಿದುಷಿ ಕುವೈರಿ ನಿತ್ಯಶ್ರೀ ಆರ್., ಪಿಟೀಲು: ವಿದ್ವಾನ್ ಹೆಚ್.ಎಸ್.ತಾಂಡವಮೂರ್ತಿ, ಮೃದಂಗ: ವಿದ್ವಾನ್ ಪಿ.ಎಸ್.ಶ್ರೀಧರ್, ಉಪನ್ಯಾಸ: ಮೂತ್ರ ಶಾಸ್ತ್ರಜ್ಞ ಡಾ.ಅಕ್ಷಯ್ ಎ.ಫಡ್ನಿಸ್, ಆಯುರ್ವೇದ ತಜ್ಞ ಡಾ.ಅನಿಲ್‌ಕುಮಾರ್ ಅವರಿಂದ 'ಮೂತ್ರ ಕಲ್ಲು' ವಿಷಯ ಕುರಿತು ಉಪನ್ಯಾಸ, ಸ್ಥಳ: ದೀಕ್ಷಿತ್ ಆರೋಗ್ಯಧಾಮ, ವಿಜಯನಗರ, ಸಂಜೆ 5.45ಕ್ಕೆ.


■ **ಶ್ರೀ ಗಾಯತ್ರಿದೇವಿ ಅಮ್ಮನವರ ದೇವಸ್ಥಾನ:** ಕಳಸ ಸ್ಥಾಪನೆ ಮತ್ತು ಗಾಯತ್ರಿದೇವಿ ಅಮ್ಮನವರ ಹೋಮ, ಸಂಜೆ 6 ಗಂಟೆಯಿಂದ ಪುಣ್ಯಾಹ: ಮಹಾಗಣಪತಿ ಪೂಜೆ, ನವಗ್ರಹ ಪೂಜೆ, ಮಂಡಲ ಪೂಜೆ, ಕಳಸ ಸ್ಥಾಪನೆ, ಮಹಾಮಂಗಳಾರತಿ, ಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನದ ಪ್ರಾಂಗಣ, ಅರಮನೆ ಕೋಟೆ ಆವರಣ.

■ **ಶರಣ ಸಾಹಿತ್ಯ ಪರಿಷತ್ತು (ಮೈಸೂರು ನಗರ ಘಟಕ) ಕದಳಿ ಮಹಿಳಾ ವೇದಿಕೆ :** ವಚನ–ಶ್ರಾವಣ, ಮನೆ ಮನೆಗೆ ಶ್ರಾವಣ ಮಾಸದ ಶರಣ ಸಂದೇಶ, ಉಪನ್ಯಾಸ: ಸದ್ವಿದ್ಯಾ ಪದವಿ ಪೂರ್ವ ಕಾಲೇಜಿನ ಅಧ್ಯಾಪಕರಾದ ಶ್ರೀಮತಿ ವಿದ್ಯಾ ಫಣಿರಾಜ ಅವರಿಂದ ಜೇಡರ ದಾಸೀಮಯ್ಯನವರ ಕಡೆಗಿಲ್ಲದ ಬಂಡಿ ಹೊರಗಡೆಯದೆ .....; ವಿಷಯ ಕುರಿತು ಉಪನ್ಯಾಸ, ಸ್ಥಳ: ಡಾ. ಕೃಪಾಫಡ್ಕೆ, ನಂ.16/1, ನೃತ್ಯಗಿರಿ ಪ್ರೀತಿ ಬಡಾವಣೆ, ಶ್ರೀರಾಂಪುರ, ಸಂಜೆ 5.30ಕ್ಕೆ.

■ **ಸಂಸ್ಕೃತ ಭಾರತಿ, ಮೈಸೂರು :** ಸಂಸ್ಕೃತ ಸಪ್ತಾಹದ ಅಂಗವಾಗಿ ಉಪನ್ಯಾಸ, ಡಾ.ರಾಘವೇಂದ್ರ ಪೈ ಅವರಿಂದ ಯೋಗದರ್ಶನಮ್ ಕುರಿತು ಉಪನ್ಯಾಸ, ಸ್ಥಳ: ಭಗಿನಿ ಸೇವಾ ಸಮಾಜ, ವಿದ್ಯೋದಯ, ಕೃಷ್ಣಮೂರ್ತಿಪುರಂ, ಸಂಜೆ 6ರಿಂದ.

■ **ಶ್ರೀ ಸುತ್ತೂರು ಮಠ, ಮೈಸೂರು ಶಾಖೆ :** ಶ್ರಾವಣಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ಮಹಾರಾಣಿ ಕಲಾ ಕಾಲೇಜು ಪ್ರಾಂಶುಪಾಲ ಡಾ.ಬಿ.ವಿ. ವಸಂತಕುಮಾರ್ ಅವರಿಂದ ಪ್ರವಚನ, ವಿದುಷಿ ವಸಂತ ವೆಂಕಟೇಶ್ ಅವರಿಂದ ವಾಚನ, ಸಂಜೆ 6ಕ್ಕೆ ಸಾಮೂಹಿಕ ಪ್ರಾರ್ಥನೆ, ಸಂಜೆ 6.30ಕ್ಕೆ ಪ್ರವಚನ, ಸ್ಥಳ: ಶ್ರೀ ಸುತ್ತೂರು ಮಠ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6.30 ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10–ಚಿಂತನ–ಬಿ.ಎಂ.ಪ್ರಭುದೇವ, 6.15–ಗೀತಾರಾಧನ, 6.35 ಮತ್ತು ಸಂಜೆ 6.10: "ಅಂಚೆ–ಅಂಕನ"–ಆಕಾಶವಾಣಿ ಅಂಕಣ, ಪ್ರಸ್ತುತಿ: ಡಾ.ಅಮ್ಮಸಂದ್ರ ಸುರೇಶ ಹಾಗೂ ಎಂ.ಎಸ್. ವಿಜಯಲಕ್ಷ್ಮಿ ಪ್ರಾಯೋಜಕರು: ಭಾರತೀಯ ಅಂಚೆ, ಮೈಸೂರು ವಿಭಾಗ, 6.40–ಅರಿವಿನ ಶಿಖರ: ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ: ಟಿ.ಎಸ್.ಅಶ್ವಿನಿ, ಕೆ.ರೇವತಿ, ವ್ಯಾಖ್ಯಾನ: ಡಾ.ಮ.ರಾಮಕೃಷ್ಣ, 6.50–ರೈತರಿಗೆ ಸಲಹೆ, 7.15–ಭಾವಗೀತೆಗಳು, 9.00–ರಾಷ್ಟ್ರೀಯ ಬಾಹ್ಯಾಕಾಶ ದಿನದ ಸಂದರ್ಭದಲ್ಲಿ ವಿಶೇಷ ಕಾರ್ಯಕ್ರಮ, ಸರಣಿ–"ಬಾಹ್ಯಾಕಾಶ ವಿಸ್ಮಯ", 9.05–ನೆನಪಿನಂಗಳ (ಧ್ವನಿ ಭಂಡಾರದಿಂದ) ಹಿರಿಯ ಸ್ವಾತಂತ್ರ್ಯ ಹೋರಾಟಗಾರ ಬಿ.ಆರ್.ಪ್ರಾಣೇಶ್‌ರಾವ್ ಅವರೊಂದಿಗೆ ಜಿ.ಸತ್ಯನಾರಾಯಣ ಅವರು ನಡೆಸಿದ್ದ ಸಂವಾದ, 10.00–ಕರ್ನಾಟಕ ಶಾಸ್ತ್ರೀಯ ಸಂಗೀತ: ವಿ.ಕೃಷ್ಣಮೂರ್ತಿ– ನಾದಸ್ವರ, 11.00–ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನೇರ ಫೋನ್ ಇನ್ ಕಾರ್ಯಕ್ರಮ, ಗೇಮ್ ಶೋ, ಪ್ರಸ್ತುತಿ: ದಿಗ್ವಿಜಯ್. ಬಿ ಮತ್ತು ಕೀರ್ತನಾ. ವಿ, 12.05–ವನಿತಾ ವಿಹಾರ–ರಕ್ಷಾ ಬಂಧನದ ಸಂದರ್ಭದಲ್ಲಿ ಧಾರವಾಡದ ಮೈತ್ರಿ ಮಹಿಳಾ ಮಂಡಲದ ಭಗಿನಿಯರಿಂದ ಕಾರ್ಯಕ್ರಮ ವೈವಿಧ್ಯ, 12.30–ದೇವರನಾಮ–ರಾವ್. ಆರ್.ಶರತ್, 12.45–ನಮ್ಮ ಆರೋಗ್ಯ: 'ಮಕ್ಕಳಲ್ಲಿ ಭಾವನಾತ್ಮಕ ಒತ್ತಡದಿಂದ ಉಂಟಾಗುವ ತೊಂದರೆಗಳು, ನಿರ್ವಹಣೆ ಮತ್ತು ಪರಿಹಾರ' ಕುರಿತು ಮೈಸೂರಿನ ಎಂಡೋಕ್ರೈನಾಲಜಿಸ್ಟ್ ಡಾ.ರೇಖಾ ವಿ.ಭಟ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 1.00–ಚಿತ್ರಗೀತೆಗಳು, 1.20–ಭಾವಗೀತೆಗಳು, 2.40–ಚಿತ್ರಗೀತೆಗಳು, 3.00–ಕರ್ನಾಟಕ ಶಾಸ್ತ್ರೀಯ ಸಂಗೀತ: ಕದ್ರಿ ಗೋಪಾಲನಾಥ್–ಸ್ಯಾಕ್ಸೋಫೋನ್, 4.00–ಮಹಿಳಾರಂಗ: "ನಾನು ನನ್ನ ಕಂಪನಿ" ಕಾಂಡಿಮೆಂಟ್ಸ್ ಹಾಗೂ ಟೈಲರಿಂಗ್ ಉದ್ಯಮ ನಡೆಸುತ್ತಿರುವ ಗೀತಾ ಭೀಮಸೇನ ಅವರೊಂದಿಗೆ ಮಾತುಕತೆ. ಪ್ರಸ್ತುತಿ: ಸಹನಾ, 4.45–ಹಿಂದಿ ಪಾಠ–ಡಾ.ಸ್ಮಿತಾ ಚಿಪ್ಳೂಣ್‌ಕರ್, 6.50–ಕೃಷಿರಂಗ: ಅಚ್ಚುಕಟ್ಟು ಪ್ರದೇಶಕ್ಕೆ ಸೂಕ್ತವಾದ ಕಬ್ಬಿನ ತಳಿಗಳು. ಈ ಕುರಿತು ಮಂಡ್ಯದ ವಿ.ಸಿ. ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ನಿವೃತ್ತ ಪ್ರಾಧ್ಯಾಪಕರಾದ ಡಾ.ಎಸ್.ಎನ್.ಸ್ವಾಮಿಗೌಡ ಅವರೊಂದಿಗೆ ಸಂದರ್ಶನ. ಸಂದರ್ಶಕರು: ಎನ್.ಕೇಶವಮೂರ್ತಿ, 7.45–ಕನ್ನಡದಲ್ಲಿ ಭಾಷಣ, 9.30–ರಾಷ್ಟ್ರೀಯ ಬಾಹ್ಯಾಕಾಶ ದಿನದ ಸಂದರ್ಭದಲ್ಲಿ ಮೈಸೂರಿನ ವಿದ್ಯಾವರ್ಧಕ ಸಂಘ, ಬಿ.ಎಂ.ಶ್ರೀ ಶಿಕ್ಷಣ ಸಂಸ್ಥೆಯ ಸಹಯೋಗದೊಂದಿಗೆ ಮೈಸೂರಿನ ಆಕಾಶವಾಣಿ ಏರ್ಪಡಿಸಿದ್ದ ವಿಶೇಷ ರಸಪ್ರಶ್ನೆ ಕಾರ್ಯಕ್ರಮದ ಬಾನುಲಿ ವರದಿ. ಪ್ರಸ್ತುತಿ: ಬಿ.ದಿಗ್ವಿಜಯ್, 10.00–ನಾಟಕ, 10.30–ಸವಿನೆನಪು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಆಗಸ್ಟ್ 19 ಸೋಮವಾರ 2024

ಸಂಪುಟ: 45 | ಸಂಚಿಕೆ: 124 | ಪುಟಗಳು: 10 | ₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಸಿಎಂ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಪ್ರಶ್ನಿಸಿ ಇಂದು

ಹೈಕೋರ್ಟ್‌ಗೆ ಅರ್ಜಿ



ಸಿಎಂ ಪರ ಸುಪ್ರೀಂಕೋರ್ಟ್ ಹಿರಿಯ ವಕೀಲರ ವಾದ

ಬೆಂಗಳೂರು, ಆ.18– ಮುಡಾ ಹಗರಣ ಆರೋಪದಲ್ಲಿ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಪ್ರಶ್ನಿಸಿ ನಾಳೆ(ಸೋಮವಾರ) ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಲು ತೀರ್ಮಾನಿಸಲಾಗಿದೆ. ಸಿಎಂ ಸಿದ್ದರಾಮಯ್ಯ ಪರವಾಗಿ ಸುಪ್ರೀಂ ಕೋರ್ಟ್ ಹಿರಿಯ ವಕೀಲರಾದ ಅಭಿಷೇಕ್ ಮನು ಸಿಂಘ್ವಿ ಮತ್ತು ಕಪಿಲ್ ಸಿಬಲ್ ಅರ್ಜಿ ಸಲ್ಲಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಸಿಎಂ ಮಂತ್ರಾಲಯ ಪ್ರವಾಸ ರದ್ದು: ನಾಳೆ ಬೆಳಗ್ಗೆ ಬೆಂಗಳೂರಿಗೆ ಆಗಮಿಸಲಿರುವ ಅಭಿಷೇಕ್ ಮನು ಸಿಂಘ್ವಿ ಮತ್ತು ಕಪಿಲ್ ಸಿಬಲ್, ಸಿದ್ದರಾಮಯ್ಯ ಜೊತೆ ಸುದೀರ್ಘ ಚರ್ಚೆ ನಡೆಸಲಿದ್ದಾರೆ. ಹೀಗಾಗಿ, ನಾಳಿನ ಮಂತ್ರಾಲಯ ಪ್ರವಾಸವನ್ನು ಸಿಎಂ ರದ್ದು ಮಾಡಿದ್ದಾರೆ. ಇದಕ್ಕೂ ಮುನ್ನ ಕಾವೇರಿ ನಿವಾಸದಲ್ಲಿ ಸಿಎಂ ತಮ್ಮ ಆಪ್ತ ಸಚಿವರು, ವಕೀಲರು ಮತ್ತು ಸಿಎಂ ಕಾನೂನು ಸಲಹೆಗಾರ ಎ.ಎಸ್.ಪೊನ್ನಣ್ಣ ಬಳಿ ಸಲಹೆ ಪಡೆದರು. ಈ ವೇಳೆ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸುವ ಬಗ್ಗೆ ಚರ್ಚಿಸಲಾಗಿದೆ. ಕಾನೂನು ಬಾಹಿರವಾಗಿ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದರ ವಿರುದ್ಧ ಅರ್ಜಿ ಸಲ್ಲಿಸಿ, ರಾಜ್ಯಪಾಲರ ಪೂರ್ವಾನುಮತಿ ವಜಾಗೊಳಿಸಲು ಮನವಿ ಮಾಡಲು ನಿರ್ಧರಿಸಲಾಗಿದೆ.

ಕಾವೇರಿಗೆ ಆಪ್ತ ಸಚಿವರ ಭೇಟಿ: ಕಾವೇರಿ ನಿವಾಸಕ್ಕೆ ಸಿಎಂ ಸಿದ್ದರಾಮಯ್ಯರನ್ನು ಭೇಟಿಯಾಗಲು ಆಪ್ತ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್, ಕೃಷ್ಣ ಬೈರೇಗೌಡ, ಡಾ. ಹೆಚ್.ಸಿ. ಮಹದೇವಪ್ಪ, ಭೈರತಿ ಸುರೇಶ್ ಸೇರಿ ಕಾಂಗ್ರೆಸ್ ಶಾಸಕರು ಭೇಟಿ ನೀಡಿ ಸಮಾಲೋಚನೆ ನಡೆಸಿದರು. ಯಾವುದೇ ಅಧಿಕೃತ ಕಾರ್ಯಕ್ರಮಗಳಿಗೆ ಹೋಗದೇ ಸಿಎಂ ಆಪ್ತರ ಜೊತೆ ಸಮಾಲೋಚನೆ ನಡೆಸಿದರು.

ಸಿ.ಎಂ. ಇಬ್ರಾಹಿಂ ಭೇಟಿ: ಸಿ.ಎಂ. ಇಬ್ರಾಹಿಂ ಆಗಮಿಸಿ ಸಿಎಂ ಭೇಟಿ ಮಾಡಿ ಚರ್ಚೆ ನಡೆಸಿದರು. ಬಳಿಕ ಮಾತನಾಡಿದ ಅವರು, ಕೇಂದ್ರ ಸರ್ಕಾರ ಕರ್ನಾಟಕ ಜನರ ಸ್ವಾಭಿಮಾನವನ್ನು ಕೆಣಕಿದೆ. ಸುಪ್ರೀಂಕೋರ್ಟ್ ತೀರ್ಪನ್ನು ರಾಜ್ಯಪಾಲರು ಉಲ್ಲಂಘಿಸಿದ್ದಾರೆ. ಯಾವುದೇ ಲೆಕ್ಕಕ್ಕೆ ಬಾರದ ಮನುಷ್ಯ, ಸಾಮಾನ್ಯ ಮನುಷ್ಯನ ದೂರಿನ ಮೇಲೆ ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಟ್ಟಿದ್ದಾರೆ. ಇದರ ವಿರುದ್ಧ ನಾನು ಪ್ರತಿಭಟನೆ ಮಾಡುತ್ತೇನೆ ಎಂದರು.

ಆ.23 ಸಿದ್ದರಾಮಯ್ಯ ದೆಹಲಿಗೆ, ಕುತೂಹಲ ಮೂಡಿಸಿದ ಸಿಎಂ ರಾಜಕೀಯ ನಡೆ



ಬೆಂಗಳೂರು, ಆ.18– ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ತನಿಖೆಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅನುಮತಿ ನೀಡಿದ್ದಾರೆ. ಇದರಿಂದ ರಾಜ್ಯ ರಾಜಕಾರಣದಲ್ಲಿ ಮಹತ್ವದ ಬೆಳವಣಿಗೆಗಳಿಗೆ ಸಾಕ್ಷಿಯಾಗಿದೆ. ಒಂದೆಡೆ ವಿಪಕ್ಷಗಳು ಸಿಎಂ ರಾಜೀನಾಮೆಗೆ ಆಗ್ರಹಿಸುತ್ತಿದ್ದರೆ, ಮತ್ತೊಂದೆಡೆ ಯಾವುದೇ ಕಾರಣಕ್ಕೂ ರಾಜೀನಾಮೆ ನೀಡುವುದಿಲ್ಲ ಎಂದು ಹೇಳಿ ರಾಜ್ಯಪಾಲರ ಆದೇಶದ ವಿರುದ್ಧ ಕಾನೂನು ಹೋರಾಟಕ್ಕೆ ಸಿಎಂ ಸಿದ್ದರಾಮಯ್ಯ ಮುಂದಾಗಿದ್ದಾರೆ. ನಾಳೆ (ಆಗಸ್ಟ್ 19) ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಲಿದ್ದಾರೆ. ಇದರ ಮಧ್ಯ ಸಿದ್ದರಾಮಯ್ಯ ಅವರು ಆಗಸ್ಟ್ 23ರಂದು ದೆಹಲಿ ಪ್ರವಾಸ ಕೈಗೊಂಡಿದ್ದಾರೆ. ಇದು ಭಾರಿ ಸಂಚಲನ ಮೂಡಿಸಿದೆ.

ಮುಡಾ ಹಗರಣದಲ್ಲಿ ಸಿಲುಕಿಕೊಂಡಿರುವ ಸಿದ್ದರಾಮಯ್ಯ ಅವರು ಆಗಸ್ಟ್ 23ರಂದು ದೆಹಲಿಗೆ ತೆರಳಲಿದ್ದು, ಪ್ರಾಸಿಕ್ಯೂಷನ್ ವಿಚಾರದ ಬಗ್ಗೆ ಹೈಕಮಾಂಡ್ ನಾಯಕರ ಜೊತೆ ಚರ್ಚಿಸಲಿದ್ದಾರೆ ಎಂದು ತಿಳಿದು ಬಂದಿದೆ. ಅಲ್ಲದೇ ಹೈಕಮಾಂಡ್ ಮಟ್ಟದಲ್ಲಿ ಹಿರಿಯ

■ 8ನೇ ಪುಟಕ್ಕೆ

ಆ.22ರಂದು ಸಿಎಲ್‌ಪಿ ಸಭೆ

ಬೆಂಗಳೂರು, ಆ.18– ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತನಿಖೆ ನಡೆಸಲು ರಾಜ್ಯಪಾಲರು ಆದೇಶ ನೀಡಿರುವ ಹಿನ್ನೆಲೆ ಸಿದ್ದರಾಮಯ್ಯ ಅವರು ಕಾನೂನು ಸಮರಕ್ಕೆ ಮುಂದಾಗಿದ್ದಾರೆ. ಪ್ರಾಸಿಕ್ಯೂಷನ್‌ಗೆ ತಡೆ ಕೋರಿ ನಾಳೆ (ಸೋಮವಾರ) ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಲಿದ್ದಾರೆ. ಅದಕ್ಕೆ ಬೇಕಾಗಿರುವ ತಯಾರಿ, ಕಾನೂನು ತಜ್ಞರ ಸಲಹೆಯನ್ನು ಪಡೆದಿದ್ದಾರೆ. ಇನ್ನು ಶಾಸಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಮುಂದಾಗಿದ್ದಾರೆ. ಹೀಗಾಗಿ ಇದೇ ಗುರುವಾರ (ಆ. 22) ರಂದು ಸಂಜೆ 4 ಗಂಟೆಗೆ ವಿಧಾನಸೌಧ ಸಭಾಂಗಣದಲ್ಲಿ ಸಿಎಲ್‌ಪಿ ಸಭೆ ಕರೆದಿದ್ದಾರೆ.

ಸಭೆಯಲ್ಲಿ ಎಲ್ಲಾ ಶಾಸಕರ ಬೆಂಬಲವನ್ನು ತಿಳಿದುಕೊಳ್ಳಲಿದ್ದಾರೆ. ಪಕ್ಷದೊಳಗೆ ಆಗಿರಬಹುದಾದ ಒಂದಷ್ಟು ಚರ್ಚೆ, ಪರ–ವಿರೋಧದ ಮಾತುಗಳಿಗೆ ಸ್ಪಷ್ಟನೆ ಕೊಡಲಿದ್ದಾರೆ. ಬಿಜೆಪಿ, ಜೆಡಿಎಸ್ ನಾಯಕರ ಅಕ್ರಮಗಳ ಬಗ್ಗೆಯೂ, ಹೋರಾಟಗಳ ಬಗ್ಗೆಯೂ ಚರ್ಚೆ ನಡೆಸುವ ಸಾಧ್ಯತೆ ಇದೆ. ಇಂದು ಅಥವಾ ನಾಳೆ ದೆಹಲಿಯಿಂದ ಹಿರಿಯ ವಕೀಲರಾದ ಕಪಿಲ್ ಸಿಬಲ್, ಅಭಿಷೇಕ್ ಮನುಸಿಂಘ್ವಿ ರಾಜ್ಯಕ್ಕೆ ಆಗಮಿಸಲಿದ್ದಾರೆ. ಸಿಎಂ ಪರವಾಗಿ ಹೈಕೋರ್ಟ್ ಮೊರೆ ಹೋಗಲಿದ್ದಾರೆ. ಈಗಾಗಲೇ ಸಿಎಂ ಹೈಕಮಾಂಡ್ ನಾಯಕರ ಜೊತೆಗೆ ಮಾತುಕತೆ ನಡೆಸಿದ್ದಾರೆ.

ಬೆಂಗಳೂರಿನಲ್ಲಿ ಪದವಿ ವಿದ್ಯಾರ್ಥಿನಿ

ಸಾಮೂಹಿಕ ಅತ್ಯಾಚಾರ

ರಾತ್ರಿ ಪಾರ್ಟಿ ಮುಗಿಸಿ ಮನೆಗೆ ತೆರಳುವಾಗ ದುಷ್ಕೃತ್ಯ

ಬೆಂಗಳೂರು, ಆ.18– ರಾಜಧಾನಿ ಬೆಂಗಳೂರಿನಲ್ಲಿ ಶನಿವಾರ ತಡರಾತ್ರಿ ಯುವತಿಯೊಬ್ಬಳ ಮೇಲೆ ಅತ್ಯಾಚಾರ ನಡೆದಿದ್ದು, ಪಾರ್ಟಿ ಮುಗಿದ ಬಳಿಕ ಮನೆಗೆ ತೆರಳುವಾಗ ಕೃತ್ಯ ಎಸಗಲಾಗಿದೆ ಎನ್ನಲಾಗಿದೆ.

ಈ ಸಂಬಂಧ ನಗರದ ಎಚ್‌ಎಸ್‌ಆರ್ ಲೇಔಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಯುವತಿಯನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಇದೇ ಸಂದರ್ಭದಲ್ಲಿ ಗ್ಯಾಂಗ್ ರೇಪ್ ಆಗಿದೆಯೇ ಎಂದು ವೈದ್ಯಕೀಯ ಪರೀಕ್ಷೆಗಳನ್ನು ಮಾಡಲಾಗುತ್ತಿದೆ.

ಕಳೆದ ಮಧ್ಯರಾತ್ರಿ ಬೆಂಗಳೂರಿನ ಕೋರಮಂಗಲದ ಪಬ್‌ನಿಂದ ಪಾನಮತ್ತರಾಗಿ ಹೊರಬಂದಿದ್ದ ಯುವತಿ ತನ್ನ ದ್ವಿಚಕ್ರ ವಾಹನ ಓಡಿಸಿಕೊಂಡು ಮನೆಗೆ ತೆರಳುತ್ತಿದ್ದರು. ಈ ವೇಳೆ ವಾಹನ ಅಪಘಾತವಾಗಿದ್ದು, ಯುವತಿ ವಾಹನ ಬಿಟ್ಟು ಮತ್ತೊಬ್ಬನ ಬೈಕ್‌ನಲ್ಲಿ ಪ್ರಯಾಣ ಬೆಳೆಸಿದ್ದರು. ಈ ವೇಳೆ ಆತ ಯುವತಿಯ ಸ್ಥಿತಿ ಕಂಡು ದುರ್ಬಳಕೆ ಮಾಡಿಕೊಂಡಿದ್ದಾನೆ.

ಯುವತಿಯನ್ನು ಹೆಚ್‌ಎಸ್‌ಆರ್ ಲೇಔಟ್‌ನ ನಿರ್ಜನ ಪ್ರದೇಶದ ಗೋದಾಮುವೊಂದಕ್ಕೆ ಕರೆದುಕೊಂಡು ಹೋಗಿ ರೇಪ್ ಮಾಡಿದ್ದಾನೆ ಎಂದು ತಿಳಿದು ಬಂದಿದೆ. ಯುವತಿಯನ್ನು ಅರೆಪ್ರಜ್ಞಾವಸ್ಥೆ ಸ್ಥಿತಿಯಲ್ಲಿ ಬಿಟ್ಟು ಹೋಗಿದ್ದಾನೆ. ಯುವತಿ ತನ್ನ ಸ್ನೇಹಿತೆಗೆ ಕರೆ ಮಾಡಿದ್ದಾಳೆ. ಆಕೆ ಬಂದು ಯುವತಿಯನ್ನು ಕರೆದುಕೊಂಡು ಹೋಗಿ ಹೆಬ್ಬಗೋಡಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದಾಳೆ. ಈ ವೇಳೆ ಆಸ್ಪತ್ರೆ ಸಿಬ್ಬಂದಿ ಕೋರಮಂಗಲ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಬಳಿಕ ಎಚ್‌ಎಸ್‌ಆರ್ ಲೇಔಟ್ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ ಎಂದು ಅಲ್ಲಿಯೇ ಪೊಲೀಸರು ದೂರು ಪಡೆದು ಪ್ರಕರಣ ದಾಖಲಿಸಿದ್ದಾರೆ. ಇನ್ನು ವಿದ್ಯಾರ್ಥಿನಿ ಆರೋಗ್ಯ ಸ್ಥಿತಿ ಗಂಭೀರವಾಗಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಿಸಲಾಗಿದೆ. ಈ ಬಗ್ಗೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಪ್ರತಿಕ್ರಿಯೆ ನೀಡಿದ್ದು, ಬೆಂಗಳೂರಿನ ಎಚ್‌ಎಸ್‌ಆರ್ ಲೇಔಟ್‌ನಲ್ಲಿ ಅತ್ಯಾಚಾರ ಪ್ರಯತ್ನ ಆಗಿದೆ ಎಂದು ಪ್ರಾಥಮಿಕ ಮಾಹಿತಿ ಲಭ್ಯವಾಗಿದೆ. ಸಂತ್ರಸ್ತ ಯುವತಿಯೇ ದೂರು ನೀಡಿದ್ದಾರೆ. ಈ ಬಗ್ಗೆ ವೈದ್ಯಕೀಯ ಪರೀಕ್ಷೆಗಳು ನಡೆಯುತ್ತಿವೆ. ಗ್ಯಾಂಗ್ ರೇಪ್ ಪ್ರಯತ್ನ ನಡೆದಿರುವುದು ನಿಜ. ವೈದ್ಯಕೀಯ ಪರೀಕ್ಷೆ ವರದಿ ಬಂದ ನಂತರವೇ ಈ ಬಗ್ಗೆ ಪೂರ್ಣ ಮಾಹಿತಿ ಲಭ್ಯವಾಗುತ್ತದೆ. ಸದ್ಯ ಸಂತ್ರಸ್ತ ಯುವತಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಳೆ ಎಂದು ತಿಳಿಸಿದ್ದಾರೆ. ಘಟನೆ ಬಗ್ಗೆ ಇಂದು ಸುದ್ದಿಗೋಷ್ಠಿ ನಡೆಸಿ ಎಸಿಪಿ ರಮಣ್ ಗುಪ್ತಾ

■ 8ನೇ ಪುಟಕ್ಕೆ

ಸಿದ್ದರಾಮಯ್ಯನವರೇ ಮಹಿಳಾ ಸುರಕ್ಷತೆಯ ಗ್ಯಾರಂಟಿ ಯಾವಾಗ?: ಬಿಜೆಪಿ ನಾಯಕರ ಆಕ್ರೋಶ

ಬೆಂಗಳೂರು, ಆ.18– ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಯುವತಿಯ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿರುವ ಪ್ರಕರಣವನ್ನು ವಿಪಕ್ಷ ನಾಯಕ ಆರ್. ಅಶೋಕ, ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಸೇರಿದಂತೆ ಅನೇಕ ಬಿಜೆಪಿ ಮುಖಂಡರು ಖಂಡಿಸಿದ್ದಾರೆ. ಕಾಂಗ್ರೆಸ್ ಸರ್ಕಾರದ ಆಡಳಿತ ವೈಫಲ್ಯದಿಂದಲೇ ಈ ಅಮಾನವೀಯ ಘಟನೆ ನಡೆದಿದ್ದು ಮಹಿಳೆಯರಿಗೆ ಸುರಕ್ಷತೆಯ ಗ್ಯಾರಂಟಿ ಯಾವಾಗ ನೀಡುತ್ತೀರಿ? ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ರಾಜ್ಯ ಬಿಜೆಪಿ ತನ್ನ ಅಧಿಕೃತ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದು, ಆ ದಿನಗಳ ಕೊತ್ವಾಲ್ ಶಿಷ್ಯಂದಿರು ಡಿಸಿಎಂ ಡಿಕೆ ಶಿವಕುಮಾರ್ ಅವರ ಬ್ರ್ಯಾಂಡ್ ಬೆಂಗಳೂರಿನಲ್ಲಿ ಸಕ್ರಿಯರಾಗಿದ್ದಾರೆ ಎಂದು ಗಂಭೀರ ಆರೋಪ ಮಾಡಿದೆ. ಕೊಲ್ಕತ್ತಾ ವೈದ್ಯ ವಿದ್ಯಾರ್ಥಿನಿಯ ಅತ್ಯಾಚಾರ ಖಂಡಿಸಿ ರಾಜ್ಯದಲ್ಲಿ ವೈದ್ಯರು ಬೃಹತ್ ಹೋರಾಟ ಕೈಗೊಂಡ ಸಮಯದಲ್ಲಿ ಈ ಪರಿ ರಾಜಧಾನಿ ಬೆಂಗಳೂರಿನಲ್ಲಿ ಯುವತಿಯ ಅತ್ಯಾಚಾರವಾಗಿದೆ ಎಂದರೆ, ಕಾಂಗ್ರೆಸ್ ಬ್ರಹ್ಮಾಂಡ ಭ್ರಷ್ಟಾಚಾರದಲ್ಲಿ ಮುಳುಗಿ ಅರಾಜಕತೆ ಸೃಷ್ಟಿಸಿರುವುದೇ ಕಾರಣ.

ಭ್ರಷ್ಟ ಮುಖ್ಯಮಂತ್ರಿ ಸಿದ್ದರಾಮಯ್ಯ, ಅಸಮರ್ಥ ಗೃಹ ಸಚಿವ ಡಾ ಪರಮೇಶ್ವರ, ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿಕೆ ಶಿವಕುಮಾರ್ ಅವರು ಒಂದು ಕ್ಷಣವೂ ಅಧಿಕಾರದಲ್ಲಿ ಮುಂದುವರೆಯಲು ಯೋಗ್ಯತೆ ಇಲ್ಲ. ಪ್ರಜಾಪ್ರಭುತ್ವ, ಸಂವಿಧಾನ, ಕಾನೂನಿಗೆ ಬೆಲೆ ಕೊಡದ ಕಾಂಗ್ರೆಸ್ಸಿನಿಂದ ರಾಜ್ಯದಲ್ಲಿ ಜನಸಾಮಾನ್ಯರಿಗೆ ಸುರಕ್ಷತೆ ಸಿಗಲು ಸಾಧ್ಯವೇ ಇಲ್ಲ ಎಂದು ಬಿಜೆಪಿ ನಾಯಕರು ಕಿಡಿಕಾರಿದ್ದಾರೆ.

■ 8ನೇ ಪುಟಕ್ಕೆ

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರಿಂದ ಪ್ರಾಸಿಕ್ಯೂಷನ್‌ಗೆ ಅನುಮತಿ

ಇಂದು ಮೈಸೂರು ಸೇರಿ ರಾಜ್ಯಾದ್ಯಂತ ಕಾಂಗ್ರೆಸ್ ಪ್ರತಿಭಟನೆ



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಶಾಸಕ ಕೆ.ಹರೀಶ್‌ಗೌಡ ಮಾತನಾಡಿದರು.

ಮೈಸೂರು, ಆ.18(ಎಂಟಿವೈ)– ರಾಜ್ಯಪಾಲರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಖಂಡಿಸಿ, ಉಪಮುಖ್ಯಮಂತ್ರಿಗಳೂ ಆದ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಸೂಚನೆ ಮೇರೆಗೆ ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳಲ್ಲೂ ಕಾಂಗ್ರೆಸ್ ಪ್ರತಿಭಟನೆ ನಡೆಸಲಿದೆ. ಅದರಂತೆ ಕಾಂಗ್ರೆಸ್ ಮತ್ತು ಇನ್ನಿತರ ಪ್ರಗತಿಪರ ಸಂಘಟನೆಗಳ ವತಿಯಿಂದ ನಾಳೆ(ಆ.19ರಂದು) ನಡೆಸಲು ಉದ್ದೇಶಿಸಿದ್ದ ಮೈಸೂರು ಬಂದ್ ಬದಲಾಗಿ 20 ಸಾವಿರಕ್ಕೂ ಹೆಚ್ಚು ಜನರಿಂದ ಬೃಹತ್ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲು ತೀರ್ಮಾನಿಸಿವೆ.

ಮೈಸೂರು ನಗರ ಕಾಂಗ್ರೆಸ್ ಕಚೇರಿಯಲ್ಲಿ ಭಾನುವಾರ ನಡೆದ ಮೈಸೂರು ನಗರ ಮತ್ತು ಗ್ರಾಮಾಂತರ ಕಾಂಗ್ರೆಸ್ ಸಮಿತಿ ಪೂರ್ವಭಾವಿ ಸಭೆಯಲ್ಲಿ ವಿವಿಧ ಅಹಿಂದ ಸಂಘಟನೆ, ಕಾಂಗ್ರೆಸ್ ಮುಖಂಡರು ಸಮಾಲೋಚನೆ ನಡೆಸಿ ಬಂದ್ ನಡೆಸುವ ನಿರ್ಧಾರದಿಂದ ಹಿಂದೆ ಸರಿದು, ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು. ನಾಳೆ ಬೆಳಗ್ಗೆ 11 ಗಂಟೆಗೆ ಗಾಂಧಿವೃತ್ತದಲ್ಲಿ ಪ್ರತಿಭಟನೆ ನಡೆಸಿದ ಬಳಿಕ ಜಿಲ್ಲಾಧಿಕಾರಿ ಕಚೇರಿವರೆಗೂ ಮೆರವಣಿಗೆ ನಡೆಯಲಿದೆ. ಗಾಂಧಿವೃತ್ತದಿಂದ ಸಂಗಂ ಚಿತ್ರಮಂದಿರ, ನಜರ್‌ಬಾದ್ ಮುಖ್ಯ ರಸ್ತೆ, ಗೋಪಾಲಗೌಡ ವೃತ್ತ, ಮಹದೇಶ್ವರ ರಸ್ತೆ ಮೂಲಕ ಜಿಲ್ಲಾಧಿಕಾರಿ ಕಚೇರಿವರೆಗೆ ಸಾಗಿ ಜಿಲ್ಲಾಡಳಿತದ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಪತ್ರವನ್ನು ಸಲ್ಲಿಸಲು ನಿರ್ಧರಿಸಲಾಗಿದೆ.

ಸಭೆಯಲ್ಲಿ ಮಾತನಾಡಿದ ಶಾಸಕ ಕೆ.ಹರೀಶ್‌ಗೌಡ, ಅಹಿತಕರ ಘಟನೆಗೆ ಅವಕಾಶ ಕೊಡದೆ ಶಾಂತಿಯುತವಾಗಿ ಪ್ರತಿಭಟನೆ ಮಾಡಬೇಕು. ಕಾನೂನು ಸುವ್ಯವಸ್ಥೆಗೆ ಧಕ್ಕೆಯಾದರೆ ಸರಕಾರಕ್ಕೆ ಕೆಟ್ಟ ಹೆಸರು ಬರಲಿದೆ. ಸರ್ಕಾರ ನಡೆಸುತ್ತಿರುವ ನಾಯಕರೇ ಕಾಂಗ್ರೆಸ್ ಪಕ್ಷದವರಾಗಿರುವ ಕಾರಣ ಶಿಸ್ತಿನಿಂದ ಪ್ರತಿಭಟನೆ ಮಾಡಬೇಕು. ಸಿದ್ದರಾಮಯ್ಯ ಅವರು ಮೈಸೂರು ನಗರದವರೇ ಆಗಿರುವ ಕಾರಣ ನಮ್ಮ ಬಲ ಪ್ರದರ್ಶಿಸಬೇಕು. ನರಸಿಂಹರಾಜ, ಚಾಮರಾಜ, ಕೃಷ್ಣರಾಜ ಕ್ಷೇತ್ರದಿಂದ ಐದರಿಂದ ಹತ್ತು ಸಾವಿರ ಸೇರಿದರೆ, ಗ್ರಾಮಾಂತರ ಪ್ರದೇಶದಿಂದ ಹತ್ತು ಸಾವಿರ ಜನರು ಸೇರಲಿದ್ದಾರೆ. ಎಲ್ಲರೂ ಒಟ್ಟಾಗಿ ಪ್ರತಿಭಟನೆ ನಡೆಸುವ ಮೂಲಕ ರಾಜ್ಯಪಾಲರ ಕ್ರಮವನ್ನು ಖಂಡಿಸಬೇಕು ಎಂದರು. ಬಿಜೆಪಿ–ಜೆಡಿಎಸ್‌ನವರಿಂದಲೇ ಮುಡಾದಲ್ಲಿ ಶೇ.99ರಷ್ಟು ಹಗರಣಗಳು ನಡೆದಿವೆ. ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರೂ ಮುಡಾದಲ್ಲಿ ನಿವೇಶನ ಪಡೆದಿದ್ದಾರೆ.

■ 6ನೇ ಪುಟಕ್ಕೆ

ಮೈಸೂರಲ್ಲಿ ಕಾಂಗ್ರೆಸ್ ರಸ್ತೆ ತಡೆ



ಮೈಸೂರಿನ ಎಪಿಎಂಸಿ ಬಳಿಯ ರಿಂಗ್‌ರಸ್ತೆ ಜಂಕ್ಷನ್‌ನಲ್ಲಿ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ರಸ್ತೆ ತಡೆದು ಪ್ರತಿಭಟಿಸಿದರು.

ಮೈಸೂರು, ಆ.18(ಎಸ್‌ಬಿಡಿ)– ಮುಖ್ಯಮಂತ್ರಿ ಸಿದ್ದರಾಮಯ್ಯರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ನಡೆಯನ್ನು ಖಂಡಿಸಿ, ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ನೇತೃತ್ವದಲ್ಲಿ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಮೈಸೂರು–ನಂಜನಗೂಡು ಮುಖ್ಯರಸ್ತೆ ರಿಂಗ್ ರೋಡ್ ಜಂಕ್ಷನ್‌ನಲ್ಲಿ ಭಾನುವಾರ ಸಂಚಾರ ತಡೆದು ಬೃಹತ್ ಪ್ರತಿಭಟನೆ ನಡೆಸಿದರು.

ಎಪಿಎಂಸಿ ಬಳಿ ರಿಂಗ್ ರಸ್ತೆಯ ಎಲ್ಲಾ ಮಾರ್ಗದ ಸಂಚಾರ ತಡೆದು ರಾಜ್ಯಪಾಲರಿಗೆ ಧಿಕ್ಕಾರ ಕೂಗಿ, ಘೋಷಣಾ ಫಲಕಗಳನ್ನು ಪ್ರದರ್ಶಿಸಿದ್ದಲ್ಲದೆ, ಅವರ ಭಾವಚಿತ್ರಕ್ಕೆ ಬೆಂಕಿ ಹಚ್ಚಿದರು. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದ ವಿಚಾರದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ಕುತಂತ್ರದ ರಾಜಕಾರಣ ನಡೆಸಿವೆ. ಇದಕ್ಕೆ ಪೂರಕವಾಗಿ ಬಿಜೆಪಿ ಕೈಗೊಂಬೆಯಾಗಿ ಇಬ್ಬಗೆ ನೀತಿ ಹೊಂದಿರುವ ರಾಜ್ಯಪಾಲರು, ಸಿಎಂ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆ ವೇಳೆ ಮೈಸೂರು–ನಂಜನಗೂಡು ಮುಖ್ಯರಸ್ತೆ ಹಾಗೂ ರಿಂಗ್ ರಸ್ತೆ ಸಂಚಾರಕ್ಕೆ ಕೆಲಕಾಲ ಅಡ್ಡಿಯುಂಟಾಗಿತ್ತು.

ಪ್ರತಿಭಟನೆ ವೇಳೆ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಷಾ ಸರ್ವಾಧಿಕಾರಿಗಳಂತೆ ನಡೆದುಕೊಳ್ಳುತ್ತಿದ್ದಾರೆ. ಇವರನ್ನು ಯಾರೂ ಪ್ರಶ್ನಿಸಬಾರದು, ವಿರೋಧಿಸಬಾರದು ಎಂಬ ಮನಸ್ಥಿತಿ ಹೊಂದಿದ್ದಾರೆ. ಅಮಿತ್ ಷಾ ಹಿನ್ನೆಲೆ ಏನೆಂದು ಈ ಹಿಂದೆಯೇ ಸಿಬಿಐ ಬಹಿರಂಗಪಡಿಸಿದೆ. ಮೋದಿ ಅವರು ಗುಜರಾತ್‌ನಲ್ಲಿ ನಡೆದ ನರಮೇಧದ ರೂವಾರಿ ಎನ್ನುವುದು ಜನರಿಗೆ ಗೊತ್ತಿದೆ. ಬಿಜೆಪಿಯೇತರ ಸರ್ಕಾರಗಳಿರುವ ರಾಜ್ಯಗಳಲ್ಲಿ ಆಡಳಿತವನ್ನು ಅಸ್ಥಿರಗೊಳಿಸುವುದು ಇವರ ಗುರಿಯಾಗಿದೆ ಎಂದು ಆರೋಪಿಸಿದರು. ಚುನಾವಣೆ ಮೂಲಕ ದಕ್ಷಿಣ ಭಾರತದ ರಾಜ್ಯಗಳನ್ನು ಹಣಿಯಲು ಸಾಧ್ಯವಾಗದ ಕಾರಣ ರಾಜ್ಯಪಾಲರ ಮೂಲಕ ಕಿರುಕುಳ ನೀಡಲಾರಂಭಿಸಿದ್ದಾರೆ. ತಮಿಳುನಾಡು, ಕೇರಳ, ಪಶ್ಚಿಮ ಬಂಗಾಳ

■ 8ನೇ ಪುಟಕ್ಕೆ

ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಇಂದು ವಿಧಾನಸೌಧ ಮುಂಭಾಗ ಬಿಜೆಪಿ ಪ್ರತಿಭಟನೆ

ಬೆಂಗಳೂರು, ಆ.18– ಮುಡಾ ಹಗರಣ ಹಿನ್ನೆಲೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿಯಿಂದ ವಿಧಾನಸೌಧದ ಗಾಂಧಿ ಪ್ರತಿಮೆ ಮುಂಭಾಗ ಆ.19ರಂದು ಬೆಳಗ್ಗೆ 11.30ಕ್ಕೆ ಪ್ರತಿಭಟಿಸಲಾಗುವುದು ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್‌ನ ನಡಿಗೆ, ಭ್ರಷ್ಟಾಚಾರದ ಕಡೆಗೆ ಎಂಬಂತಾಗಿದೆ. ಈ ಸರ್ಕಾರ ಬಂದಾಗ ಜನರು ಗ್ಯಾರಂಟಿಗಳ ಬಗ್ಗೆ ಭರವಸೆ ಇಟ್ಟುಕೊಂಡಿದ್ದರು. ಆದರೆ ಜನರ ಅಪೇಕ್ಷೆಗೆ ವಿರುದ್ಧವಾಗಿ ಸರ್ಕಾರ ನಡೆಯುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ 65 ಕೇಸ್‌ಗಳಿದ್ದು, ಅದನ್ನು ಮುಚ್ಚಿ ಹಾಕಲು ಯತ್ನಿಸಿದ್ದಾರೆ. ಅಂದ ಮೇಲೆ ಅವರು ಹೇಗೆ ಕ್ಲೀನ್ ಎನ್ನುವುದು ತಿಳಿದಿಲ್ಲ. ಈಗ ರಾಜ್ಯಪಾಲರು ತನಿಖೆಗೆ ಅನುಮತಿ ನೀಡಿರುವುದನ್ನು ಕಾಂಗ್ರೆಸ್ ಸ್ವಾಗತ ಮಾಡಬೇಕಿತ್ತು. ತನಿಖೆಯಾಗಿ ಸ್ವಚ್ಛವಾಗಿ ಹೊರಬಂದರೆ ಕ್ಲೀನ್ ಎಂದು ನಂಬಬಹುದು. ಅದನ್ನು ಬಿಟ್ಟು ರಾಜ್ಯಾದ್ಯಂತ ಹೋರಾಟ ಮಾಡಲು ಮುಂದಾಗಿದ್ದಾರೆ ಎಂದು ದೂರಿದರು.

ಸಿಎಂ ಸಿದ್ದರಾಮಯ್ಯ ಅಧಿವೇಶನದಲ್ಲಿ ಉತ್ತರ ಕೊಡದೆ ಪಲಾಯನ ಮಾಡಿದ್ದಾರೆ. ಜೊತೆಗೆ ಪ್ರಕರಣ ಮುಚ್ಚಿ ಹಾಕಲು ಬೇಕಾದವರನ್ನು ನೇಮಿಸಿದ್ದಾರೆ. ಹೈಕಮಾಂಡ್ ಕೂಡ ಸಿದ್ದರಾಮಯ್ಯ ಅವರ ಭ್ರಷ್ಟಾಚಾರವನ್ನು ಬೆಂಬಲಿಸಿದೆ. ಯಾವ ನೈತಿಕತೆ

■ 6ನೇ ಪುಟಕ್ಕೆ

ಜನರನ್ನು ಎತ್ತಿಕಟ್ಟಿ ರಾಜ್ಯಪಾಲರಿಗೆ ಸಿಎಂ ಸಿದ್ದರಾಮಯ್ಯ ಧಮ್ಕಿ

- ಹಳೇ ಪ್ರಕರಣ ಕೆದಕಿ ನನ್ನ ಬ್ಲಾಕ್‌ಮೇಲ್ ಮಾಡಲಾಗುತ್ತಿದೆ
- ಬಂಡೆಯಿಂದಲೇ ಸಿದ್ದರಾಮಯ್ಯ ಅವರಿಗೆ ಈ ಗತಿ ಬಂದಿದೆ



ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಆರೋಪ

ಬೆಂಗಳೂರು, ಆ.18– ಜನರನ್ನು ಎತ್ತಿಕಟ್ಟಿ ರಾಜ್ಯಪಾಲರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಧಮ್ಕಿ ಹಾಕುತ್ತಿದ್ದಾರೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿ ಭಾನುವಾರ ಮಾಧ್ಯಮಗಳ ಜತೆ ಮಾತನಾಡಿದ ಅವರು, ಯಾವುದೋ ಹಳೆಯ ಪ್ರಕರಣವನ್ನು ಕೆದಕಿ, ಸುಪ್ರೀಂ ಕೋರ್ಟ್‌ನಲ್ಲಿರುವ ಪ್ರಕರಣ ಇಟ್ಟುಕೊಂಡು ರಾಜ್ಯಪಾಲರನ್ನು ಅಪಮಾನಿಸುವ, ನನ್ನನ್ನು ಬ್ಲಾಕ್‌ಮೇಲ್ ಮಾಡುವ ಕೆಲಸವನ್ನು ಸರ್ಕಾರ ಮಾಡುತ್ತಿದೆ. ಇದಕ್ಕೆಲ್ಲಾ ಕೇರ್ ಮಾಡುವ ಪೈಕಿ ನಾನಲ್ಲ. ಈ ಸರ್ಕಾರಕ್ಕೂ ಅದು ಗೊತ್ತಿದೆ ಎಂದು ಕಿಡಿಕಾರಿದರು.

ರಾಜ್ಯಪಾಲರು ಮುಡಾ ಹಗರಣ ವಿಚಾರಣೆಗೆ ಅನುಮತಿ ನೀಡಿದಾಕ್ಷಣ ಇಡೀ ಸಚಿವರು, ಶಾಸಕರನ್ನು ಇಟ್ಟುಕೊಂಡು ರಾಜ್ಯಪಾಲರಿಗೆ ಧಮ್ಕಿ ಹಾಕುವ, ಜನರನ್ನು ಎತ್ತಿ ಕಟ್ಟುವ ಕೆಲಸವನ್ನು ಸಿದ್ದರಾಮಯ್ಯ ಅವರು ಮಾಡುತ್ತಿದ್ದಾರೆ. ನಾನು ಹೀಗೆಲ್ಲಾ ಮಾಡಿಲ್ಲ, ನನ್ನ ವಿರುದ್ಧ ಆರೋಪ ಕೇಳಿಬಂದಾಗ ಒಬ್ಬನೇ ಎದುರಿಸುತ್ತೇನೆ ಎಂದು ಹೇಳಿದ್ದೆ. ವಿಧಾನಸಭೆ ಕಲಾಪದಲ್ಲಿಯೂ ಹೇಳಿದ್ದೇನೆ. ಬೇಕಾದರೆ ಕಡತ ತೆಗೆದು ನೋಡಬಹುದು ಎಂದು ಕೇಂದ್ರ ಸಚಿವರು ಹೇಳಿದರು.

ನನ್ನ ವಿರುದ್ಧ 2006ರಲ್ಲಿ ಗಣಿ ಆರೋಪ ಮಾಡಿದಾಗ ನಾನೊಬ್ಬನೇ ಎದುರಿಸಿದೆ. ಶಾಸಕರು, ಸಚಿವರನ್ನು ಅಡ್ಡ ಇಟ್ಟುಕೊಂಡು ರಕ್ಷಣೆ ಪಡೆಯುವ ಕೆಲಸ ಮಾಡಲಿಲ್ಲ. ಹೇಡಿತನ ಪ್ರದರ್ಶಿಸಲಿಲ್ಲ, ಧೈರ್ಯವಾಗಿ ಒಬ್ಬನೇ ಎದುರಿಸಿದೆ ಎಂದರು.

ರಾಜ್ಯಪಾಲರು ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ನಂತರ ಕಾಂಗ್ರೆಸ್ ವರಸೆಯೇ ಬದಲಾಗಿದೆ. ಲೋಕಸಭೆಯಲ್ಲಿ ಪಕ್ಷದ ಸಂಸದರ ಕೈಗೆ ಸಂವಿಧಾನದ ಪ್ರತಿ ಕೊಟ್ಟು ಪ್ರಮಾಣ ಸ್ವೀಕಾರ ಮಾಡಿಸುವ ಕಾಂಗ್ರೆಸ್, ಕರ್ನಾಟಕದಲ್ಲಿ ಮಾತ್ರ ರಾಜ್ಯದ ಸಾಂವಿಧಾನಿಕ ಮುಖ್ಯಸ್ಥರಾಗಿರುವ ರಾಜ್ಯಪಾಲರ ವಿರುದ್ಧ ಅತ್ಯಂತ ಕೆಟ್ಟದಾಗಿ, ಅವಹೇಳನಕಾರಿಯಾಗಿ ಪ್ರತಿಭಟನೆ ಮಾಡಿಸುತ್ತಿದೆ. ಸಚಿವರು, ಶಾಸಕರು ರಾಜ್ಯಪಾಲರ ಬಗ್ಗೆ ಬಹಳ ಅಗೌರವದಿಂದ ನಡೆದುಕೊಳ್ಳುತ್ತಿದ್ದಾರೆ. ಬೇರೆ ಯಾವ ರಾಜ್ಯದಲ್ಲೂ ಇಂತಹ ಕೆಟ್ಟ ಪರಿಸ್ಥಿತಿಯನ್ನು ನಾನು ನೋಡಿಲ್ಲ ಎಂದು ಕುಮಾರಸ್ವಾಮಿ ಅವರು ಆಕ್ರೋಶ ವ್ಯಕ್ತಪಡಿಸಿದರು.

ಶನಿವಾರದಿಂದ ಸಿಎಂ ಸಿದ್ದರಾಮಯ್ಯ ಸೇರಿದಂತೆ ಎಲ್ಲರೂ ಕುಮಾರಸ್ವಾಮಿ ಮೇಲೆ ಏಕೆ ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಟ್ಟಿಲ್ಲ ಎಂದು ಕೇಳುತ್ತಿದ್ದಾರೆ. 2006ರಲ್ಲಿ ನಾನು ಸಿಎಂ ಆದ ಎರಡೇ ತಿಂಗಳಿಗೆ ಗಣಿಗಾರಿಕೆ ಮಾಲೀಕರಿಂದ ಹಣ ಸಂಗ್ರಹ ಮಾಡಿದ್ದೇನೆ ಎಂದು ಆರೋಪ ಮಾಡಿದ್ದರು. ಅದರ ಬಗ್ಗೆ ಒಂದು ಸಿಡಿ ಮಾಡಲು ಸಿಡಿ ಶಿವು ಪ್ರಯತ್ನ ಮಾಡಿದ್ದರು. ವಿಧಾನಸಭೆ ಕಲಾಪಕ್ಕೆ ಬಂದು ಆಪರೇಷನ್ ಸಕ್ಸಸ್ ಎಂದು ಹೇಳಿದ್ದರು. ನನ್ನ ಬಗ್ಗೆ ವಿಧಾನಸಭೆಯಲ್ಲಿ ದೊಡ್ಡ ಪ್ರಮಾಣದಲ್ಲಿ ಚರ್ಚೆ ನಡೆಯಿತು. ನಾನು ಏಕಾಂಗಿಯಾಗಿ ಹೋರಾಟ ಮಾಡುತ್ತೇನೆ ಎಂದು ಹೇಳಿದ್ದೆ. ಸಿದ್ದರಾಮಯ್ಯ ಅವರಿಗೆ ಇದು ನೆನಪಿದೆಯಾ? ಎಂದು ಕೇಂದ್ರ ಸಚಿವರು ಪ್ರಶ್ನಿಸಿದರು.

ನಿಮ್ಮ ಹಾಗೆ ನಮ್ಮ ಕಾರ್ಯಕರ್ತರಿಗೆ ಬೀದಿಯಲ್ಲಿ ಬೆಂಕಿ ಹಾಕಿ ಅನ್ನಲಿಲ್ಲ. ಜಂತಕಲ್ ಮೈನಿಂಗ್ ಪ್ರಕರಣವನ್ನು ಹೈಕೋರ್ಟ್‌ನಲ್ಲಿ ವಜಾ ಮಾಡಲಾಗಿದೆ. ಸಾಯಿ ವೆಂಕಟೇಶ್ವರ ಹಗರಣದ್ದು ತನಿಖೆ ಮಾಡಿ ಎಂದರು. ಇವರು ಬೇಕಾದರೆ ಸುಪ್ರೀಂಕೋರ್ಟ್‌ಗೆ ಹೋಗಬಹುದು. ಇವರಿಗೆ ಬೇಡ ಎಂದವರು ಯಾರು? ಎಂದು ಕುಮಾರಸ್ವಾಮಿ ಅವರು ಖಾರವಾಗಿ ಪ್ರಶ್ನಿಸಿದರು.

ನನ್ನನ್ನು ಹೆದರಿಸೋಕೆ ಇದನ್ನೆಲ್ಲಾ ಮಾಡುತ್ತಿದ್ದೀರಿ ಅಲ್ಲವೇ? ಯಾಕೆ ಈ ಡ್ರಾಮಾಗಳು? ನಿಮ್ಮ ಗೊಡ್ಡು ಬೆದರಿಕೆಗೆ ನಾನು ಹೆದರುತ್ತೇನೆಯೇ? ಅದು ನಿಮ್ಮ ಭ್ರಮೆಯಷ್ಟೇ. ರಾಜ್ಯಪಾಲರ ವಿರುದ್ಧ ರಾಷ್ಟ್ರದಲ್ಲಿ ಇದೇ ಮೊದಲ ಬಾರಿಗೆ ಈ ರೀತಿಯ ಕೀಳುಮಟ್ಟದ

■ 6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಪೊಲೀಸ್ : ಈ ಕುರಿ ಮರಿ ಯಾರದು?
ಗುಂಡ : ಕುರಿ ಯಾರದು ಅಂತ ಗೊತ್ತಿಲ್ಲ.
ಆದರೆ ಮರಿ ಯಾರದು ಅಂತ ಗೊತ್ತು
ಪೊಲೀಸ್ : ಮರಿ ಯಾರದು?
ಗುಂಡ : ಮರಿ ಕುರಿದು ಸಾರ್...!

ಮೈಸೂರು ಮಿತ್ರ

ಸೋಮವಾರ, 19 ಆಗಸ್ಟ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

'ದೇವರು ನಮಗೆ ಕೊಟ್ಟಿರೋದು ಎರಡೇ ಆಯ್ಕೆ. ಒಂದು ಕೊಟ್ಟು ಹೋಗಬೇಕು. ಇನ್ನೊಂದು ಬಿಟ್ಟು ಹೋಗಬೇಕು. ತೆಗೆದುಕೊಂಡು ಹೋಗುವ ಆಯ್ಕೆಯೂ ಇಲ್ಲ'

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { 'ಜಾಣನಿಗೆ ಮಾತಿನ ಪೆಟ್ಟು ಕತ್ತೆಗೆ ಲತ್ತೆಯ ಪೆಟ್ಟು'

ನಿಮ್ಮ ಪತ್ರಗಳು

■ ಮುಡಾ ನಿವೇಶನ: ಸಿಎಂ ಪ್ರಭಾವ ಬೀರಿದ್ದಾರೆಯೇ?

ಮಾನ್ಯರೆ,

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ 50:50 ಅನುಪಾತದಡಿ ನಿವೇಶನ





ಪಡೆದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ರಾಜ್ಯಪಾಲರು ಒಪ್ಪಿಗೆ ನೀಡಿರುವುದು ಕಾಂಗ್ರೆಸ್‌ಗೆ ಮುಜುಗರ ಉಂಟು ಮಾಡಿದೆ. ಒಂದು ರಾಷ್ಟ್ರೀಯ ಪಕ್ಷವಾಗಿ ಅದು ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕು. ಎಲ್ಲಾ ಆಯಾಮಗಳನ್ನು ಪರಿಶೀಲಿಸಿದ ನಂತರವೇ ರಾಜ್ಯಪಾಲರು ಅನುಮತಿ ನೀಡಿರುವುದಾಗಿ ತಿಳಿಸಿದ್ದಾರೆ. ನಾನು ಎಲ್ಲೂ ಪ್ರಭಾವ ಬೀರಿಲ್ಲ ಹಾಗೂ ನನ್ನ ಅಧಿಕಾರದ ಅವಧಿಯಲ್ಲಿ ಮಂಜೂರು ಮಾಡಿಸಿಕೊಂಡಿಲ್ಲ. ಅದು ಬಿಜೆಪಿ ಅಧಿಕಾರದ ಅವಧಿಯಲ್ಲಿ ನಡೆದಿದೆ ಎಂದು ಮುಖ್ಯಮಂತ್ರಿಗಳು ಸಮರ್ಥಿಸಿಕೊಂಡಿದ್ದಾರೆ. ನಿಯಮಕ್ಕೆ ವಿರುದ್ಧವಾಗಿ ಕೆಸರೆ ಬದಲಿಗೆ, ವಿಜಯನಗರದಲ್ಲಿ ನಿವೇಶನ ಕೊಡಿ ಎಂದು ಯಾರೂ ಬರೆದುಕೊಡುವುದಿಲ್ಲ. ಹಾಗೆ ಬರೆದು ಕೊಟ್ಟರೆ ಅಧಿಕಾರಿಗಳೇ ತಪ್ಪಿತಸ್ಥರಾಗುತ್ತಿದ್ದರು. (ಆದರೆ ಈಗಲೂ ಅಧಿಕಾರಿಗಳು ತಪ್ಪಿತಸ್ಥರೆ). ತಮ್ಮ ಪ್ರಭಾವ ಬೀರಿ ವಿಜಯ ನಗರದಲ್ಲಿ ನಿವೇಶನ ಮಂಜೂರು ಮಾಡಿಸಿಕೊಂಡಿದ್ದಾರೆ ಎನ್ನುವುದು ಸ್ಪಷ್ಟ. ಶಾಸಕರು, ಮಂತ್ರಿಗಳು, ಉಪ ಮುಖ್ಯಮಂತ್ರಿ, ಮುಖ್ಯಮಂತ್ರಿಗಳಾಗಿದ್ದವರು, ಮೈಸೂರಿನವರೆ ಆಗಿದ್ದು ಪ್ರಭಾವ ಬೀರಿ ಮಂಜೂರು ಮಾಡಿಸಿಕೊಂಡಿದ್ದಾರೆ ಎಂದು ಮೇಲ್ನೋಟಕ್ಕೇ ಯಾರಿಗಾದರೂ ಇದು ತಿಳಿಯುತ್ತದೆ. ಮುಡಾದವರು ನಂಜನಗೂಡಿನ ಅಂಡುವಿನಹಳ್ಳಿ ಬಡಾವಣೆಯಲ್ಲಿ ವಶಪಡಿಸಿಕೊಂಡ ಜಮೀನುದಾರರಿಗೆ ಮೈಸೂರಿನ ವಿಜಯನಗರದಲ್ಲಿ ನಿವೇಶನ ನೀಡಿದ ಉದಾಹರಣೆ ಇದೆಯೇ? ಇದು ನೈತಿಕ ರಾಜಕಾರಣದ ಪ್ರಶ್ನೆ. **–ಮುಳ್ಳೂರು ಪ್ರಕಾಶ್, ಮೈಸೂರು.**

■ 59ನೇ ವಾರ್ಡಿನ ಪಾರ್ಕ್‌ನಲ್ಲಿ ಅವ್ಯವಸ್ಥೆ

ಮಾನ್ಯರೆ,

ಮೈಸೂರು ನಗರದ 59ನೇ ವಾರ್ಡಿಗೆ ಸೇರಿರುವ ಕುವೆಂಪುನಗರ ಎಂ–ಬ್ಲಾಕ್ ಗಣಪತಿ ದೇವಾಲಯಕ್ಕೆ ಹೊಂದಿಕೊಂಡಿರುವ ಉದ್ಯಾನವನದಲ್ಲಿ ಕಸ ತೆರವುಗೊಳಿಸದೆ ಗುಡ್ಡೆಯಾಗಿ ಬೆಳೆದು ನಿಂತಿದೆ. ಜೊತೆಗೆ ಕೆಲ ಕಾಲೇಜು ವಿದ್ಯಾರ್ಥಿಗಳು ಹಾಗೂ ಪುಂಡರು ಈ ಉದ್ಯಾನವನಕ್ಕೆ ಆಗಾಗ ಬಂದು ಧೂಮಪಾನ, ಮದ್ಯಪಾನ ಮಾಡಿ ಉದ್ಯಾನದಲ್ಲಿ ಅನೈರ್ಮಲ್ಯ ಉಂಟು ಮಾಡಿ, ಮದ್ಯದ ಬಾಟಲಿಗಳು ಮತ್ತು ಬೀಡಿ, ಸಿಗರೇಟ್ ತುಂಡುಗಳು, ಹನ್ಸ್, ಪಾನ್ ಪರಾಗ್ ತಿಂದು ಉಗಿದಿರುವುದು, ಪ್ಲಾಸ್ಟಿಕ್ ಬಾಟಲ್‌ಗಳು, ಪ್ಲಾಸ್ಟಿಕ್ ಕವರ್‌ಗಳು ಅಲ್ಲೇ ಬಿದ್ದಿರುವುದೇ ಇದಕ್ಕೆ ಸಾಕ್ಷಿ. ಇದರಿಂದ ವಾಯುವಿಹಾರಕ್ಕೆ ಬರುವ ಹಿರಿಯ ನಾಗರಿಕರು, ಮಹಿಳೆಯರು ತೊಂದರೆ ಅನುಭವಿಸುವಂತಾಗಿದೆ. ಅಲ್ಲದೆ, ಈ ಉದ್ಯಾನವನದಲ್ಲಿ ಸ್ವಚ್ಛತೆ ಮಾಡುವ ಗುತ್ತಿಗೆ ನೌಕರರು ಸಹ ಪ್ರತಿದಿನ ಸ್ವಚ್ಛತೆ ಮಾಡದೆ ಅವರಿಗೆ ಇಷ್ಟ ಬಂದಂತೆ ಬಂದು ಸರಿಯಾಗಿ ಕರ್ತವ್ಯ ನಿರ್ವಹಿಸದೆ ಸುಮ್ಮನೆ ಉದ್ಯಾನವನದಲ್ಲಿ ಕುಳಿತು ಕಾಲ ವ್ಯರ್ಥ ಮಾಡುತ್ತಿರುವುದರಿಂದ, ಅನೈರ್ಮಲ್ಯ ತಾಂಡವವಾಡುತ್ತಿದೆ. ಅಲ್ಲದೆ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಟ್ರಾನ್ಸ್‌ಫಾರ್ಮರ್ ಇರುವ ಸ್ಥಳದಲ್ಲಿ, ಅಗಾಧವಾದ ಹುಲ್ಲು ಬೆಳೆದಿದ್ದು, ಹಾವು, ಚೇಳು, ಸೊಳ್ಳೆಗಳ ಕಾಟ ಹೆಚ್ಚಾಗುತ್ತಿದೆ. ಇದರಿಂದ ಸುತ್ತಮುತ್ತಲಿನ ಮನೆಗಳು, ವ್ಯಾಪಾರ ವಹಿವಾಟಿಗೆ ಬರುವವರಿಗೆ ತೊಂದರೆಯಾಗುತ್ತಿದೆ. ಆದ್ದರಿಂದ ಸಂಬಂಧಪಟ್ಟ 59ನೇ ವಾರ್ಡಿನ ಮೈಸೂರು ಮಹಾನಗರ ಪಾಲಿಕೆ ಅಧಿಕಾರಿಗಳು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕೆಂದು ಮನವಿ.

–ನಾಗೇಶ್, ಮಾನಸಗಂಗೋತ್ರಿ, ಮೈಸೂರು

■ ಕಪ್ಪುಚುಕ್ಕೆ ಹೋಗಲಾಡಿಸಿ

ಮಾನ್ಯರೆ,

ಮೈಸೂರಿನ ವಿಜಯನಗರ ಮೂರನೇ ಹಂತದ 'ಬಿ' ಬ್ಲಾಕ್‌ನ 20ನೇ ಮುಖ್ಯ ರಸ್ತೆಯ ಅವ್ಯವಸ್ಥೆಯನ್ನು ನೋಡಿದರೆ ಇಂತಹ ಪ್ರತಿಷ್ಠಿತ ಬಡಾವಣೆಯಲ್ಲೂ ಒಂದು ಕೆಟ್ಟ ರಸ್ತೆ ಇರಬಹುದೇ ಎಂದು ಭಾವಿಸಬಹುದು.

ಸುಮಾರು ಒಂದೂವರೆ ವರ್ಷಗಳ ಹಿಂದೆ ನಮ್ಮ ನೆಚ್ಚಿನ ಜನನಾಯಕರಾದ ಜಿ.ಟಿ.ದೇವೇಗೌಡರ ನೇತೃತ್ವದಲ್ಲಿ ಈ ಭಾಗದ ಎಲ್ಲ ರಸ್ತೆಗಳನ್ನು (ಈ ಒಂದು ರಸ್ತೆ ಹೊರತುಪಡಿಸಿ) ಡಾಂಬರೀಕರಣ ಹಾಗೂ ರಿಪೇರಿ ಕೆಲಸಗಳನ್ನು ನಿರ್ವಹಿಸಿರುತ್ತಾರೆ. ಆದರೆ ಈ ಮೇಲ್ಕಂಡ ಒಂದೇ ಒಂದು ರಸ್ತೆಯನ್ನು ಕಾಮಗಾರಿಯಿಂದ ಕೈಬಿಡಲಾಗಿದೆ. ಈ ರಸ್ತೆಯಲ್ಲಿ ಜನರು ಕಾಲ್ನಡಿಗೆಯಲ್ಲಿ ಓಡಾಡಲು ಸಹ ಯೋಚಿಸಬೇಕಾಗಿದೆ. ಸಣ್ಣ ಮಕ್ಕಳು ಆಟವಾಡಲು ಹೆದರುತ್ತಾರೆ. ಇಲ್ಲಿ ವಾಸವಾಗಿರುವ ಎಲ್ಲಾ ನಾಗರಿಕರು ಉದ್ಯೋಗದಿಂದ ನಿವೃತ್ತರಾದ ಹಿರಿಯ ನಾಗರಿಕರಾಗಿರುತ್ತಾರೆ. (ಶಿಕ್ಷಣ ಕ್ಷೇತ್ರದಿಂದ ನಿವೃತ್ತರಾದ ದಿಗ್ಗಜರೂ ಸೇರಿದಂತೆ). ಆದ್ದರಿಂದ ಯಾವುದೇ ಕಾರಣಗಳಿಗಾಗಿ ರಸ್ತೆ ಕಾರ್ಯವನ್ನು ಕೈಬಿಟ್ಟಿದ್ದರೂ ರಸ್ತೆಯ ನಿವಾಸಿಗಳ ಹಿತದೃಷ್ಟಿಯಿಂದ ಹಾಗೂ ತೆರಿಗೆ ಪಾವತಿದಾರರಾದ ನಮ್ಮ ಹಕ್ಕುಗಳ ಪ್ರತಿಪಾದನಾ ದೃಷ್ಟಿಯಿಂದ ಕೂಡಲೇ ಡಾಂಬರೀಕರಣ ಕಾರ್ಯ ಕೈಗೊಂಡು ಕಪ್ಪುಚುಕ್ಕೆಯನ್ನು ಅಳಿಸುವಂತೆ ಸಂಬಂಧಪಟ್ಟವರಲ್ಲಿ ಮನವಿ. **–ಸುರೇಶ್ ತಿಮ್ಮಯ್ಯ ಕೆ.ಎನ್., ವಿಜಯನಗರ.**

■ ಮೈಸೂರು ಆಕಾಶವಾಣಿಗೆ ಅಭಿನಂದನೆ

ಮಾನ್ಯರೆ,

ಮೈಸೂರು ಆಕಾಶವಾಣಿ ಕೇಂದ್ರದಿಂದ ಪ್ರತಿ ಭಾನುವಾರ ಬೆಳಗ್ಗೆ 6.35ಕ್ಕೆ ಪ್ರಸಾರವಾಗುತ್ತಿರುವ 'ಸಿನಿಮಾ–ಯಾನ' ಕನ್ನಡ ಕಲಾತ್ಮಕ ಚಿತ್ರಗಳ ಪರಿಚಯಾತ್ಮಕ, ಪ್ರಯತ್ನವು ಆಕರ್ಷಕ ಬಾನುಲಿ ಕಾರ್ಯಕ್ರಮ ಎಂದೇ ಹೇಳಬಹುದು. 3 ಗಂಟೆಗಳ ಸಿನಿಮಾ ಕಥೆಯನ್ನು 5 ನಿಮಿಷಗಳ ಅವಧಿಯಲ್ಲಿ ಕಥೆಯ ಸಾರಾಂಶ, ಹಾಡುಗಳ ತುಣುಕುಗಳನ್ನು ಪ್ರಸ್ತುತಪಡಿಸುವ ಇವರ ಕೌಶಲ್ಯ ಮೆಚ್ಚಲೇಬೇಕು. ಕಾರ್ಯಕ್ರಮದಲ್ಲಿ ಪ್ರಸ್ತುತಪಡಿಸುತ್ತಿರುವ ಸಿನಿಮಾಗಳೆಲ್ಲ 50 ವರ್ಷಗಳ ಹಿಂದಿನ ಸಿನಿಮಾಗಳಾಗಿದ್ದು, ಅವುಗಳು, (1960–70ರ ದಶಕದ ಸಿನಿಮಾ ಕಥೆಗಳು), ಸಮಾಜಕ್ಕೆ ನೀಡಿದ ನೀತಿ ಪಾಠಗಳು, ಜೀವನ ಮೌಲ್ಯಗಳು ಇಂದಿನ ಯುವಪೀಳಿಗೆಗೆ ಪರಿಚಯಿಸುವ ಒಂದು ಉತ್ತಮ ಪ್ರಯತ್ನವೆಂದೇ ಹೇಳಬಹುದು. ಈ ಬಾನುಲಿ ಪ್ರಸಾರ, ರಾಜ್ಯದ ಎಲ್ಲ ಬಾನುಲಿ ಕೇಂದ್ರಗಳಲ್ಲೂ ಪ್ರಸಾರವಾಗುವಂತಾಗಬೇಕು, ಮೈಸೂರು ಆಕಾಶವಾಣಿಗೆ ಅಭಿನಂದನೆಗಳು. **–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು.**

■ ಕುಸಿತ

ಮಾನ್ಯರೆ,

ಬಿಹಾರದಲ್ಲಿ ಒಂದರ ಮೇಲೊಂದು ಸೇತುವೆಗಳ ಕುಸಿತ!
ಸಾಲದ್ದಕ್ಕೆ ಸರ್ವತ್ರ ಮಾನವ–ಮಾನವರ ನಡುವಣ
ಮನಃ ಸೇತುವೆಗಳ ಕುಸಿತ; ಮೌಲ್ಯಪಾತ! **–ಸಿಪಿಕೆ, ಮೈಸೂರು.**



ಡಾ.ರಮಾ ವಿ. ಬೆಣ್ಣೂರ್
ಸಂಗೀತ ವಿಮರ್ಶಕರು
ಮೊ: 99452 82346

ನಾದಲಹರಿ

ವಿದೇಶದಲ್ಲಿ ಭಾರತದ ಸ್ವಾತಂತ್ರ್ಯೋತ್ಸವ







> ಈ ಬಾರಿಯ, ಅಂದರೆ, 78ನೇ ಸ್ವಾತಂತ್ರ್ಯ ದಿನದ ಒಂದು ವಿಶಿಷ್ಟ ಆಚರಣೆಯ ಸಂದರ್ಭದಲ್ಲಿ ಭಾಗಿಯಾಗುವ ಅಥವಾ ಸಾಕ್ಷಿಯಾಗುವ ಭಾಗ್ಯ ನನ್ನದಾಗಿತ್ತು. ಅಮೆರಿಕದ ಒಂದು ರಾಜ್ಯ ವಾಷಿಂಗ್ಟನ್. (ಡಿ.ಸಿ. ಅಲ್ಲ). ಅದರಲ್ಲಿ ಸಿಯಾಟಲ್ ಎಂಬ ದೊಡ್ಡ ಪಟ್ಟಣ. ಅಲ್ಲಿ ಇದುವರೆಗೂ ಭಾರತದ ಸ್ವಾತಂತ್ರ್ಯ ದಿನವನ್ನು ಆಚರಿಸಿರಲಿಲ್ಲ. ಪ್ರಥಮ ಬಾರಿಗೆ ಭಾರತದ ದೂತವಾಸವು (ಕಾನ್ಸುಲೇಟ್ ಆಫ್ ಇಂಡಿಯಾ) ಅದನ್ನು ಅತೀ ವಿಜೃಂಭಣೆಯಿಂದ ಆಚರಿಸಿತ್ತು. ಆಮಂತ್ರಿತರ ಸಮ್ಮುಖದಲ್ಲಿ ನಡೆಸಲಾದ ಈ ಕಾರ್ಯಕ್ರಮಕ್ಕಾಗಿ (ಮುಂದೆ ಕಾನ್ಸುಲೇಟಿನ ಶಾಶ್ವತ ಕಟ್ಟಡ ಆಗಲಿರುವ) ಭವನದ ಕೆಳಮನೆಯನ್ನು ತ್ರಿವರ್ಣವನ್ನು ಬಳಸಿ ಅತ್ಯಂತ ಸುಂದರವಾಗಿ ಅಲಂಕರಿಸಲಾಗಿತ್ತು. ಭಾರತೀಯ ಉಡುಪುಗಳನ್ನು ಧರಿಸಿದ ಭಾರತೀಯರ ಸಂಭ್ರಮದ ಕಲರವ ಅಲ್ಲಿ ತುಂಬಿತ್ತು. ಆ ಭವನವನ್ನು ಪ್ರವೇಶಿಸುತ್ತಿದ್ದಂತೆಯೇ ಸ್ವಾಗತ ಕೋರುವವರು ಆಮಂತ್ರಿತರಿಗೆ ಭಾರತದ ಪುಟ್ಟ ಧ್ವಜವನ್ನು ನಗುನಗುತಾ ನೀಡುತ್ತಿದ್ದರು. ಉಡುಪಿನ ಮೇಲೆ ಅದನ್ನು ಸಿಕ್ಕಿಸಿ, ಮಂದಸ್ಮಿತದಿಂದ ಸಾಗುತ್ತಿದ್ದವರನ್ನು ನೋಡುವುದೇ ಸಂತೋಷ. ಹಿತವಾಗಿ ಕೇಳಿ ಬರುತ್ತಿದ್ದ ದೇಶಭಕ್ತಿ ಗೀತೆಗಳ ರೆಕಾರ್ಡ್. ನಾವು ಭಾರತದಲ್ಲಿಯೇ ಇದ್ದೇವೆಂಬ ಭಾವನೆಯನ್ನು ತರಿಸುತ್ತಿತ್ತು.

ಕಾಖಂಡಕಿ ರಾಮಾಚಾರ್ಯರ ಬಗ್ಗೆ ಬರೆದ ಲೇಖನಕ್ಕೆ ಸ್ಪಂದಿಸಿರುವ ಎಲ್ಲ ಓದುಗರಿಗೆ ನನ್ನ ನಮನಗಳು. ಅವರ ಬಗ್ಗೆ ಹೇಳದೆ ಬಿಟ್ಟ ಮತ್ತೊಂದು ಸಂಗತಿ ಇದೆ. ಅದೆಂದರೆ ಸ್ವಾತಂತ್ರ್ಯ ನಂತರದ ಅವರ ಬದುಕು.

ಅದು ಸಂಪೂರ್ಣವಾಗಿ ಆಧ್ಯಾತ್ಮಿಕತೆಯ ಕಡೆಗೇ ಹೊರಳಿತ್ತು ಎಂದರೆ ಅತಿಶಯೋಕ್ತಿ ಅಲ್ಲ. ಬಾಲ್ಯದಿಂದಲೂ ಅವರಿಗೆ ಸಿಕ್ಕ ಸಂಸ್ಕಾರ ಮತ್ತು ಮನೆಯ ವಾತಾವರಣ ಸಹಜವಾಗಿಯೇ ಅದಕ್ಕೆ ಪೂರಕವಾದ ಅಡಿಪಾಯವನ್ನು ಹಾಕಿದ್ದಿರಲಿಕ್ಕೆ ಸಾಕು. ದೇಶಸೇವೆಯ ಕರ್ತವ್ಯವೂ ಮುಗಿದಿತ್ತು. ರಾಜಕೀಯದ ಸ್ವಾರ್ಥ ವಾತಾವರಣವೂ ಬೇಸರ ಹುಟ್ಟಿಸಿರಲಿಕ್ಕೆಬೇಕು. ಸಹಜವಾಗಿಯೇ ಅದರಿಂದ ದೂರ ಉಳಿದ ಅವರ ಮನ ಭಗವಂತನ ಧ್ಯಾನದಲ್ಲಿ, ಸೇವೆಯಲ್ಲಿ ಸಾರ್ಥಕತೆಯನ್ನು ಕಾಣಲಿಕ್ಕೆ ಬಯಸಿರಬೇಕು. ಭೂಪತಿ ವಿಠಲದಾಸ ಎಂಬ ಅಂಕಿತದಲ್ಲಿ ಸುಮಾರು ಎರಡು ನೂರಕ್ಕಿಂತಲೂ ಹೆಚ್ಚಿನ ಕೀರ್ತನೆಗಳನ್ನು ರಚಿಸಿದ್ದಾರೆ.

ಇದೀಗ ಸ್ವಾತಂತ್ರ್ಯ ದಿನಾಚರಣೆ ಮುಗಿದಿದೆ. ಇಡೀ ದೇಶವೇ ಒಗ್ಗಟ್ಟಾಗಿ ದಾಸ್ಯದಿಂದ ನಮಗೆ ಬಿಡುಗಡೆಯ ಸ್ವತಂತ್ರವನ್ನು ತಂದುಕೊಡಲು ಶ್ರಮಿಸಿದ, ಪ್ರಾಣತ್ಯಾಗ ಮಾಡಿದವರ, ಸರ್ವಸ್ವವನ್ನೂ ತ್ಯಾಗ ಮಾಡಿದವರನ್ನು ಕೃತಜ್ಞತೆಯಿಂದ ನೆನೆಸುವ ಸಂದರ್ಭವಿದು. ದೇಶದ ಬಗ್ಗೆ ಪ್ರೀತಿ, ಗೌರವ ಇರುವ ಪ್ರತೀ ಪ್ರಜೆಯ ಆದ್ಯ ಕರ್ತವ್ಯ ಇದು.

ಈ ಬಾರಿಯ, ಅಂದರೆ, 78ನೆಯ ಸ್ವಾತಂತ್ರ್ಯ ದಿನದ ಒಂದು ವಿಶಿಷ್ಟ ಆಚರಣೆಯ ಸಂದರ್ಭದಲ್ಲಿ ಭಾಗಿಯಾಗುವ ಅಥವಾ ಸಾಕ್ಷಿಯಾಗುವ ಭಾಗ್ಯ ನನ್ನದಾಗಿತ್ತು. ಅಮೆರಿಕದ ಒಂದು ರಾಜ್ಯ ವಾಷಿಂಗ್ಟನ್. (ಡಿ.ಸಿ. ಅಲ್ಲ). ಅದರಲ್ಲಿ ಸಿಯಾಟಲ್ ಎಂಬ ದೊಡ್ಡ ಪಟ್ಟಣ. ಅಲ್ಲಿ ಇದುವರೆಗೂ ಭಾರತದ ಸ್ವಾತಂತ್ರ್ಯ ದಿನವನ್ನು ಆಚರಿಸಿರಲಿಲ್ಲ. ಪ್ರಥಮ ಬಾರಿಗೆ ಭಾರತದ ದೂತಾವಾಸವು (ಕಾನ್ಸುಲೇಟ್ ಆಫ್ ಇಂಡಿಯಾ) ಅದನ್ನು ಅತೀ ವಿಜೃಂಭಣೆಯಿಂದ ಆಚರಿಸಿತ್ತು. ಆಮಂತ್ರಿತರ ಸಮ್ಮುಖದಲ್ಲಿ ನಡೆಸಲಾದ ಈ ಕಾರ್ಯಕ್ರಮಕ್ಕಾಗಿ (ಮುಂದೆ ಕಾನ್ಸುಲೇಟಿನ ಶಾಶ್ವತ ಕಟ್ಟಡ ಆಗಲಿರುವ) ಭವನದ ಕೆಳಮನೆಯನ್ನು ತ್ರಿವರ್ಣವನ್ನು ಬಳಸಿ ಅತ್ಯಂತ ಸುಂದರವಾಗಿ ಅಲಂಕರಿಸಲಾಗಿತ್ತು. ಭಾರತೀಯ ಉಡುಪುಗಳನ್ನು ಧರಿಸಿದ ಭಾರತೀಯರ ಸಂಭ್ರಮದ ಕಲರವ ಅಲ್ಲಿ ತುಂಬಿತ್ತು. ಆ ಭವನವನ್ನು ಪ್ರವೇಶಿಸುತ್ತಿದ್ದಂತೆಯೇ ಸ್ವಾಗತ ಕೋರುವವರು ಆಮಂತ್ರಿತರಿಗೆ ಭಾರತದ ಪುಟ್ಟ ಧ್ವಜವನ್ನು ನಗುನಗುತಾ ನೀಡುತ್ತಿದ್ದರು. ಉಡುಪಿನ ಮೇಲೆ ಅದನ್ನು ಸಿಕ್ಕಿಸಿ, ಮಂದಸ್ಮಿತದಿಂದ ಸಾಗುತ್ತಿದ್ದವರನ್ನು ನೋಡುವುದೇ ಸಂತೋಷ. ಹಿತವಾಗಿ ಕೇಳಿ ಬರುತ್ತಿದ್ದ ದೇಶಭಕ್ತಿ ಗೀತೆಗಳ ರೆಕಾರ್ಡ್. ನಾವು ಭಾರತದಲ್ಲಿಯೇ ಇದ್ದೇವೆಂಬ ಭಾವನೆಯನ್ನು ತರಿಸುತ್ತಿತ್ತು.

ಭಾರತದ ದೂತಾವಾಸದ ಮುಖ್ಯಸ್ಥರು (ಕಾನ್ಸಲ್ ಜನರಲ್)ಶ್ರೀ ಪ್ರಕಾಶ್ ಗುಪ್ತ ಅವರು. ಈಗಾಗಲೇ ಶಾಂಗೈ, ಇಂಡೊನೇಷಿಯ, ಬೀಜಿಂಗ್, ನ್ಯೂಯಾರ್ಕ್ ಮುಂತಾದಲ್ಲಿ ಭಾರತದ ದೂತಾವಾಸ ಮತ್ತು ರಾಯಭಾರಿ ಕಚೇರಿಗಳಲ್ಲಿ ಪ್ರಮುಖ ಹುದ್ದೆಗಳನ್ನು ಸಮರ್ಥವಾಗಿ ನಿರ್ವಹಿಸಿ, ಅನುಭವ ಪಡೆದಿರುವ ಸುಸಂಸ್ಕೃತ, ಸರಳ ವ್ಯಕ್ತಿ. ನವದೆಹಲಿಯಲ್ಲಿ ನಡೆದ ಜಿ20 ಸಮಿಟ್‌ನಲ್ಲೂ ಇವರು ಪ್ರಮುಖ ಪಾತ್ರ ವಹಿಸಿದ್ದವರು. ಸಿಯಾಟಲಿನಲ್ಲಿ ಇವರೊಂದಿಗೆ ದುಡಿಯಲು ಹಲವು ಸಶಕ್ತ ಹೆಗಲುಗಳು ಸಜ್ಜಾಗಿವೆ.

ಒಂಬತ್ತು ಗಂಟೆಗೆ ಸರಿಯಾಗಿ ಮೇಲ್ಛಾವಣಿಯಲ್ಲಿ ಭಾರತದ ತ್ರಿವರ್ಣ ಧ್ವಜಾರೋಹಣವನ್ನು ಹಮ್ಮಿಕೊಳ್ಳಲಾಗಿತ್ತು. ಆ ಎತ್ತರದ ಕಟ್ಟಡದ ಮೇಲೆ ನಿಂತರೆ, ಸುತ್ತಲೂ ಕಾಣುವ ಎತ್ತರೆತ್ತರದ ಗಗನಚುಂಬಿ ಕಟ್ಟಡಗಳು. ನಡುವೆ ಧ್ವಜಸ್ತಂಭದ ಮೇಲೆ, ಹರಡಲು ಸಿದ್ಧಗೊಂಡು ಒಡಲಲ್ಲಿ ಗುಲಾಬಿ ಹೂವಿನ ಪಕಳೆಗಳನ್ನು ತುಂಬಿಕೊಂಡ ನಮ್ಮ ಪವಿತ್ರ ಧ್ವಜ. ಅಂದಿನ ಮುಖ್ಯ ಅತಿಥಿಗಳ ಬರುವಿಕೆಗಾಗಿ ನಡೆಯುತ್ತಿದ್ದ ಕ್ಷಣಗಣನೆ. ಅಂದಿನ ಈ ಪ್ರಥಮ ವಿಶಿಷ್ಟ ಕಾರ್ಯಕ್ರಮಕ್ಕಾಗಿ ಮುಖ್ಯ ಅತಿಥಿಗಳಾಗಿ ಆಗಮಿಸಿದವರು ನಾಲ್ವರು ಗಣ್ಯರು. ಸಿಯಾಟಲ್‌ನ ಮೇಯರ್ ಬ್ರೂಸ್ ಹ್ಯಾರೆಲ್, ವಾಷಿಂಗ್ಟನ್ನಿನ ಅಟಾರ್ನಿ ಜನರಲ್ ಬಾಬ್ ಫರ್ಗಯೂಸನ್ ಮತ್ತು ಸಿಯಾಟಲ್ನ ಪೊಲೀಸ್ ಮುಖ್ಯಸ್ಥಳಾದ ಸ್ಯೂ ರಾಹರ್ ಮತ್ತು ಅಲ್ಲಿಯ ಕಿಂಗ್ ಕೌಂಟಿಯ ಎಕ್ಸಿಕ್ಯುಟಿವ್ ಡವ್ ಕಾನ್ಸ್ಟಾಟಿನ್ ಅವರುಗಳು. ಮಹಿಳಾ ಪೋಲೀಸ್ ಅಧಿಕಾರಿಯನ್ನುಳಿದು ಮಿಕ್ಕ ಮೂವರೂ ಸೊಗಸಾಗಿ ಭಾಷಣ ಮಾಡಿದರು. ಶ್ರೀ ಪ್ರಕಾಶ್ ಗುಪ್ತ ಅವರು ತಮ್ಮ ಸ್ವಾಗತ ಭಾಷಣದಲ್ಲಿ ಭಾರತದ ಸ್ವಾತಂತ್ರ್ಯ ಸಂಗ್ರಾಮಕ್ಕಾಗಿ ದುಡಿದ ಎಲ್ಲ ದೇಶಭಕ್ತರಿಗೆ ಗೌರವ ಸಲ್ಲಿಸಿ, ಅಲ್ಲಿ ಆಹ್ವಾನಿತರಾಗಿ ಬಂದಿದ್ದ ಯುದ್ಧವೀರರಿಗೂ ತಮ್ಮ ನಮನಗಳನ್ನು ಸಲ್ಲಿಸಿದರು. ಭಾರತದ ಪ್ರಧಾನಿಗಳ ಭಾಷಣದ ತುಣುಕುಗಳನ್ನೂ ನೀಡಿದರು. ಗಾಂಭೀರ್ಯ ತುಂಬಿದ್ದ ಅವರ ಮಾತುಗಳು ಮೆಚ್ಚುವಂತಿತ್ತು. ಮೇಯರ್, ಅಟಾರ್ನಿ ಜನರಲ್ ಮತ್ತು ಕಿಂಗ್ ಕೌಂಟಿಯ ಮುಖ್ಯಸ್ಥರ ಮಾತುಗಳು ಅವರುಗಳಿಗೆ ಭಾರತದ ಬಗ್ಗೆ ಇದ್ದ ಒಳ್ಳೆಯ ಭಾವನೆಯನ್ನು ಸೂಚಿಸಿದುವು. ಅಂದಿನ ವಿಶೇಷವೆಂದರೆ ಕಿಂಗ್ ಕೌಂಟಿಯು ಇನ್ನು ಮುಂದೆ ಆಗಸ್ಟ್ 15ನೆಯ ತಾರೀಕನ್ನು ಭಾರತದ ದಿನವನ್ನಾಗಿ ಘೋಷಿಸುತ್ತೇವೆ ಎಂದುದು. ಅಷ್ಟೇ ಅಲ್ಲದೆ ಅಂದು ಸಂಜೆ ಸಿಯಾಟಲಿನ ತುಂಬಾ ತ್ರಿವರ್ಣ ಬೆಳಕಿನ ಅಲಂಕಾರವನ್ನು ಪ್ರದರ್ಶಿಸಲಾಗುತ್ತದೆ ಎಂದೂ ಹೇಳಿದಾಗ ನೆರೆದಿದ್ದ ಭಾರತೀಯರ ಸಂತೋಷದ ಕಟ್ಟೆ ಒಡೆದಿತ್ತು.

ನಂತರ ಭಾರತದ ಖ್ಯಾತ ಪಿಟೀಲು ಸಹೋದರರಲ್ಲಿ ಒಬ್ಬರಾದ ವಿದ್ವಾನ್ ಗಣೇಶ್ ರಾಜಗೋಪಾಲನ್ ಅವರು ತಮಿಳಿನ ಕವಿ ಗೋಪಾಲಕೃಷ್ಣ ಭಾರತಿಯವರ ಒಂದು ದೇಶಭಕ್ತಿ ಗೀತೆಯನ್ನು ಹಾಡಿ, ನುಡಿಸಿದರು. ಮಿಲೆ ಸುರ್ ಮೇರಾ ತುಮ್ಹಾರ ಗೀತೆಗೆ ಭಾರತದ ನಾಕು ವಿಭಿನ್ನ ನೃತ್ಯ ಪ್ರಕಾರದ ನರ್ತಕಿಯರು ಹೆಜ್ಜೆ ಹಾಕಿದರು. ನಂತರ ಮೈಸೂರಿನ ಖ್ಯಾತ ವೈಣಿಕರಾಗಿದ್ದ ವೀಣೆ ಶೇಷಣ್ಣನವರ ಮರಿಮೊಮ್ಮಗಳಾದ ಅರ್ಚನಾ ಬೆಣ್ಣೂರ್, ಹಿನ್ನೆಲೆಗೆ ಸರಿದಿದ್ದ ನುಡಿಗಳನ್ನೂ ಸೇರಿಸಿ, ವಂದೇ ಮಾತರಂ ಗೀತೆಯನ್ನು ಭಾವಪೂರ್ಣವಾಗಿ ಹಾಡಿದರು.

ಭಾರತೀಯ ತಿಂಡಿ ತಿನಿಸುಗಳು ಅಲಂಕೃತಗೊಂಡು, ಸಮೃದ್ಧವಾಗಿ ಉಣ ಬಡಿಸಲು ಸಿದ್ಧವಾಗಿತ್ತು. ಒಟ್ಟಾರೆ, ಭಾರತದಲ್ಲಿಯೇ ಇದ್ದೇವೆ ಎಂಬ ಭಾವನೆಯನ್ನು ಉಂಟು ಮಾಡಿದ ಅಪರೂಪದ ಸಮಾರಂಭ ಅದಾಗಿತ್ತು.

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಖಂಡಿಸಿ ಇಂದು ಕರೆ ನೀಡಿದ್ದ

ಬಂದ್ ಹಿಂಪಡೆದು, ಪ್ರತಿಭಟನೆಗೆ ಸೀಮಿತವಾದ ಕುರುಬರ ಸಂಘ

ಮೈಸೂರು,ಆ.18(ಎಂಟಿವೈ)– ಮುಡಾ ನಿವೇಶನ ಹಂಚಿಕೆ ಹಗರಣ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ಕ್ರಮ ವಿರೋಧಿಸಿ ಆ.19 ರಂದು 'ಮೈಸೂರು ಬಂದ್'ಗೆ ನೀಡಿದ್ದ ಕರೆಯನ್ನು ಹಿಂಪಡೆದು ಹೋರಾಟ ಮುಂದುವರೆಸುವುದಾಗಿ ಕರ್ನಾಟಕ ಪ್ರದೇಶ ಕುರುಬರ ಸಂಘದ ಮಾಜಿ ಅಧ್ಯಕ್ಷ ಬಿ.ಸುಬ್ರಹ್ಮಣ್ಯ ತಿಳಿಸಿದ್ದಾರೆ.

ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ಕನಕ ಭವನದಲ್ಲಿ ಭಾನುವಾರ ತುರ್ತು ಸಭೆಯಲ್ಲಿ ಮಾತನಾಡಿದ ಅವರು, ಹಿಂದುಳಿದ ಹಾಗೂ ಶೋಷಿತ ಸಮುದಾಯದ ವಿರುದ್ಧ ಬಿಜೆಪಿ ಮೊದಲಿನಿಂದಲೂ ಸಂಚು ನಡೆಸುತ್ತಾ ಬಂದಿದೆ. ಅದರಲ್ಲೂ ಹಿಂದುಳಿದ ವರ್ಗಗಳ ನಾಯಕ ಸಿದ್ದರಾಮಯ್ಯ ಅವರು ಎರಡನೇ ಬಾರಿ ಮುಖ್ಯಮಂತ್ರಿಯಾಗಿ ಉತ್ತಮ ಆಡಳಿತ ನಡೆಸುತ್ತಿರುವುದನ್ನು ಸಹಿಸದೆ ಅವರನ್ನು ಹತ್ತಿಕ್ಕುವ ಪ್ರಯತ್ನ ನಡೆಯುತ್ತಿದೆ. ಬಿಜೆಪಿಗೆ ಸಿದ್ದರಾಮಯ್ಯ ಅವರನ್ನು ಎದುರಿಸಲು ಶಕ್ತಿಯಿಲ್ಲ. ಆ ಕಾರಣದಿಂದ ರಾಜ್ಯಪಾಲರ ಅಧಿಕಾರವನ್ನು ದುರ್ಬಳಕೆ ಮಾಡಿಕೊಂಡು ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಡಿಸುವ ಸಂಚನ್ನು ನಡೆಸಿದೆ. ಈ ಸಂಬಂಧ ಆ.19 ರಂದು 'ಮೈಸೂರು ಬಂದ್'ಗೆ ಕರೆ ನೀಡಲಾಗಿತ್ತು ಆದರೆ, ಸಾರ್ವಜನಿಕರಿಗೆ, ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ತೊಂದರೆಯಾಗಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚನೆ ನೀಡಿದ್ದರಿಂದ ಬಂದ್ ನಡೆಸಲು ಉದ್ದೇಶಿದ್ದನ್ನು ಕೈಬಿಡಲಾಗಿದೆ ಎಂದರು.



ಮೈಸೂರಿನ ಕನಕ ಭವನದಲ್ಲಿ ಭಾನುವಾರ ತುರ್ತು ಸಭೆಯಲ್ಲಿ ಕರ್ನಾಟಕ ಪ್ರದೇಶ ಕುರುಬರ ಸಂಘದ ಮಾಜಿ ಅಧ್ಯಕ್ಷ ಬಿ.ಸುಬ್ರಹ್ಮಣ್ಯ ಮಾತನಾಡಿದರು.

ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಮೊದಲು ಸಲ್ಲಿಕೆಯಾದ ದೂರಿನ ಸತ್ಯಾಸತ್ಯತೆಯನ್ನು ವಿವೇಚನೆಯಿಂದ ಪರಿಶೀಲಿಸಬೇಕಾಗಿತ್ತು. ಆದರೆ, ಖಾಸಗಿ ವ್ಯಕ್ತಿಯೊಬ್ಬ ನೀಡಿದ ದೂರನ್ನು ಸ್ವೀಕರಿಸಿ, ಅದೇ ದಿನ ತರಾತುರಿಯಲ್ಲಿ ಶೋಕಾಸ್ ನೋಟಿಸ್ ನೀಡಿದ್ದಾರೆ. ರಾಜ್ಯಪಾಲರ ಆತುರದ ನಿರ್ಧಾರ ಹಲವು ಅನುಮಾನಕ್ಕೆ ಎಡೆಮಾಡಿಕೊಡುತ್ತಿದೆ. ಈ ಸಂಬಂಧ ರಾಜ್ಯದಾದ್ಯಂತ ಪ್ರತಿಭಟನೆ

> ಮೈಸೂರು ಬಂದ್ ಮಾಡುವ ನಿರ್ಧಾರದಿಂದ ಹಿಂದೆ ಸರಿದಿರುಬಹುದು. ಆದರೆ, ಸಿಎಂ ಸಿದ್ದರಾಮಯ್ಯ ವಿರುದ್ಧ ಬಿಜೆಪಿ–ಜೆಡಿಎಸ್ ನಡೆಸುತ್ತಿರುವ ಸಂಚಿನ ವಿರುದ್ಧ ನಿರಂತರ ಹೋರಾಟ ನಡೆಸಲಾಗುವುದು. ಈ ಹೋರಾಟದಲ್ಲಿ ಹಿಂದುಳಿದ, ಶೋಷಿತ ಸಮುದಾಯಗಳು ಪಾಲ್ಗೊಳ್ಳಲಿವೆ. ಆ ಮೂಲಕ ಬಿಜೆಪಿ ಮತ್ತು ಜೆಡಿಎಸ್‌ಗೆ ತಕ್ಕ ಪಾಠ ಕಲಿಸಲು ಶೋಷಿತ ಸಮುದಾಯಗಳು ಮುಂದಾಗಿವೆ. **–ಬಿ.ಸುಬ್ರಹ್ಮಣ್ಯ**

ನಡೆದಿದ್ದರೂ, ರಾಜ್ಯಪಾಲರು ತಮ್ಮ ನಡೆಯನ್ನು ತಿದ್ದಿಕೊಳ್ಳದೆ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಮೂಲಕ ಕೇಂದ್ರ ಸರ್ಕಾರದ ಹಾಗೂ ಬಿಜೆಪಿ ಕೈಗೊಂಬೆಯಾಗಿರುವುದನ್ನು ಸ್ಪಷ್ಟಪಡಿಸಿದ್ದಾರೆ ಎಂದು ಕಿಡಿಕಾರಿದರು.

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಮಾಜಿ ಸಚಿವರಾದ ಮುರುಗೇಶ್ ನಿರಾಣಿ, ಶಶಿಕಲಾ ಜೊಲ್ಲೆ, ಜನಾರ್ಧನ ರೆಡ್ಡಿ ವಿರುದ್ಧವೂ ಕಳೆದ ಒಂದೂವರೆ ವರ್ಷದ ಹಿಂದೆಯೇ ದೂರು ದಾಖಲಾಗಿದೆ. ಆದರೆ, ಇವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡದ ರಾಜ್ಯಪಾಲರು ಸಿಎಂ ವಿರುದ್ಧದ ದೂರಿಗೆ ಮಾತ್ರ ಅನುಮತಿ ನೀಡಿರುವುದನ್ನು ಗಮನಿಸಿದರೆ ಪಕ್ಷಪಾತ ಧೋರಣೆ ಎದ್ದುಕಾಣುತ್ತಿದೆ. ಈ ಹಿನ್ನೆಲೆಯಲ್ಲಿ ಹಿಂದುಳಿದ ಹಾಗೂ ಶೋಷಿತ ಸಮುದಾಯಗಳ ಹೋರಾಟ ನಿರಂತರವಾಗಿ ಮುಂದುವರೆಯಲಿದೆ ಎಂದರು.

ಮೆರವಣಿಗೆಯಲ್ಲಿ ಭಾಗಿ: ನಾಳೆ(ಆ.19) ಮೈಸೂರಿನ ಪುರಭವನದಿಂದ ಸಿದ್ಧಾರ್ಥ ನಗರದಲ್ಲಿರುವ ನೂತನ ಜಿಲ್ಲಾಧಿಕಾರಿ ಕಚೇರಿವರೆಗೆ ಕಾಂಗ್ರೆಸ್ ವತಿಯಿಂದ ನಡೆಯುವ ಪ್ರತಿಭಟನಾ ಮೆರವಣಿಗೆಯಲ್ಲಿ ಹಿಂದುಳಿದ ಹಾಗೂ ಶೋಷಿತ ಸಮುದಾಯ ಪಾಲ್ಗೊಂಡು ಬೆಂಬಲ ನೀಡಲಿದೆ ಎಂದರು.

ಸಭೆಯಲ್ಲಿ ಮುಡಾ ಅಧ್ಯಕ್ಷ ಕೆ.ಮರೀಗೌಡ, ವಿವಿಧ ಸಂಘಟನೆಗಳ ಮುಖಂಡರಾದ ಆನಂದ್, ಸುನೀಲ್, ಜವರೇಗೌಡ (ಕನಕ ನೌಕರರ ಸಂಘ), ಗಂಧನಹಳ್ಳಿ ವೆಂಕಟೇಶ್, ಕ್ಯಾತನಹಳ್ಳಿ ಪ್ರಕಾಶ್, ವಿ.ರಾಮಸ್ವಾಮಿ, ಸೀತಾರಾಂ, ಹಳ್ಳಿಕೆರೆಹುಂಡಿ ಶಿವಕುಮಾರ್ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಮೈಸೂರು ಮಿತ್ರ

ರಾಜ್ಯಪಾಲರ ವಿರುದ್ಧ ಯುವ ಕಾಂಗ್ರೆಸ್ ಪ್ರತಿಭಟನೆ



ಮೈಸೂರು ಜಿಪಂ ಕಚೇರಿ ಎದುರು ಭಾನುವಾರ ಯುವ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮೈಸೂರು,ಆ.18(ಪಿಎಂ)- ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ಕ್ರಮ ಖಂಡಿಸಿ ಮೈಸೂರು ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ಭಾನುವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರು ಜಿಲ್ಲಾ ಪಂಚಾಯಿತಿ ಕಚೇರಿ ಎದುರು ಜಮಾಯಿಸಿದ ಪ್ರತಿಭಟನಾಕಾರರು, ರಾಜ್ಯಪಾಲರ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಗೋ ಬ್ಯಾಕ್ ರಾಜ್ಯಪಾಲರೇ ಎಂದು ಘೋಷಣೆ ಕೂಗಿದರಲ್ಲದೆ, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರ ಭಾವಚಿತ್ರ ಒಳಗೊಂಡ ಫಲಕಗಳನ್ನು ಹರಿದು ಆಕ್ರೋಶ ವ್ಯಕ್ತಪಡಿಸಿದರು.

ಜಿಲ್ಲಾ ಯುವ ಕಾಂಗ್ರೆಸ್‌ನ ಪ್ರಧಾನ ಕಾರ್ಯದರ್ಶಿ ಎಂ.ಎಸ್.ಶಶಾಂಕ್ ದುದ್ದಗೆರೆ ಸೇರಿದಂತೆ ಹಲವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.



ಗಾಡ್ಫ್ರೆಡ್ ಎಲ್ಲಿಸ್ ನಿಧನ

ಮೈಸೂರು, ಆ.18- ಮೈಸೂರಿನ ಕೆಸರೆ ನಿವಾಸಿ ಗಾಡ್ಫ್ರೆಡ್ ಎಲ್ಲಿಸ್(67) ಅವರು ಶನಿವಾರ ನಿಧನರಾದರು.

ಇವರು ಪತ್ನಿ, ಇಬ್ಬರು ಪುತ್ರಿಯರು, ಅಳಿಯಂದಿರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಗಾಂಧಿ ನಗರದ ಕ್ರಿಶ್ಚಿಯನ್ ಸ್ಮಶಾನದಲ್ಲಿ ಭಾನುವಾರ ಸಂಜೆ ಅಂತ್ಯಕ್ರಿಯೆ ನಡೆಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ ರೂ. 600+30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821-2496522/23

ಬೇಕಾಗಿದ್ದಾರೆ
ಮೈಸೂರಿನ ಪ್ರತಿಷ್ಠಿತ ಸಿಟಿ ಬಸ್ ನಿಲ್ದಾಣಕ್ಕೆ ಹತ್ತಿರವಿರುವ ದಾಸ್ತಾನು ಮಳಿಗೆಯಲ್ಲಿ ಕೆಲಸ ಮಾಡಲು ಕಂಪ್ಯೂಟರ್ Tally ತರಬೇತಿ ಹೊಂದಿದ ಪುರುಷ / ಮಹಿಳೆ ಅಭ್ಯರ್ಥಿ ಬೇಕಾಗಿದ್ದಾರೆ. ಸಂಪರ್ಕಿಸಿ
9663500644

HOME APPLIANCES SERVICE
ಫ್ರಿಡ್ಜ್, ವಾಶಿಂಗ್ ಮೆಶೀನ್, ಮೈಕ್ರೋವೋವೆನ್, ಎಲ್‌ಸಿಡಿ, ಸೋಲಾರ್, ಯುಪಿಎಸ್, ವಾಟರ್ ಪ್ಯೂರಿಫೈಯರ್, ಸೇಲ್ಸ್ ಅಂಡ್ ಸರ್ವೀಸ್, ನಿಮ್ಮ ಮನೆಯ ಹತ್ತಿರ ದೊರೆಯುತ್ತದೆ.
Contact: Srinivas
9379699229

ವೃದ್ಧಾಶ್ರಮ
ನಮ್ಮ ಸಂಸ್ಥೆಯಲ್ಲಿ ವಯಸ್ಸಾದ ವೃದ್ಧರು, ಪುರುಷ ಮತ್ತು ಮಹಿಳೆಯರಿಗೆ ಹಾಸಿಗೆ ಹಿಡಿದ ವೃದ್ಧರು ಮತ್ತು ಪಾರ್ಶ್ವವಾಯು ಪೀಡಿತರನ್ನು ನಮ್ಮ ಸಂಸ್ಥೆಯಲ್ಲಿ ನೋಡಿಕೊಳ್ಳಲಾಗುವುದು ನಮ್ಮ ಸಂಸ್ಥೆಯಲ್ಲಿ ಸಸ್ಯಹಾರಿ ತಿಂಡಿ-ಊಟ ಮತ್ತು ಬಿಸಿ ನೀರಿನ ಸೌಲಭ್ಯ, ನಿಯಮಿತ ವೈದ್ಯಕೀಯ ಸೌಲಭ್ಯವಿರುತ್ತದೆ, ಇಚ್ಛೆಯುಳ್ಳವರು ಸಂಪರ್ಕಿಸಿ:
9110455297 | 9591557126

ಪ್ರವಾಸ
ಕೇರಳ ಪ್ರವಾಸ ಹೊರಡುವ ದಿನಾಂಕ: 5 ಅಕ್ಟೋಬರ್ 2024 (4 ದಿನಗಳು)
ಗೋವಾ ಪ್ರವಾಸ ಹೊರಡುವ ದಿನಾಂಕ: 13 ಅಕ್ಟೋಬರ್ 2024 (04 ದಿನಗಳು)
* ಫ್ಯಾಮಿಲಿಗೆ ಪ್ರತ್ಯೇಕ A/C ರೂಮ್
* ತಿಂಡಿ ಮತ್ತು ಊಟ * ಕಾಫೀ / ಟೀ ಸ್ನಾಕ್ಸ್
ಸೆಮಿ ಲಕ್ಷುರಿ ಬಸ್‌ನಲ್ಲಿ ಪ್ರಯಾಣ
ಮೇಲಿನ ಈ ಎಲ್ಲಾ ಸೌಲಭ್ಯಗಳು ಸೇರಿ ಒಬ್ಬರಿಗೆ 8000/- ರೂಪಾಯಿಗಳು ಮಾತ್ರ
ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ
7022271023

ಶ್ರೀ ಗೌರೀಶಂಕರ ಟ್ರಾವೆಲ್ಸ್
15-9-24 (1 ದಿನ): ಕೋಟಿ ಲಿಂಗ, ಇಶಾ ಫೌಂಡೇಷನ್.
4-10-2024 (6 ದಿನ): ಅಯೋಧ್ಯೆ, ಪ್ರಯಾಗ್ ರಾಜ್, ಕಾಶಿ, ಗಯಾ.
16-10-24 (7 ದಿನ): ದೆಹಲಿ, ಆಗ್ರಾ, ಅಯೋಧ್ಯೆ, ಕಾಶಿ.
17-11-24 (10 ದಿನ): ಅಯೋಧ್ಯೆ, ಮುಕ್ತಿನಾಥ್, ಪೋಕ್ರಾ, ಕಠ್ಮಂಡು, ಕಾಶಿ ಇತ್ಯಾದಿ.
(ವಿಮಾನ, ಬಸ್, ಊಟ, ರೂಂ)
Mob: 9620002114

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 9108566022

ತಕ್ಷಣ ಬೇಕಾಗಿದ್ದಾರೆ
ಹೆಬ್ಬಾಳ ಕೆರೆ ಮತ್ತು Fire ಬ್ರಿಗೇಡ್ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡುಗಳು ತಕ್ಷಣ ಬೇಕಾಗಿದ್ದಾರೆ.
ಸಂಬಳ: 19500+W/o 8hrs
ವಿದ್ಯಾರ್ಹತೆ: SSLC ಮತ್ತು ಮೇಲ್ಪಟ್ಟು
ಊಟ ತಿಂಡಿ ಸೌಲಭ್ಯವಿರುತ್ತದೆ.
9880727819
9620667819

ಬೇಕಾಗಿದ್ದಾರೆ
ಸೇಲ್ಸ್ ಗರ್ಲ್ ಮತ್ತು ಹೆಲ್ಪರ್ ಕೆಲಸಕ್ಕೆ ಹುಡುಗಿಯರು ಬೇಕಾಗಿದ್ದಾರೆ
ಸಂಬಳ 12000/-
Ph.7406 369 369

ಟೇಸ್ಟಿ ಟ್ರೆಂಡ್ ಐಸ್ ಕ್ರೀಂಸ್
ಮದುವೆ ಹಾಗೂ ಸಮಾರಂಭಗಳಿಗೆ ಐಸ್ ಕ್ರೀಂ ಸರಬರಾಜು ಮಾಡುತ್ತೇವೆ. ಹಾಗೂ ಡಿಸ್ಟ್ರಿಬ್ಯೂಟರ್‌ಗಳು ಬೇಕಾಗಿದ್ದಾರೆ.
ಶಾಂತು: 9964180027
ಅನಂತು: 9886343896

ಉಚಿತ ತರಬೇತಿ
ಮನೆಯಿಂದಲೇ ಬಟ್ಟಲು ಸಾಂಬ್ರಾಣಿ ಮತ್ತು ಅಣಬೆ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ:
7406375196, 9880548596

ಸುವರ್ಣ ಯಾತ್ರ
ನೇಪಾಳ ಅಯೋಧ್ಯ ಮುಕ್ತಿನಾಥ ಪಶುಪತಿನಾಥ ಪ್ರವಾಸ 9 ದಿನಗಳು, ಕಾಶಿ ಗಯಾ ಬಾಬಾ ವೈದ್ಯನಾಥ್ ಪ್ರವಾಸ 7 ದಿನಗಳು, ಭೂತಾನ್ ಪ್ರವಾಸ 7 ದಿನಗಳು ಸುವರ್ಣ ಯಾತ್ರ ಸಂಪರ್ಕಿಸಿ:
8660233673
6360146483

AFFIDAVIT
I, B.P. DEVARAJA, S/o Late Papanna, residing at LIG-43, 3rd Stage, K.H.B. Colony, Kuvempunagara, Mysuru-570 023, do hereby solemnly affirm on oath that I have changed my name as B.P. DEVARAJA, vide affidavit sworn in before Notary Chikka Boranna, Mysuru dated 14.08.2024.
Ph: 9845118686
Sd/- B.P. DEVARAJA

ಉದ್ಯೋಗ ಅವಕಾಶ
ಒಂದ ದಿನದೇ ಕೆಲಸ (ಮಾರ್ಕೆಟಿಂಗ್ ಇಲ್ಲ) ಮೈಸೂರಿನ ಪ್ರತಿಷ್ಠಿತ MNC ಹಾಗೂ IT ಕಂಪನಿಗಳಿಗೆ 4th, SSLC, PUC, ITI, Any Degree ಪಾಸ್ / ಫೇಲ್ ಆದ ಯುವಕ / ಯುವತಿಯರು ಇಂದೇ ಬೇಕಾಗಿದ್ದಾರೆ. ESI / PF ನೊಂದಿಗೆ ಊಟ, ವಸತಿಯೊಂದಿಗೆ ಸಂಬಳ - [illegible]
7411565140, 7892046990

ಬೋಳು ತಲೆಯ ಸಮಸ್ಯೆಯೇ?



ಕಿಮೊತೆರಪಿ ಚಿಕಿತ್ಸೆಗೆ ಒಳಪಡುತ್ತಿರುವ ರೋಗಿಗಳಿಗೆ ಸ್ಥರಾತ್ಮಕ ಬೆಲೆಯಲ್ಲಿ ಹೇರ್ ವಿಗ್‌ಗಳು ದೊರೆಯುತ್ತವೆ.
SMART HAIR FIXING
574, 9th Cross, Anikethana Road, kuvempunagar, Mysuru
MYSURU 9611028523 MANGALORE 9343142258

WANTED
For Part Time Job
No Target,
No Investment
Male / Female
As Customer Consultant
No Age Limit
8197945400

ಸೈಟ್ ಫಾರ್ ಸೇಲ್
ಈಸ್ಟ್ ಫೇಸಿಂಗ್ ಕಾರ್ನರ್ ಸೈಟ್, 28x40 ಮುಡಾ ಖಾತೆ. 36 ಲಕ್ಷ
9342123373

ಟೀಚರ್ ಬೇಕಾಗಿದ್ದಾರೆ
1ನೇ ತರಗತಿಯ 2 ಮಕ್ಕಳಿಗೆ ಬನ್ನಿಮಂಟಪ ಸುತ್ತ ಮುತ್ತ ಇರುವವರು ಮನೆಗೆ ಬಂದು ಸಂಜೆ ಒಂದು ಗಂಟೆ ಟ್ಯೂಷನ್ ಹೇಳಿಕೊಡಲು ಇಂಗ್ಲೀಷ್ ಟೀಚರ್ ಬೇಕಾಗಿದ್ದಾರೆ. ಸಂಪರ್ಕಿಸಿ:
Mob: 9036951272

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 8618373596

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 7204494854

ನಿರುದ್ಯೋಗಿಗಳಿಗೊಂದು ಸುವರ್ಣಾವಕಾಶ
ಮನೆಯಲ್ಲೇ ಕುಳಿತು ಟಾರ್ಗೆಟ್ ಇಲ್ಲದೆ ಬರವಣಿಗೆ ಮೂಲಕ 9 ರಿಂದ 30 ಸಾವಿರದವರೆಗೆ ಹಣಗಳಿಸುವ ಸುವರ್ಣಾವಕಾಶ. ಆಸಕ್ತರು ಸಂಪರ್ಕಿಸಿ:
Mob: 7676844160

Jobs in Mysore
Age (18-24) 10th, PUC, BBM. Earn starts (9800 to 18,600) PM. Only freshers. No fee. Meet us today join tomorrow.
Anu: 9342827788
Time: 9 am to 5.30 pm

HOUSE FOR RENT
3/2 BHK, CAR PARKING
Prime Area Near to State / Central School, Colleges, Universities & Hospitals
9845293278

ಪಿ.ಜಿ.ಸಾಮಾಗ್ರಿಗಳು ಮಾರಾಟಕ್ಕಿವೆ
20 ಮಕ್ಕಳಿಗೆ ಬೇಕಾಗಿರುವ ಪಿ.ಜಿ. ಸಾಮಾಗ್ರಿಗಳು ಲಭ್ಯವಿದೆ. ಎಲ್ಲಾ ತರಹದ ಸಾಮಾಗ್ರಿಗಳು ಲಭ್ಯವಿದೆ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ
7760954877

ಬೇಕಾಗಿದ್ದಾರೆ
ಮೈಸೂರು ಹಾಗೂ ನಂಜನಗೂಡು, ಕಡಕೊಳದಲ್ಲಿ ಹೊಸದಾಗಿ ಪ್ರಾರಂಭವಾಗಿರುವ ಕಂಪನಿಗಳಿಗೆ ಹಾಗೂ ಆಫೀಸ್ ಕೆಲಸಕ್ಕೆ ಯುವಕ -ಯುವತಿಯರು ಬೇಕಾಗಿದ್ದಾರೆ. Salary: 13,500-18,000 + ESI, PF. ವಿದ್ಯಾರ್ಹತೆ – 7th, 10th, PUC, ITI And DIPLOMA (Pass or Fail). ಇಂದೇ ಸಂಪರ್ಕಿಸಿ:
Mob: 77952 49933

SITE FOR SALE
30x50 E/F, Silver Springs, Bogadi Road.
8050821108, 8792207164

FOR SALE
1. Properties at Kuvempu Nagar Starting @ 45L
2. 30x40 & 30x50 Near Varuna Lake
3. 30x50 Sites at Brahmins Layout
4. 30x30 New House at Vijaya Nagar
5. Properties For Sale at Vidyaranyapuram
6. 20x30 Site Near SBM Lyt, Bogadhi
7. 2 BHK & 3 BHK Apartments for Sale
8. 100x100 Farm House @ KRS Back Water Attach 20L
PRAKRUTHI PROPERTIES
95386 90359, 90359 90359

ಹೊಸ ಮನೆ ಬಾಡಿಗೆಗೆ / ಭೋಗ್ಯ 30x40
2 BHK, NF, G.Floor, ಸೋಲಾರ್, ಶ್ರೀ ವಿಠಲಧಾಮ ದೇವಸ್ಥಾನದ ಹತ್ತಿರ, ಜೆ.ಪಿ. ನಗರ, ಮೈಸೂರು. ಸಸ್ಯಾಹಾರಿಗಳಿಗೆ ಮಾತ್ರ,
Mob: 9945552052

ಬೇಕಾಗಿದ್ದಾರೆ
ಟೆಲಿಕಾಲಿಂಗ್ ಮಾಡಲು ಹುಡುಗಿಯರು ಬೇಕಾಗಿದ್ದಾರೆ. ಸಂಬಳ: 10,000. ಟೀಮ್ ಲೀಡರ್ ಬೇಕಾಗಿದ್ದಾರೆ (ಸಂಬಳ: 12,000). ಸ್ಥಳ: ಚಾಮುಂಡಿಪುರಂ ಮತ್ತು ಎನ್.ಆರ್. ಮೊಹಲ್ಲಾ.
Field Executive ಬೇಕಾಗಿದ್ದಾರೆ. Collection Field (ಸಂಬಳ 13,000) 2000 (Petrol Charges).
Mob: 8150005111

ಹೊಸ ಮನೆ ಮಾರಾಟಕ್ಕಿದೆ
ಮೈಸೂರು ನಗರದಲ್ಲಿನ ಅಶೋಕಪುರಂ 4ನೇ ಕ್ರಾಸ್ ಬಡಾವಣೆಯಲ್ಲಿರುವ 17x55 ರಲ್ಲಿ ಕಟ್ಟಿರುವ, 2BHK ಹೊಂದಿರುವ 2 ಇಂಡಿಪೆಂಡೆಂಟ್ ಆಗಿ ಸಪರೇಟ್ ಆಗಿರುವ ಉತ್ತರ ಹಾಗೂ ಪೂರ್ವ ದಿಕ್ಕಿನ ಬಾಗಿಲು ಹೊಂದಿರುವ ಹಾಗೂ ಕಾರ್ಪೋರೇಷನ್ ಖಾತೆ ಹಾಗೂ ಎಲ್ಲಾ ರೀತಿಯ ದಾಖಲೆಗಳನ್ನು ಹೊಂದಿರುವ ಮನೆ ಮಾರಾಟಕ್ಕಿದೆ.
9019484156
9113523954

SITE FOR SALE
30X40 E/F AND W/F
T.NARASIPURA MAIN ROAD AND BANNUR ROAD
9482546604

ಬೇಕಾಗಿದ್ದಾರೆ
ಅನುಭವವುಳ್ಳ ಅಡುಗೆಯವರು ಬೇಕಾಗಿದ್ದಾರೆ.
Time: 8.30 am to 2.30 pm
Mob: 6361704812

ಬೇಕಾಗಿದ್ದಾರೆ
ಮೈಸೂರಿನ ಪೆಟ್ರೋಲ್ ಬಂಕ್‌ನಲ್ಲಿ ಕೆಲಸಕ್ಕಾಗಿ ಪುರುಷರು / ಮಹಿಳೆಯರು ಬೇಕಾಗಿದ್ದಾರೆ. ಸಂಬಳ: 15,000.
Mob: 8892258814

ಸೈಟು ಬೇಕಾಗಿದೆ
30x40 ಪೂ/ಉ ದಿಕ್ಕಿನ ಸೈಟ್ ವಿಜಯನಗರ, ದಟ್ಟಗಳ್ಳಿ, ರಾಜರಾಜೇಶ್ವರಿ ನಗರ, ಬೆಮೆಲ್ 2ನೇ ಹಂತ. ನೇರ ಮಾಲೀಕರು ಸಂಪರ್ಕಿಸಿ:
Call: 8660726140

ಬೇಕಾಗಿದ್ದಾರೆ
ಮೈಸೂರಿನ ಪೆಟ್ರೋಲ್ ಬಂಕ್‌ನಲ್ಲಿ ಕೆಲಸ ಮಾಡಲು ಮ್ಯಾನೇಜರ್ ಮತ್ತು ಸೂಪರ್‌ವೈಸರ್‌ಗಳು ಬೇಕಾಗಿದ್ದಾರೆ. ಆಕರ್ಷಕ ವೇತನ ದೊರೆಯುತ್ತದೆ.
Mob: 9902754149

ಸಂಪು ಮತ್ತು ಟ್ಯಾಂಕ್ ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 8880558064

ಅಂಗಡಿ ಕೆಲಸಕ್ಕೆ ಹುಡುಗರು ಬೇಕಾಗಿದ್ದಾರೆ
ಸಂಪರ್ಕಿಸಿ: ಶ್ರೀನಿವಾಸ ಇಮೇಜ್ ಪ್ರಾಡೆಕ್ಟ್ಸ್ ಶಿವರಾಂಪೇಟೆ, ಮೋರ್ ಮೆಗಾ ಮಾರ್ಟ್ ಹತ್ತಿರ
9902902530

ಹೊಸ ಮನೆ ಬಾಡಿಗೆಗೆ ಇದೆ
ಮನೆ ನಂ. 250, Ground Floor, 2 ಬೆಡ್ ರೂಂ with Solar East Face, KSRTC Layout ರಾಜಶೇಖರ್ ಆಸ್ಪತ್ರೆ ಹಿಂಭಾಗ ಟಿ.ನರಸೀಪುರ ರೋಡ್, ಮೈಸೂರು
7411299685
9449322217

ಕರ್ನಾಟಕದಾದ್ಯಂತ ಪ್ರಸಿದ್ಧ MNC ಕಂಪನಿಗಳಿಗೆ
ಕಂಪನಿ, ಮತ್ತು ಆಫೀಸ್ ಕೆಲಸದ ಉದ್ಯೋಗಗಳಿಗೆ ತಕ್ಷಣ ಯುವಕ ಯುವತಿಯರು ಬೇಕಾಗಿದ್ದಾರೆ ಯಾವುದೇ ಸಂದರ್ಶನ ಇರುವುದಿಲ್ಲ ಪ್ರಸಿದ್ಧ ಕಂಪನಿಗಳಲ್ಲಿ, ಅಕೌಂಟೆಂಟ್, ಡೇಟಾ ಆಪರೇಟರ್, ಟೆಲಿಕಾಲರ್, ಕ್ಯಾಶಿಯರ್, ಆಫೀಸ್ ಬಾಯ್, ಮತ್ತು ಮ್ಯಾನುಫ್ಯಾಕ್ಚರಿಂಗ್ ಕೆಲಸಕ್ಕೆ ಬೇಕಾಗಿದ್ದಾರೆ, ಶಿಕ್ಷಣ 4ನೇ ತರಗತಿ ಇಂದ ಯಾವುದೇ ಪದವೀಧರರು, (* ಸಂಬಳ : 18000 Rs ಇಂದ 30000 Rs + ಇನ್ಸೆಂಟಿವ್ಸ್*). ಹೆಚ್ಚಿನ ಮಾಹಿತಿಗಾಗಿ ಇಂದೇ ಸಂಪರ್ಕಿಸಿ:
9632831680, 8296845328

ಲಾವಣ್ಯ ವಧು-ವರರ ಮಾಹಿತಿ ಕೇಂದ್ರ
BA, BSc, B.Com, MA, MSc, MBA, MBBS, Engg. ವಿವಾಹ ನೋಂದಣಿಗೆ ಕರೆ ಮಾಡಿ
91647-43059
90355-65773

ಸಪ್ತಪದಿ ಮ್ಯಾಟ್ರಿಮೋನಿ (ರಿ)
BE/MBA/M.Tech/MCA/MBBS/MD/MS and Any Degree ಯ India/USA/UK/Germany/Canada/Australia/ Bangalore/ Mysore ನ ವಧು-ವರರ ಮಾಹಿತಿ / ನೋಂದಣಿಗೆ ಸಂಪರ್ಕಿಸಿ
9663199511
8088776211

ಸುವರ್ಣಾವಕಾಶ
ಮೈಸೂರಿನಲ್ಲಿ ನೂತನವಾಗಿ ಶುರುವಾಗಿರುವ ಕಂಪನಿ & ಆಫೀಸ್‌ಗಳಿಗೆ Packing, Helper, Quality, Telephone attender, Receptionist, Typing Drivers Etc ಮುಂತಾದ ಕೆಲಸಗಳಿಗೆ 7th, 10th, PUC, ITI, Diploma, Any Degree Pass/ Fail ಆದ ಯುವಕ/ಯುವತಿಯರು ಬೇಕಾಗಿದ್ದಾರೆ. ಸಂಬಳ: 14500/- 39500/- (ESI+PF OT)
6364103418, 9513829246

ಟೈಲ್ಸ್ ಕೆಲಸ & ಮರದ ಪಾಲೀಶ್, ನಲ್ಲಿ ಕೆಲಸ ಮಾಡಿ ಕೊಡಲಾಗುವುದು
7829236625

ಸೈಟು ಮಾರಾಟಕ್ಕಿದೆ
ಫಾರಂ ನಂ. 3, ಖಾತಾ ಹೊಂದಿರುವ ನಿವೇಶನ ನಂ.9, ದಿಕ್ಕು ದಕ್ಷಿಣ ಅಳತೆ (36x55 KBL ಕೆಬಿಎಲ್ ಬಡಾವಣೆಗೆ ಹೊಂದಿಕೊಂಡತಿರುವ) ಶ್ರೀ ದೇವೇಗೌಡ ಸರ್ಕಲ್ ಹತ್ತಿರ ಮೈಸೂರು ಬನ್ನೂರು ರಸ್ತೆ, ಮೈಸೂರು
9113991509
8123776343

ಜಾಗ ಮಾರಾಟಕ್ಕಿದೆ
ಮೈಸೂರು ಬೋಗಾದಿ ರಸ್ತೆ ಜಟ್ಟಿ ಹುಂಡಿ ಗ್ರಾಮದಲ್ಲಿ ನಾಲ್ಕು ಬದಿ ಲೇಔಟ್‌ನ ಮಧ್ಯದಲ್ಲಿರುವ ಒಂದು ಎಕರೆ ಜಾಗ ಹಾಗೂ ಚಾಮರಾಜನಗರ ಯಳಂದೂರು ಮದ್ದೂರು ಗ್ರಾಮದಲ್ಲಿ 9+3 ಎಕರೆ ಕೃಷಿ ಭೂಮಿಯ ಜಾಗ 3 ಬೋರ್ ವೆಲ್ ಹೊಂದಿದ್ದು, ಪೂರ್ವಕ್ಕೆ ಹೊಳೆ, ಪಶ್ಚಿಮಕ್ಕೆ ಅರ್ಧ ಕಿಲೋಮೀಟರ್ ರಸ್ತೆ, ಕೆರೆ ಹೊಂದಿರುವ ಸುಂದರ ಜಾಗ ಮಾರಾಟಕ್ಕಿದೆ
9448080151

ಟ್ರಕ್ ಡ್ರೈವರ್ ಬೇಕಾಗಿದ್ದಾರೆ
32 ಅಡಿ ಕಂಟೇನರ್ ವಾಹನ, ಮೈಸೂರಿನಿಂದ ಕೇರಳ ಹಾಗೂ ಸ್ಥಳೀಯ ಸ್ಥಳಗಳಿಗೆ ಬೇಕಾಗಿದ್ದಾರೆ. ಪಿಎಫ್, ಇಎಸ್‌ಐ ಸೌಲಭ್ಯವಿದ್ದು, 50 ವರ್ಷ ಮೇಲ್ಪಟ್ಟವರು ಸಂಪರ್ಕಿಸಿ:
9341623350

ಕಳೆದಿದೆ
ಶ್ರೀರಾಂಪುರ ಗ್ರಾಮದ ಸರ್ವೆ ನಂ. 217 ಮತ್ತು 6/2 ನಿವೇಶನದ ಸಂಖ್ಯೆ 16ರ ಶುದ್ಧ ಕ್ರಯ ಪತ್ರದ (Document No. 2635/13-14) ಮೂಲ ದಾಖಲಾತಿ ಕಳೆದು ಹೋಗಿರುತ್ತದೆ. ಯಾರಿಗಾದರೂ ಸಿಕ್ಕಲ್ಲಿ ಸಂಪರ್ಕಿಸಲು
9900178602

WANTED
For A Industry in Kadakola & Nanjangud
* Electricians
* Helpers
* Fitters & Welders
7259016509
7259016514

ಕಮರ್ಷಿಯಲ್ ಸೈಟ್ ಮತ್ತುಜಮೀನು ಮಾರಾಟಕ್ಕಿದೆ
50x80 ನಿವೇಶನ ಪಶ್ಚಿಮ ಮುಖ ಅಪೋಲೋ ಆಸ್ಪತ್ರೆ ರಸ್ತೆ, 80 ಅಡಿ ರಸ್ತೆ, ಕುವೆಂಪುನಗರ, ಮೈಸೂರು
ಲೇಔಟ್ ನಿರ್ಮಾಣಕ್ಕೆ 3 1/2 ಖುಷ್ಕಿ ಜಮೀನು
ರಾಮನಾಥಪುರ & ಚುಂಚನಕಟ್ಟೆ ಮುಖ್ಯರಸ್ತೆ (ಕಪ್ಪಡಿ ಹತ್ತಿರ) ಹೆಬ್ಬಾಳು ಗ್ರಾಮ ಕೆ.ಆರ್. ನಗರ ತಾ॥
9448166798

WANTED
ಮೈಸೂರಿನ ಹೆಸರಾಂತ MNC ಕಂಪನಿಗಳಿಗೆ 5th, 7th, 10th, PUC, ITI, Diploma Any Degree, MCom, MBA ಆದವರಿಗೆ Packing, Helper, Q/C, Machine Operator, Telecalling, Data Entry, Receptionist Cashier, OT, Billing Admin HR Assitent, Accountant & Drivers ಬೇಕಾಗಿದ್ದಾರೆ. ESI, PF, OT ನೊಂದಿಗೆ 18000/- ದಿಂದ 46000/-
9916641959
9901816285

SITE FOR SALE
40x60 Site @ University Layout, Mysore
9880273834

ಯುವಕರು ಬೇಕಾಗಿದ್ದಾರೆ
ಮೈಸೂರಿನಲ್ಲಿ ರಾತ್ರಿ 10 ರಿಂದ 2 ಗಂಟೆಯ ತನಕ ಮಿನಿ ಲಾರಿಗಳಿಗೆ ಪಾರ್ಸೆಲ್ ಲೋಡ್ ಮಾಡುವ ಕೆಲಸಕ್ಕೆ ಯುವಕರು ಬೇಕಾಗಿದ್ದಾರೆ ಮಾಸಿಕ ವೇತನ 10,000
9740408488
08272221912

ವೃದ್ಧಾಶ್ರಮ ಮತ್ತು ಹೋಂ ನರ್ಸ್ ಸೇವೆ
ವೃದ್ಧರನ್ನು ಮತ್ತು ಹಾಸಿಗೆ ಹಿಡಿದವರನ್ನು ಸುಸಜ್ಜಿತವಾದ ಜಾಗದಲ್ಲಿ ಶುದ್ಧ ಸಸ್ಯಾಹಾರ ಆಹಾರವನ್ನು ನೀಡಿ ನಿಮ್ಮ ಮನೆಯಂತೆಯೇ ನೋಡಿಕೊಳ್ಳುತ್ತೇವೆ, ಹಿರಿಯರಿಗೆ ಡೇ ಕೇರ್ ಮತ್ತು ಹೋಂ ನರ್ಸ್ ಸೇವೆಯೂ ಲಭ್ಯವಿದೆ.
9916905188

ವರ ಬೇಕಾಗಿದೆ
ಬ್ರಾಹ್ಮಣ ವಧು- ವಯಸ್ಸು27, SSLC ಕಲಿತಿರುವ/(ವಿಶ್ವಕರ್ಮ), ವಯಸ್ಸು 29, SSLC/ (GSB, RSB ಕೊಂಕಣಿ), ವಯಸ್ಸು 30, SSLC (ಒಕ್ಕಲಿಗ ಗೌಡ), ವಯಸ್ಸು 28, SSLC / ಬ್ರಾಹ್ಮಣ ವಯಸ್ಸು 33, PUC ಕಲಿತಿರುವ ವಧುವಿಗೆ ವರ ಬೇಕಾಗಿದೆ. ಶೀಘ್ರ ವಿವಾಹಕ್ಕಾಗಿ ಎಲ್ಲಾ ಜಾತಿಯ ವಧುವರರಿಗಾಗಿ ಸಂಪರ್ಕಿಸಿ: ಮ್ಯಾರೇಜ್ ಬ್ಯೂರೋ
9880685177

ಬೇಕಾಗಿದ್ದಾರೆ
ಮೈಸೂರಿನ ಕಾಳಿದಾಸ ರಸ್ತೆ – ಜಯಲಕ್ಷ್ಮೀಪುರಂದಲ್ಲಿ ಇರುವ ಶುದ್ಧ ಸಸ್ಯಾಹಾರಿ ರೆಸ್ಟೋರೆಂಟ್‌ಗೆ ಅನುಭವವುಳ್ಳ 1) ಸೌತ್ ಅಡುಗೆ ಭಟ್ರು South Cook 2) ಕೌಂಟರ್ ಪಾರ್ಸೆಲ್ Counter Parcel Packing - (3) Helper for Indian Cook ನಾರ್ತ್ ಇಂಡಿಯನ್ ಚೆಫ್‌ಗೆ ಹೆಲ್ಪರ್, ಮಾಡುವ ಕೆಲಸಕ್ಕೆ ಬೇಕಾಗಿದ್ದಾರೆ. ಆಕರ್ಷಕ ಸಂಬಳ, ವಸತಿ ಹಾಗು ಉತ್ತಮ ಸೌಲಭ್ಯಗಳನ್ನೂ ನೀಡಲಾಗುತ್ತದೆ – ಸಂಪರ್ಕಿಸಿ
7899028086

ಬೇಕಾಗಿದ್ದಾರೆ/WANTED
3 ರಿಂದ 4 ವರ್ಷ ಅನುಭವವುಳ್ಳ ನುರಿತ ಅಕೌಂಟೆಂಟ್ ಬೇಕಾಗಿದ್ದಾರೆ. 3 to 4 Years Experienced Accountant Required for a Travel & EV Scooter Showroom
9663136318

MUDA APPROVED
20X30 SITE FOR SALE. 25 LAKHS NEAR J P NAGARA 7 KMS FROM MYSORE-CITY
9449089231

ಬೇಕಾಗಿದ್ದಾರೆ
ಪ್ರತಿಷ್ಠಿತ ಸೆಕ್ಯೂರಿಟಿ ಏಜೆನ್ಸಿಗೆ ಕೆಳಕಂಡ ಸಿಬ್ಬಂದಿಗಳ ಅವಶ್ಯಕತೆಯಿದೆ.
1) ಕಂಪ್ಯೂಟರ್ ಆಪರೇಟರ್ (ESI/PF/GST Uploading Knowledge)
2) ಹೌಸ್ ಕೀಪರ್ (ಮಹಿಳೆ/ಪುರುಷ)
ಸ್ಥಳ: 1) ದಟ್ಟಗಳ್ಳಿ 2) ಕುವೆಂಪುನಗರ
3) ಸೆಕ್ಯೂರಿಟಿ ಗಾರ್ಡುಗಳು (ಪುರುಷರು)
1) ಹೆಬ್ಬಾಳ್ ಇಂಡಸ್ಟ್ರಿಯಲ್ ಏರಿಯಾ
2) ಮೇಟಗಳ್ಳಿ 3) ಮೈಸೂರು ಸಿಟಿ
4) ದಟ್ಟಗಳ್ಳಿ
9686422400, 9242406261

ನೀವು ಒಬ್ಬ ಟೀಚರ್ ಆಗ ಬೇಕೇ?
SSLC ಪಾಸ್ PUC, Degree ಪಾಸ್/ಫೇಲ್ NURSERY TEACHERS TRAINING ಟ್ರೈನಿಂಗ್ ನಂತರ ತಕ್ಷಣ ಕೆಲಸ ಬನ್ನಿ, ಸೇರಿ, ಪಾಸಾಗಿ, ಸಂಪಾದಿಸಿ PUC ಓದುತ್ತಿರುವವರು ಸಹ ಸೇರಬಹುದು. Jnana Gangothri Convent Rajendra Nagara Mysore Whatsapp/call
9113980741

ಈ ತಕ್ಷಣವೇ ಬೇಕಾಗಿದ್ದಾರೆ
ಮೈಸೂರು ಹೆಬ್ಬಾಳು ಪ್ರದೇಶದ ಕಂಪನಿಗಳಲ್ಲಿ ಕೆಲಸ ಮಾಡಲು ಹೆಲ್ಪರ್ ಕೆಲಸಕ್ಕೆ ಹುಡುಗರು, ಹುಡುಗಿಯರು ಮತ್ತು ಟೈಲರುಗಳು ಬೇಕಾಗಿದ್ದಾರೆ.
8105249880
7795285485

ಜಮೀನು ಮಾರಾಟಕ್ಕಿದೆ
ಚಲ್ಲಳ್ಳಿ (Near ಬಿಳಿಕೆರೆ) ಒಂದು ಎಕರೆ ಹತ್ತು ಕುಂಟೆ ಒಂದು ಕುಂಟೆಗೆ ರೂ.1,25,000 Sligtly Negotiable
9620563026

ಮನೆ ಮಾರಾಟಕ್ಕಿದೆ
20x30 ಗ್ರೌಂಡ್ ಫ್ಲೋರ್ ಮತ್ತು ಫಸ್ಟ್ ಫ್ಲೋರ್ 2 ಬೆಡ್ ರೂಂ ಇದೆ ಗೊಬ್ಬಳಿಮರ ಸರ್ಕಲ್ ಜೆ.ಪಿ.ನಗರ
7899475464

ತಕ್ಷಣ ಬೇಕಾಗಿದ್ದಾರೆ
1) ಹೌಸ್ ಕೀಪಿಂಗ್ ಸೂಪರ್‌ವೈಸರ್ (ಪುರುಷರು)
2) ಹೌಸ್ ಕೀಪಿಂಗ್ (ಹುಡುಗರು)
3) ಸೆಕ್ಯೂರಿಟಿ ಗಾರ್ಡ್ (ಪುರುಷರು)
ಮೈಸೂರಿನ ಗೋಕುಲಂ, ದಟ್ಟಗಳ್ಳಿ ಹೆಬ್ಬಾಳು ಇಂಡಸ್ಟ್ರೀಯಲ್ ಏರಿಯಾ,
ವಿದ್ಯಾರ್ಹತೆ: SSLC Pass/Fail & ಮೇಲ್ಪಟ್ಟು, ವಯೋಮಿತಿ: 50 ವರ್ಷದೊಳಗಿನವರು
9739199355
9844235981

ರಾಯಲ್ ಎನ್‌ಕ್ಲೇವ್
ನಂಜನಗೂಡು ಪಟ್ಟಣದ ಹೃದಯ ಭಾಗದಲ್ಲಿ ಮೂಡಾ ಅನುಮೋದಿತ ಹೊಸ ಬಡಾವಣೆಯಲ್ಲಿ 20x30, 30x40, 30x50 ಅಳತೆಯ ನಿವೇಶನಗಳು ದೊರೆಯುತ್ತವೆ. ಬ್ಯಾಂಕ್ ಸಾಲ ಸೌಲಭ್ಯ ದೊರೆಯುತ್ತದೆ
9620426509
8904976083

ಬೇಕಾಗಿದ್ದಾರೆ
ಮಾರ್ಕೆಟಿಂಗ್ ಫೀಲ್ಡ್ ಕೆಲಸಕ್ಕೆ ಹುಡುಗರು ಬೇಕಾಗಿದ್ದಾರೆ. ಸಂಬಳ 10,000 ರಿಂದ 30,000ವರೆಗೆ ಮೈಸೂರಿನವರಿಗೆ ಮೊದಲ ಆದ್ಯತೆ (ದ್ವಿಚಕ್ರ ವಾಹ ಹೊಂದಿರಬೇಕು)
9972128918

ಹೋಟೇಲ್ ಕೆಲಸಕ್ಕೆ ಬೇಕಾಗಿದ್ದಾರೆ
1) ಸೌತ್ ಇಂಡಿಯನ್ ಕುಕ್
2) ಇಡ್ಲಿ ವಡೆ ಮಾಡುವವರು
3) ತರಕಾರಿ ಕಟಿಂಗ್ ಮಾಡುವವರು
4) ರುಬ್ಬುವವರು
5) ಹೌಸ್ ಕೀಪಿಂಗ್ ಆಕರ್ಷಕ ಸಂಬಳ ಹಾಗೂ ESI & PF ಸೌಲಭ್ಯವಿರುತ್ತದೆ.
9986205777
9900781783

ಮಾರಾಟಕ್ಕಿದೆ
ನಂಜನಗೂಡು ಟೌನ್ ಹುಲ್ಲಹಳ್ಳಿ ಮುಖ್ಯರಸ್ತೆಯಿಂದ ಒಳಗಡೆ 3ನೇ ಸೈಟು 63x56 ಅಳತೆ ಮಾರಾಟಕ್ಕಿದೆ
9448804550

ಬೇಕಾಗಿದ್ದಾರೆ
ಸ್ಟಾರ್ ಬಜಾಜ್ Star Bajaj (Authorised Main Dealer for Bajaj Two Wheeler-Mysore) Vontikoppal, Mysore-02 ಮಾರ್ಕೆಟಿಂಗ್ ಅಂಡ್ ಸೇಲ್ ಎಕಿಕ್ಯೂಟಿವ್ Qualification- Any Degree Fresher or Experienced.
9739549252

MUDA APPROVED
40x40 Site @ Rs.42 Lac
South East Corner
Bank Loan available
Next to LBS Nagar
Behind Chamundi Hill
9538583377

ಮೈಸೂರು ಮಿತ್ರ ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಸೋಮವಾರ ಗುರುವಾರ ಶನಿವಾರ
ಪ್ರತಿ ಜಾಹೀರಾತಿಗೆ ರೂ. 630 ಮಾತ್ರ

ಮೈಸೂರು ಮಿತ್ರ ಸೋಮವಾರ 19 ಆಗಸ್ಟ್ 2024

ಮಳೆಗೆ ಗೋಡೆ ಕುಸಿತ



ಕಿಕ್ಕೇರಿ: ಹೋಬಳಿಯ ಚೌಡೇನಹಳ್ಳಿ ಗ್ರಾಮದ ರೈತನೊಬ್ಬನ ಮನೆ ಗೋಡೆ ಮಳೆ ಆರ್ಭಟಕ್ಕೆ ಕುಸಿದಿದೆ. ರೈತ ಸಿ.ಜೆ.ವೆಂಕಟೇಶ ಅವರ ಮನೆ ಗೋಡೆ ಶನಿವಾರ ರಾತ್ರಿ ಸುರಿದ ಜೋರು ಮಳೆಗೆ ಸಂಪೂರ್ಣ ಕುಸಿದಿದೆ. ದಪ್ಪವಾದ ಮಣ್ಣಿನ ಗೋಡೆ ಕುಸಿತಕ್ಕೆ ಮನೆಯ ಚಾವಣಿ, ಗಳ, ತೀರು, ನಾಡಹೆಂಚುಗಳು ಸಂಪೂರ್ಣ ನೆಲಕಚ್ಚಿವೆ.

ಮನೆಯಲ್ಲಿದ್ದ ದವಸಧಾನ್ಯ, ಪಾತ್ರೆಗಳು, ಬಟ್ಟೆಗಳು ಹಾಳಾಗಿವೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯವಾಗಿಲ್ಲ. ಪ್ರಾಕೃತಿಕ ವಿಕೋಪದಡಿಯಲ್ಲಿ ಮನೆ ಕಳೆದುಕೊಂಡ ನತದೃಷ್ಟ ರೈತನಿಗೆ ತ್ವರಿತವಾಗಿ ಆರ್ಥಿಕ ನೆರವು, ಪರಿಹಾರ ನೀಡಲು ಗ್ರಾಮಸ್ಥರು ಒತ್ತಾಯಿಸಿದ್ದಾರೆ. ಗ್ರಾಮದ ಮುಖಂಡರಾದ ಅಣ್ಣೇಗೌಡ, ನಾಗರಾಜು, ಶೇಖರ್, ಪುಟ್ಟರಾಜು, ಮನು, ಮಂಜುಳಾ ಸ್ಥಳಕ್ಕೆ ಭೇಟಿ ನೀಡಿ, ಸಾಂತ್ವನ ಹೇಳಿದರು.

ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಖಂಡಿಸಿ

ಮಳವಳ್ಳಿಯಲ್ಲಿ ರಾಜ್ಯಪಾಲರ ವಿರುದ್ಧ ಪ್ರತಿಭಟನೆ

ಮಳವಳ್ಳಿ, ಆ.18– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ದುರುದ್ದೇಶ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ಕ್ರಮ ಖಂಡಿಸಿ ಮಳವಳ್ಳಿ ಪಟ್ಟಣದಲ್ಲಿ ಭಾನುವಾರ ಶಾಸಕ ಪಿ.ಎಂ. ನರೇಂದ್ರಸ್ವಾಮಿ ನೇತೃತ್ವದಲ್ಲಿ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಬೃಹತ್ ಪ್ರತಿಭಟನೆ ನಡೆಸಿದರು.



ಶಾಸಕ ಪಿ.ಎಂ.ನರೇಂದ್ರಸ್ವಾಮಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪಟ್ಟಣದ ತಾಪಂ ಕಚೇರಿ ಆವರಣದಿಂದ ಮೆರವಣಿಗೆ ಹೊರಟ ಸಾವಿರಾರು ಮಂದಿ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ದಾರಿಯುದ್ದಕ್ಕೂ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಕಾಂಗ್ರೆಸ್ ನಾಯಕರ ಪರ ಜಯಘೋಷಗಳ ಜೊತೆಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹಾಗೂ ಕೇಂದ್ರದ ಎನ್‌ಡಿಎ ಸರ್ಕಾರ, ಪ್ರಧಾನಿ ಮೋದಿ, ಸಚಿವರಾದ ಅಮಿತ್ ಷಾ, ಕುಮಾರಸ್ವಾಮಿ ವಿರುದ್ಧ ಘೋಷಣೆಗಳನ್ನು ಕೂಗಿದರು.

ವೃತ್ತದಲ್ಲಿ ಕೆಲ ಕಾರ್ಯಕರ್ತರು ಉರುಳು ಸೇವೆ ಮಾಡಿ ಸಿದ್ದರಾಮಯ್ಯ ಪರ ತಮ್ಮ ಅಭಿಮಾನ ಮೆರೆದರು. ಈ ವೇಳೆ ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಶಾಸಕ ಪಿ.ಎಂ.ನರೇಂದ್ರಸ್ವಾಮಿ, ರಾಷ್ಟ್ರಪತಿಗಳ ಪ್ರತಿನಿಧಿಯಾಗಿ ಸಂವಿಧಾನದ ರಕ್ಷಣೆ ಮಾಡಬೇಕಾದ ರಾಜ್ಯಪಾಲರು ಕೇಂದ್ರದ ಎನ್‌ಡಿಎ ಸರ್ಕಾರದ ಕೈ ಗೊಂಬೆಯಂತೆ ವರ್ತಿಸುತ್ತ ಸುಪ್ರೀಂ ಕೋರ್ಟ್‌ನಿಂದ ಛೀಮಾರಿ ಹಾಕಿಸಿಕೊಂಡಿರುವ ವ್ಯಕ್ತಿಯೊಬ್ಬರ ಖಾಸಗಿ ದೂರು ಆಧರಿಸಿ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಪ್ರಾಸಿಕ್ಯೂಷನ್ ತನಿಖೆಗೆ ಅನುಮತಿ ನೀಡುವ ಮೂಲಕ ಸಂವಿಧಾನ ದತ್ತವಾಗಿ ಆಯ್ಕೆಯಾದ ಸರ್ಕಾರವನ್ನು ಅಭದ್ರಗೊಳಿಸುವ ಸಂವಿಧಾನ ವಿರೋಧಿ ಕಾರ್ಯ ನಡೆಸಿದ್ದಾರೆ ಎಂದು ಕಿಡಿಕಾರಿದರು.

ಮಾಜಿ ಎಂಎಲ್ಸಿ ಮರಿತಿಬ್ಬೇಗೌಡ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಬಿ.ಎಸ್.ಶಿವಣ್ಣ ಅವರು ಸಹ ಮಾತನಾಡಿ, ರಾಜ್ಯಪಾಲರ ನಡೆಯನ್ನು ಖಂಡಿಸಿದರು. ನಂತರ ತಾಲೂಕು ಕಚೇರಿಗೆ ತೆರಳಿ ತಹಸೀಲ್ದಾರ್ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಸಿ.ಪಿ.ರಾಜು, ದೊಡ್ಡಯ್ಯ ಮಹಿಳಾ ಘಟಕದ ಅಧ್ಯಕ್ಷರಾದ ಸುಷ್ಮಾರಾಜು, ಸುಜಾತ ಕೆ.ಪುಟ್ಟು, ಕೆಡಿಪಿ ಸದಸ್ಯ ಶಶಿಕುಮಾರ್, ಕುರುಬರ ಸಂಘದ ಜಿಲ್ಲಾಧ್ಯಕ್ಷ ಸುರೇಶ್, ಪುರಸಭೆ ಸದಸ್ಯರಾದ ರಾಜಶೇಖರ್ ಶಿವಸ್ವಾಮಿ, ಪ್ರಮೀಳಾ, ಮುಖಂಡರಾದ ಜಿಪಂ ಮಾಜಿ ಸದಸ್ಯ ಆರ್.ಎನ್.ವಿಶ್ವಾಸ್, ಕೆಜಿದೇವರಾಜು, ಲಿಂಗರಾಜು, ಬಸವೇಶ್, ಮಾಧು, ಕೃಷ್ಣ, ಚಂದ್ರ ಕುಮಾರ್, ಶಿವಲಿಂಗ ಶಾಂತರಾಜು, ಕಿರಣ್ ಶಂಕರ್ ಪಾಲ್ಗೊಂಡಿದ್ದರು.

ರಾಜ್ಯಪಾಲರ ಪ್ರತಿಕೃತಿ ದಹಿಸಿ ಪ್ರತಿಭಟನೆ



ಕಿಕ್ಕೇರಿಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು, ಕುರುಬ ಸಮಾಜದವರು ರಾಜ್ಯಪಾಲರ ನಡೆ ಖಂಡಿಸಿ ಭಾನುವಾರ ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸಿದರು.

ಕಿಕ್ಕೇರಿ: ಸಿಎಂ ಸಿದ್ದರಾಮಯ್ಯನವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ವಿರೋಧಿಸಿ ಕಾಂಗ್ರೆಸ್ ಕಾರ್ಯಕರ್ತರು, ಕುರುಬ ಸಮಾಜದವರು ಕೆಪಿಸಿಸಿ ಸದಸ್ಯ ಸುರೇಶ್ ಹಾಗೂ ಜಿಪಂ. ಮಾಜಿ ಸದಸ್ಯ ಕೋಡಿಮಾರನಹಳ್ಳಿ ದೇವರಾಜು ನೇತೃತ್ವದಲ್ಲಿ ರಾಜ್ಯ ಹೆದ್ದಾರಿ ತಡೆದು, ಮಾನವ ಸರಪಳಿ ನಿರ್ಮಿಸಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯಪಾಲರ ಪ್ರತಿಕೃತಿ ನಿರ್ಮಿಸಿ ಧಿಕ್ಕಾರ ಕೂಗಿ ಬೆಂಕಿಯೊಂದಿಗೆ ದಹಿಸಿದರು. ರಸ್ತೆ ಮಧ್ಯ ಟೈರ್ ಸುಟ್ಟು ಕೆಲ ಹೊತ್ತು ಜಾಮ್ ಮಾಡಿದರು. ಪರಿಣಾಮ ಪ್ರಯಾಣಿಕರು ಕೆಲಹೊತ್ತು ಪರದಾಡಿದರು.

ಕೆಪಿಸಿಸಿ ಸದಸ್ಯ ಸುರೇಶ್ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲು (ಪ್ರಾಸಿಕ್ಯೂಷನ್) ಅನುಮತಿ ನೀಡಿರುವ ರಾಜ್ಯಪಾಲರ ನಡೆ ಸರಿಯಿಲ್ಲ. ಕೇಂದ್ರ ಸರ್ಕಾರ, ಬಿಜೆಪಿ ಪಕ್ಷದ ತಾಳಕ್ಕೆ ತಕ್ಕಂತೆ ಗೊಂಬೆಯಂತೆ ವರ್ತಿಸುತ್ತಿದ್ದು ಇಂತಹ ನಡೆಯನ್ನು ನಿಲ್ಲಿಸಬೇಕು. ನ್ಯಾಯಾಲಯದಿಂದಲೇ ಛೀಮಾರಿ ಹಾಕಿಸಿಕೊಂಡ ವ್ಯಕ್ತಿಯೊಬ್ಬನ ದೂರನ್ನು ಆಧರಿಸಿ ನೋಟೀಸ್ ಜಾರಿಗೊಳಿಸಿರುವುದು ತರವಲ್ಲ ಎಂದು ಲೇವಡಿ ಮಾಡಿದರು.

ಜಿಪಂ ಮಾಜಿ ಸದಸ್ಯ ಕೋಡಿಮಾರನಹಳ್ಳಿ ದೇವರಾಜು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ನಾಗೇಂದ್ರಕುಮಾರ್, ಗ್ರಾಪಂ ಮಾಜಿ ಉಪಾಧ್ಯಕ್ಷ ಜಯರಾಂ, ಲಕ್ಷ್ಮೀಪುರ ಚಂದ್ರು, ಗೋವಿಂದನಹಳ್ಳಿ ಶಾಮಣ್ಣ, ಸಾಸಲು ಈರಪ್ಪ, ಎಲ್.ಪಿ.ದೇವರಾಜು, ಎಂ.ಡಿ. ಕೃಷ್ಣಮೂರ್ತಿ, ಮಣೀಶ್, ಸಿದ್ದಿಖ್, ಉಮೇಶ್, ರಮೇಶ್, ಅಶೋಕ, ಚೇತನ್, ಮಾರ್ಗೋನಹಳ್ಳಿ ಸಣ್ಣನಿಂಗೇಗೌಡ, ಚಿಕ್ಕೇಗೌಡ ಮತ್ತಿತರರು ಉಪಸ್ಥಿತರಿದ್ದರು.

ಕುಂದು ಕೊರತೆ ಸಭೆ

ಮಂಡ್ಯ, ಆ.18– ಮಂಡ್ಯ ಲೋಕಾಯುಕ್ತ ವಿಭಾಗದ ಅಧಿಕಾರಿಗಳು ಆ.21 ರಂದು ಸಾರ್ವಜನಿಕರ ಕುಂದು ಕೊರತೆ ಸಭೆಯನ್ನು ಮಳವಳ್ಳಿ ತಾಲೂಕು ಕಚೇರಿ ಆವರಣದಲ್ಲಿ ಬೆಳಿಗ್ಗೆ 11 ಗಂಟೆಯಿಂದ ಸಾರ್ವಜನಿಕರಿಂದ ದೂರು, ಅಹವಾಲುಗಳ ಸ್ವೀಕಾರ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಮಂಡ್ಯ ಕರ್ನಾಟಕ ಲೋಕಾಯುಕ್ತ ಪೋಲಿಸ್ ಇನ್ಸ್‌ಪೆಕ್ಟರ್‌ಗಳಾದ ಬಿ.ಪಿ.ಬ್ಯಾಟರಾಯನಗೌಡ, ಆರ್.ಎಂ. ಮೋಹನ್ ರೆಡ್ಡಿ ಹಾಗೂ ಡಿವೈಎಸ್‌ಪಿ ಹೆಚ್.ಟಿ. ಸುನಿಲ್‌ಕುಮಾರ್ ಅವರು ಪಾಲ್ಗೊಳ್ಳಲಿದ್ದಾರೆ.

ತನ್ನ ಮೇಲೆ ಸಂಶಯಪಟ್ಟ ಪತ್ನಿ ತಲೆಗೆ ರಾಡಿನಿಂದ ಹೊಡೆದ ಪತಿ

ಪತ್ನಿ ಆಸ್ಪತ್ರೆಗೆ, ಪತಿ ಜೈಲಿಗೆ

ಪಾಂಡವಪುರ: ತನ್ನ ಮೇಲೆ ಸಂಶಯಪಟ್ಟ ಪತ್ನಿಯ ತಲೆಗೆ ಪತಿಯೇ ಕಬ್ಬಿಣದ ಸರಳಿನಿಂದ ಹೊಡೆದು ಗಾಯಗೊಳಿಸಿರುವ ಘಟನೆ ಪಟ್ಟಣದ ಶಾಂತಿನಗರದಲ್ಲಿ ಶುಕ್ರವಾರ ನಡೆದಿದೆ.

ಶಾಂತಿ ನಗರದ ನಿವಾಸಿ ಶಿಕ್ಷಕ ನಟರಾಜು ಅವರ ಪತ್ನಿ ಶಿಕ್ಷಕಿ ಅನಿತಾ(36) ಗಂಭೀರ ಗಾಯಗೊಂಡಿದ್ದು, ಅವರನ್ನು ಆಸ್ಪತ್ರೆಗೆ ಸೇರಿಸಲಾಗಿದೆ. ಘಟನೆ ಸಂಬಂಧ ಆರೋಪಿ ಶಿಕ್ಷಕ ನಟರಾಜುನನ್ನೂ ಪೊಲೀಸರು ಬಂಧಿಸಿ ವಿಚಾರಣೆಗೆ ಒಳಪಡಿಸಿದ್ದಾರೆ.

ಆರೋಪಿ ನಟರಾಜು ಸರಕಾರಿ ಪ್ರೌಢಶಾಲೆಯಲ್ಲಿ ಶಿಕ್ಷಕನಾಗಿ ಕೆಲಸ ಮಾಡುತ್ತಿದ್ದು, ಗಾಯಗೊಂಡಿರುವ ಪತ್ನಿ ಅನಿತಾ ಪಟ್ಟಣದ ಖಾಸಗಿ ಶಾಲೆಯಲ್ಲಿ ಶಿಕ್ಷಕಿಯಾಗಿ ಕೆಲಸ ಮಾಡುತ್ತಿದ್ದರು.

ಪತಿ ನಟರಾಜು ಮತ್ತೊಬ್ಬ ಮಹಿಳೆಯೊಂದಿಗೆ ಅಕ್ರಮ ಸಂಬಂಧ ಹೊಂದಿದ್ದ ಎಂಬ ಅನುಮಾನದಿಂದ ಮನೆಯಲ್ಲಿ ಗಂಡ ಹೆಂಡತಿ ನಡುವೆ ಪದೇ–ಪದೇ ಗಲಾಟೆ ನಡೆಯುತ್ತಿತ್ತು ಎನ್ನಲಾಗಿದೆ. ಅದೇ ವಿಚಾರವಾಗಿ ಗುರುವಾರ ರಾತ್ರಿ ಗಲಾಟೆ ನಡೆದಿದೆ. ನಂತರ ಪತ್ನಿ ಅನಿತಾ ಶುಕ್ರವಾರ ಬೆಳಿಗ್ಗೆ ವರಮಹಾಲಕ್ಷ್ಮಿ ಪೂಜೆ ಮಾಡುತ್ತಿದ್ದ ಸಂದರ್ಭದಲ್ಲಿ ಪತಿ ನಟರಾಜು ಪತ್ನಿ ಅನಿತಾ ತಲೆಯ ಭಾಗಕ್ಕೆ ಕಬ್ಬಿಣದ ಸರಳಿನಿಂದ ಬಲವಾಗಿ ನಾಲ್ಕೈದು ಬಾರಿ ಹೊಡೆದಿದ್ದಾನೆನ್ನಲಾಗಿದೆ

ಇದರಿಂದ ತೀವ್ರ ರಕ್ತಸ್ರಾವಗೊಂಡು ಗಂಭೀರವಾಗಿ ಗಾಯಗೊಂಡಿದ್ದ ಅನಿತಾ ಅವರನ್ನು ಚಿಕಿತ್ಸೆಗಾಗಿ ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಸಾವು ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದಾರೆ.

ಘಟನಾ ಸ್ಥಳಕ್ಕೆ ಸರ್ಕಲ್ ಇನ್ಸ್‌ಪೆಕ್ಟರ್ ವಿವೇಕಾನಂದ, ಸಬ್‌ಇನ್ಸ್‌ಪೆಕ್ಟರ್ ಉಮೇಶ್ ಭೇಟಿ ನೀಡಿ ಪರಿಶೀಲಿಸಿ, ಆರೋಪಿ ಶಿಕ್ಷಕ ನಟರಾಜು ಅವರನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ದಂಪತಿಗೆ ಇಬ್ಬರು ಮಕ್ಕಳಿದ್ದಾರೆ.

ಘಟನೆ ಸಂಬಂಧ ಶಿಕ್ಷಕಿ ಅನಿತಾ ಅವರ ಚಿಕ್ಕಮ್ಮನ ಮಗ ಆರ್.ಅಭಿಲಾಷ್ ಅವರು ನೀಡಿದ ದೂರಿನ ಮೇರೆಗೆ ಪಟ್ಟಣದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪಶು ಚಿಕಿತ್ಸಾಲಯ ಉದ್ಘಾಟನೆ

ಮಂಡ್ಯ,ಆ.18– ಮಂಡ್ಯ ಜಿಪಂ, ತಾಪಂ, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ವತಿಯಿಂದ ಕೆ.ಆರ್.ಪೇಟೆ ತಾಲೂಕಿನ ಸಾರಂಗಿ ಗ್ರಾಮದಲ್ಲಿ ನಿರ್ಮಿಸಿರುವ ಪಶು ಚಿಕಿತ್ಸಾಲಯ ಸೋಮವಾರ ಬೆಳಿಗ್ಗೆ ಉದ್ಘಾಟನೆಯಾಗಲಿದೆ

ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲು ನೆರವಾದ ಮಾಜಿ ಶಾಸಕ ಡಿ.ಸಿ.ತಮ್ಮಣ್ಣ

ಭಾರತೀನಗರ.ಆ.18– ರಸ್ತೆ ಅಪಘಾತದಲ್ಲಿ ಗಾಯಗೊಂಡವರನ್ನು ಮಾಜಿ ಸಚಿವ ಡಿ.ಸಿ.ತಮ್ಮಣ್ಣ ಅವರು ತಮ್ಮ ಕಾರಿನಲ್ಲೇ ಆಸ್ಪತ್ರೆಗೆ ಕಳುಹಿಸಿ ಚಿಕಿತ್ಸೆ ಕೊಡಿಸುವ ಮೂಲಕ ಮಾನವೀಯತೆ ಮೆರೆದಿದ್ದಾರೆ.

ಇಲ್ಲಿಗೆ ಸಮೀಪದ ತಿಟ್ಟಮಾರನಹಳ್ಳಿ ಗೇಟ್ ಬಳಿ ನಡೆದುಕೊಂಡು ಹೋಗುತ್ತಿದ್ದ ಮಳವಳ್ಳಿ ತಾಲೂಕಿನ ಕೋರೆಗಾಲದ ಮರಿತಾಯಮ್ಮ ಮತ್ತು ಮೊಮ್ಮಗ ವೈದಿಕ್‌ಗೌಡ ಅವರಿಗೆ ಹಿಂದಿನಿಂದ ಬಂದ ಸ್ಕೂಟರ್ ನಿಯಂತ್ರಣ ತಪ್ಪಿ ಡಿಕ್ಕಿ ಹೊಡೆದ ಪರಿಣಾಮ ಬೈಕ್‌ನ ಹಿಂಬದಿಯಲ್ಲಿ ಕುಳಿತ್ತಿದ್ದ ದೊಡ್ಡಆಲಳ್ಳಿ ಸವಿತ ಅವರು ಸೇರಿ ನಾಲ್ವರು ಗಾಯಗೊಂಡರು.

ಈ ಮಾರ್ಗದಲ್ಲಿ ಮಾಜಿ ಸಚಿವ ಡಿ.ಸಿ. ತಮ್ಮಣ್ಣ ತಮ್ಮ ಕಾರಿನಲ್ಲಿ ಖಾಸಗಿ ಕಾರ್ಯಕ್ರಮದಲ್ಲಿ ಭಾಗವಹಿಸಲು ತೆರಳುತ್ತಿದ್ದರು. ರಸ್ತೆ ಬದಿ ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡು ನರಳಾಡುತ್ತಿದ್ದ ಗಾಯಾಳುಗಳನ್ನು ಕಂಡು ತಕ್ಷಣ ಕಾರನ್ನು ನಿಲ್ಲಿಸಿ ಕೆಳಗಿಳಿದು ಗಾಯಾಳುಗಳನ್ನು ತಮ್ಮದೆ ಕಾರಿನಲ್ಲಿ ಆಸ್ಪತ್ರೆಗೆ ಕಳುಹಿಸಿ ಸಂಬಂಧಿಸಿದ ವೈದ್ಯರಿಗೆ ದೂರವಾಣಿ ಕರೆ ಮಾಡಿ ಚಿಕಿತ್ಸೆಗೆ ಸೂಚಿಸಿ ಮಾನವೀಯತೆ ಮೆರೆದಿದ್ದಾರೆ.



ಗಾಯಾಳುಗಳನ್ನು ತಮ್ಮ ಕಾರಿನಲ್ಲಿ ಆಸ್ಪತ್ರೆಗೆ ಕಳುಹಿಸುತ್ತಿರುವ ತಮ್ಮಣ್ಣ.

ಆಸ್ಪತ್ರೆಗೆ ಕಾರನ್ನು ಕಳುಹಿಸಿದ ನಂತರ ತಿಟ್ಟಮಾರನಹಳ್ಳಿ ಮಾರ್ಗದಲ್ಲಿ ತೆರಳುತ್ತಿದ್ದ ಬೈಕ್ ಸವಾರನ ಜೊತೆ ಹಿಂದಿನ ಸೀಟಿನಲ್ಲಿ ಕುಳಿತು ಖಾಸಗಿ ಕಾರ್ಯಕ್ರಮದಲ್ಲಿ ಭಾಗವಹಿಸಲು ತೆರಳಿದರು.

ಕೋರೆಗಾಲದ ಮರಿತಾಯಮ್ಮ(45) ಅವರಿಗೆ ಕಾಲಿನ ಮೂಳೆ ಮುರಿದಿದ್ದು, ಮೊಮ್ಮಗ ವೈದಿಕ್‌ಗೌಡ(6) ಅವರಿಗೆ ತಲೆಗೆ ಪೆಟ್ಟು ಬಿದ್ದಿದೆ ಬೈಕ್‌ನಲ್ಲಿದ್ದ ಸವಿತ (46)ಮತ್ತು ಹೇಮಂತ್ (25) ಅವರಿಗೂ ಗಂಭೀರವಾಗಿ ಗಾಯಗಳಾಗಿವೆ

ನಾಳೆಯಿಂದ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ

ಮಂಡ್ಯ,ಆ.18– ಭಾರತ ಚುನಾವಣಾ ಆಯೋಗವು ಅರ್ಹತಾ ದಿನಾಂಕ 01 ಜನವರಿ 2025 ರಂತೆ ಭಾವಚಿತ್ರ ಸಹಿತ ಮತದಾರರ ಪಟ್ಟಿಗಳ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ–2025ರ ವೇಳಾಪಟ್ಟಿಯನ್ನು ಪ್ರಕಟಿಸಿರುವ ಸಂಬಂಧ ಜಿಲ್ಲೆಯಲ್ಲಿ ಆಗಸ್ಟ್ 20ರಿಂದ ಅಕ್ಟೋಬರ್ 18ರವರೆಗೆ ಮತದಾರರ ಪಟ್ಟಿಯ ಸಮೀಕ್ಷೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ–2025ರ ಸಂಬಂಧ ವೀಡಿಯೊ ಸಂವಾದ ಸಭೆಯಲ್ಲಿ ತಿಳಿಸಿದರು.

ಶಂಕರ್ ನಿಧನ



ಕೆ.ಆರ್.ಪೇಟೆ: ತಾಲೂಕಿನ ಅಪ್ಪನಹಳ್ಳಿ ಗ್ರಾಮದ ಶಿವಜ್ಯೋತಿಪಣದ ಹಿರಿಯ ಮುಖಂಡರು ಹಾಗೂ ರೇಷ್ಮೆ ಇಲಾಖೆಯ ನಿವೃತ್ತ ನೌಕರರಾದ ಶಂಕರ್(65) ಭಾನುವಾರ ನಿಧನ ಹೊಂದಿದ್ದಾರೆ.

ಮೃತರು ಪತ್ನಿ, ಪುರಸಭೆ ಶಹರಿ ರೋಜ್‌ಗಾರ್ ಯೋಜನೆಯ ಮಾಜಿ ಅಧ್ಯಕ್ಷೆ ಕಮಲಾ ಶಂಕರ್, ವಕೀಲರು ಹಾಗೂ ಪತ್ರಕರ್ತರಾದ ಅರುಣ್ ಕುಮಾರ್ ಸೇರಿದಂತೆ ನಾಲ್ವರು ಪುತ್ರರು, ಓರ್ವ ಪುತ್ರಿ ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆಯು ಭಾನುವಾರ ಸಂಜೆ ಹುಟ್ಟೂರು ಅಪ್ಪನಹಳ್ಳಿಯಲ್ಲಿ ನಡೆಯಿತು. ಮೃತರ ನಿಧನಕ್ಕೆ ತಾಲೂಕು ವಕೀಲರ ಸಂಘ ಹಾಗೂ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಪದಾಧಿಕಾರಿಗಳು ಮತ್ತು ವಿವಿಧ ಗಣ್ಯರು ಸಂತಾಪ ಸೂಚಿಸಿದ್ದಾರೆ.

ರಾಮಚಂದ್ರ



ಶ್ರೀರಂಗಪಟ್ಟಣ: ಪಟ್ಟಣದ ಜ್ಯೋತಿ ನಿವಾಸ್ ಶಾಲೆಯ ಹಿಂಭಾಗದ ಫ್ರೆಂಡ್ಲಿ ಲೇಔಟ್ ನಿವಾಸಿ ರಾಮಚಂದ್ರ (62) ಶನಿವಾರ ರಾತ್ರಿ ಅನಾರೋಗ್ಯದಿಂದ ನಿಧನ ಹೊಂದಿದ್ದಾರೆ. ದಿವಂಗತರು ಸಿಡಿಪಿ ಕಚೇರಿಯಲ್ಲಿ ವಾಹನ ಚಾಲಕರಾಗಿ ಕೆಲಸ ನಿರ್ವಹಿಸುತ್ತಿದ್ದು ಕೆಲವು ದಿನಗಳ ಹಿಂದೆ ನಿವೃತ್ತಿ ಹೊಂದಿದ್ದರು ಮೃತರು ಪತ್ನಿ, ಹಾಗೂ ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ, ಇವರ ಅಂತ್ಯಕ್ರಿಯೆ ಪಟ್ಟಣದ ಶಂಭುಲಿಂಗಯ್ಯನ ಕಟ್ಟೆಯಲ್ಲಿ ಭಾನುವಾರ ಮಧ್ಯಾಹ್ನ ನೆರವೇರಿತು.

ಮೂರನೇ ಪುಟದಿಂದ

ರಾಜ್ಯಾದ್ಯಂತ ಕಾಂಗ್ರೆಸ್ ಪ್ರತಿಭಟನೆ

ಹೆಚ್.ಡಿ.ಕುಮಾರಸ್ವಾಮಿ ತಮಗೆ ಹಾಗೂ ಪತ್ನಿಗೆ ನಿವೇಶನ ನೀಡುವಂತೆ ಮುಡಾಗೆ ಮನವಿ ಮಾಡಿದ್ದಾರೆ. ಬಿಜೆಪಿ–ಜೆಡಿಎಸ್‌ನ ಅನೇಕ ನಾಯಕರು ನಿವೇಶನ ಪಡೆದಿರುವುದನ್ನು ಬಹಿರಂಗಪಡಿಸಲಾಗುವುದು ಎಂದು ತಿಳಿಸಿದರು. ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಮಾತನಾಡಿ, ಸಿದ್ದರಾಮಯ್ಯ ಅವರು ಯಾವುದೇ ಕಾರಣಕ್ಕೂ ರಾಜೀನಾಮೆ ಕೊಡುವುದಿಲ್ಲ. ಅದಕ್ಕೆ ಹೈಕಮಾಂಡ್ ಅವಕಾಶ ಮಾಡಿಕೊಡುವುದಿಲ್ಲ. ಹೀಗಾಗಿ ಎಲ್ಲ ಸಂಘಟನೆ ಸಹಕಾರದಲ್ಲಿ ಸೌಹಾರ್ದಯುತವಾಗಿ ಪ್ರತಿಭಟನೆ ನಡೆಸಬೇಕು ಎಂದರು.

ಸಭೆಯಲ್ಲಿ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್‌ಖಾನ್, ಮಾಜಿ ಶಾಸಕ ಎಂ.ಕೆ. ಸೋಮಶೇಖರ್, ಜಿಪಂ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ಗ್ರಾಮಾಂತರ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ. ವಿಜಯಕುಮಾರ್, ನಗರಾಧ್ಯಕ್ಷ ಆರ್.ಮೂರ್ತಿ, ಮುಡಾ ಅಧ್ಯಕ್ಷ ಕೆ.ಮರೀಗೌಡ, ಮಾಜಿ ಮೇಯರ್‌ಗಳಾದ ಆರಿಫ್ ಹುಸೇನ್, ಟಿ.ಬಿ. ಚಿಕ್ಕಣ್ಣ, ಮೋದಾಮಣಿ, ಕೆಪಿಸಿಸಿ ಮಹಿಳಾ ಘಟಕದ ಮಾಜಿ ಅಧ್ಯಕ್ಷೆ ಡಾ.ಪುಷ್ಪಾ ಅಮರನಾಥ್, ಹಿಂದುಳಿದ ವರ್ಗಗಳ ಜಾಗೃತಿ ವೇದಿಕೆ ರಾಜ್ಯಾಧ್ಯಕ್ಷ ಕೆ.ಎಸ್. ಶಿವರಾಮ್, ಪಾಲಿಕೆ ಮಾಜಿ ಸದಸ್ಯರಾದ ಕೆ.ವಿ.ಮಲ್ಲೇಶ್, ಸುನಿಲ್, ಜೆ.ಗೋಪಿ, ಎಂ.ಶಿವಣ್ಣ, ಎನ್.ಭಾಸ್ಕರ್, ಸೋಮಶೇಖರ್, ಡಿ.ನಾಗಭೂಷಣ್, ಎಪಿಎಂಸಿ ಬಸವರಾಜು, ಸುಧಾ ಮಹದೇವಯ್ಯ, ಎನ್.ಆರ್.ನಾಗೇಶ್ ಮತ್ತಿತರರು ಇದ್ದರು.

ವಿಧಾನಸೌಧ ಮುಂಭಾಗ ಬಿಜೆಪಿ ಪ್ರತಿಭಟನೆ

ಇಟ್ಟುಕೊಂಡು ಇವರು ಹೋರಾಟ ಮಾಡುತ್ತಾರೆ ಎಂದು ಪ್ರಶ್ನೆ ಮಾಡಿದರು. ರಾಜ್ಯ ಕಾಂಗ್ರೆಸ್ ಸರ್ಕಾರ, ದೆಹಲಿ ಹೈಕಮಾಂಡ್‌ಗೆ ಎಟಿಎಂ ಆಗಿದೆ. ಬಿ.ಎಸ್.ಯಡಿಯೂರಪ್ಪ ಅವರ ಮೇಲೆ ಆರೋಪ ಬಂದಾಗ, ಎಲ್.ಕೆ.ಅಡ್ವಾಣಿ ಮೇಲೆ ಆರೋಪ ಬಂದಾಗ ರಾಜೀನಾಮೆ ಪಡೆಯಲಾಗಿತ್ತು. ಆದರೆ ಈ ಪರಂಪರೆ ಕಾಂಗ್ರೆಸ್‌ಗಿಲ್ಲ. ಕಾಂಗ್ರೆಸ್ ನಾಯಕರು ಜಾಮೀನಿನ ಮೇಲೆ ಹೊರಗಿದ್ದಾರೆ. ಅವರ ಅಜೆಂಡಾವೇ ಭ್ರಷ್ಟಾಚಾರ ಎಂದರು. ಈಗ ಕಾಂಗ್ರೆಸ್ ಸರ್ಕಾರವೇ ಇದೆ. ಆದ್ದರಿಂದ ಯಾವುದೇ ಪ್ರಕರಣದ ತನಿಖೆ ಬೇಕಾದರೂ ಮಾಡಲಿ. ಮುಡಾ ಹಗರಣದಲ್ಲಿ ನಾನು ಯಾವುದಕ್ಕೂ ಸಹಿ ಹಾಕಿಲ್ಲ, ದಾಖಲೆ ನೋಡಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಆದರೆ ಅವರೇ 62 ಕೋಟಿ ರೂ. ಕೊಡಿ ಎಂದು ಹೇಳಿರುವಾಗ ಅದಕ್ಕಿಂತ ದೊಡ್ಡ ಸಾಕ್ಷಿ ಬೇಡ. ಸಿದ್ದರಾಮಯ್ಯ ಈಗ ಕಾನೂನಿಗೆ ತಲೆ ಬಾಗಬೇಕು ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜೀನಾಮೆಗೆ ಆಗ್ರಹಿಸಿ ವಿಧಾನಸಭೆ ಪ್ರತಿಪಕ್ಷದ ನಾಯಕ ಆರ್. ಅಶೋಕ್ ಅವರ ನೇತೃತ್ವದಲ್ಲಿ ಬಿಜೆಪಿ ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಹಿರಿಯ ಮುಖಂಡರು ಸೋಮವಾರ ಬೆಳಗ್ಗೆ ವಿಧಾನಸೌಧ ಆವರಣದ ಗಾಂಧಿ ಪ್ರತಿಮೆ ಮುಂಭಾಗ ಪ್ರತಿಭಟನೆ ನಡೆಸಲಿದ್ದಾರೆ.

ರಾಜ್ಯಪಾಲರಿಗೆ ಸಿಎಂ ಸಿದ್ದರಾಮಯ್ಯ ಧಮ್ಕಿ

ಪ್ರತಿಭಟನೆಗಳು ನಡೆಯುತ್ತಿವೆ. ಸಂವಿಧಾನ ರಕ್ಷಣೆ ಮಾಡುತ್ತೇವೆ ಎಂದು ಬಡಾಯಿ ಕೊಚ್ಚಿಕೊಳ್ಳುವ ಕಾಂಗ್ರೆಸ್ ಪಕ್ಷದಿಂದ ಇಂತಹ ಹೀನ ಕೆಲಸಗಳು ನಡೆಯುತ್ತಿವೆ ಎಂದು ಕುಮಾರಸ್ವಾಮಿ ಅವರು ಆರೋಪ ಮಾಡಿದರು. ಯಾರೋ ಒಬ್ಬರು ಸಿದ್ದರಾಮಯ್ಯನವರ ಜತೆ ಬಂಡೆಯಂತೆ ನಿಲ್ಲುವೆ ಎಂದು ಸೋಗು ಹಾಕುತ್ತಿದ್ದಾರೆ. ಆ ಬಂಡೆಯಿಂದಲೇ ಸಿದ್ದರಾಮಯ್ಯ ಅವರಿಗೆ ಡೇಂಜರ್. ಆ ಬಂಡೆಯಿಂದಲೇ ಸಿದ್ದರಾಮಯ್ಯ ಅವರಿಗೆ ಈ ಗತಿ ಬಂದಿದೆ. ವೈನಾಡು, ಉತ್ತರ ಕನ್ನಡದಲ್ಲಿ ಭಾರೀ ಮಳೆಯಾಗಿ ಭೂ ಕುಸಿತ ಉಂಟಾಯಿತಲ್ಲ, ಆ ಮಣ್ಣಿನ ಜತೆ ಬಂದು ಬಿದ್ದವಲ್ಲ ಬಂಡೆಗಳು, ಅವೇ ಜನರ ಜೀವ ಜೀವ ತೆಗೆದಿದ್ದು. ಸಿದ್ದರಾಮಯ್ಯ ಅವರಿಗೆ ಬಂಡೆಯಿಂದಲೇ ಪತನ ಶುರುವಾಗಿದೆ ಎಂದು ಕೇಂದ್ರ ಸಚಿವರು ಮಾರ್ಮಿಕವಾಗಿ ಹೇಳಿದರು. ನಮ್ಮ ಪಾದಯಾತ್ರೆಗೂ ಈ ಪ್ರಕರಣಕ್ಕೂ ಸಂಬಂಧ ಇಲ್ಲ. ಹಗರಣದ ಬಗ್ಗೆ ಜನರಿಗೆ ಮನವರಿಕೆ ಮಾಡಿಕೊಡುವ ಏಕೈಕ ಉದ್ದೇಶಕ್ಕೆ ಈ ಪಾದಯಾತ್ರೆ ನಡೆಸಲಾಯಿತು. ಒಟ್ಟಿನಲ್ಲಿ ಜೆಡಿಎಸ್ ಬಿಜೆಪಿ ಸಂಘಟಿತ ಹೋರಾಟವನ್ನು ಜನರು ಗಮನಿಸಿದ್ದಾರೆ ಎಂದು ಕುಮಾರಸ್ವಾಮಿ ಅವರು ಹೇಳಿದರು.

ದೇವೇಗೌಡರು, ಕುಮಾರಸ್ವಾಮಿ ಅವರು ಹಟ ಹಿಡಿದು ಮೋದಿ, ಅಮಿತ್ ಶಾ ಅವರ ಮೇಲೆ ಒತ್ತಡ ಹೇರಿ ರಾಜ್ಯಪಾಲರಿಂದ ಸಿಎಂ ವಿರುದ್ಧ ವಿಚಾರಣೆಗೆ ಅನುಮತಿ ಕೊಡಿಸಿದ್ದಾರೆ ಎಂದು ಅಪಪ್ರಚಾರ ಮಾಡಲಾಗುತ್ತಿದೆ. ನಮಗೇನು ಬೇರೆ ಕೆಲಸ ಇಲ್ಲವೇ? ಅವರ ಪಕ್ಷದಲ್ಲಿನ ಪಿತೂರಿಗೆ ಸಿದ್ದರಾಮಯ್ಯ ಅವರು ಬಲಿಯಾಗುತ್ತಿದ್ದಾರೆ ಎಂದು ಕುಮಾರಸ್ವಾಮಿ ಅವರು ಸೂಚ್ಯವಾಗಿ ಹೇಳಿದರು. ಸಿದ್ದರಾಮಯ್ಯ ಅವರ ವಿರುದ್ಧ ಲೋಕಾಯುಕ್ತದಲ್ಲಿ ಪ್ರಕರಣಗಳು ಹೆಚ್ಚಾದಾಗ ಅವುಗಳನ್ನು ಮುಚ್ಚಿ ಹಾಕಲು ಎಸಿಬಿ ಅಂತ ರಚನೆ ಮಾಡಿಕೊಂಡು ರಕ್ಷಣೆ ಪಡೆದುಕೊಂಡಿರಿ. ಸಿದ್ದರಾಮಯ್ಯ ಬಗ್ಗೆ ಸಾಕಷ್ಟು ವಿಷಯ ಇದೆ ಎಂದು ಅವರು ಹೇಳಿದರು. ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ಕೊಡಲಿ ಎಂದು ನಾನು ಕೇಳಿಲ್ಲ. ಅವರು ರಾಜೀನಾಮೆ ಕೊಡುವುದೂ ಇಲ್ಲ. ಅದು ನನಗೆ ಗೊತ್ತಿದೆ. ಕಾನೂನು ಅಂತ ಒಂದಿದೆ. ಯಾವ ಹಂತದಲ್ಲಿ ಏನು ತೀರ್ಮಾನ ಆಗಬೇಕೋ ಅದು ಆಗುತ್ತದೆ ಎಂದು ಕುಮಾರಸ್ವಾಮಿ ಅವರು ಹೇಳಿದರು.

ಪ್ರೊ.ಎಂ.ಹೆಚ್.ಧನಂಜಯ ಸ್ಮರಣಾರ್ಥ ಪುಸ್ತಕ ಬಿಡುಗಡೆ


ಮೈಸೂರು, ಆ.18(ಎಂಕೆ)– ತಾಂತ್ರಿಕ ಶಿಕ್ಷಣ ತಜ್ಞ, ಎಕ್ಸೆಲ್‌ಸಾಫ್ಟ್ ಟೆಕ್ನಾಲಜಿ ಪ್ರೈ.ಲಿ ಹಾಗೂ ಎಕ್ಸೆಲ್ ಪಬ್ಲಿಕ್ ಶಾಲೆಯ ಸಂಸ್ಥಾಪಕ ಅಧ್ಯಕ್ಷ ಪ್ರೊ.ಎಂ.ಹೆಚ್. ಧನಂಜಯ ಅವರ ಸ್ಮರಣಾರ್ಥ ಹೊರತಂದಿರುವ 'ನ್ಯಾವಿಗೇಟಿಂಗ್ ದ ಪಾತ್ ಆಫ್ ಟೆಕ್ನಿಕಲ್ ಎಜುಕೇಶನ್ ಪ್ರೊಧನಂಜಯಾಸ್ ಇನ್ಸ್ಪಿರೇಷನಲ್ ಜರ್ನಿ' ಪುಸ್ತಕವನ್ನು ಭಾನುವಾರ ಲೋಕಾರ್ಪಣೆಗೊಳಿಸಲಾಯಿತು.

ಮೈಸೂರಿನ ಸರಸ್ವತಿಪುರಂನಲ್ಲಿರುವ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಪುಸ್ತಕ ಬಿಡುಗಡೆ ಮಾಡಿದರು. ಬಳಿಕ ಮಾತನಾಡಿದ ಶ್ರೀಗಳು, ಪ್ರೊಧನಂಜಯ ಅವರು ಮೇರು ವ್ಯಕ್ತಿತ್ವ ಹೊಂದಿದ್ದ ದೂರದೃಷ್ಟಿಯುಳ್ಳವರಾಗಿದ್ದರು. ಜೆಎಸ್‌ಎಸ್‌ನ ಒಂದೊಂದು ಶಿಕ್ಷಣ ಸಂಸ್ಥೆಯ ಸ್ಥಾಪನೆಯ ಹಿಂದೆಯೂ ಅವರ ವಿಶೇಷ ಕಾಳಜಿ ಇದೆ. ಸಾಫ್ಟ್‌ವೇರ್ ಜಗತ್ತಿನ ಬೆಳವಣಿಗೆಯ ಕುರಿತು ಅಂದೇ ತಿಳಿಸಿದ್ದರೆಂದು ಸ್ಮರಿಸಿದರು.

ಎಲ್ಲಾ ರೀತಿಯ ವ್ಯಕ್ತಿಗಳೊಂದಿಗೆ ಬೆರೆಯುತ್ತಿದ್ದ ಅವರು, ಎಲ್ಲಿಯೂ ಲೋಪವಾಗದಂತೆ ಪವಿತ್ರಜೀವನ ನಡೆಸಿದವರು. ಕಾಲೇಜು ಬಿಟ್ಟರೆ ಮನೆಯಲ್ಲಿ ಸಿಗುತ್ತಿದ್ದ ಅವರದ್ದು ಶಿಸ್ತಿನ ಜೀವನ. ಮೈಸೂರಿಂದ ಬೇರೆ ಕಡೆ ಹೋಗಬೇಕಾದರೆ ರಾಜೇಂದ್ರ ಶ್ರೀಗಳಿಗೆ ತಿಳಿಸದೇ ಹೋಗುತ್ತಿರಲಿಲ್ಲ. ಅಂತರಾಷ್ಟ್ರೀಯ ಮಟ್ಟದಲ್ಲಿಯೂ ಗುರ್ತಿಸಿಕೊಂಡಿದ್ದ ಧನಂಜಯ ಅವರ ಅನನ್ಯ ಸೇವೆ ಸದಾ ಸ್ಮರಣೀಯ ಎಂದರು.

ಕುವೆಂಪು ವಿವಿ ವಿಶ್ರಾಂತ ಕುಲಪತಿ ಪ್ರೊ.ಕೆ.ಚಿದಾನಂದಗೌಡ ಮಾತನಾಡಿ, ನನ್ನ ಮತ್ತು ಪ್ರೊಧನಂಜಯ ಅವರ ಒಡನಾಟ 60 ವರ್ಷಗಳದ್ದು. ನಾವಿಬ್ಬರು ಬೇರೆ ಬೇರೆ ಕಾಲೇಜುಗಳಲ್ಲಿ ಸಹೋದ್ಯೋಗಿಗಳಾಗಿ ಕೆಲಸ ಮಾಡಿದ್ದೇವೆ. 1964ರಲ್ಲಿ ನಾನು ಬಿಇ ಪದವಿ ಪಡೆದಾಗ ಎನ್‌ಐಇ ಕಾಲೇಜಿನಲ್ಲಿ ಅವರೊಂದಿಗೆ ಉಪನ್ಯಾಸಕನಾಗಿ ಸೇರಿಕೊಂಡೆ. ಅಲ್ಲಿಂದಲೇ ನನ್ನ ಮತ್ತು ಅವರ ನಡುವಿನ ಒಡನಾಟ ಆರಂಭವಾಗಿದ್ದು. ಅತ್ಯುತ್ತಮ ಸಲಹೆಗಾರನಾಗಿದ್ದ ಪ್ರೊಧನಂಜಯರಿಂದಲೇ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಯಲ್ಲಿ ನಾನು ಕೆಲಸ ಮಾಡಲು ಸಾಧ್ಯವಾಯಿತು ಎಂದು ಸ್ಮರಿಸಿದರು.

ಧನಂಜಯ ಅವರು ಯಾವುದೇ ಸ್ಥಾನವನ್ನು ಅಲಂಕರಿಸಿದರೂ ಆ ಸ್ಥಾನದ ಘನತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದ್ದರು. ಎಸ್‌ಜೆ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರಾಗಿ ರಾಜ್ಯದ ಅತ್ಯುತ್ತಮ ಕಾಲೇಜುಗಳಲ್ಲಿ ಒಂದಾಗಿ ಬೆಳೆಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ನಂತರ ನಿರ್ದೇಶಕರಾಗಿ ಬೇರೆ ಬೇರೆ ಸಂಸ್ಥೆಗಳನ್ನು ಹುಟ್ಟುಹಾಕಿದರು. ಅವರ ಕುರಿತು ಪುಸ್ತಕ ಹೊರತಂದಿರುವುದು ಅತ್ಯಂತ ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರಲ್ಲದೆ ಪುಸ್ತಕ ಕುರಿತು ವಿವರಣೆ ನೀಡಿದರು.



ತಾಂತ್ರಿಕ ಶಿಕ್ಷಣ ತಜ್ಞ ಪ್ರೊ.ಎಂ.ಹೆಚ್.ಧನಂಜಯ ಸ್ಮರಣಾರ್ಥ ಪುಸ್ತಕವನ್ನು ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಬಿಡುಗಡೆ ಮಾಡಿದರು. ಕುವೆಂಪು ವಿವಿ ವಿಶ್ರಾಂತ ಕುಲಪತಿ ಪ್ರೊ.ಕೆ.ಚಿದಾನಂದಗೌಡ, ವಿಶ್ವೇಶ್ವರಯ್ಯ ತಾಂತ್ರಿಕ ವಿವಿ ವಿಶ್ರಾಂತ ಕುಲಪತಿ ಡಾ.ಕೆ.ಬಾಲವೀರ ರೆಡ್ಡಿ, ಎಕ್ಸೆಲ್‌ಸಾಫ್ಟ್ ಮುಖ್ಯಸ್ಥ ಸುಧನ್ವ ಧನಂಜಯ ಉಪಸ್ಥಿತರಿದ್ದರು.

> ಪ್ರೊ.ಧನಂಜಯ ಮತ್ತು ಜೆಎಸ್‌ಎಸ್ ಶಿಕ್ಷಣ ಸಂಸ್ಥೆ ನಡುವಿನ ನಿಕಟ ಸಂಬಂಧವನ್ನು ಬೇರ್ಪಡಿಸಲು ಸಾಧ್ಯವಿಲ್ಲ. ಅವರ ವಿಶೇಷ ವ್ಯಕ್ತಿತ್ವದ ಮೂಲಕ ವಿದೇಶಗಳಲ್ಲಿಯೂ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಸ್ಥಾಪನೆಗೆ ತಮ್ಮದೇ ಕೊಡುಗೆ ನೀಡಿದ್ದಾರೆ. ಅಂತರರಾಷ್ಟ್ರೀಯ ಮಟ್ಟದ ಎಕ್ಸೆಲ್ ಸಾಫ್ಟ್ ಕಂಪನಿ ಸ್ಥಾಪಿಸುವ ಮೂಲಕ ತಾಂತ್ರಿಕ ಶಿಕ್ಷಣ ಕ್ಷೇತ್ರಕ್ಕೆ ಮಹತ್ವದ ಕೊಡುಗೆ ನೀಡಿರುವ ಅವರು ಸದಾ ಸ್ಮರಣೀಯ.
>
> – ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ


ನ್ಯಾಚುರಲ್ ಲೀಡರ್: ವಿಶ್ವೇಶ್ವರಯ್ಯ ತಾಂತ್ರಿಕ ವಿವಿ ವಿಶ್ರಾಂತ ಕುಲಪತಿ ಡಾ.ಕೆ.ಬಾಲವೀರ ರೆಡ್ಡಿ ಮಾತನಾಡಿ, ಶ್ರೇಷ್ಠ ಶಿಕ್ಷಕರಾಗಿದ್ದ ಪ್ರೊ.ಧನಂಜಯ, ಶಿಕ್ಷಣ ಸಂಸ್ಥೆಗಳ ಅಭಿವೃದ್ಧಿಕಾರರೂ ಆಗಿದ್ದರು. ಮಾನವೀಯತೆ ಗುಣವುಳ್ಳ ನ್ಯಾಚುರಲ್ ಲೀಡರ್ ಆಗಿದ್ದವರು. ವೈಯಕ್ತಿಕವಾಗಿ ನನಗೆ ಗುರುಗಳು, ಮಾರ್ಗದರ್ಶಕರೂ ಆಗಿದ್ದ ಅವರನ್ನು ಮೈಸೂರಿಗೆ ಬಂದಾಗಲೆಲ್ಲಾ ಭೇಟಿ ಮಾಡುತ್ತಿದ್ದೆ. ಜೀವನದಲ್ಲಿ ಬದಲಾವಣೆ ಕುರಿತು ಮಾರ್ಗದರ್ಶನ ನೀಡುತ್ತಿದ್ದ ಅವರು ತಮ್ಮ ಸಂಸ್ಥೆಯಲ್ಲಿ ಕೌಶಲ್ಯ ತರಬೇತಿಗಳನ್ನು ಆರಂಭಿಸುವ ಮೂಲಕ ಇನ್ನಿತರೆ ಸಂಸ್ಥೆಗಳಿಗೆ ಪ್ರೇರಣೆಯಾಗಿದ್ದರು ಎಂದು ಬಣ್ಣಿಸಿದರು. ಎಕ್ಸೆಲ್‌ಸಾಫ್ಟ್ ಮುಖ್ಯಸ್ಥ ಸುಧನ್ವ ಧನಂಜಯ ಉಪಸ್ಥಿತರಿದ್ದರು.

ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದು ಅಸಂವಿಧಾನಿಕ

ಹಿರಿಯ ವಕೀಲ ಸಿ.ಎಂ.ಜಗದೀಶ್ ಅಭಿಮತ

ಮೈಸೂರು, ಆ.18(ಎಂಕೆ)– ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದು ಅಸಂವಿಧಾನಿಕ. ರಾಜ್ಯಪಾಲರು ಯಾವುದೇ ಸಾಕ್ಷ್ಯಾಧಾರಗಳನ್ನು ಉಲ್ಲೇಖಿಸದೆ ವಿವೇಚನಾರಹಿತವಾಗಿ ಅನುಮತಿ ನೀಡಿರುವುದು ಸ್ಪಷ್ಟವಾಗಿದೆ ಎಂದು ಹಿರಿಯ ವಕೀಲ ಸಿ.ಎಂ. ಜಗದೀಶ್ ತಿಳಿಸಿದರು.

ನಗರದ ಜೆಎಲ್‌ಬಿ ರಸ್ತೆಯಲ್ಲಿರುವ ಕಾಂಗ್ರೆಸ್ ಕಚೇರಿಯಲ್ಲಿ ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಕಾನೂನು ಘಟಕದ ವತಿಯಿಂದ ನಡೆದ 'ಸಿದ್ದರಾಮಯ್ಯ ಸತ್ಯ–ಅಸತ್ಯಗಳ ಸಂಘರ್ಷ' ಕುರಿತ ವಕೀಲ ಸಂವಾದದಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ಕೊಡಬೇಕೆಂದೇ ಮಾಡಿರುವ ಷಡ್ಯಂತ್ರವೇ ಇದಾಗಿದ್ದು, ರಾಜ್ಯಪಾಲರ ಮೂಲಕ ಅಸಂವಿಧಾನಿಕ ಕೃತ್ಯವೆಸಗಲಾಗಿದೆ ಎಂದರು.



ಮೈಸೂರು ಜಿಲ್ಲಾ ಕಾಂಗ್ರೆಸ್ ಕಾನೂನು ಘಟಕದ ವತಿಯಿಂದ ನಡೆದ 'ಸಿದ್ದರಾಮಯ್ಯ ಸತ್ಯ–ಅಸತ್ಯಗಳ ಸಂಘರ್ಷ' ಕುರಿತ ಸಂವಾದದಲ್ಲಿ ಹಿರಿಯ ವಕೀಲ ಸಿ.ಎಂ.ಜಗದೀಶ್ ಮಾತನಾಡಿದರು

ಮುಡಾ ಇತಿಹಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಶಾಸಕರಾಗಿ, ಸಚಿವರಾಗಿ, ಉಪ ಮುಖ್ಯಮಂತ್ರಿಯಾಗಿ, ವಿರೋಧ ಪಕ್ಷದ ನಾಯಕರಾಗಿ ಹಾಗೂ ಮುಖ್ಯಮಂತ್ರಿಯಾಗಿ ಎಲ್ಲಿಯೂ ತಮ್ಮ ಅಧಿಕಾರ ದುರುಪಯೋಗ ಮಾಡಿಲ್ಲ. ಆದರೂ ಸುಖಾ ಸುಮ್ಮನೆ ಯಾವುದೇ ಕಾರಣಗಳನ್ನು ನೀಡದೆ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದು ಖಂಡನೀಯ. ಈ ರೀತಿಯ ಆದೇಶವನ್ನು ಇದುವರೆಗೂ ಯಾವೊಬ್ಬ ಅಧಿಕಾರಿಯೂ ಕೊಟ್ಟಿಲ್ಲ ಎಂದು ವ್ಯಂಗ್ಯವಾಡಿದರು.

ಮುಖ್ಯಮಂತ್ರಿ ವಿರುದ್ಧ ನೀಡಿರುವ ವಿಚಾರಣಾ ಆದೇಶದಲ್ಲಿ ಯಾವ ಕಲಂ ಅಡಿಯಲ್ಲಿ ಅಪರಾಧವೆಸಗಿದ್ದಾರೆ ಎಂಬುದನ್ನು ಸ್ಪಷ್ಟಪಡಿಸಿಲ್ಲ. ಅಬ್ರಾಹಂ ಕೊಟ್ಟಿರುವ ದೂರಿನಲ್ಲಿಯಲ್ಲಿ ಯಾವ ಸೆಕ್ಷನ್ ಅಡಿಯಲ್ಲಿ ಅಪರಾಧ ಮಾಡಿದ್ದಾರೆ ಎಂಬುದನ್ನು ಉಲ್ಲೇಖಿಸಿಲ್ಲ. ಅಲ್ಲದೆ ಯಾವ ಆಧಾರದ ಮೇಲೆ ಅಧಿಕಾರ ದುರುಪಯೋಗವಾಗಿದೆ ಎಂಬುದನ್ನು ತಿಳಿಸಿಲ್ಲ. ಇದ್ಯಾವುದನ್ನೂ ಗಮನಿಸಿದೆ ಸಂವಿಧಾನದ ಅಡಿಯಲ್ಲಿ ಕರ್ತವ್ಯ ನಿರ್ವಹಿಸುವ ರಾಜ್ಯಪಾಲರು, ಅದೇ ಸಂವಿಧಾನದ ಅಡಿಯಲ್ಲಿ ಕರ್ತವ್ಯ ನಿರ್ವಹಿಸುವ ಮುಖ್ಯಮಂತ್ರಿಗಳ ವಿರುದ್ಧ ಕ್ರಮ ಜರುಗಿಸುವಾಗ ಅತ್ಯಂತ ಗುರುತರವಾದ ಜವಾಬ್ದಾರಿ ನಿರ್ವಹಿಸಬೇಕಾಗಿತ್ತು. ಆದರೆ ಇಲ್ಲಿ ನಡೆದಿರುವುದು ಷಡ್ಯಂತ್ರವೇ ಹೊರತು ಮತ್ತೇನೂ ಅಲ್ಲ ಎಂದು ಪ್ರತಿಪಾದಿಸಿದರು.

ಭೂಮಿ ಕಳೆದುಕೊಂಡವರಿಗೆ ಪರ್ಯಾಯ ಭೂಮಿ ನೀಡಬೇಕು ಎಂದು ಸುಪ್ರೀಂ ಕೋರ್ಟ್ ಮತ್ತು ಹೈಕೋರ್ಟ್ ಹಲವು ತೀರ್ಪಿನಲ್ಲಿ ಉಲ್ಲೇಖಿಸಿದೆ. ಅದರಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿಯವರ ಪ್ರಕರಣದಲ್ಲಿಯೂ ಬದಲಿ ನಿವೇಶನವನ್ನು ಮುಡಾ ನಿಯಮಾನುಸಾರವೇ ನೀಡಲಾಗಿದೆ. ಅಲ್ಲದೆ ಮುಡಾ ಸಭೆಯಲ್ಲಿ ಶಾಸಕ ಜಿ.ಟಿ.ದೇವೇಗೌಡ, ರಾಮದಾಸ್, ಕೆ.ಟಿ.ಶ್ರೀಕಂಠೇಗೌಡ ಕೂಡ ಮಾತನಾಡಿ ನಿರ್ಣಯ ತೆಗೆದುಕೊಂಡ ಬಳಿಕವೇ ನಿವೇಶನ ನೀಡಿರುವಾಗ ಅಪರಾಧ ಹೇಗಾಗುತ್ತದೆ ಎಂದು ಪ್ರಶ್ನಿಸಿದರಲ್ಲದೆ ಕಾನೂನು ಹೋರಾಟದಲ್ಲಿ ಸಿದ್ದರಾಮಯ್ಯ ಜೊತೆ ವಕೀಲರ ಬಲವಿದೆ ಎಂದು ತಿಳಿಸಿದರು.

ಮೈಸೂರು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್, ಕಾನೂನು ಘಟಕದ ಅಧ್ಯಕ್ಷ ತಿಮ್ಮಯ್ಯ, ರಾಜ್ಯ ಉಪಾಧ್ಯಕ್ಷ ಸುರೇಶ್ ಪಾಳ್ಯ, ಕಾರ್ಯದರ್ಶಿ ಚರಣ್‌ರಾಜ್, ವಕೀಲರಾದ ರಾಮಕೃಷ್ಣ, ಸಿ.ಬಸವರಾಜು, ಕಾಂತರಾಜು, ಸುನೀಲ್, ಶಿವಪ್ರಸಾದ್, ಪ್ರೇಮ್ ಮತ್ತಿತರರಿದ್ದರು.

ಮೈಸೂರು ಮಿತ್ರ ಸೋಮವಾರ 19 ಆಗಸ್ಟ್ 2024

ಕೊಡವ ಲ್ಯಾಂಡ್ ಹಕ್ಕೋತ್ತಾಯಕ್ಕಾಗಿ ಪ್ರತಿಭಟನೆ

ಸುಂಟಿಕೊಪ್ಪದಲ್ಲಿ ಮಾನವ ಸರಪಳಿ ರಚಿಸಿದ ಸಿಎನ್‌ಸಿ ಕಾರ್ಯಕರ್ತರು



ಸುಂಟಿಕೊಪ್ಪ ಕನ್ನಡ ವೃತ್ತದಲ್ಲಿ ಸಿಎನ್‌ಸಿ ಕಾರ್ಯಕರ್ತರು ಕೊಡವ ಲ್ಯಾಂಡ್ ಹಕ್ಕೋತ್ತಾಯಕ್ಕಾಗಿ ಪ್ರತಿಭಟನೆ ನಡೆಸಿದರು.

ಸುಂಟಿಕೊಪ್ಪ, ಆ.18–ಕೊಡವ ಲ್ಯಾಂಡ್ ಹಕ್ಕೋತ್ತಾಯಕ್ಕಾಗಿ ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ಕಾರ್ಯಕರ್ತರು ಸುಂಟಿಕೊಪ್ಪ ಕನ್ನಡ ವೃತ್ತದಲ್ಲಿ ಮಾನವ ಸರಪಳಿ ರಚಿಸಿ, ಪ್ರತಿಭಟನೆ ನಡೆಸಿದರು.

ಸಿಎನ್‌ಸಿ ಸಂಚಾಲಕ ನಂದಿನೆರವಂಡ ನಾಚಪ್ಪ ಮಾತನಾಡಿ, ಕೊಡವರು ಯಾವುದೇ ಕಾರಣಕ್ಕೂ ಭೂಮಿಯನ್ನು ಮಾರಾಟ ಮಾಡಬಾರದು. ಕೊಡಗಿನ ನೆಲ–ಜಲ, ಸಂಸ್ಕೃತಿಯನ್ನು ಉಳಿಸಲು ಪಣ ತೊಡಬೇಕು. ಭೂ ಮಾಫಿಯಗಳಿಂದ ಕೊಡವರ ಭೂಮಿ ಪರಭಾರೆಯಾಗುತ್ತಿದ್ದು, ಇದನ್ನು ತಡೆಗಟ್ಟಬೇಕು ಎಂದು ಒತ್ತಾಯಿಸಿದರು.

ಜಾಗತೀಕರಣದ ಹೆಸರಿನಲ್ಲಿ ದೊಡ್ಡ ಕೈಗಾರಿಕೋದ್ಯಮಿಗಳು ಕೊಡಗಿನ ಬೃಹತ್ ಕಾಫಿ ತೋಟವನ್ನು ಖರೀದಿಸಿ ರೆಸಾರ್ಟ್, ಹೋಂ ಸ್ಟೆಗಳನ್ನು ನಿರ್ಮಿಸಿ ಕಾಂಕ್ರೀಟಿಕರಣಗೊಳಿಸುತ್ತಿದ್ದಾರೆ. ಇದು ಕೊಡಗಿನಲ್ಲಿ ಭೂ ಕುಸಿತ ಮತ್ತು ಜಲ ಪ್ರಳಯವಾಗಲು ಕಾರಣವಾಗಿದೆ. ಕೊಡವ ಜನಾಂಗದವರನ್ನು ಎಸ್‌ಟಿ ಪಟ್ಟಿಗೆ ಸೇರ್ಪಡೆಗೊಳಿಸಬೇಕು ಎಂದು ಆಗ್ರಹಿಸಿದರು.

ಇದೇ ವೇಳೆ ಕೊಡವ ಲ್ಯಾಂಡ್‌ಗೆ ಮಾನ್ಯತೆ ನೀಡುವುದು, ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಹಕ್ಕೋತ್ತಾಯ ಮಂಡಿಸಲಾಯಿತು. ಪ್ರತಿಭಟನೆಯಲ್ಲಿ ಪಿ.ಕೆ.ಮುತ್ತಣ್ಣ, ಬೊಟ್ಟೋಳಂಡ ಕುಮಾರ ಉತ್ತಪ್ಪ, ಚಿಕ್ಕಂಡ ಉತ್ತಪ್ಪ, ಚಿಕ್ಕಂಡ ಪೊನ್ನಪ್ಪ, ದಾಸಂಡ ಕಿರಣ್, ಶಿವು ಉತ್ತಯ್ಯ, ನಾಗಚೇಟ್ಟಿರ ಮನು ಮಂದಣ್ಣ, ನಾಗಚೇಟ್ಟಿರ ನಂದ, ಕೇಚಿರ ಬಾಗೇಶ್, ಕೆಚೀರ ಪ್ರಿನ್ಸ್, ಕಲ್‌ಮಾಡಂಡ ಸುರೇಶ್, ಕಂಜಿತಂಡ ಐಯ್ಯಣ್ಣ, ದಾಸಂಡ ಜಗದೀಶ್, ಪುಲಿಯಂಡ ಮುತ್ತಣ್ಣ, ರಂಜಿತ್ ಕಾರ್ಯಪ್ಪ, ಕಾಯಪಂಡ ತಮ್ಮಯ್ಯ ಮತ್ತಿತರರು ಭಾಗವಹಿಸಿದ್ದರು.

ಕಾಡುಕೋಣ ದಾಳಿ: ವ್ಯಕ್ತಿ ಕಾಲಿಗೆ ಗಾಯ



ಮಡಿಕೇರಿ ಜಿಲ್ಲಾಸ್ಪತ್ರೆಗೆ ಭೇಟಿ ನೀಡಿದ ಸಂಕೇತ್ ಪೂವಯ್ಯ, ಗಾಯಾಳು ತಿಮ್ಮನ ಯೋಗ ಕ್ಷೇಮ ವಿಚಾರಿಸಿದರು.

ಗೋಣಿಕೊಪ್ಪ, ಆ.18–ಕಾಡುಕೋಣ ದಾಳಿಯಿಂದ ವ್ಯಕ್ತಿ ತೀವ್ರವಾಗಿ ಗಾಯಗೊಂಡಿರುವ ಘಟನೆ ತಿತಿಮತಿ ಸಮೀಪದ ಬೊಗ್ಗನ ಹಡ್ಲುವಿನಲ್ಲಿ ನಡೆದಿದೆ.

ಬೊಗ್ಗನಹಡ್ಲು ಹಾಡಿ ನಿವಾಸಿ ಜೇನು ಕುರುಬರ ತಿಮ್ಮ(45) ಗಂಭೀರ ಗಾಯಗೊಂಡವರು. ತಿಮ್ಮ ಎಂದಿನಂತೆ ಮನೆ ಸಮೀಪದಲ್ಲಿ ಕೆಲಸ ಮಾಡುತ್ತಿದ್ದ ಸಂದರ್ಭ ಕಾಡುಕೋಣ ಏಕಾಏಕಿ ಎದುರಾಗಿ ದಾಳಿ ನಡೆಸಿದೆ. ಕೊಂಬಿನಿಂದ ತಿವಿದ ಪರಿಣಾಮ ತಿಮ್ಮನ ಎಡ ಕಾಲಿಗೆ ಗಂಭೀರವಾಗಿ ಗಾಯವಾಗಿದ್ದು, ಮಡಿಕೇರಿ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.

ಸ್ಥಳಕ್ಕೆ ಅರಣ್ಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ, ಪರಿಶೀಲನೆ ನಡೆಸಿದರು. ವಿಷಯ ತಿಳಿದು ಸ್ಪಂದಿಸಿದ ರಾಜ್ಯ ವನ್ಯಜೀವಿ ಸಂರಕ್ಷಣಾ ಸಮಿತಿ ಸದಸ್ಯ ಸಂಕೇತ್ ಪೂವಯ್ಯ ಜಿಲ್ಲಾಸ್ಪತ್ರೆಗೆ ಭೇಟಿ ನೀಡಿ, ಗಾಯಾಳುವಿನ ಯೋಗ ಕ್ಷೇಮ ವಿಚಾರಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಂಕೇತ್ ಪೂವಯ್ಯ, ಕಾಡುಕೋಣ ದಾಳಿ ಕುರಿತು ಶಾಸಕ ಅಜ್ಜಿಕುಟ್ಟಿರ ಎಸ್. ಪೊನ್ನಣ್ಣ ಅವರ ಗಮನಕ್ಕೆ ತರಲಾಗಿದೆ. ಗಾಯಾಳುವಿಗೆ ಸೂಕ್ತ ಚಿಕಿತ್ಸೆ ನೀಡುವಂತೆ ಅರಣ್ಯಾಧಿಕಾರಿಗಳು ಮತ್ತು ವೈದ್ಯರಿಗೆ ಶಾಸಕರು ಸೂಚಿಸಿದ್ದಾರೆ ಎಂದು ಹೇಳಿದರು.

ಜೂಜಾಡುತ್ತಿದ್ದ 7 ಮಂದಿ ಬಂಧನ

ಮಡಿಕೇರಿ, ಆ.18–ಶನಿವಾರಸಂತೆ ಯಶಸ್ವಿ ಕಲ್ಯಾಣ ಮಂಟಪದ ಹಿಂಭಾಗದ ತ್ಯಾಗರಾಜ ಕಾಲೋನಿಯ ಲೈನ್ ಮನೆಯೊಂದರ ಬಳಿ ಜೂಜಾಡುತ್ತಿದ್ದ 7 ಜನರನ್ನು ಪೊಲೀಸರು ಬಂಧಿಸಿದ್ದಾರೆ.

ಚಿಕ್ಕತೋಳೂರು ಗ್ರಾಮದ ಸಿ.ಎಂ.ಶರೀಫ್, ಗುಂಡುರಾವ್ ಬಡಾವಣೆಯ ರೆಹಮಾನ್, ಅಸ್ಲಾಂನ ಶಾಹೀದ್ ಇಸ್ಲಾಂ, ತ್ಯಾಗರಾಜ ಕಾಲೋನಿಯ ಶಫೀಕ್ ಉಲ್, ಹಾಸನ ಕಲರೆ ಗ್ರಾಮದ ಮುಮ್ತಾಜ್, ಅಸ್ಲಾಂ ಮೂಲದ ಇರ್ಷಾದ್, ಶಹಜಾನ್ ಬಂಧಿತರು. ಇವರು ತ್ಯಾಗರಾಜ ಕಾಲೋನಿಯ ಲೈನ್ ಮನೆಯೊಂದರ ಬಳಿ ಜೂಜಾಡುತ್ತಿದ್ದರು. ಈ ವೇಳೆ ದಾಳಿ ನಡೆಸಿದ ಪೊಲೀಸರು, ಎಲ್ಲರನ್ನು ಬಂಧಿಸಿ, ಪಣವಾಗಿಟ್ಟಿದ್ದ 17,050 ರೂ. ವಶಕ್ಕೆ ಪಡೆದರು.

ಕುಸಿಯುವ ಸ್ಥಿತಿಯಲ್ಲಿ ವಿದ್ಯುತ್ ಕಂಬ



ಮಡಿಕೇರಿ, ಆ.18–ಕುಶಾಲನಗರ ತಾಲೂಕಿನ ಕೂಡುಮಂಗಳೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೂಡ್ಲೂರು ಕೈಗಾರಿಕಾ ಬಡಾವಣೆ ವ್ಯಾಪ್ತಿಯಲ್ಲಿ ಟ್ರಾನ್ಸ್‌ಫಾರ್ಮರ್‌ನ ವಿದ್ಯುತ್ ಕಂಬ ಕುಸಿದು ಬೀಳುವ ಹಂತದಲ್ಲಿದ್ದು, ಮುನ್ನೆಚ್ಚರಿಕೆ ಕೈಗೊಳ್ಳಬೇಕಾದ ಸೆಸ್ಕ್ ನಿರ್ಲಕ್ಷ್ಯ ವಹಿಸಿದೆ.

ಟ್ರಾನ್ಸ್‌ಫಾರ್ಮರ್‌ನ ಎರಡು ಕಂಬಗಳಲ್ಲಿ ಸಿಮೆಂಟ್ ಉದುರಿ ಕಬ್ಬಿಣದ ರಾಡ್ ಹಾಗೂ ತಂತಿಗಳು ಗೋಚರವಾಗಿ ಅಸ್ಥಿಪಂಜರದ ರೀತಿ ಕಾಣುತ್ತಿದೆ. ಕಂಬ ಬಿದ್ದರೆ ಜೀವ ಹಾನಿಯಾಗುವ ಸಾಧ್ಯತೆಗಳಿದ್ದು, ಜನ ಹಾಗೂ ಪ್ರಾಣಿಗಳ ರಕ್ಷಣೆ ದೃಷ್ಟಿಯಿಂದ ಕಂಬವನ್ನು ಬದಲಾಯಿಸಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

ಕೂಡ್ಲೂರು ಇಂಡಸ್ಟ್ರಿಯಲ್ ಏರಿಯಾ ಭಾಗದಲ್ಲಿ ಕೂಲಿ ಕಾರ್ಮಿಕರೇ ಹೆಚ್ಚಾಗಿ ನೆಲೆಸಿದ್ದು, ಟ್ರಾನ್ಸ್‌ಫಾರ್ಮರ್ ಕಂಬವನ್ನು ಬದಲಾವಣೆ ಮಾಡುವಂತೆ ಹಲವು ಬಾರಿ ಸೆಸ್ಕ್‌ಗೆ ತಿಳಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ವನ್ಯಜೀವಿ–ಮಾನವ ಸಂಘರ್ಷ ಪರಿಹಾರಕ್ಕೆ ಎಲ್ಲರ ಸಹಕಾರ ಅಗತ್ಯ



ಸಂಕೇತ್ ಪೂವಯ್ಯ

ಮಡಿಕೇರಿ, ಆ.18–ವನ್ಯಜೀವಿ–ಮಾನವ ಸಂಘರ್ಷಕ್ಕೆ ವೈಜ್ಞಾನಿಕವಾಗಿ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಎಲ್ಲರ ಸಹಕಾರ ಅಗತ್ಯ ಎಂದು ರಾಜ್ಯ ವನ್ಯಜೀವಿ ಸಂರಕ್ಷಣಾ ಸಮಿತಿ ಸದಸ್ಯ ಮೇರಿಯಂಡ ಸಂಕೇತ್ ಪೂವಯ್ಯ ಮನವಿ ಮಾಡಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವನ್ಯಜೀವಿ–ಮಾನವ ಸಂಘರ್ಷಕ್ಕೆ ಸರ್ಕಾರದಿಂದಲೇ ವೈಜ್ಞಾನಿಕವಾಗಿ ಪರಿಹಾರ ಕಂಡು ಹಿಡಿಯುವ ಕಾರ್ಯ ನಡೆಯುತ್ತಿದೆ. ಅತೀ ಹೆಚ್ಚು ವನ್ಯಜೀವಿ–ಮಾನವ ಸಂಘರ್ಷ ನಡೆಯುವ ರಾಜ್ಯಗಳಲ್ಲಿ ಕರ್ನಾಟಕ ಒಂದಾಗಿದ್ದು, ಅದರಲ್ಲೂ ಕೊಡಗು ಜಿಲ್ಲೆಯ ವಿರಾಜಪೇಟೆ ಕ್ಷೇತ್ರದಲ್ಲಿ ಸಾಕಷ್ಟು ಪ್ರಾಣಹಾನಿ, ಮಾನವನ ಅಂಗವೈಫಲ್ಯ, ಬೆಳೆಹಾನಿ ಸಂಭವಿಸಿ ರೈತರು, ಕಾರ್ಮಿಕರು ಬೀದಿಗೆ ಬೀಳುವಂತಾಗಿದೆ ಎಂದರು.

ವಿರಾಜಪೇಟೆ ಶಾಸಕ ಎ.ಎಸ್. ಪೊನ್ನಣ್ಣ ಈ ಬಗ್ಗೆ ಸರ್ಕಾರಕ್ಕೆ ಅರಿವು ಮೂಡಿಸಿದ್ದು, ಅರಣ್ಯ ಸಚಿವರನ್ನು ಖುದ್ದು ಜಿಲ್ಲೆಗೆ ಕರೆತಂದು ಸಾವು–ನೋವುಗಳು ಉಂಟಾದ ಕುಟುಂಬಗಳಿಗೆ ರೈತರ ಜಮೀನುಗಳಿಗೆ ಭೇಟಿ ನೀಡಿ, ಸಮಸ್ಯೆಯ ತೀವ್ರತೆಯನ್ನು ಮನವರಿಕೆ ಮಾಡಿಕೊಟ್ಟಿದ್ದಾರೆ. ಅಲ್ಲದೆ, ವಿಶ್ವ ಆನೆ ದಿನಾಚರಣೆ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆ ಆನೆ ಮತ್ತು ಮಾನವ ಸಂಘರ್ಷಕ್ಕೆ ವೈಜ್ಞಾನಿಕವಾಗಿ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ನಡೆದ ವಿಚಾರ ಸಂಕಿರಣದಲ್ಲಿ ಶಾಸಕ ಎ.ಎಸ್.ಪೊನ್ನಣ್ಣ ವಿಶೇಷ ಆಸಕ್ತಿ ವಹಿಸಿ, ತಾಂತ್ರಿಕ ತೊಡಕುಗಳನ್ನು ನಿವಾರಣೆ ಮಾಡಲು ಮೊದಲ ಹೆಜ್ಜೆ ಇಟ್ಟಿದ್ದಾರೆ. ಈ ಕಾರ್ಯದಲ್ಲಿ 5 ರಾಜ್ಯಗಳ ಮುಖ್ಯಮಂತ್ರಿ, ವಿದೇಶದ ತಜ್ಞರು ಪಾಲ್ಗೊಂಡಿದ್ದರು ಎಂದು ಹೇಳಿದರು.

ಅರಣ್ಯದಂಚಿನಲ್ಲಿ ಕಂದಕ, ಸೋಲಾರ್ ಬೇಲಿ ನಿರ್ಮಾಣ ಹಾಗೂ ಹೆಚ್ಚಿನ ರೈಲ್ವೆ ಕಂಬಿಗಳನ್ನು ಅಳವಡಿಸಲು, ಬೆಳೆಹಾನಿ ಪರಿಹಾರ, ಕಾನೂನು ಮಾರ್ಪಾಡು, ಅರ್ಜಿಗಳ ವಿಲೇವಾರಿ, ವೈಜ್ಞಾನಿಕ ಯೋಜನೆಗೆ ಪ್ರಮುಖ್ಯತೆ ನೀಡಿ ಸರ್ಕಾರದ ಗಮನ ಸೆಳೆಯಲಾಗುವುದು. 3 ವರ್ಷ ಅವಧಿಯಲ್ಲಿ ಕಾಡಾನೆ–ಮಾನವ ಸಂಘರ್ಷಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ರಾಜ್ಯ ವನ್ಯಜೀವಿ ಸಂರಕ್ಷಣಾ ಸಮಿತಿ ಸದಸ್ಯ ಸಂಕೇತ್ ಪೂವಯ್ಯ ಹೇಳಿದರು.

ಗಣೇಶ ಮೂರ್ತಿ ಪ್ರತಿಷ್ಠಾಪನೆ ಸಮಿತಿ ಸದಸ್ಯರ ಸಭೆ...



ವಿರಾಜಪೇಟೆ ಗ್ರಾಮಾಂತರ ಪೊಲೀಸ್ ಠಾಣೆ ಆವರಣದಲ್ಲಿ ಡಿವೈಎಸ್‌ಪಿ ಮೋಹನ್ ಕುಮಾರ್ ನೇತೃತ್ವದಲ್ಲಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಸಮಿತಿ ಸದಸ್ಯರ ಸಭೆ ನಡೆಯಿತು. ವೃತ್ತ ನಿರೀಕ್ಷಕ ಶಿವರುದ್ರ, ಗ್ರಾಮಾಂತರ ಠಾಣಾಧಿಕಾರಿ ಮಂಜುನಾಥ್, ನಗರ ಠಾಣಾಧಿಕಾರಿ ಎಚ್.ಎಸ್. ಪ್ರಮೋದ್, ಬಿ.ಎಸ್.ವಾಣಿ ಇದ್ದರು.

ಕರ್ನಾಟಕ ಸಂಘದಲ್ಲಿ ಧ್ವಜಾರೋಹಣ...



ವಿರಾಜಪೇಟೆ ಕರ್ನಾಟಕ ಸಂಘದ ಆವರಣದಲ್ಲಿ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಧ್ವಜಾರೋಹಣ ನೆರವೇರಿಸಲಾಯಿತು. ಸಂಘದ ಅಧ್ಯಕ್ಷ ಮಾಳೇಟಿರ ಎಂ.ಬೆಲ್ಲು ಬೋಪಯ್ಯ, ಉಪಾಧ್ಯಕ್ಷ ಚೇನಂಡ ಈ.ಗಿರೀಶ್ ಪೂಣಚ್ಚ, ಕಾರ್ಯದರ್ಶಿ ಮುಂಡ್ಯೋಳಂಡ ಕುಸುಮಾ ಸೋಮಣ್ಣ, ಕೋಶಾಧಿಕಾರಿ ಕೋಟೆರ ಯು.ಗಣೇಶ್ ತಮ್ಮಯ್ಯ, ನಿರ್ದೇಶಕರಾದ ಸಿ.ಎಂ.ಸುರೇಶ್ ನಾಣಯ್ಯ, ಪಿ.ಎಸ್.ನಂದ, ಎಂ.ರಾಣು ಮಂದಣ್ಣ, ಬಿ.ಎಂ.ಸುರೇಶ್, ಬಿ.ಆರ್.ಗಣೇಶ್, ಎಂ.ಬಿ.ದೇವಯ್ಯ, ಬಿ.ಗಣೇಶ್ ಬಿದ್ದಪ್ಪ ಇದ್ದರು.

ವೈದ್ಯೆ ಅತ್ಯಾಚಾರ, ಹತ್ಯೆ ಖಂಡಿಸಿ

ಕರ್ನಾಟಕ ಸೇನಾ ಪಡೆ ಪ್ರತಿಭಟನೆ



ಚಾಮರಾಜನಗರದಲ್ಲಿ ಕೋಲ್ಕತ್ತಾ ವೈದ್ಯೆ ಹತ್ಯೆ ಆರೋಪಿಗಳಿಗೆ ಗಲ್ಲುಶಿಕ್ಷೆ ವಿಧಿಸುವಂತೆ ಒತ್ತಾಯಿಸಿ ಕರ್ನಾಟಕ ಸೇನಾ ಪಡೆ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಚಾಮರಾಜನಗರ, ಆ.18–ಕೋಲ್ಕತ್ತಾ ವೈದ್ಯೆ ಮೇಲೆ ಅತ್ಯಾಚಾರ ಹಾಗೂ ಕೊಲೆ ಆರೋಪಿಗಳಿಗೆ ಗಲ್ಲು ಶಿಕ್ಷೆ ವಿಧಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ಸೇನಾಪಡೆ ಕಾರ್ಯಕರ್ತರು ನಗರದಲ್ಲಿ ಪ್ರತಿಭಟನೆ ನಡೆಸಿದರು.

ಚಾಮರಾಜೇಶ್ವರ ಉದ್ಯಾನ ಮುಂಭಾಗ ಸೇನಾಪಡೆ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ನೇತೃತ್ವದಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು, ಕನ್ನಡ ಧ್ವಜ ಹಿಡಿದು ಅಲ್ಲಿಂದ ಭುವನೇಶ್ವರಿ ವೃತ್ತಕ್ಕೆ ತೆರಳಿ ಅಲ್ಲಿನ ರಾಷ್ಟ್ರೀಯ ಹೆದ್ದಾರಿಯಲ್ಲಿ ಕೆಲಕಾಲ ರಸ್ತೆ ತಡೆ ನಡೆಸಿ, ಕೋಲ್ಕತ್ತಾ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪಶ್ಚಿಮಬಂಗಾಳದಲ್ಲಿ ಕಿಡಿಗೇಡಿ ಆಸ್ಪತ್ರೆಗೆ ನುಗ್ಗಿ ವೈದ್ಯೆ ಮೇಲೆ ಅತ್ಯಾಚಾರ ನಡೆಸಿ, ಹತ್ಯೆ ಮಾಡಿರುವುದು ಇಡೀ ಮನುಕುಲಕ್ಕೆ ಮಾಡಿದ ಅಪರಾಧ. ಇಂತಹ ಪ್ರಕರಣವನ್ನು ತಡೆಗಟ್ಟುವಲ್ಲಿ ಪಶ್ಚಿಮ ಬಂಗಾಳ ಸರ್ಕಾರ ವಿಫಲವಾಗಿದೆ. ಅಲ್ಲಿ ಯಾರಿಗೂ ರಕ್ಷಣೆ ಇಲ್ಲ. ಅತ್ಯಾಚಾರಿಗಳನ್ನು ಎನ್‌ಕೌಂಟರ್ ಮಾಡಬೇಕು. ಇಂತಹ ಘಟನೆಗಳು ಮರುಕಳಿಸದಂತೆ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಶಾ.ಮುರಳಿ, ನಿಜಧ್ವನಿ ಗೋವಿಂದರಾಜು, ಪಣ್ಯದಹುಂಡಿ ರಾಜು, ಚಾ.ವೆಂ.ರಾಜಗೋಪಾಲ್, ನಂಜುಂಡಶೆಟ್ಟಿ, ಚಾ.ರಾ.ಕುಮಾರ್, ಮಹೇಶ್‌ಗೌಡ, ರವಿಚಂದ್ರ ಪ್ರಸಾದ್, ಹುಂಡಿ ಬಸವಣ್ಣ, ವರದನಾಯಕ, ರವಿ, ಸಿದ್ದರಾಜು, ಚಾ.ಸಿ.ಸಿದ್ದರಾಜು, ಆಟೋ ಲಿಂಗರಾಜು, ತಾಂಡವಮೂರ್ತಿ ಇತರರು ಭಾಗವಹಿಸಿದ್ದರು.

ಹೊಂಡರಬಾಳು ಶಾಲೆಗೆ ಕಲಿಕಾ ಸಾಮಗ್ರಿ ಕೊಡುಗೆ



ಹೊಂಡರಬಾಳು ಶಾಲಾ ವಿದ್ಯಾರ್ಥಿಗಳಿಗೆ ನಟ ಗಣೇಶ್ ರಾವ್ ಕಲಿಕಾ ಸಾಮಗ್ರಿ ವಿತರಿಸಿದರು.

ಕೊಳ್ಳೇಗಾಲ, ಆ.18– ಸಿನಿಮಾ ಮತ್ತು ರಂಗಭೂಮಿ ಕಲಾವಿದ ಗಣೇಶ್ ರಾವ್ ತಾವು ಕಲಿತ ತಾಲೂಕಿನ ಹೊಂಡರಬಾಳು ಸರ್ಕಾರಿ ಪ್ರಾಥಮಿಕ ಶಾಲೆಗೆ ಕಲಿಕಾ ಸಾಮಗ್ರಿಗಳನ್ನು ಕೊಡುಗೆ ನೀಡಿದರು.

ಬೆಂಗಳೂರಿನ ಜಿಆರ್ ಫಿಲಂ ವತಿಯಿಂದ ಗಣೇಶ್ ರಾವ್, ಕ್ರೀಡಾ, ಲೇಖನ ಸಾಮಗ್ರಿ, ನೋಟ್‌ಬುಕ್ ಮತ್ತು ಸಮವಸ್ತ್ರವನ್ನು ಶಂಖಿನ ಮಠದ ಶ್ರೀ ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ, ಕ್ಷೇತ್ರ ಶಿಕ್ಷಣಾಧಿಕಾರಿ ಮಂಜುಳಾ, ಮುಖ್ಯಶಿಕ್ಷಕ ವಾಸು ಸಮ್ಮುಖದಲ್ಲಿ ತಮ್ಮ ತಾಯಿ ಸರಸುಬಾಯಿ, ಪುತ್ರಿ ಮಧು, ಅಳಿಯ ನ್ಯಾಷನಲ್ ಆಟಗಾರ ಕಾರ್ತಿಕ್ ಮಧು ಅವರ ಸಮ್ಮುಖದಲ್ಲಿ ಕೊಡುಗೆ ನೀಡಿದರು.

ಇದೇ ವೇಳೆ ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ರಂಗಸ್ವಾಮಿ, ಬಿಆರ್‌ಸಿ ಮಹದೇವ ಕುಮಾರ್, ಶಿಕ್ಷಣ ಸಂಯೋಜಕ ನಾಗರಾಜು, ಶರತ್ ಬಾಬು, ಬಸವರಾಜು, ಗ್ರಾಮದ ಮುಖಂಡರಾದ ಗುರುಸ್ವಾಮಿ, ರಾಗಿಣಿ, ಚಿನ್ನರಾಜು, ಹರ್ಷ, ಮಲ್ಲಿಕಾರ್ಜುನಪ್ಪ, ಸಿದ್ದಲಿಂಗಸ್ವಾಮಿ, ರಮೇಶ, ಮಲ್ಲೆಗೌಡ, ಅರಸಶೆಟ್ಟಿ, ಗಿರಿಗೌಡ, ಶಿವಪ್ಪಗೌಡ, ಮತೀನ್, ಮಾದೇಶ ಇನ್ನಿತರರಿದ್ದರು.

ಟ್ರ್ಯಾಕ್ಟರ್ ರ್ಯಾಲಿಗೆ ಅವಕಾಶ ನೀಡದೆ ರೈತರ ಬಂಧನ

ಪೊಲೀಸರ ಕ್ರಮ ಖಂಡಿಸಿ ರೈತರ ಪ್ರತಿಭಟನೆ



ಚಾ.ನಗರದಲ್ಲಿ ಪೊಲೀಸ್ ವಿರುದ್ಧ ರಾಜ್ಯ ಕಬ್ಬು ಬೆಳೆಗಾರ ಸಂಘದ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಚಾಮರಾಜನಗರ, ಆ.18– ಸ್ವಾತಂತ್ರ್ಯ ದಿನಾಚರಣೆ ದಿನ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಹಮ್ಮಿಕೊಂಡಿದ್ದ ರೈತರ ಟ್ರ್ಯಾಕ್ಟರ್ ರ್ಯಾಲಿಗೆ ಅವಕಾಶ ನೀಡದೆ, ರೈತರ ಬಂಧಿಸಿದ ಪೊಲೀಸ್ ಕ್ರಮದ ವಿರುದ್ಧ ರಾಜ್ಯ ಕಬ್ಬು ಬೆಳೆಗಾರ ಸಂಘದ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರವಾಸಿ ಮಂದಿರದಲ್ಲಿ ಸಂಘದ ಮುಖಂಡರು ಸಭೆ ನಡೆಸಿದ ನಂತರ ಎಸ್ಪಿ ಕಚೇರಿ ಮುಂದೆ ಪ್ರತಿಭಟನೆ ಮಾಡಿದರು. ರಾಜ್ಯದ ಎಲ್ಲಾ ಕಡೆ ರೈತರು ಟ್ರ್ಯಾಕ್ಟರ್ ರ್ಯಾಲಿ ನಡೆಸಿದ್ದಾರೆ. ನಮ್ಮ ಜಿಲ್ಲೆಯಲ್ಲಿ ಅವಕಾಶ ನೀಡಲಿಲ್ಲ ಎಂದು ಆರೋಪಿಸಿದ ಮುಖಂಡರು, ರೈತರ ಪ್ರತಿಭಟನೆಯನ್ನು ಹತ್ತಿಕ್ಕುವುದು ಸರಿಯಾದ ಕ್ರಮವಲ್ಲ ಎಂದು ಆಕ್ರೋಶ ವ್ಯಕ್ತಪಡಿದರು. ಇದೇ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಕವಿತಾ ಮಾತನಾಡಿ, ಪ್ರತಿಭಟನೆ ಕೈಬಿಡಿ ಸ್ವಾತಂತ್ರ್ಯ ದಿನಾಚರಣೆ ಇದ್ದಿದ್ದರಿಂದ ಸ್ವಲ್ಪ ತೊಂದರೆ ಆಗಿದೆ. ಮುಂದೆ ಈ ರೀತಿ ರೈತರಿಗೆ ಪೊಲೀಸ್ ಇಲಾಖೆಯಿಂದ ಪ್ರತಿಭಟನೆ, ರ್ಯಾಲಿಗಳಿಗೆ ಯಾವುದೇ ತೊಂದರೆ ಆಗದಂತೆ ನೋಡಿಕೊಳ್ಳುವುದಾಗಿ ಭರವಸೆ ನೀಡಿದರು.

ಪ್ರತಿಭಟನೆಯಲ್ಲಿ ಸಂಘದ ರಾಜ್ಯ ಕಾರ್ಯದರ್ಶಿ ಅತ್ತಹಳ್ಳಿ ದೇವರಾಜ್, ಮೈಸೂರು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬರಡನಪುರ ನಾಗರಾಜ್, ಚಾಮರಾಜನಗರ ಜಿಲ್ಲಾ ಕಾರ್ಯಾಧ್ಯಕ್ಷ ಉಡಿಗಾಲ ರೇವಣ್ಣ, ಉಪಾಧ್ಯಕ್ಷ ಮೂಡಲಪುರ ಪಟೇಲ್ ಶಿವಮೂರ್ತಿ, ಕಾರ್ಯದರ್ಶಿ ಎಚ್.ಮೂಕಳ್ಳಿ ಮಹದೇವಸ್ವಾಮಿ, ತಾಲೂಕು ಅಧ್ಯಕ್ಷ ನಂಜಪುರ ಸತೀಶ್, ಉಪಾಧ್ಯಕ್ಷ ಹೆಗ್ಗೋಠಾರ ಶಿವಸ್ವಾಮಿ, ಮೂಕಳ್ಳಿ ಶಿವಕುಮಾರ್, ರಾಜು, ಮಾರ್ಬಳ್ಳಿ ನೀಲಕಂಠಪ್ಪ, ಸಿದ್ದರಾಮ, ಉಡಿಗಾಲ ಗುರುಪ್ರಸಾದ್, ಹಿಂದುವಾಡಿ ಮಾದೇಶ್, ಮಂಜು, ಹೆಗ್ಗಡಹಳ್ಳಿ ಮಾದೇವಪ್ಪ, ಚಾಮರಾಜನಗರ ಅಮರ್‌ಖಾನ್, ಬಡಗಲಪುರ ಹರ್ಷ, ಬಸವರಾಜು ಇತರರು ಭಾಗವಹಿಸಿದ್ದರು.

ಭಾರತೀಯ ಸಂಸ್ಕೃತಿ ಉಳಿಸಿ : ಎಸ್‌ಪಿ ಕವಿತಾ

ಚಾಮರಾಜನಗರ: ಪ್ರತಿಯೊಬ್ಬರೂ ಭಾರತೀಯ ಸಂಸ್ಕೃತಿಯನ್ನು ಉಳಿಸಿ ಬೆಳೆಸಿ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ.ಟಿ.ಕವಿತಾ ತಿಳಿಸಿದರು.

ಶ್ರೀ ಚಾಮರಾಜೇಶ್ವರ ದೇವಸ್ಥಾನ ಆವರಣದಲ್ಲಿ ಶ್ರೀ ವರಮಹಾಲಕ್ಷ್ಮಿ ಸಾಂಸ್ಕೃತಿಕ ಕ್ರೀಡಾ ಸೇವಾ ಸಂಸ್ಥೆ, ಜೈ ಭುವನೇಶ್ವರಿ ಕನ್ನಡ ಯುವ ವೇದಿಕೆ ಆಶ್ರಯದಲ್ಲಿ ವರಮಹಾಲಕ್ಷ್ಮಿ ಹಬ್ಬದ ಪ್ರಯುಕ್ತ ವಿಶೇಷ ಪೂಜೆ, 101 ಮಹಿಳೆಯರಿಗೆ ಸೀರೆ, ಅರಿಶಿನ ಕುಂಕುಮ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮನುಷ್ಯನಿಗೆ ಸುಖ, ಶಾಂತಿ, ನೆಮ್ಮದಿ ಸಿಗಬೇಕಾದರೆ ಧಾರ್ಮಿಕ ಕೇಂದ್ರಗಳಿಗೆ ಭೇಟಿ ನೀಡುವ ಅಭಿರುಚಿ ಬೆಳೆಸಿಕೊಳ್ಳಬೇಕು ಎಂದರು.

ಸರ್ಕಾರ ಮಹಿಳೆಯರಿಗಾಗಿ ಹಲವಾರು ಯೋಜನೆಗಳನ್ನು ಜಾರಿಗೊಳಿಸಿದೆ. ಅದನ್ನು ಉಪಯೋಗಿಸಿಕೊಂಡು ತಮ್ಮ ಮಕ್ಕಳನ್ನು ಮುಖ್ಯವಾಹಿನಿಗೆ ತರಬೇಕು ಎಂದು ತಿಳಿಸಿದರು.

ತಹಸೀಲ್ದಾರ್ ಗಿರಿಜಾ, ಮುಜರಾಯಿ ಇಲಾಖೆ ಅಧಿಕಾರಿ ಮಹೇಶ್, ಇನ್ನರ್‌ವ್ಹೀಲ್ ಸಂಸ್ಥೆ ಮಾಜಿ ಅಧ್ಯಕ್ಷೆ ಲಕ್ಷ್ಮಿ, ಕಿರುತೆರೆ ನಟಿ ರಕ್ಷಾಶ್ರೀ, ವರಮಹಾಲಕ್ಷ್ಮಿ ಸಾಂಸ್ಕೃತಿಕ ಕ್ರೀಡಾ ಸೇವಾ ಸಂಸ್ಥೆ ಅಧ್ಯಕ್ಷ ಜಿ.ಬಂಗಾರು, ಪ್ರಧಾನ ಕಾರ್ಯದರ್ಶಿ ಮಾದಲಾಂಬಿಕೆ ಬಿ, ಸಂಸ್ಥೆ ಸದಸ್ಯರಾದ ಮಾಳವಿಕಾ, ನಿಹಾರಿಕಾ, ರಕ್ಷಿತಾ, ಪ್ರಿಯ, ಅಮೂಲ್ಯ, ದೇವಸ್ಥಾನದ ಅರ್ಚಕರಾದ ರಾಮಕೃಷ್ಣ ಭಾರದ್ವಾಜ್, ಅನಿಲ್ ಕುಮಾರ್ ದೀಕ್ಷಿತ್, ಚಿಕ್ಕಣ್ಣ, ಕುಮಾರ್, ನೂರಾರು ಮಹಿಳೆಯರು, ವಿದ್ಯಾರ್ಥಿಗಳು, ಭಕ್ತಾದಿಗಳು, ಪದಾಧಿಕಾರಿಗಳು ಇದ್ದರು.

ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಚಾಲನೆ

ಚಾಮರಾಜನಗರ: ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಜನ್ಮ ದಿನಾಚರಣೆ ಅಂಗವಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ನಗರದಲ್ಲಿ ಜಿಲ್ಲಾ ಮಟ್ಟದ ಕ್ರೀಡಾಕೂಟ ಆಯೋಜಿಸಲಾಗಿತ್ತು. ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಕ್ರೀಡಾಕೂಟಕ್ಕೆ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಕುಮಾರ್ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ವಿದ್ಯಾರ್ಥಿಗಳಿಗೆ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆ ಏರ್ಪಡಿಸಲಾಗಿದೆ. ಇದರಲ್ಲಿ 100, 200 ಮೀಟರ್ ಓಟ, ಉದ್ದ ಹಾಗೂ ಎತ್ತರ ಜಿಗಿತ, ಗುಂಡು ಎಸೆತ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಲಿಂಗರಾಜು, ನಿಲಯ ಪಾಲಕರಾದ ಲಿಂಗಣ್ಣ, ಎಚ್.ಬಿ.ಸ್ವಾಮಿ, ಅಶ್ವಥ್ ಮಂಜುನಾಥ್, ಚಿನ್ನಸ್ವಾಮಿ, ಯುವ ಸ್ಪಂದನಾ ಕೇಂದ್ರದ ಗುರುರಾಜ್, ವಿದ್ಯಾರ್ಥಿಗಳು ಭಾಗವಹಿಸಿದ್ದರು.



ಚಾಮರಾಜನಗರದ ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ಕ್ರೀಡಾಕೂಟಕ್ಕೆ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಕುಮಾರ್ ಚಾಲನೆ ನೀಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಖಂಡಿಸಿ

ಕುರುಬರ ಸಂಘದಿಂದ ಪಂಜಿನ ಮೆರವಣಿಗೆ



ಚಾಮರಾಜನಗರದಲ್ಲಿ ಪ್ರಾಸಿಕ್ಯೂಷನ್ ಅನುಮತಿ ಖಂಡಿಸಿ ತಾಲೂಕು ಕುರುಬರ ಸಂಘದ ವತಿಯಿಂದ ಪಂಜಿನ ಮೆರವಣಿಗೆ ನಡೆಸಲಾಯಿತು.

ಚಾಮರಾಜನಗರ, ಆ.18–ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಖಂಡಿಸಿ ತಾಲೂಕು ಕುರುಬರ ಸಂಘದ ವತಿಯಿಂದ ನಗರದಲ್ಲಿ ಭಾನುವಾರ ಸಂಜೆ ಪಂಜಿನ ಮೆರವಣಿಗೆ ನಡೆಸಲಾಯಿತು.

ಚಾಮರಾಜೇಶ್ವರ ದೇವಸ್ಥಾನ ಮುಂಭಾಗದಲ್ಲಿ ತಾಲೂಕು ಕುರುಬರ ಸಂಘದ ಅಧ್ಯಕ್ಷ ಉಮೇಶ್ ಎಸ್‌ಪಿಕೆ ನೇತೃತ್ವದಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು ಪಂಜು ಹಿಡಿದು ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತದಲ್ಲಿ ತೆರಳಿ ಕೆಲಕಾಲ ಪ್ರತಿಭಟನೆ ನಡೆಸಿದರು. ರಾಜ್ಯಪಾಲರು ರಾಜ್ಯ ಬಿಟ್ಟು ತೊಲಗಲಿ ಎಂದು ಘೋಷಣೆ ಕೂಗಿದರು.

ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕೇಂದ್ರ ಸರ್ಕಾರದ ಕೈಗೊಂಬೆಯಾಗಿ ಮುಡಾ ನಿವೇಶನ ಹಂಚಿಕೆ ಪ್ರಕರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಕರಣ ದಾಖಲಿಸಲು ಪೂರ್ವಾನುಮತಿ ನೀಡಿರುವುದು ಖಂಡನೀಯ. ಕೂಡಲೇ ರಾಜ್ಯಪಾಲರು ಅನುಮತಿ ವಾಪಸ್ ಪಡೆಯಬೇಕು. ಇಲ್ಲದಿದ್ದರೆ ಹೋರಾಟ ಮುಂದುವರೆಸುವುದಾಗಿ ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಸಂಘದ ಗೌರವಾಧ್ಯಕ್ಷ ಬೆಳ್ಳೀಗೌಡ, ಚುಡಾ ಅಧ್ಯಕ್ಷ ಮಹಮ್ಮದ್ ಅಸ್ಗರ್, ಚಿಕ್ಕಮಹದೇವು, ಮುಖಂಡರಾದ ನಲ್ಲೂರು ರಾಜಶೇಖರ್, ಸುಬ್ಬೇಗೌಡ, ಗೋವಿಂದು, ಹಳೇಪುರ ಮಹೇಶ್, ಮಹದೇವಸ್ವಾಮಿ ಕೆ.ಕೆ. ಹುಂಡಿ, ಕರಿನಂಜನಪುರ ಸ್ವಾಮಿ, ಶಿವಪುರ ಶಿವಸ್ವಾಮಿ, ಮರಿಸ್ವಾಮಿ, ಮಂಜು, ರಾಜು, ರೇವಣ್ಣ, ರಾಜೇಶ್, ಬೀರೇಗೌಡ, ಸುಬ್ಬೇಗೌಡ, ಚಿಕ್ಕರಾಜು, ಡಿ.ಎಸ್.ಕುಮಾರ್, ಶಿವಕುಮಾರ್, ಚನ್ನೇಗೌಡ, ಬಸವಣ್ಣ, ಮಹದೇವ್, ಪುನೀತ್ ಇತರರು ಭಾಗವಹಿಸಿದ್ದರು.

ಮೈಸೂರು ಮಿತ್ರ

ಸೋಮವಾರ 19 ಆಗಸ್ಟ್ 2024

ಪ್ರಾಸಿಕ್ಯೂಷನ್ ಅನುಮತಿ ಖಂಡಿಸಿ ನಂ.ಗೂಡಲ್ಲಿ ಪ್ರತಿಭಟನೆ



ಕಾಂಗ್ರೆಸ್ ಕಾರ್ಯಕರ್ತರು ನಂಜನಗೂಡು-ಮೈಸೂರು ಹೆದ್ದಾರಿ ತಡೆ ನಡೆಸಿ ಬೃಹತ್ ಪ್ರತಿಭಟನೆ ನಡೆಸಿದರು.

ನಂಜನಗೂಡು, ಆ.18– ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ಕ್ರಮವನ್ನು ಖಂಡಿಸಿ ನಂಜನಗೂಡಿನಲ್ಲಿ ಕಾಂಗ್ರೆಸ್ ಕಾರ್ಯಕರ್ತರು ನಂಜನಗೂಡು–ಮೈಸೂರು ಹೆದ್ದಾರಿ ತಡೆ ನಡೆಸಿ ಬೃಹತ್ ಪ್ರತಿಭಟನೆ ನಡೆಸಿದರು.

ನಗರದ ಹುಲ್ಲಹಳ್ಳಿ ವೃತ್ತದ ಬಳಿ ಶಾಸಕ ದರ್ಶನ್ ಧ್ರುವನಾರಾಯಣ್ ನೇತೃತ್ವದಲ್ಲಿ ಜಮಾಯಿಸಿದ ಸಾವಿರಾರು ಕಾರ್ಯಕರ್ತರು, ಬಿಜೆಪಿ ಪಕ್ಷ, ರಾಜ್ಯಪಾಲರು, ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಟೈರ್‌ಗೆ ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದರು. ಇದೇ ಸಂದರ್ಭದಲ್ಲಿ ಶಾಸಕ ದರ್ಶನ್ ಧ್ರುವನಾರಾಯಣ ಮಾತನಾಡಿ, ರಾಜ್ಯಪಾಲರು ಕೇಂದ್ರ ಸರ್ಕಾರದ ಕೈಗೊಂಬೆಯಾಗಿ ರಾಜ್ಯದಲ್ಲಿ 136 ಸ್ಥಾನಗಳನ್ನು ಗೆದ್ದು ಸ್ವತಂತ್ರವಾಗಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ನೇತೃತ್ವದ ಸರ್ಕಾರವನ್ನು ಕೆಡವಲು ಷಡ್ಯಂತ್ರ ರೂಪಿಸಿದ್ದಾರೆ. ಅಲ್ಲದೆ ಗ್ಯಾರಂಟಿ ಯೋಜನೆಗಳ ಜನಪ್ರಿಯತೆಯನ್ನು ಸಹಿಸದ ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ನಾಯಕರು ರಾಜ್ಯಪಾಲರ ಹುದ್ದೆಯನ್ನು ದುರ್ಬಳಕೆ ಮಾಡಿಕೊಂಡು ಬಡವರು, ರೈತರು, ಕೂಲಿ ಕಾರ್ಮಿಕರ, ದಲಿತರ ಪರವಾಗಿ ಯೋಚಿಸುವಂತಹ ಒಬ್ಬ ಹಿಂದುಳಿದ ವರ್ಗದ ನಾಯಕ ಸಿದ್ದರಾಮಯ್ಯರವರನ್ನು ಹತ್ತಿಕ್ಕಲು ಸಂಚು ರೂಪಿಸಿದ್ದಾರೆ ಎಂದು ಆರೋಪಿಸಿದರು.

ಇದೇ ಬಿಜೆಪಿ ಮತ್ತು ಜೆಡಿಎಸ್ ನಾಯಕರ ಮೇಲೆ ಭ್ರಷ್ಟಾಚಾರದ ಆರೋಪ ಕೇಳಿ ಬಂದಾಗಲೂ ಕೂಡ ರಾಜ್ಯಪಾಲರು ಇದೇ ರೀತಿ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದೀರಾ? ಎಂಬ ಪ್ರಶ್ನೆಯನ್ನು ಕೇಳಲು ಬಯಸುತ್ತೇನೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ಮುಡಾ ನಿಯಮಾವಳಿಯಂತೆ ತಮ್ಮ ಜಮೀನಿಗೆ ಬದಲಾಗಿ ಬೇರೆ ನಿವೇಶನ ನೀಡಿದ್ದಾರೆ. ಇದರಲ್ಲಿ ಸಿದ್ದರಾಮಯ್ಯರವರ ತಪ್ಪು ಏನೂ ಇಲ್ಲ, ಆದರೂ ಸಹ ಸಾಕ್ಷಿ ಒದಗಿಸದೆ, ಸಕಾರಣ ನೀಡದೆ, ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ಕ್ರಮ ಖಂಡನೀಯ ಎಂದರು.

ಪ್ರತಿಭಟನೆಯಲ್ಲಿ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕುರಹಟ್ಟಿ ಮಹೇಶ್, ಸಿ.ಎಂ. ಶಂಕರ್, ಜಿಪಂ ಮಾಜಿ ಸದಸ್ಯ ಕೆ. ಮಾರುತಿ, ತಾಪಂ ಮಾಜಿ ಅಧ್ಯಕ್ಷ ತಮ್ಮಣ್ಣೇಗೌಡ, ಬಿ.ಎಂ.ನಾಗೇಶ್ ರಾಜ್, ಎನ್.ಟಿ. ಗಿರೀಶ್, ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರದೀಪ್ ಕುಮಾರ್, ತಾಪಂ ಮಾಜಿ ಸದಸ್ಯ ಎಚ್.ಎಸ್. ಮೂಗಶೆಟ್ಟಿ, ಮುಖಂಡರಾದ ಇಂದನ್ ಬಾಬು, ಕುಳ್ಳಯ್ಯ, ಶ್ರೀನಿವಾಸ್ ಮೂರ್ತಿ, ಎನ್.ಎಂ.ಮಂಜುನಾಥ್, ಕುರಿಹುಂಡಿ ರಾಜು, ಕೂಡ್ಲಾಪುರ ರಾಜು, ಚಿನ್ನಂಬಳ್ಳಿ ರಾಜು, ನಗರಸಭಾ ಮಾಜಿ ಉಪಾಧ್ಯಕ್ಷ ದೊರೆಸ್ವಾಮಿ, ನಗರಸಭಾ ಸದಸ್ಯರಾದ ಎನ್. ಶ್ರೀಕಂಠ, ಗಂಗಾಧರ್, ಎಸ್.ಪಿ.ಮಹೇಶ್, ಕಾರ್ಮಿಕ ಸಂಘಟನೆ ಅಧ್ಯಕ್ಷ ಗೋವಿಂದರಾಜು, ಗ್ರಾಪಂ ಸದಸ್ಯರಾದ ಮುದ್ದು ಮಾದಶೆಟ್ಟಿ, ಆನಂದ್, ಸುರೇಶ್ ಸೇರಿದಂತೆ ಸಾವಿರಾರು ಕಾರ್ಯಕರ್ತರು ಇದ್ದರು.

ಶಾಸಕ ದರ್ಶನ್ ಧ್ರುವನಾರಾಯಣ್ ನೇತೃತ್ವ, ಕೇಂದ್ರ, ರಾಜ್ಯಪಾಲರ ವಿರುದ್ಧ ಆಕ್ರೋಶ

ತಾಂಡವಪುರ, ತಗಡೂರು ಗ್ರಾಮಗಳಲ್ಲಿಯೂ ಪ್ರತಿಭಟನೆ

ತಗಡೂರು, ತಾಂಡವಪುರದಲ್ಲಿ ಪ್ರತಿಭಟನೆ: ಇದೇ ರೀತಿ ವರುಣ ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರು ತಾಲ್ಲೂಕಿನ ತಾಂಡವಪುರ ಮತ್ತು ತಗಡೂರು ಗ್ರಾಮಗಳಲ್ಲಿ ರಸ್ತೆ ತಡೆ ನಡೆಸಿ ಬೃಹತ್ ಪ್ರತಿಭಟನೆ ನಡೆಸಿದರು. ತಾಲೂಕಿನ ತಗಡೂರು ಗ್ರಾಮದಲ್ಲಿ ರಸ್ತೆ ತಡೆ ನಡೆಸಿ ಟೈರ್‌ಗೆ ಬೆಂಕಿ ಹಚ್ಚಿದ ಕಾರ್ಯಕರ್ತರು, ಬಿಜೆಪಿ ನಾಯಕರ, ಕೇಂದ್ರ ಸರ್ಕಾರದ, ರಾಜ್ಯಪಾಲರ ವಿರುದ್ಧ, ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.



ತಾಂಡವಪುರದಲ್ಲೂ ರಸ್ತೆ ತಡೆ ನಡೆಸಿ ಪ್ರತಿಭಟಿಸಿದ ಕಾಂಗ್ರೆಸ್ ಕಾರ್ಯಕರ್ತರು.

ತಾಲೂಕಿನ ತಾಂಡವಪುರ ಗ್ರಾಮದಲ್ಲಿ ರಸ್ತೆ ತಡೆ ನಡೆಸಿ, ಕಾಂಗ್ರೆಸ್ ಕಾರ್ಯಕರ್ತರು ರಾಜ್ಯಪಾಲರ ಕ್ರಮವನ್ನು ಖಂಡಿಸಿದರು. ಅರ್ಧ ಗಂಟೆಗೂ ಹೆಚ್ಚು ಕಾಲ ಮೈಸೂರು– ನಂಜನಗೂಡು ಹೆದ್ದಾರಿಯನ್ನು ತಡೆದ ಪರಿಣಾಮ ಸಂಚಾರ ದಟ್ಟಣೆ ಅಧಿಕವಾಗಿ ಸಾರ್ವಜನಿಕರು ಪರದಾಡುವಂತಾಗಿತ್ತು.

ಪ್ರತಿಭಟನೆಯಲ್ಲಿ ತಗಡೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಕೋವಿನ ಯಜಮಾನರು, ಮುಖಂಡರು ಹಾಗೂ ಗ್ರಾಮಸ್ಥರು, ತಾಂಡವಪುರದ ಮುಖಂಡರಾದ ದಕ್ಷಿಣ ಮೂರ್ತಿ, ರಾಕೇಶ್ ಇದ್ದರು.

ರಾಜ್ಯಪಾಲರ ನಡೆ ಖಂಡಿಸಿ ಮೇಗಳಾಪುರದಲ್ಲಿ ರಸ್ತೆ ತಡೆ

ಸುತ್ತೂರು, ಆ.18–ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ನಡೆಯನ್ನು ಖಂಡಿಸಿ ವರುಣ ಕ್ಷೇತ್ರದ ಮೇಗಳಾಪುರದ ಸಂಗೊಳ್ಳಿ ರಾಯಣ್ಣ ವೃತ್ತದ ಬಳಿ ಟಿ.ನರಸೀಪುರ–ಮೈಸೂರು ಮುಖ್ಯ ರಸ್ತೆಯಲ್ಲಿ ಸುಮಾರು ಒಂದು ಗಂಟೆಗೆ ಹೆಚ್ಚು ಕಾಲ ಸಿದ್ದರಾಮಯ್ಯನವರ ಅಭಿಮಾನಿಗಳು ರಸ್ತೆತಡೆ ನಡೆಸಿ, ಪ್ರತಿಭಟಿಸಿದರು.

ಈ ಸಂದರ್ಭದಲ್ಲಿ ಸಿದ್ದರಾಮಯ್ಯ ಅಭಿಮಾನಿ ಬಳಗದ ಪಿ.ಬಸವರಾಜು, ಕೆಂಪಿರಯ್ಯ, ಕುಮಾರ್, ವರಕೋಡು ಉಮೇಶ್ ಅವರುಗಳು ಮಾತನಾಡಿ, ಘನತೆವೆತ್ತ ರಾಜ್ಯಪಾಲರು ನಾಡಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮೇಲೆ ಸಾಕ್ಷಿ ಇಲ್ಲದ ಮತ್ತು ದಾಖಲೆಗಳಿಲ್ಲದ ಪ್ರಕರಣಗಳಲ್ಲಿ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದು ಖಂಡನೀಯ. ಈ ಕೂಡಲೇ ಅದನ್ನು ಹಿಂಪಡೆಯಬೇಕು. ಇಲ್ಲವಾದಲ್ಲಿ ರಾಜ್ಯಪಾಲರ ವಿರುದ್ಧ ರಾಜ್ಯಾದ್ಯಂತ ಪ್ರತಿಭಟನೆಗೆ ಇಳಿಯಬೇಕಾಗುತ್ತದೆ ಎಂದು ಮುಖಂಡರು ಎಚ್ಚರಿಸಿದರು.

ಈ ವೇಳೆ ರಾಜ್ಯಪಾಲರ ವಿರುದ್ಧ, ಸಿಎಂ ಸಿದ್ದರಾಮಯ್ಯನವರ ಪರ ಘೋಷಣೆಗಳು ಮೊಳಗಿದವು. ಎರಡೂ ಬದಿಯಲ್ಲೂ ಬಸ್ಸುಗಳು, ವಾಹನಗಳು ಸಾಲುಗಟ್ಟಿ ನಿಂತು ಪ್ರಯಾಣಿಕರು ಪರದಾಡಬೇಕಾಯಿತು.



ಮೇಗಳಾಪುರದಲ್ಲಿ ರಸ್ತೆ ತಡೆ ನಡೆಸಿ ಪ್ರತಿಭಟಿಸಿದ ಸಿದ್ದರಾಮಯ್ಯ ಅಭಿಮಾನಿಗಳು.

ಪ್ರತಿಭಟನೆಯಲ್ಲಿ ತಾಪಂ ಅಧ್ಯಕ್ಷ ಪುಟ್ಟಣ್ಣ, ಕುಮಾರ್, ರಾಯನಹುಂಡಿ ರವಿ, ಎಸ್.ಮಹದೇವ ಬೂತ್ಕಳ್ಳಿ, ಮಣಿ ಮರಡಿಹುಂಡಿ, ಮಹದೇವ್, ಸಾಕಳ್ಳಿ ಬಸವರಾಜ್, ಚಂದ್ರಶೇಖರ್, ಕೀಳನಪುರ ಮಹಾದೇವಪ್ಪ, ಗ್ರಾಪಂ ಅಧ್ಯಕ್ಷ ನಂಜುಂಡಸ್ವಾಮಿ, ಯೋಗೇಶ್, ಡೈರಿ ಅಧ್ಯಕ್ಷ ಸಿದ್ದರಾಮ, ಮಂಜುಳಾ ಮುದ್ರಾಮೇಗೌಡ, ಮಹೇಂದ್ರ, ಬೈರೇಗೌಡ ಸಚಿನ್ ಕಂಸಾಳೆ, ರವಿ ದುದ್ದಗೆರೆ, ರವಿ ಪುಟ್ಟರಾಮ, ಹೊಸಳ್ಳಿ ಶೇಖರ ಬೀರಪ್ಪ, ಚಂದ್ರು ಗಿರೀಶ್ ಮಂಜು ಪ್ರಕಾಶ್ ಶಿವರಾಂ ಅವರುಗಳು ಭಾಗವಹಿಸಿದ್ದರು.

ಮೂರನೇ ಪುಟದಿಂದ

ಸಿಎಂ ರಾಜಕೀಯ ನಡೆ

ವಕೀಲರ ಭೇಟಿಗೆ ಸಿಎಂ ಚಿಂತನೆ ನಡೆಸಿದ್ದಾರೆ ಎನ್ನಲಾಗಿದೆ. ಇನ್ನು ರಾಷ್ಟ್ರಪತಿ ಅವರನ್ನು ಭೇಟಿ ಮಾಡಿ ರಾಜ್ಯಪಾಲರ ನಡೆ ವಿರುದ್ಧ ದೂರು ನೀಡುವ ಸಾಧ್ಯತೆಗಳಿವೆ ಎಂದು ತಿಳಿದುಬಂದಿದೆ. ದೆಹಲಿಗೆ ತೆರಳುವ ಒಂದು ದಿನ ಮುನ್ನ ಅಂದರೆ ಆಗಸ್ಟ್ 22ರಂದು ಶಾಸಕಾಂಗ ಪಕ್ಷದ ಸಭೆ ಕರೆದಿದ್ದು, ಸಭೆಯಲ್ಲಿ ಕೆಲ ರಾಜ್ಯ ರಾಜಕಾರಣದ ಬೆಳವಣಿಗೆಗಳ ಬಗ್ಗೆ ಮಹತ್ವದ ಚರ್ಚೆ ನಡೆಸಲಿದ್ದಾರೆ. ಅಲ್ಲದೇ ಎಲ್ಲಾ ಶಾಸಕರು ತಮ್ಮ ಬೆಂಬಲಕ್ಕಿರುವಂತೆ ಮನವಿ ಮಾಡಲಿದ್ದಾರೆ. ರಾಜ್ಯಪಾಲರ ಆದೇಶದಕ್ಕೆ ತಡೆ ನೀಡುವಂತೆ ಹೈಕೋರ್ಟ್‌ಗೆ ನಾಳೆ ಅರ್ಜಿ ಸಲ್ಲಿಸಲಿದ್ದಾರೆ. ಒಂದು ವೇಳೆ ಹೈಕೋರ್ಟ್ ನಿರಾಕರಿಸಿದರೆ ಸುಪ್ರೀಂಕೋರ್ಟ್ ಮೆಟ್ಟಿಲೇರಲಿದ್ದಾರೆ. ಇದರ ನಡುವೆ ರಾಜ್ಯಪಾಲರ ವಿರುದ್ಧ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಗಮನಕ್ಕೆ ತರುವ ಪ್ರಯತ್ನ ನಡೆಸಿದ್ದಾರೆ ಎನ್ನಲಾಗಿದೆ. ಇದರೊಂದಿಗೆ ಪ್ರತಿ ಹಂತದಲ್ಲೂ ಸಿದ್ದರಾಮಯ್ಯ ಎಚ್ಚರಿಕೆಯಿಂದ ಹೆಜ್ಜೆಯಿಡುತ್ತಿದ್ದಾರೆ.

ವಿದ್ಯಾರ್ಥಿನಿ ಸಾಮೂಹಿಕ ಅತ್ಯಾಚಾರ

ವಿವರಿಸಿದ್ದಾರೆ. ಕಳೆದ ಮಧ್ಯರಾತ್ರಿ 1ರಿಂದ 1.30ರ ಮಧ್ಯ ಸಮಯದಲ್ಲಿ ಯುವತಿ ಬೈಕ್‌ನಲ್ಲಿ ಪ್ರಯಾಣಿಸುತ್ತಿದ್ದಾಗ ಬೇರೆಡೆಗೆ ಕರೆದುಕೊಂಡು ಹೋಗಿ ಪೈಶಾಚಿಕ ಕೃತ್ಯ ನಡೆಸಿದ್ದಾನೆ. ನಾವು ಅತ್ಯಾಚಾರ ಪ್ರಕರಣ ದಾಖಲಿಸಿ ಮುಂದಿನ ತನಿಖೆ ಕೈಗೊಂಡಿದ್ದೇವೆ ಎಂದಿದ್ದಾರೆ. ಅನ್ಯ ರಾಜ್ಯದ ವಿದ್ಯಾರ್ಥಿನಿ ಬೆಂಗಳೂರಿನಲ್ಲಿ ಅಂತಿಮ ವರ್ಷದ ಪದವಿ ವ್ಯಾಸಂಗ ಮಾಡುತ್ತಿದ್ದು ಸ್ನೇಹಿತರ ಜೊತೆ ಕೋರಮಂಗಲದ ಪಬ್‌ನಲ್ಲಿ ಪಾರ್ಟಿ ಮುಗಿಸಿಕೊಂಡು ವಾಪಸ್ಸಾಗುತ್ತಿದ್ದರು. ಪಾರ್ಟಿ ಮುಗಿಸಿಕೊಂಡು ದ್ವಿಚಕ್ರ ವಾಹನದಲ್ಲಿ ಬಂದ ವಿದ್ಯಾರ್ಥಿನಿ ನಂತರ ಮತ್ತೊಂದು ಬೈಕ್ ಹತ್ತಿ ಹೋಗಿದ್ದು ಆತನೇ ಅತ್ಯಾಚಾರ ನಡೆಸಿರುವ ಶಂಕೆಯಿದ್ದು ಸ್ಥಳಕ್ಕೆ ಭೇಟಿ ನೀಡಿ, ಯುವತಿಯ ಮನೆಯವರ ಜೊತೆ ಮಾತನಾಡಿ 5 ತಂಡಗಳನ್ನು ರಚಿಸಿ ತನಿಖೆ ಮಾಡುತ್ತಿದ್ದೇವೆ. ಅತಿ ಶೀಘ್ರವೇ ಆರೋಪಿಯನ್ನು ಬಂಧಿಸುವ ವಿಶ್ವಾಸವಿದೆ ಎಂದರು. ಕೋಲ್ಕತ್ತಾದಲ್ಲಿ ವೈದ್ಯಕೀಯ ವಿದ್ಯಾರ್ಥಿನಿಯ ಮೇಲೆ ಕೆಲಸದ ಅವಧಿಯಲ್ಲಿಯೇ ಆಸ್ಪತ್ರೆಯಲ್ಲಿದ್ದಾಗ ಅತ್ಯಾಚಾರ ನಡೆದಿದೆ. ಈ ಬಗ್ಗೆ ದೇಶಾದ್ಯಂತ ಪ್ರತಿಭಟನೆಗಳು ನಡೆಯುತ್ತಿವೆ. ಈ ಬೆನ್ನಲ್ಲೆ ದೇಶದ ಮತ್ತೊಂದು ಮಹಾನಗರವಾದ ಬೆಂಗಳೂರಿನಲ್ಲಿ ಅತ್ಯಾಚಾರ ನಡೆದಿರುವುದು ಇಲ್ಲಿನ ಜನರಲ್ಲಿ ಆತಂಕ ತರಿಸಿದೆ.

ಬಿಜೆಪಿ ನಾಯಕರ ಆಕ್ರೋಶ

ವಿಪಕ್ಷ ನಾಯಕ ಆರ್.ಅಶೋಕ್ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಸಮಾಜ ಘಾತುಕ ಶಕ್ತಿಗಳಿಗೆ ಕಾನೂನಿನ ಭಯವೇ ಇಲ್ಲದಂತಾಗಿದ್ದು, ಮಹಿಳೆಯರು, ಹೆಣ್ಣುಮಕ್ಕಳು ನಿರ್ಭೀತಿಯಿಂದ ಓಡಾಡಲಾಗದ ಪರಿಸ್ಥಿತಿ ಎದುರಾಗಿದೆ ಎಂದು ಟೀಕಿಸಿದ್ದಾರೆ. ಮಹಿಳೆಯರ ಮೇಲಿನ ಹಲ್ಲೆ ಅತ್ಯಾಚಾರದ ಘಟನೆಗಳು ಪದೇ ಪದೇ ಮರುಕಳಿಸುತ್ತಲೇ ಇರುವುದರಿಂದ ರಾಜ್ಯದ ಘನತೆ, ವರ್ಚಸ್ಸಿಗೆ ಕುತ್ತು ಬಂದಿದೆ. ಬೆಂಗಳೂರಿನಂತಹ ವಿಶ್ವನಗರಿಯ ಹೆಸರಿಗೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಕೆಟ್ಟು ಹೆಸರು ಬರುತ್ತಿದೆ.

ಭ್ರಷ್ಟಾಚಾರ, ಸ್ವಜನ ಪಕ್ಷಪಾತ, ಬಣ ಬಡಿದಾಟ, ಆಂತರಿಕ ಕಲಹ, ರಾಜಕೀಯ ಮೇಲಾಟದಲ್ಲೇ ನಿರತವಾಗಿರುವ ಕಾಂಗ್ರೆಸ್ ಸರ್ಕಾರಕ್ಕೆ ಆಡಳಿತದ ಮೇಲೆ ನಿಯಂತ್ರಣವೂ ಇಲ್ಲ, ಕಾನೂನು ಸುವ್ಯವಸ್ಥೆ ಕಾಪಾಡುವ ಆಸಕ್ತಿಯೂ ಇಲ್ಲ. ಮಹಿಳೆಯರಿಗೆ ಶಾಂತಿ, ಸುರಕ್ಷತೆಯ ಗ್ಯಾರೆಂಟಿ ಯಾವಾಗ ಸಿಗಲಿದೆ ಸಿಎಂ ಸಿದ್ದರಾಮಯ್ಯನವರೇ ಎಂದು ಪ್ರಶ್ನಿಸಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು, ರಾಜ್ಯದ ಕಾಂಗ್ರೆಸ್ ಸರ್ಕಾರದಲ್ಲಿ ಸ್ತ್ರೀ ಪೀಡಕರು, ದುರುಳರು, ಅತ್ಯಾಚಾರಿಗಳ ಅಟ್ಟಹಾಸ ವಿಪರೀತಕ್ಕೆ ಹೋಗುತ್ತಿದೆ. ಸರಣೀ ರೂಪದಲ್ಲಿ ಮಹಿಳಾ ದೌರ್ಜನ್ಯ ಪ್ರಕರಣಗಳು ವರದಿಯಾಗುತ್ತಿವೆ.

ಬೆಂಗಳೂರಿನ ಹೆಚ್‌ಎಸ್‌ಆರ್ ಲೇಔಟ್‌ನಲ್ಲಿ ಯುವತಿಯ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿರುವ ಘಟನೆ ಅತ್ಯಂತ ಹೇಯ ಹಾಗೂ ರಾಕ್ಷಸೀ ಕೃತ್ಯವಾಗಿದೆ. ಮರುಕಳಿಸುತ್ತಲೇ ಇರುವ ಇಂಥಾ ಘಟನೆಗಳಿಂದ ಕರ್ನಾಟಕ ರಾಷ್ಟ್ರಮಟ್ಟದಲ್ಲಿ ತಲೆತಗ್ಗಿಸುವಂತಾಗಿದೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದ ಘನತೆ ಕುಗ್ಗುತ್ತಿದೆ.

ಮುಖ್ಯಮಂತ್ರಿಯಾದಿಯಾಗಿ ಸರ್ಕಾರದ ಯಾರೊಬ್ಬರೂ ಈ ಬಗ್ಗೆ ಗಂಭೀರತೆ ಪ್ರದರ್ಶಿಸದೇ ಉಡಾಫೆ ಧೋರಣೆ ಅನುಸರಿಸುತ್ತಿರುವ ಪರಿ ನೋಡಿದರೆ 'ಸರ್ಕಾರವೇ ಸ್ತ್ರೀ ಕುಲ ಪೀಡಕರ ರಕ್ಷಣೆಗೆ' ನಿಂತಿರುವ ಅನುಮಾನ ಮೂಡಿಸುತ್ತಿದೆ. ತಕ್ಷಣವೇ ಯುವತಿಯ ರಕ್ಷಣೆಗೆ ಮುಂದಾಗಿ ಪೈಶಾಚಿಕ ಕೃತ್ಯ ಎಸಗಿದ ಕಿಡಿಗೇಡಿಗಳನ್ನು ಬಂಧಿಸಿ ಕಠಿಣ ಶಿಕ್ಷೆಗೆ ಒಳಪಡಿಸಬೇಕು ಎಂದು ಆಗ್ರಹಿಸಿದ್ದಾರೆ.

ಮೈಸೂರಲ್ಲಿ ಕಾಂಗ್ರೆಸ್ ರಸ್ತೆ ತಡೆ

ಸೇರಿದಂತೆ ಹಲವು ರಾಜ್ಯಗಳಲ್ಲಿ ಬೆಂಕಿ ಹಚ್ಚುವ ಪ್ರಯತ್ನ ನಡೆಸಿದ್ದಾರೆ. ಜಾರ್ಖಂಡ್ ಹಾಗೂ ದೆಹಲಿ ಮುಖ್ಯಮಂತ್ರಿಗಳನ್ನು ಇಡಿಯನ್ನು ದುರ್ಬಳಕೆ ಮಾಡಿಕೊಂಡು ಬಂಧಿಸಿದ್ದಾರೆ. ಕರ್ನಾಟಕದಲ್ಲೂ ಈ ರೀತಿಯ ಪ್ರಯತ್ನ ಮಾಡಿದ್ದಾರೆ. ಇಡಿ ಬಂಧಿಸಿದ ಅಧಿಕಾರಿಯಿಂದ ಸಿಎಂ, ಡಿಸಿಎಂ ಹಾಗೂ ಸಚಿವರ ಹೆಸರೇಳುವಂತೆ ಒತ್ತಾಯಿಸಿದ್ದಾರೆ. ಕರ್ನಾಟಕ ಸರ್ಕಾರವನ್ನು ಅಸ್ಥಿರಗೊಳಿಸುವ ಕುತಂತ್ರ ಮುಂದುವರೆದಿದೆ. ಪ್ರಜಾಪ್ರಭುತ್ವ ಸಾವಿನ ಅಂಚಿಗೆ ಬಂದಿದೆ. ಇದೇ ರೀತಿ ಮುಂದುವರೆದರೆ ರಾಜ್ಯದಲ್ಲಿ ಜನ ದಂಗೆ ಏಳುತ್ತಾರೆ. ಬಾಂಗ್ಲಾ ಪರಿಸ್ಥಿತಿ ಭಾರತದಲ್ಲಿ ನಿರ್ಮಾಣವಾದರೂ ಆಶ್ಚರ್ಯವಿಲ್ಲ. ಈ ಎಲ್ಲಾ ಬೆಳವಣಿಗೆ ನಡುವೆ ರಾಜ್ಯಪಾಲರು ಜನಪ್ರಿಯ ಮುಖ್ಯಮಂತ್ರಿಗಳ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿಸಿರುವುದು ಅಸಂವಿಧಾನಿಕ. ನ್ಯಾಯಾಲಯದಲ್ಲಿ ಖಂಡಿತ ನ್ಯಾಯ ಸಿಗುತ್ತದೆ. ಸತ್ಯ ಹೊರಬಂದ ಮೇಲೆ ಜನ ಬಿಜೆಪಿಗೆ ಬುದ್ಧಿ ಕಲಿಸುತ್ತಾರೆ ಎಂದು ಹೇಳಿದರು.

ಪ್ರತಿಭಟನೆಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಜಿ.ಸೋಮಶೇಖರ್, ಶ್ರೀಧರ್, ಎಪಿಎಂಸಿ ಮಾಜಿ ಅಧ್ಯಕ್ಷ ಬಸವರಾಜು, ಕಾಂಗ್ರೆಸ್ ಮುಖಂಡರುಗಳಾದ ರವಿಶಂಕರ್, ಮಾಜಿ ಕಾರ್ಪೊರೇಟರ್ ಜೆ.ಗೋಪಿ, ಎಂ.ಸುನಿಲ್, ಆರ್.ಹೆಚ್.ಕುಮಾರ್, ವಿಶ್ವನಾಥ್(ವಿಶ್ವ), ಮಾಜಿ ಸೆನೆಟ್ ಸದಸ್ಯ ಮಾರ್ಬಳ್ಳಿ ಕುಮಾರ್, ರಮೇಶ್ ರಾಮಪ್ಪ, ಉತ್ತನಹಳ್ಳಿ ಶಿವಣ್ಣ, ಹರೀಶ್, ವಿಜಯ್ ಕುಮಾರ್, ಮೂರ್ತಿ, ಜಗದೀಶ್, ಮಹೇಂದ್ರ, ಮಹಮದ್ ಫಾರೂಕ್, ಭವ್ಯ, ವೀಣಾ, ಇಂದ್ರಮ್ಮ, ಚಂದ್ರಕಲಾ, ಮಲ್ಲಾಜಮ್ಮ, ಕಂಸಾಳೆ ರವಿ, ರಮೇಶ್ ರಾವ್, ರಾಘವೇಂದ್ರ, ಉಲ್ಲಾಸ್, ರಾಕೇಶ್, ಧರ್ಮೇಂದ್ರ, ಜಯರಾಜ್, ಮಧುರಾಜ್, ಹುಚ್ಚೇಗೌಡ, ಶೇಖರ್, ಕುಮಾರ್(ಕುಮ್ಮಿ), ಮಲ್ಲೇಶ್ ಮಲ್ಲ, ಚೇತನ್, ಮನು, ಪೈಲ್ವಾನ್ ಕೃಷ್ಣ ಇನ್ನಿತರರು ಪಾಲ್ಗೊಂಡಿದ್ದರು.

ಮನುಷ್ಯನಿಗೆ ಕಣ್ಣು ಮನೆಯ ಹೆಬ್ಬಾಗಿಲಿನಂತೆ, ಕಾಪಾಡಿಕೊಳ್ಳಿ



ಹುಣಸೂರು, ಆ.18– ಮನುಷ್ಯನಿಗೆ ಕಣ್ಣು ಮನೆಯ ಹೆಬ್ಬಾಗಿಲಿನಂತೆ. ಅದನ್ನು ಜೋಪಾನವಾಗಿ ಕಾಪಾಡಿಕೊಳ್ಳಿ ಎಂದು ಗಾವಡಗೆರೆ ಗುರುಲಿಂಗ ಜಂಗಮಮಠದ ಶ್ರೀ ನಟರಾಜಸ್ವಾಮಿ ತಿಳಿಸಿದರು.

ನಗರದ ತಾಲೂಕು ಪತ್ರಕರ್ತರ ಭವನದಲ್ಲಿ ತಾಲೂಕು ಪತ್ರಕರ್ತರ ಸಂಘ, ಹುಣಸೂರು ರೋಟರಿ ಕ್ಲಬ್, ಶಂಕರ ಕಣ್ಣಿನ ಆಸ್ಪತ್ರೆಯ ಸಂಯುಕ್ತಾಶ್ರಯದಲ್ಲಿ ಪತ್ರಕರ್ತರ ಕುಟುಂಬ, ಪೇಪರ್ ಹಂಚುವ ಹುಡುಗರು ಮತ್ತು ಆದಿವಾಸಿಗಳಿಗೆ ಏರ್ಪಡಿಸಿದ್ದ ಉಚಿತ ನೇತ್ರ ಶಿಬಿರದಲ್ಲಿ ಮಾತನಾಡಿದ ಅವರು, ಮನುಷ್ಯನ ಅವಿಭಾಜ್ಯ ಅಂಗಗಳಲ್ಲಿ ಕಣ್ಣು ಕೂಡ ಒಂದು. ಅದನ್ನು ತುಂಬಾ ಜಾಗೃತವಾಗಿ ನೋಡಿಕೊಳ್ಳಬೇಕು. ಅಲ್ಲದೆ ಕಣ್ಣು ಮಾತ್ರ ಸುಖವನ್ನು ಅನುಭವಿಸುವುದಲ್ಲದೆ ಪ್ರಕೃತಿಯ ಎಲ್ಲಾ ಸೌಂದರ್ಯವನ್ನು ಸೆರೆ ಹಿಡಿದು ದಾಖಲಿಸುತ್ತ ಮನಸನ್ನು ಖುಷಿಯಿಂದ ಇರಿಸಿ, ಉಲ್ಲಾಸದಿಂದ ಇರಲು ಸಹಕಾರಿಯಾಗುತ್ತದೆ ಎಂದರು. ತಾಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಹೆಚ್.ಆರ್. ಕೃಷ್ಣಕುಮಾರ್, ರೋಟರಿ ಕ್ಲಬ್ ಅಧ್ಯಕ್ಷ ಪ್ರಸನ್ನ ಕೆ.ಪಿ. ಮಾತನಾಡಿದರು.

ಶಿಬಿರದಲ್ಲಿ 136 ಶಿಬಿರಾರ್ಥಿಗಳು ಪಾಲ್ಗೊಂಡಿದ್ದರು. 46 ಮಂದಿಗೆ ಕನ್ನಡಕ ವಿತರಣೆ, ಐದು ಮಂದಿ ಹೆಚ್ಚುವರಿ ಚಿಕಿತ್ಸೆಗೆ ಕಳುಹಿಸಲಾಯಿತು. 13 ಮಂದಿಗೆ ಪೊರೆ ಶಸ್ತ್ರಚಿಕಿತ್ಸೆಗೆ ರವಾನಿಸಲಾಯಿತು. ಇನ್ನುಳಿದವರಿಗೆ ಸ್ಥಳದಲ್ಲೇ ಚಿಕಿತ್ಸೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಶಂಕರ ಕಣ್ಣಿನ ಆಯೋಜಕ ಹೆಚ್.ಸಿ.ಕುಮಾರ್, ಜಾಬಗೆರೆ ಮಂಜುನಾಥ್, ರೊ. ಸಹಾಯಕ ಗೌರ್ನರ್ ಆನಂದ್ ಆರ್.ವಲಯ ಸೇನಾನಿ ಪಾಂಡುಕುಮಾರ್ ಪಿ. ಡಾ. ವಿಲೀನ, ಡಾ.ಶ್ರೀಕಾಂತ್, ಪತ್ರಕರ್ತರಾದ ದಾರಾ ಮಹೇಶ್, ನಟರಾಜ್ ಹನಗೋಡು, ಹೆಚ್.ಕೆ ಕೃಷ್ಣ, ಕೆ.ಕೃಷ್ಣ, ಖಜಾಂಚಿ ಯೋಗಿ, ಮನು, ಜಯರಾಂ, ಕಾರ್ಯದರ್ಶಿ ಶಂಕರ್, ಸಂಘದ ಪ್ರಧಾನ ಕಾರ್ಯದರ್ಶಿ ಮಹದೇವ್ ನೇರಳಕುಪ್ಪೆ, ಇದ್ದರು.

ನಂದಿನಿ ಉತ್ಪನ್ನಗಳನ್ನು ಕದ್ದ ಕಳ್ಳರು



ಬನ್ನೂರು, ಆ.18– ಪಟ್ಟಣದ ಸಂತೆಮಾಳದಲ್ಲಿರುವ ನಂದಿನಿ ಹಾಲಿನ ಬೂತ್‌ಗೆ ಕನ್ನ ಹಾಕಿರುವ ಕಳ್ಳರು ಹಾಲಿನ ಉತ್ಪನ್ನ ಸೇರಿದಂತೆ ನಗದು ದೋಚಿ ಪರಾರಿಯಾಗಿದ್ದಾರೆ.

ಸಂತೆಮಾಳದಲ್ಲಿರುವ ಚೇತನ್ ನಂದಿನಿ ಬೂತ್‌ನ್ನು ರಾತ್ರಿ 2 ಗಂಟೆಯ ಸಮಯದಲ್ಲಿ ಕಳ್ಳತನ ಮಾಡಲಾಗಿದ್ದು, ಹಿಂದಿರುವ ಶೆಟರ್ ಒಡೆದು ಒಳ ನುಗ್ಗಿರುವ ಕಳ್ಳರು, 10 ಸಾವಿರ ರೂ. ಬೆಲೆ ಬಾಳುವಂತ ನಂದಿನಿ ಉತ್ಪನ್ನ ಸೇರಿದಂತೆ ಅಂಗಡಿಯಲ್ಲಿ ಇಟ್ಟಿದ್ದ, 8 ಸಾವಿರ ಚಿಲ್ಲರೆ ಹಣ ಮತ್ತು ವ್ಯಾಪಾರದ 8 ಸಾವಿರ ನಗದು ದೋಚಿ ಪರಾರಿ ಆಗಿದ್ದಾರೆ. ಸಿಸಿ ಕ್ಯಾಮರಾ ಅಳವಡಿಸಿದ್ದರೂ ಸಹ, ಅದರ ಸಿಮ್ ಮತ್ತು ಮೆಮೋರಿ ಕಾರ್ಡ್ ತೆಗೆದು ಚಾಕಚಕ್ಯತೆಯಿಂದ ಕಳ್ಳತನ ನಡೆಸಿದ್ದು, ಬೆಳಿಗ್ಗೆ ಮಾಲೀಕ ಅಂಗಡಿಗೆ ಭೇಟಿ ನೀಡಿದಾಗ ಪ್ರಕರಣ ಬೆಳಕಿಗೆ ಬಂದಿದೆ. ಈ ಸಂಬಂಧ ಪೊಲೀಸ್ ಠಾಣೆಯಲ್ಲಿ ಕೇಸು ದಾಖಲಾಗಿದೆ.

ದಮ್ಮನಕಟ್ಟೆ ಅರಣ್ಯಾಧಿಕಾರಿ ಅಧಿಕಾರ ಸ್ವೀಕಾರ

ಹೆಚ್.ಡಿ.ಕೋಟೆ, ಆ.18– ತಾಲೂಕಿನ ನಾಗರಹೊಳೆ ಅಭಯಾರಣ್ಯದ ಅಂತರಸಂತೆ ವನ್ಯಜೀವಿ ವಲಯದ ದಮ್ಮನಕಟ್ಟೆಯ ಅರಣ್ಯಾಧಿಕಾರಿಯಾಗಿ ಸಿದ್ದರಾಜು ಅಧಿಕಾರ ಸ್ವೀಕರಿಸಿದ್ದಾರೆ.



ದಮ್ಮನಕಟ್ಟೆ, ಅರಣ್ಯ ಪ್ರದೇಶದಲ್ಲಿ ಕೆಲಸ ನಿರ್ವಹಿಸುತ್ತಿದ್ದ ಭರತ್ ತಳವಾರ್ ಅವರು ಮುಂಬಡ್ತಿ ಪಡೆದು ಎಸಿಎಫ್ ಆಗಿ ತುಮಕೂರಿನ ಶಿರಸಿ ಅಭಯಾರಣ್ಯ ಪ್ರದೇಶಕ್ಕೆ ವರ್ಗಾವಣೆಗೊಂಡಿದ್ದಾರೆ. ಇದೇ ಅರಣ್ಯ ಪ್ರದೇಶದಲ್ಲಿ ಅರಣ್ಯಾಧಿಕಾರಿ ಕೆಲಸ ನಿರ್ವಹಿಸುತ್ತಿದ್ದ ಸಿದ್ದರಾಜು ಅಮು ಮತ್ತೆ ದಮ್ಮನಕಟ್ಟೆ ಅರಣ್ಯಾಧಿಕಾರಿಯಾಗಿ ಅಧಿಕಾರ ಸ್ವೀಕರಿಸಿದ್ದಾರೆ.

ಸರ್ಕಾರಿ ಕಾಲೇಜು ವಿದ್ಯಾರ್ಥಿಗಳಿಗೆ ಸನ್ಮಾನ



ದ್ವಿತೀಯ ಪಿಯುಸಿಯಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಹೆಚ್.ಡಿ.ಕೋಟೆ, ಆ.18– ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಲಾಯಿತು.

ತಾಲೂಕಿನ ಬೀಚನಹಳ್ಳಿ ಗ್ರಾಮದಲ್ಲಿರುವ ಪದವಿ ಪೂರ್ವ ಕಾಲೇಜಿನ ವ್ಯಾಸಂಗ ದ್ವಿತೀಯ ಪಿಯುಸಿಯಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಾದ ಸಂತೋಷ್ ಬಿ.ಎಲ್, ನಯನ ಎಸ್, ರೂಪಶ್ರೀ, ಸೋಜಾ, ಸಹನಾ, ರಾಜು, ಆರು ವಿದ್ಯಾರ್ಥಿಗಳಿಗೆ ಗೌರವ ಧನ ನೀಡುವುದರ ಮೂಲಕ ಸನ್ಮಾನಿಸಿ ಗೌರವಿಸಲಾಯಿತು.

ಪ್ರಥಮ ಪಿಯುಸಿ ಮಕ್ಕಳಿಗೆ ಸಮವಸ್ತ್ರ, ದ್ವಿತೀಯ ಪಿಯುಸಿ ಮಕ್ಕಳಿಗೆ ಪಠ್ಯಪುಸ್ತಕವನ್ನು ಸುಭಾಷ್ ಕಬಿನಿ ಪವರ್ ಪ್ರಾಜೆಕ್ಟ್ ವತಿಯಿಂದ ಉಚಿತವಾಗಿ ವಿತರಿಸಲಾಯಿತು ಎಂದು ಲಯನ್ಸ್ ಕ್ಲಬ್ ನ ಅಧ್ಯಕ್ಷ ಬೀಚನಹಳ್ಳಿ ಭಾಸ್ಕರ್ ತಿಳಿಸಿದರು.

ಈ ಸಂದರ್ಭದಲ್ಲಿ ಸುಭಾಷ್ ಕಬಿನಿ ಪವರ್ ಪ್ರಾಜೆಕ್ಟ್ ಮ್ಯಾನೇಜರ್ ಸೆಂದಿಲ್, ಮಾರನ್, ನಿರಂಜನ್, ಸುನಂದ ಬಸವರಾಜ್, ವಕೀಲರಾದ ಸರಸ್ವತಿ, ಗ್ರಾಪಂ ಸದಸ್ಯ ಬಸವರಾಜ ನಾಯಕರು, ಕಾಲೇಜಿನ ಪ್ರಾಂಶುಪಾಲ್ ಸ್ನೇಹ, ಮಹೇಶ್, ಗೋವಿಂದರಾಜ್, ಉಪನ್ಯಾಸಕರಾದ ಕುಮಾರ್, ವಿ.ಜಿ. ಕುಮಾರ್, ಶಿಲ್ಪ, ಪದ್ಮ, ಸಿದ್ದನಾಯಕ, ವತ್ಸಲ, ಶ್ರೀನಿವಾಸ್, ಮಹೇಶ್, ಡಿ. ರವಿಕುಮಾರ್ ಇನ್ನೂ ಮುಂತಾದವರು ಹಾಜರಿದ್ದರು.

ಗ್ರಾಪಂ ಸದಸ್ಯನ ಮೇಲೆ ಹಲ್ಲೆ




ಮಲ್ಲುಂಡಿ, ಆ.18– ಕಂಪ್ಯೂಟರ್ ಆಪರೇಟರ್ ಹಾಗೂ ಪಿಡಿಓ ಇಬ್ಬರು ಸೇರಿ ಗ್ರಾಪಂ ಸದಸ್ಯನ ಮೇಲೆ ಹಲ್ಲೆ ಮಾಡಿರುವ ಘಟನೆ ಸಮೀಪದ ಹಲ್ಲರೆ ಗ್ರಾಮ ಪಂಚಾಯಿತಿಯಲ್ಲಿ ನಡೆದಿದೆ.

ಗ್ರಾಪಂ ಸದಸ್ಯ ಪಾಪ ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯಲ್ಲಿ ನೀರುಗಾವಲಿಯ ಕಾಮಗಾರಿ ಮಾಡಿಸಿದ್ದು ಇದರ ಎನ್ಎಂಆರ್ ತೆಗೆಯಿರಿ ಎಂದು ಕೇಳಲು ಹೋದಾಗ ಕಂಪ್ಯೂಟರ್ ಆಪರೇಟರ್ ಚಂದ್ರು ಹಾಗೂ ಗ್ರಾಪಂ ಸದಸ್ಯ ಪಾಪ ಇಬ್ಬರ ನಡುವೆ ಮಾತಿನ ಚಕಮಕಿ ನಡೆದಿದೆ. ಈ ವೇಳೆ ಕಂಪ್ಯೂಟರ್ ಆಪರೇಟರ್ ಚಂದ್ರು ಹಾಗೂ ಪಿಡಿಓ ಪುಟ್ಟಸ್ವಾಮಿಚಾರಿ ಇಬ್ಬರು ಸೇರಿ ಗ್ರಾಪಂ ಸದಸ್ಯ ಪಾಪನ ಮೇಲೆ ಮಾರಣಾಂತಿಕವಾಗಿ ಹಲ್ಲೆ ಮಾಡಿದ್ದಾರೆ ಎಂದು ದೂರು ದಾಖಲಾಗಿದೆ. ಗ್ರಾಮ ಪಂಚಾಯಿತಿಯಲ್ಲಿ ಇಂತಹ ಘಟನೆ ನಡೆದರೆ ಗ್ರಾಮಗಳ ಅಭಿವೃದ್ಧಿ ಪಡಿಸುವುದಾದರೂ ಹೇಗೆ ಎಂಬುದು ಸಾರ್ವಜನಿಕರಲ್ಲಿ ಪ್ರಶ್ನೆಯಾಗಿದೆ. ಈ ಪ್ರಕರಣ ನಂಜನಗೂಡಿನ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.

ಪುಟ್ಟರಾಜಪ್ಪ ನಿಧನ

ಹುಣಸೂರು, ಆ.18– ನಗರದ ಎಪಿಎಂಸಿ ಬಳಿಯ ನಿವಾಸಿ ನಿವೃತ್ತ ಪಿಡಬ್ಲ್ಯುಡಿ ಇಂಜಿನಿಯರ್ ಪುಟ್ಟರಾಜಪ್ಪ (85) ಭಾನುವಾರ ನಿಧನರಾದರು.



ಮೃತರು ಓರ್ವ ಪುತ್ರ, ಓರ್ವ ಪುತ್ರಿ, ಸೊಸೆ ಅಳಿಯ, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ತಾಲೂಕಿನ ಕಿರಿಜಾಜಿ ಗ್ರಾಮದ ತೋಟದಲ್ಲಿ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸ್ವಾತಂತ್ರ್ಯ ದಿನಾಚರಣೆ ದೇಶದ ಐತಿಹಾಸಿಕ ಹಬ್ಬ



ತಿ.ನರಸೀಪುರ ಪುರಸಭೆ ಆವರಣದಲ್ಲಿ ಸ್ವಾತಂತ್ರ್ಯ ದಿನ ಆಚರಿಸಲಾಯಿತು. ಬಿ.ಕೆ.ವಸಂತಕುಮಾರಿ, ಸಿ.ಪ್ರಕಾಶ, ಎಸ್.ಕೆ.ಕಿರಣ ಎಲ್.ಮಂಜುನಾಥ್, ಬಿ.ಮರಯ್ಯ, ಬಾದಾಮಿ ಮಂಜು ಇತರರು ಇದ್ದರು.

ತಿ.ನರಸೀಪುರ, ಆ.18– ಇತಿಹಾಸವನ್ನು ಮರೆತವರು ಇತಿಹಾಸ ಸೃಷ್ಟಿಸಲಾರರು ಎನ್ನುವ ಡಾ.ಬಿ.ಆರ್. ಅಂಬೇಡ್ಕರ್ ಅವರ ಅಭಿಪ್ರಾಯದಂತೆ ಸ್ವಾತಂತ್ರ್ಯ ಹೋರಾಟವೂ ಕೂಡ ಚಾರಿತ್ರಿಕವಾದದ್ದು, ಹಾಗಾಗಿ ಸ್ವಾತಂತ್ರ್ಯ ದಿನಾಚರಣೆಯೂ ಕೂಡ ದೇಶದ ಐತಿಹಾಸಿಕ ಹಬ್ಬ ಎಂದು ಪುರಸಭೆ ಸದಸ್ಯ ಸಿ. ಪ್ರಕಾಶ್ ಹೇಳಿದರು.

ಪಟ್ಟಣದ ಪುರಸಭೆ ಆವರಣದಲ್ಲಿ ನಡೆದ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಮಾತನಾಡಿದ ಅವರು, ಶತಮಾನಗಳ ಕಾಲ ಬ್ರಿಟಿಷರ ಆಳ್ವಿಕೆಗೆ ಸಿಲುಕಿದ್ದ ದೇಶದಲ್ಲಿ ನಮಗೆ ಅಭಿವ್ಯಕ್ತಿ ಸ್ವಾತಂತ್ರ್ಯವೂ ಇರಲಿಲ್ಲ. ಮಹಾತ್ಮ ಗಾಂಧೀಜಿ ಸೇರಿದಂತೆ ಬ್ರಿಟೀಷರಿಂದ ವಿಮೋಚನೆ ಬಯಸಿದ್ದ ಹಲವು ಗಣ್ಯರು ಸ್ವಾತಂತ್ರ್ಯ ಸಂಗ್ರಾಮವನ್ನು ಆರಂಭಿಸಿ ಪ್ರಾಣವನ್ನೇ ತ್ಯಾಗ ಮಾಡಿ ಆಂಗ್ಲರ ಆಡಳಿತದಿಂದ ಮುಕ್ತಿ ದೊರಕಿಸಿಕೊಟ್ಟರು ಎಂದರು.

ಮತ್ತೋರ್ವ ಸದಸ್ಯ ಎಲ್.ಮಂಜುನಾಥ್ ಮಾತನಾಡಿ, ಸ್ವಾತಂತ್ರ್ಯ ಸೇನಾನಿಗಳು ಹಿಂಸೆ ಮತ್ತು ಅಹಿಂಸೆ ಎರಡೂ ಮಾರ್ಗಗಳಲ್ಲಿ ಹೋರಾಟವನ್ನು ಮಾಡಿದ್ದರಿಂದ ಬ್ರಿಟಿಷರನ್ನು ಭಾರತದಿಂದ ಒದ್ದೋಡಿಸಲು ಸಾಧ್ಯವಾಯಿತು. ಸ್ವಾತಂತ್ರ್ಯ ದಿನಾಚರಣೆ ಚಳುವಳಿಯ ಇತಿಹಾಸವೇ ಹೊರತು ಬರೀ ಆಚರಣೆಯಲ್ಲ ಎಂದು ತಿಳಿಸಿದರು. ಮುಖ್ಯಾಧಿಕಾರಿ ಬಿ.ಕೆ.ವಸಂತಕುಮಾರಿ ಧ್ವಜಾರೋಹಣ ನೆರವೇರಿಸಿದರು.

ಪುರಸಭೆ ಸದಸ್ಯರಾದ ಎಸ್.ಕೆ.ಕಿರಣ, ಬಾದಾಮಿ ಮಂಜು, ಸಿಸ್ಟರ್, ಅಹಮ್ಮದ್ ಸಯೀದ್, ತೇಜಸ್ವಿನಿ ರಾಜು, ರೂಪಶ್ರೀ, ತಾ.ಪಂ ಮಾಜಿ ಉಪಾಧ್ಯಕ್ಷ ಬಿ.ಮರಯ್ಯ, ಮಾಜಿ ಸದಸ್ಯರಾದ ಎಂ.ರಾಘವೇಂದ್ರ, ಪುಳ್ಳಾರಿ ಮಾದೇಶ, ಕಂದಾಯ ನಿರೀಕ್ಷಕ ಅಶೋಕ್, ವ್ಯವಸ್ಥಾಪಕ ಮಹೇಂದ್ರ, ಸಮುದಾಯ ಸಂಘಟಕ ಮಹದೇವ, ಸಮನ್ವಯ ಅಧಿಕಾರಿ ಮಹದೇವ ನಾಯಕ, ರಾಜೇಂದ್ರ ಹಾಗೂ ಇನ್ನಿತರರು ಇದ್ದರು.

ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ

ಮಹಿಳಾ ಕಾಂಗ್ರೆಸ್‌ನಿಂದ 'ಗೋ ಬ್ಯಾಕ್ ಗವರ್ನರ್' ಪ್ರತಿಭಟನೆ



ರಾಜ್ಯಪಾಲರ ರಾಜೀನಾಮೆಗೆ ಆಗ್ರಹಿಸಿ ಮೈಸೂರಿನ ಕಾಂಗ್ರೆಸ್ ಭವನದ ಮುಂದೆ ಮಹಿಳಾ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ಮಾಡಿದರು.

ಮೈಸೂರು, ಆ.18(ಎಂಟಿವೈ)– ಸತ್ಯಾಸತ್ಯತೆ ಪರಿಶೀಲಿಸದೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿ ಮಹಿಳಾ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮೈಸೂರಿನ ಕಾಂಗ್ರೆಸ್ ಭವನದ ಮುಂದೆ ಮಹಿಳಾ ಕಾಂಗ್ರೆಸ್ ವತಿಯಿಂದ ಆಯೋಜಿಸಿದ್ದ 'ಗೋ ಬ್ಯಾಕ್ ಗವರ್ನರ್' ಪ್ರತಿಭಟನೆಯಲ್ಲಿ ಮೈಸೂರು ನಗರ ಮಹಿಳಾ ಘಟಕದ ಕಾರ್ಯಕರ್ತರು ಪಾಲ್ಗೊಂಡು ರಾಜ್ಯಪಾಲರ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರಲ್ಲದೆ, ಗ್ಯಾರಂಟಿ ಯೋಜನೆಗಳ ಭಾಗ್ಯವಿಧಾತ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪರ ನಾವಿದ್ದೇವೆ ಎಂದು ಸಂದೇಶ ಸಾರಿದರು.

ಇದೇ ವೇಳೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷೆ ಡಾ.ಪುಷ್ಪಾ ಅಮರನಾಥ್ ಮಾತನಾಡಿ, ರಾಜ್ಯಪಾಲರು ರಾಜ್ಯ ಪಾಲನೆ ಬಿಟ್ಟು ರಾಜಕಾರಣ ಮಾಡುತ್ತಿದ್ದಾರೆ. ಜೆಡಿಎಸ್, ಬಿಜೆಪಿ ನಾಯಕರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಗಿಳಿಸಲು ಷಡ್ಯಂತ್ರ ಮಾಡಿದ್ದಾರೆ. ಅದು ಫಲಿಸುವುದಿಲ್ಲ. ಗ್ಯಾರಂಟಿ ಯೋಜನೆಗಳು ಮತ್ತು ಭಾಗ್ಯಗಳ ಮುಖ್ಯಮಂತ್ರಿಗಳು ಬಡವರ ಪರವಾಗಿ ರೂಪಿಸಿರುವ ಕಾರ್ಯಕ್ರಮಗಳನ್ನು ಸಹಿಸಲಾಗದೇ ಹುನ್ನಾರ ನಡೆಸಿದ್ದಾರೆ. ಇಡೀ ರಾಜ್ಯದ ಎಲ್ಲ ಮಹಿಳೆಯರು ಸಿದ್ದರಾಮಯ್ಯ ಪರವಾಗಿದ್ದೇವೆ. ರಕ್ತ ಕೊಟ್ಟೇವು, ಪ್ರಾಣ ಬಿಟ್ಟರೂ ಅವರು ಸೋಲಲು ಬಿಡುವುದಿಲ್ಲ ಎಂದರು.

ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ಅವರು ಯಾವುದೇ ತಪ್ಪು ಮಾಡಿಲ್ಲ. ಬಿಜೆಪಿ, ಜೆಡಿಎಸ್ ವಿರುದ್ಧದ ಈ ಹೋರಾಟದಲ್ಲಿ ಗೆಲ್ಲುವುದು ನೂರಕ್ಕೆ ನೂರು ಗ್ಯಾರಂಟಿಯಾಗಿದೆ. ಯಾವತ್ತೂ ಸತ್ಯವೇ ಗೆಲ್ಲಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ಕೇಳಲು ಬಿಜೆಪಿ, ಜೆಡಿಎಸ್ ನಾಯಕರಿಗೆ ನೈತಿಕತೆ ಇಲ್ಲ. ರಾಜ್ಯಪಾಲರು ಮತ್ತು ಕೇಂದ್ರ ಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಬೇಕು. ಮುರುಗೇಶ ನಿರಾಣಿ, ಶಶಿಕಲಾ ಜೊಲ್ಲೆ, ಹೆಚ್.ಡಿ. ಕುಮಾರಸ್ವಾಮಿ ಅವರು ವಿರುದ್ಧ ಪ್ರಕರಣ ದಾಖಲಿಸಲು ರಾಜ್ಯಪಾಲರಿಗೆ ದೂರು ಕೊಡಲಾಗಿದೆ. ಯಾವಾಗ ಅನುಮತಿ ಕೊಡುವರು? ಸಿದ್ದರಾಮಯ್ಯ ಪ್ರಕರಣದಲ್ಲಿ ಆತುರವಾಗಿ ನಿರ್ಧಾರ ಕೈಗೊಂಡಂತೆ ಬಿಜೆಪಿ, ಜೆಡಿಎಸ್ ನಾಯಕರ ವಿರುದ್ಧ ಕ್ರಮಕೈಗೊಳ್ಳಲು ಇನ್ನೆಷ್ಟು ದಿನಗಳು ಬೇಕು ಎಂದು ವಾಗ್ದಾಳಿ ನಡೆಸಿದರು.

ಬಿಜೆಪಿ, ಜೆಡಿಎಸ್ ನಾಯಕರ ಹೋರಾಟದಲ್ಲಿ ಬಡವರ ಪರವಾದ ಕಾಳಜಿ ಇಲ್ಲ. ಕಾಂಗ್ರೆಸ್ ಸರ್ಕಾರದ ಬಡವರ ಪರವಾದ ಕಾರ್ಯಕ್ರಮಗಳನ್ನು ಸ್ಥಗಿತಗೊಳಿಸಲು ಹುನ್ನಾರ ನಡೆಸಿದ್ದಾರೆ. ನಾಡಿನ ರೈತರು, ಮಹಿಳೆಯರು, ದಲಿತರು, ಹಿಂದುಳಿದ ವರ್ಗದವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಮುಟ್ಟಲು ಬಿಡುವುದಿಲ್ಲ ಎಂದು ಎಚ್ಚರಿಕೆ ನೀಡಿದ ಅವರು, ಸತ್ಯಕ್ಕೆ ಯಾವತ್ತೂ ಜಯ ಸಿಗುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಮಹಿಳಾ ಮುಖಂಡರಾದ ಪುಷ್ಪವಲ್ಲಿ, ಲತಾ ಸಿದ್ದಶೆಟ್ಟಿ, ಲತಾ ಮೋಹನ್, ಮಂಜುಳಾ, ರಾಜೇಶ್ವರಿ, ಇಂದಿರಾ, ಭವ್ಯ, ನಾಗರತ್ನ, ರಾಣಿ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಡಬಲ್ ಐಸ್ಮಾರ್ಟ್ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರಾಯನ್ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ವೇದ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಕೃಷ್ಣಂ ಪ್ರಣಯ ಸಖಿ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಭೀಮಾ (ಕ)	4 ಪ್ರದರ್ಶನಗಳು
ರಾಜಕಮಲ್	
ತಂಗಾಲಾನ್ (ತ)	4 ಪ್ರದರ್ಶನಗಳು
ಸಂಗಂ	
ಭೀಮಾ (ಕ)	4 ಪ್ರದರ್ಶನಗಳು
ಲಿಡೋ	
ಗೌರಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಸ್ತ್ರೀ–2 (ಹಿ)	4 ಪ್ರದರ್ಶನಗಳು
ಪ್ರಭಾ	
ಡಬಲ್ ಐಸ್ಮಾರ್ಟ್ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಬೆ.10.55ಕ್ಕೆ, ಮ.1.35ಕ್ಕೆ, ಸಂ.4.20ಕ್ಕೆ, ರಾ.7.10ಕ್ಕೆ, ಕಮಿಟಿ ಕುರ್ರೋಳು (ತೆ): ರಾ.9.55ಕ್ಕೆ.
ಸ್ಕ್ರೀನ್ 2	ಭೀಮಾ (ಕ): ಬೆ.10.05ಕ್ಕೆ, ಮಿನ್‌ಮಿನಿ (ತ): ಮ.1ಕ್ಕೆ, ಕಲ್ಕಿ 2898 ಎಡಿ(3ಡಿ) (ತೆ): ಮ.3.50ಕ್ಕೆ, ರಾಯನ್ (ತ): ರಾ.7.15ಕ್ಕೆ, ಅಡಿಯೋಸ್ ಅಮಿಗೋ (ಮ): ಬೆ.10.05ಕ್ಕೆ.
ಸ್ಕ್ರೀನ್ 3	ಕಬಂಧ (ಕ): ಬೆ.10.35ಕ್ಕೆ, ಜೀನಿಯಸ್ ಮುತ್ತ (ಕ): ಮ.1.20ಕ್ಕೆ, ಅಂಧಗನ್ ದಿ ಪೇನಿಸ್ಟ್ (ತ): ಸಂ.4ಕ್ಕೆ, ಇಟ್ ಎಂಡ್ಸ್ ವಿಥ್ ಅಸ್ (ಇಂ): ರಾ.7ಕ್ಕೆ, ರಾ.9.40ಕ್ಕೆ.
ಸ್ಕ್ರೀನ್ 4	ಭೀಮಾ (ಕ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519


ಸ್ಕ್ರೀನ್ 1	ಅಂಧಗನ್ (ತ): ಮ.1.30ಕ್ಕೆ, ಸಂ.6.30ಕ್ಕೆ, ಪೇಚಿ (ತ): ಸಂ.4.15ಕ್ಕೆ, ಸೂಪರ್ ಜಿಂದಗಿ (ಮ): ರಾ.9.15ಕ್ಕೆ.
ಸ್ಕ್ರೀನ್ 2	ಭೀಮಾ (ಕ): ಬೆ.9.30ಕ್ಕೆ, ಮ.12.30ಕ್ಕೆ, ಮ.3.30ಕ್ಕೆ, ಸಂ.6.30ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	ಭೀಮಾ (ಕ): ಸಂ.4.45ಕ್ಕೆ, ರಾ.7.45ಕ್ಕೆ.
ಸ್ಕ್ರೀನ್ 4	ರಾಯನ್ (ತ): ಮ.1.15ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

'ಸಾರಾ' ಕಾದಂಬರಿ ಬಿಡುಗಡೆ ಮಾಡಿದ ಚಿತ್ರನಟ ಪ್ರಕಾಶ್ ರಾಜ್



ಮೈಸೂರಿನ ಸರಸ್ವತಿಪುರಂನ ಹೆರಿಟೇಜ್ ಹೌಸ್‌ನಲ್ಲಿ ಭಾನುವಾರ ಚಲನಚಿತ್ರ ನಟ ಪ್ರಕಾಶ್‌ರಾಜ್, ಲೇಖಕ ಅನುಷ್ ಎ.ಶೆಟ್ಟಿ ಬರೆದಿರುವ 'ಸಾರಾ' ಕಾದಂಬರಿ ಬಿಡುಗಡೆ ಮಾಡಿದರು.

ಮೈಸೂರು, ಆ.18(ಬಿಎಲ್‌ಯು)– ಲೇಖಕ ಅನುಷ್ ಎ.ಶೆಟ್ಟಿ ಬರೆದಿರುವ ಸಾರಾ ಕಾದಂಬರಿಯನ್ನು ಖ್ಯಾತ ಚಲನಚಿತ್ರ ನಟ ಪ್ರಕಾಶ್ ರಾಜ್ ಇಂದು ಬಿಡುಗಡೆ ಮಾಡಿದರು.

ಮೈಸೂರಿನ ಸರಸ್ವತಿಪುರಂನ ಹೆರಿಟೇಜ್ ಹೌಸ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದ ಅವರು, ಪ್ರತಿಯೊಬ್ಬರಿಗೂ ಬಹು ವಿಚಾರಗಳನ್ನು ತಿಳಿದುಕೊಳ್ಳುವ ಅವಶ್ಯಕತೆ ಇದೆ ಎಂದು ಹೇಳಿದರು.

ಬದುಕಿನಲ್ಲಿ ಬೇರೆ ಬೇರೆ ದಿಗಂತಗಳನ್ನು ನೋಡುತ್ತಿರುವ ನಾನು ಬೆಂಗಳೂರು ನಂತರ ಈಗ ಮೈಸೂರಿಗೆ ಬಂದಿರುವೆ ಎಂದು ಹೇಳಿದರು. ಲೇಖಕ ಅನುಷ್ ಎ.ಶೆಟ್ಟಿ ಪ್ರತಿಭೆಯನ್ನು ಬಹು ಆಯಾಮದಲ್ಲಿ ನೋಡಬಹುದಾಗಿದೆ. ಈತನಲ್ಲಿ ಆನಂದ ಹಾಗೂ ಅರಿವು ಎರಡು ಇದೆ ಎಂದು ಪ್ರಕಾಶ್ ರಾಜ್ ಹೇಳಿದರು.

ವೇದಿಕೆಗಳು ಸಿಕ್ಕ ಸಂದರ್ಭದಲ್ಲಿ ಸಾಮಾನ್ಯವಾಗಿ ಪ್ರಕಾಶ್ ರಾಜ್ ಪ್ರಸಕ್ತ ರಾಜಕೀಯ ಬೆಳವಣಿಗೆ ಬಗ್ಗೆ ಮಾತನಾಡುತ್ತಾರೆ. ಆದರೆ ಇಂದಿನ ಕಾರ್ಯಕ್ರಮದಲ್ಲಿ ಯಾವ ವಿಚಾರದ ಬಗ್ಗೆಯೂ ಮಾತನಾಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಪುಸ್ತಕ ಬಿಡುಗಡೆ ವೇಳೆ ವೇದಿಕೆಯಲ್ಲಿ ಲೇಖಕ ಅನುಷ್ ಎ.ಶೆಟ್ಟಿ, ರಂಗಕರ್ಮಿ ಶ್ರೀಪಾದ ಭಟ್, ಶ್ರೀವತ್ಸ ಉಪಸ್ಥಿತರಿದ್ದರು.

ಕೋಲ್ಕತ್ತಾ ವೈದ್ಯೆ ಅತ್ಯಾಚಾರ-ಕೊಲೆ ಪ್ರಕರಣ

ಪ್ರಧಾನಿ ಮೋದಿಗೆ ಪತ್ರ ಬರೆದ ಪದ್ಮಶ್ರೀ ಪುರಸ್ಕೃತ 70 ವೈದ್ಯರು

ಬೆಂಗಳೂರು, ಆ.18– ಕೋಲ್ಕತ್ತಾದ ಜಿ.ಆರ್.ಆಸ್ಪತ್ರೆ ವೈದ್ಯೆಯ ಅತ್ಯಾಚಾರ ಮತ್ತು ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ದಿನದಿಂದ ದಿನಕ್ಕೆ ಆಕ್ರೋಶದ ಕಿಚ್ಚು ಹೆಚ್ಚಳವಾಗುತ್ತಿದೆ. ಅದರಂತೆ ವೈದ್ಯರ ಮುಷ್ಕರಕ್ಕೆ ಇದೀಗ ಪದ್ಮಶ್ರೀ ಪುರಸ್ಕೃತ 70 ವೈದ್ಯರು ಬೆಂಬಲ ಸೂಚಿಸಿದ್ದಾರೆ. ಜೊತೆಗೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದು, 'ವೈದ್ಯೆ ಮೇಲೆ ಅತ್ಯಾಚಾರವೆಸಗಿ ಕೊಂದವರಿಗೆ ಕಠಿಣ ಶಿಕ್ಷೆ ಆಗಬೇಕು. ವೈದ್ಯರ ಮೇಲಿನ ಹಲ್ಲೆ, ದೌರ್ಜನ್ಯ ತಡೆಗೆ ಪ್ರತ್ಯೇಕ ಕಾನೂನು ರೂಪಿಸಿ. ವೈದ್ಯರ ಮೇಲಿನ ದಾಳಿ ತಡೆಯಲು ಕಾನೂನು ಜಾರಿಗೆ ತರಬೇಕು ಎಂದಿದ್ದಾರೆ.

ಪತ್ರದಲ್ಲೇನಿದೆ: ಕೋಲ್ಕತ್ತಾದ ಆರ್‌ಜಿ ಕರ್ ವೈದ್ಯಕೀಯ ಕಾಲೇಜಿನಲ್ಲಿ ಸಂಭವಿಸಿದ ಭಯಾನಕ ಘಟನೆಗಳ ಬಗ್ಗೆ ಕಳವಳ ಮತ್ತು ಆಳವಾದ ವೇದನೆಯಿಂದ ನಿಮಗೆ ಪತ್ರ ಬರೆಯುತ್ತೇವೆ. ನಮ್ಮ ರಾಷ್ಟ್ರದ ಮುಖ್ಯಸ್ಥರಾಗಿ, ಈ ಆತಂಕಕಾರಿ ಪರಿಸ್ಥಿತಿಯನ್ನು ಪರಿಹರಿಸಲು ನಿಮ್ಮ ತಕ್ಷಣದ ಮತ್ತು ವೈಯಕ್ತಿಕ ಹಸ್ತಕ್ಷೇಪವನ್ನು ನಾವು ಬೇಡಿಕೊಳ್ಳುತ್ತೇವೆ. ಇಂತಹ ಕ್ರೂರ ಕೃತ್ಯಗಳು ವೈದ್ಯಕೀಯ ವೃತ್ತಿಪರರ ಸೇವೆಯ ತಳಹದಿಯನ್ನು ಅಲುಗಾಡಿಸುತ್ತವೆ. ಸಂತ್ರಸ್ತರ ಕುಟುಂಬದೊಂದಿಗೆ ನಾವು ನಿಲ್ಲುತ್ತೇವೆ, ಅವರ ನೋವು ಮತ್ತು ನಷ್ಟವನ್ನು ಊಹಿಸಲೂ ಸಾಧ್ಯವಿಲ್ಲ. ತಮ್ಮ ಕೆಲಸದ ಸಂದರ್ಭದಲ್ಲಿ ಇಂತಹ ಹಿಂಸೆಯನ್ನು ಹೆಚ್ಚಾಗಿ ಎದುರಿಸುತ್ತಿರುವ ವೈದ್ಯಕೀಯ ಸಮುದಾಯಕ್ಕೆ ನಾವು ನಮ್ಮ ಸಂಪೂರ್ಣ ಬೆಂಬಲವನ್ನು ನೀಡುತ್ತೇವೆ. ಆರೋಗ್ಯ ವೃತ್ತಿಪರರ ಸುರಕ್ಷತೆ ಮತ್ತು ಘನತೆಯನ್ನು ಅತ್ಯಂತ ಆದ್ಯತೆಯೊಂದಿಗೆ ರಕ್ಷಿಸಬೇಕು.

ಬಲವಾದ ಕ್ರಮಗಳು ತೀರಾ ಅಗತ್ಯ: ಇಂತಹ ದುಷ್ಕೃತ್ಯಗಳನ್ನು ತಡೆಯಲು ಬಲವಾದ ಕ್ರಮಗಳು ತೀರಾ ಅಗತ್ಯವಿದೆ. ಹೀಗಾಗಿ ಕಾನೂನು ಜಾರಿ ಸಂಸ್ಥೆಗಳು, ನೀತಿ ನಿರೂಪಕರು ಮತ್ತು ಸಮಾಜವು ತಕ್ಷಣವೇ ಈ ಕುರಿತು ಕ್ರಮವನ್ನು ತೆಗೆದುಕೊಳ್ಳುವಂತೆ ನಾವು ಮನವಿ ಮಾಡುತ್ತೇವೆ. ಈ ದುರಂತವು ನಿಜವಾದ, ಶಾಶ್ವತವಾದ ಬದಲಾವಣೆಗೆ ವೇಗವರ್ಧಕವಾಗಿ ಕಾರ್ಯನಿರ್ವಹಿಸಲಿ. ದಿವಂಗತ ನಿರ್ಭಯ ಮತ್ತು ಎಲ್ಲಾ ಲೈಂಗಿಕ ಹಿಂಸೆಯ ಬಲಿಪಶುಗಳಿಗೆ ಮತ್ತು ಭವಿಷ್ಯದ ಪೀಳಿಗೆಗೆ ಅಂತಹ ಭಯಾನಕತೆಯನ್ನು ಯೋಚಿಸಲಾಗದ ಸಮಾಜವನ್ನು ರಚಿಸಲು ನಾವು ಋಣಿಯಾಗಿದ್ದೇವೆ ಎಂದಿರುವ ವೈದ್ಯರು, ದೈಹಿಕ ಹಲ್ಲೆಗಳು ಮತ್ತು ಎಲ್ಲಾ ಆರೋಗ್ಯ ಕಾರ್ಯಕರ್ತರ ಘನತೆ ಮತ್ತು ಗೌರವಕ್ಕೆ ಧಕ್ಕೆಯಾಗದಂತೆ ವೈದ್ಯಕೀಯ ವೃತ್ತಿಯನ್ನು ರಕ್ಷಿಸಲು ಪತ್ರದ ಮೂಲಕ ಪ್ರಧಾನಿ ಅವರಿಗೆ ಮನಃಪೂರ್ವಕವಾಗಿ ಮನವಿ ಮಾಡಿದ್ದಾರೆ.

ಪ್ರತಿಯೊಬ್ಬರೂ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು

ಸಂಸದ ಯದುವೀರ್ ಸಲಹೆ


ಮೈಸೂರಿನ ವಿಜಯ ವಿಠಲ ವಿದ್ಯಾಶಾಲೆಯಲ್ಲಿ ನಡೆದ ಆರೋಗ್ಯ ರಕ್ಷಾ ಕಾರ್ಯಕ್ರಮವನ್ನು ಸಂಸದ ಯದುವೀರ್ ಉದ್ಘಾಟಿಸಿದರು.

ಮೈಸೂರು, ಆ.18(ಎಸ್‌ಬಿಡಿ)– ಎಲ್ಲರೂ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿದರು.

ಮೈಸೂರಿನ ವಿಜಯ ವಿಠಲ ವಿದ್ಯಾಶಾಲೆಯಲ್ಲಿ ಜಿಎಸ್‌ಎಸ್ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಏರ್ಪಡಿಸಿದ್ದ 'ಆರೋಗ್ಯ ರಕ್ಷಾ– ಅನಾರೋಗ್ಯದಿಂದ ಆರೋಗ್ಯದ ಕಡೆಗೆ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಬ್ಬರಲ್ಲೂ ಆರೋಗ್ಯದ ಕಾಳಜಿ ಇರಬೇಕು. ಆ ಮೂಲಕ ಆರೋಗ್ಯಯುತ ಸಮಾಜ ಕಟ್ಟುವ ಅಗತ್ಯವಿದೆ. ಹಾಗಾಗಿ ಜನರಲ್ಲಿ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವ ಇಂತಹ ಕಾರ್ಯಕ್ರಮಗಳು ಹೆಚ್ಚಾಗಬೇಕು ಎಂದು ಆಶಿಸಿದರು.

ಗಾಯಕ ಶ್ರೀಹರ್ಷ ಹಾಡುಗಳ ಮೂಲಕ ನೆರೆದಿದ್ದವರ ಮನರಂಜಿಸುವುದರ ಜೊತೆಗೆ ಉತ್ತಮ ಆರೋಗ್ಯ, ಉತ್ತಮ ಆಹಾರ, ಆಲೋಚನೆ ಹಾಗೂ ಪರಿಸರದ ಬಗ್ಗೆ ಮಾಹಿತಿ ನೀಡಿದರು. ಕಾರ್ಯಕ್ರಮದ ಅಂಗವಾಗಿ ಉಚಿತ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರ ಹಾಗೂ ಆಹಾರ ಮೇಳವನ್ನು ನಡೆಸಲಾಯಿತು. ಕಾರ್ಯಕ್ರಮದಲ್ಲಿ ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಆಶಾದ್ ಉರ್ ರೆಹಮಾನ್ ಷರೀಫ್, ಬ್ರಹ್ಮಕುಮಾರಿ ಮಂಜುಳಾ, ಶ್ರೀಮತಿ ನಿರ್ಮಲ ಬೆನೆಡಿಕ್ಟ್, ರಮೇಶ್ ಕಿಕ್ಕೇರಿ, ಕಾರುಣ್ಯ ಸಾಗರ್ ದಾಸ್, ಜಿಎಸ್‌ಎಸ್ ಸಂಸ್ಥೆಯ ಶ್ರೀಹರಿ, ವಿಜಯ ವಿಠಲ ವಿದ್ಯಾಸಂಸ್ಥೆಗಳ ಗೌರವ ಕಾರ್ಯದರ್ಶಿ ಆರ್.ವಾಸುದೇವ್ ಭಟ್, ಪ್ರಾಂಶುಪಾಲರಾದ ಎಸ್.ಎ.ವೀಣಾ ಮತ್ತಿತರರು ಉಪಸ್ಥಿತರಿದ್ದರು.

ಬೈಕ್‌ಗೆ ಇನ್ನೋವಾ ಕಾರು ಡಿಕ್ಕಿ; ಖಾಸಗಿ ಬ್ಯಾಂಕ್ ಉದ್ಯೋಗಿ ಸಾವು

ಹೆಲ್ಮೆಟ್ ಧರಿಸದ ಕಾರಣ ತಲೆಗೆ ಪೆಟ್ಟು

ಮೈಸೂರು, ಆ.18(ಬಿಎಲ್‌ಯು)– ಬೈಕ್‌ಗೆ ಇನ್ನೋವಾ ಕಾರು ಡಿಕ್ಕಿ ಹೊಡೆದ ಪರಿಣಾಮ ಖಾಸಗಿ ಬ್ಯಾಂಕ್ ಉದ್ಯೋಗಿ ಮೃತಪಟ್ಟಿರುವ ಘಟನೆ ಮೈಸೂರಿನಲ್ಲಿ ಇಂದು ಸಂಭವಿಸಿದೆ.

ಮೈಸೂರಿನ ಹೆಚ್.ಡಿ.ಕೋಟೆ ತಾಲೂಕು ಹಂಪಾಪುರ ಹೋಬಳಿ ಬೆಟ್ಟದಬೀಡು ಗ್ರಾಮದ ಉಲ್ಲಾಸ್ ಸಾಗರ್ (27) ಮೃತಪಟ್ಟ ದುರ್ದೈವಿಯಾಗಿದ್ದಾನೆ.

ಇಂದು ಬೆಳಗ್ಗೆ ನಗರದ ದೇವರಾಜ ಅರಸ್ ರಸ್ತೆಯಿಂದ ಉಲ್ಲಾಸ್ ಸಾಗರ್ ಬೈಕ್ (ಕೆಎ 10, ಇಇ 3665)ನಲ್ಲಿ ಜೆಎಲ್‌ಬಿ ರಸ್ತೆ ಕಡೆಗೆ ಹೋಗುವಾಗ ದಿವಾನ್ಸ್ ರಸ್ತೆ ಜಂಕ್ಷನ್‌ನಲ್ಲಿ ಇನ್ನೋವಾ ಕಾರು (ಕೆಎ 05, ಎಎಂ– 5428) ಡಿಕ್ಕಿ ಹೊಡೆದಿದೆ.

ಇದರಿಂದ ಬೈಕ್ ಚಾಲನೆ ಮಾಡುತ್ತಿದ್ದ ಉಲ್ಲಾಸ್ ಸಾಗರ್ ಹಾಗೂ ಹಿಂಬದಿ ಸವಾರರಾದ ವರ್ಷ(36) ಗಾಯಗೊಂಡರು.

ಇಬ್ಬರು ಹೆಲ್ಮೆಟ್ ಧರಿಸದ ಕಾರಣ ತಲೆಗೆ ತೀವ್ರ ಪೆಟ್ಟು ಬಿದ್ದಿತ್ತು. ಕೂಡಲೇ ಇಬ್ಬರನ್ನು ಒಂಟಿಕೊಪ್ಪಲ್‌ನ ಡಿಆರ್‌ಎಂ ಆಸ್ಪತ್ರೆಗೆ ದಾಖಲು ಮಾಡಲಾಯಿತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಉಲ್ಲಾಸ್ ಸಾಗರ್ ಮೃತಪಟ್ಟಿದ್ದಾನೆ.

ವರ್ಷ ಪ್ರಾಣಾಪಾಯದಿಂದ ಪಾರಾಗಿದ್ದು, ಚಿಕಿತ್ಸೆ ಪಡೆಯುತ್ತಿದ್ದಾರೆ.

ಈ ಸಂಬಂಧ ನಗರದ ದೇವರಾಜ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಳೆದ ಭಾನುವಾರದಂದು ಇದೇ ದೇವರಾಜ ಅರಸ್ ರಸ್ತೆಯಲ್ಲಿ ಅಪಘಾತದಿಂದ ರೈಲ್ವೆ ಉದ್ಯೋಗಿ ಶಿವಕುಮಾರ್ ಮೃತಪಟ್ಟಿದ್ದರು. ಈಗ ಇದೇ ರಸ್ತೆಯಲ್ಲಿ ಒಂದು ವಾರಕ್ಕೆ ಮತ್ತೊಂದು ಅಪಘಾತ ಸಂಭವಿಸಿ ಯುವಕ ಮೃತಪಟ್ಟಿದ್ದಾನೆ.

ಸಂಚಾರ ನಿಯಮ ಅವ್ಯವಸ್ಥೆ ಸರಿಪಡಿಸುವಂತೆ ಪ್ರತಿಭಟನೆ



ಆಗಾಗ ಅಪಘಾತಗಳು ಸಂಭವಿಸುತ್ತಿರುವ ದೇವರಾಜ ಅರಸ್ ರಸ್ತೆಯ ಸಂಚಾರ ನಿಯಮ ಅವ್ಯವಸ್ಥೆ ಸರಿಪಡಿಸುವಂತೆ ಇಂದು ಮಾಜಿ ಕಾರ್ಪೊರೇಟರ್ ಪ್ರಶಾಂತ್ ಗೌಡ ನೇತೃತ್ವದಲ್ಲಿ ಸ್ಥಳೀಯರು ಪ್ರತಿಭಟನೆ ನಡೆಸಿದರು.

ಈ ಮೊದಲು ದೇವರಾಜ ಅರಸ್ ರಸ್ತೆಯಲ್ಲಿ ರಸ್ತೆ ಡುಬ್ಬಗಳಿತ್ತು. ಆದರೆ ಹೊಸದಾಗಿ ಡಾಂಬರೀಕರಣ ಮಾಡುವ ವೇಳೆ ರಸ್ತೆ ಡುಬ್ಬಗಳನ್ನು ತೆರವುಗೊಳಿಸಲಾಗಿದೆ. ಇದರಿಂದ ಅಪಘಾತಗಳು ಸಂಭವಿಸುತ್ತಿದೆ ಎಂದು ಆರೋಪಿಸಿದ್ದಾರೆ.

ಅಪಘಾತಗಳಿಗೆ ಕಡಿವಾಣ ಹಾಕಲು ದೇವರಾಜ ಅರಸ್ ರಸ್ತೆಯಲ್ಲಿ ವೈಜ್ಞಾನಿಕ ರಸ್ತೆ ಡುಬ್ಬಗಳನ್ನು ನಿರ್ಮಾಣ ಮಾಡಬೇಕು. ಜೊತೆಗೆ ಹೆಚ್ಚು ಅಪಘಾತಗಳು ಸಂಭವಿಸುವ ಸ್ಥಳಗಳಲ್ಲಿ ಬ್ಯಾರಿಕೇಡ್‌ಗಳನ್ನು ನಿಲ್ಲಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಮಾಜಿ ಕಾರ್ಪೊರೇಟರ್ ಪ್ರಶಾಂತ್ ಗೌಡ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ವಕೀಲ ಗೋಪಿನಾಥ್, ಗುರುರಾಜ್ ಶೆಟ್ಟಿ, ಗುರು ಪ್ರಸಾದ್, ನಂದಕುಮಾರ್, ಸ್ಕಂದ ಸೇರಿದಂತೆ ಹಲವರು ಭಾಗವಹಿಸಿದ್ದರು.

ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ


ಮೈಸೂರಿನ ವಾರ್ಡ್ ನಂ.8, 9 ಮತ್ತು 17ಕ್ಕೆ ಒಳಪಟ್ಟಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ತನ್ವೀರ್ ಸೇಠ್ ಚಾಲನೆ ನೀಡಿದರು. ಈ ವೇಳೆ ಅಜೀಜ್ ಸೇಠ್ ಬ್ಲಾಕ್ ಕಾಂಗ್ರೆಸ್ ಸಯ್ಯದ್ ಇಕ್ಬಾಲ್, ನಗರ ಯುವ ಕಾಂಗ್ರೆಸ್ ಮಾಜಿ ಅಧ್ಯಕ್ಷ ಶೌಕತ್ ಅಲಿ ಖಾನ್, ಕೆಪಿಸಿಸಿ ಅಲ್ಪಸಂಖ್ಯಾತ ವಿಭಾಗದ ಕಾರ್ಯದರ್ಶಿ ಸಯ್ಯದ್ ಫಾರೂಕ್ ಇನ್ನಿತರರಿದ್ದರು.

ದೇಶ - ವಿದೇಶ


ಲಂಡನ್ ಹೋಟೆಲ್‌ನಲ್ಲಿ ಏರ್ ಇಂಡಿಯಾ ಮಹಿಳಾ ಸಿಬ್ಬಂದಿಗೆ ಲೈಂಗಿಕ ಕಿರುಕುಳ



ನವದೆಹಲಿ: ಲಂಡನ್ ಹೋಟೆಲ್‌ನಲ್ಲಿ ಏರ್ ಇಂಡಿಯಾ ಮಹಿಳಾ ಸಿಬ್ಬಂದಿಗೆ ದುಷ್ಕರ್ಮಿಯೋರ್ವ ಲೈಂಗಿಕ ಕಿರುಕುಳ ನೀಡಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಈ ವಾರದ ಆರಂಭದಲ್ಲಿ ಏರ್ ಇಂಡಿಯಾದ ಮಹಿಳಾ ಕ್ಯಾಬಿನ್ ಸಿಬ್ಬಂದಿಯೊಬ್ಬರ ಮೇಲೆ ಲಂಡನ್ ಹೋಟೆಲ್‌ನಲ್ಲಿ ಲೈಂಗಿಕ ಹಲ್ಲೆ ನಡೆದಿದೆ ಎಂದು ಮೂಲಗಳು ತಿಳಿಸಿವೆ. ಮಹಿಳಾ ಕ್ಯಾಬಿನ್ ಸಿಬ್ಬಂದಿ ಉಳಿದುಕೊಂಡಿದ್ದ ಹೋಟೆಲ್‌ನ ಕೋಣೆಗೆ ವ್ಯಕ್ತಿಯೊಬ್ಬ ನುಗ್ಗಿ ಆಕೆ ಮೇಲೆ ಹಲ್ಲೆ ನಡೆಸಿದ್ದಾನೆ. ಈ ವೇಳೆ ಆಕೆ ಕೂಗಿಕೊಂಡಿದ್ದು, ಅಕ್ಕಪಕ್ಕದಲ್ಲಿದ್ದ ಇತರರು ಬಂದು ಆಕೆಯನ್ನು ರಕ್ಷಿಸಿದ್ದಾರೆ. ಅಲ್ಲದೆ ದಾಳಿಕೋರ ವ್ಯಕ್ತಿಯನ್ನು ಸೆರೆ ಹಿಡಿದಿದ್ದಾರೆ.

ಲಂಡನ್‌ನ ಹೋಟೆಲ್‌ವೊಂದರಲ್ಲಿ ನಮ್ಮ ಸಿಬ್ಬಂದಿ ಉಳಿದುಕೊಂಡಿದ್ದರು. ಹೋಟೆಲ್ ಭದ್ರತೆಯನ್ನು ಬೇಧಿಸಿ ವ್ಯಕ್ತಿಯೊಬ್ಬ ಒಳಗೆ ಪ್ರವೇಶ ಮಾಡಿ ನಮ್ಮ ಸಿಬ್ಬಂದಿ ಮೇಲೆ ದೌರ್ಜನ್ಯ ಎಸಗಿದ್ದಾನೆ. ತಕ್ಷಣಕ್ಕೆ ಕೆಲವರು ಸ್ಥಳಕ್ಕೆ ಬಂದು ಆಕೆಯನ್ನು ರಕ್ಷಣೆ ಮಾಡಿದ್ದಾರೆ. ಆರೋಪಿಯನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ ಎಂದು ವಕ್ತಾರರು ಮಾಹಿತಿ ನೀಡಿದ್ದಾರೆ.

ಪಾಕಿಸ್ತಾನದ 188 ಹಿಂದೂಗಳಿಗೆ ಸಿಎಎ ಕಾಯ್ದೆಯಡಿ ಸಿಕ್ತು ಭಾರತೀಯ ಪೌರತ್ವ



ಅಹಮದಾಬಾದ್: ಸಿಎಎ ಕಾಯ್ದೆ ಅಡಿಯಲ್ಲಿ 188 ಪಾಕಿಸ್ತಾನಿ ಹಿಂದೂಗಳಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಭಾನುವಾರ ಭಾರತೀಯ ಪೌರತ್ವ ನೀಡಿದರು.

ಗುಜರಾತ್‌ನ ಅಹಮದಾಬಾದ್‌ನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ 188 ಪಾಕಿಸ್ತಾನಿ ಹಿಂದೂಗಳಿಗೆ ಭಾರತೀಯ ಪೌರತ್ವ ನೀಡಿದ ಬಳಿಕ ಮಾತನಾಡಿದ ಅಮಿತ್ ಶಾ, ಬಾಂಗ್ಲಾದೇಶ ವಿಭಜನೆಯಾದಾಗ ಅಲ್ಲಿ ಶೇ.27ರಷ್ಟು ಹಿಂದೂಗಳಿದ್ದರು. ಇಂದು ಶೇ.9ರಷ್ಟು ಇದ್ದಾರೆ. ಇಷ್ಟು ಹಿಂದೂಗಳು ಎಲ್ಲಿಗೆ ಹೋಗಿದ್ದಾರೆ. ಅವರನ್ನು ನೆರೆಯ ದೇಶದಿಂದ ಹಿಂದೂಗಳು ಎಂದು ಕರೆಯಲಾಯಿತು. ನಾವು 2019ರಲ್ಲಿ ಸಿಎಎ ತಂದಿದ್ದೇವೆ. ಸಿಎಎ ಕಾನೂನಿಂದಾಗಿ ಕೋಟ್ಯಾಂತರ ಹಿಂದೂಗಳು, ಜೈನರು ಮತ್ತು ಸಿಖ್ ಧರ್ಮದ ಜನರು ಭಾರತೀಯ ಪೌರತ್ವವನ್ನು ಪಡೆಯುತ್ತಾರೆ ಎಂದರು. ಸಿಎಎ ಬಗ್ಗೆ ಮುಸ್ಲಿಮರನ್ನು ಪ್ರಚೋದಿಸಲಾಗಿದೆ ಎಂದು ಆರೋಪಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ, ಸಿಎಎ ಕಾನೂನು ಯಾರ ಪೌರತ್ವವನ್ನೂ ಕಸಿದುಕೊಳ್ಳುವುದಿಲ್ಲ ಎಂದು ಹೇಳಿದರು.

6 ತಿಂಗಳ ಬಳಿಕ ಕೋಮಾದಿಂದ ಎದ್ದವನಿಗೆ ಆಸ್ಪತ್ರೆ ಬಿಲ್ ನೋಡಿ ಶಾಕ್



ನ್ಯೂಯಾರ್ಕ್: ಲಾಸ್ ವೇಗಾಸ್‌ನ ಜಾನ್ ಪೆನ್ನಿಂಗ್‌ಟನ್ ಎಂಬ ಹೆಸರಿನ ವ್ಯಕ್ತಿಯೊಬ್ಬರು ಕಾರು ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡು ಕೋಮಾಗೆ ಜಾರಿದ್ದರು. ಅವರು, 6 ತಿಂಗಳು ಆಸ್ಪತ್ರೆಯಲ್ಲಿ ಕೋಮಾದಲ್ಲಿದ್ದಕ್ಕೆ 2.5 ಮಿಲಿಯನ್ ಡಾಲರ್ (ರೂ. 2,09,67,775) ಬಿಲ್ ನೀಡಿದ್ದರು. ಅದನ್ನು ನೋಡಿ ನನಗೆ ಶಾಕ್ ಆಯಿತು ಎಂದಿದ್ದಾರೆ. ನಾನು ಕಣ್ಣು ಬಿಟ್ಟಾಗ ನನ್ನನ್ನು ಹಾಸಿಗೆಗೆ ಕಟ್ಟಿಹಾಕಿದ್ದರು. ಬೆಳಗ್ಗೆ ನಿದ್ರೆಯಿಂದ ಎದ್ದು ಆಫೀಸಿಗೆ ಹೊರಡಲು ತಡವಾಯಿತು ಎಂಬ ಅನುಭವ ನನ್ನಲ್ಲಿತ್ತು. ಆ 6 ತಿಂಗಳ ಕಾಲ ನಾನು ಪ್ರಜ್ಞೆ ಕಳೆದುಕೊಂಡಿದ್ದೆ ಎಂಬುದು ನನಗೆ ತಿಳಿದಿರಲಿಲ್ಲ. ನನ್ನ ಪಕ್ಕದಲ್ಲಿದ್ದ ನರ್ಸ್ ಬಳಿ ನಾನು ಬಾತ್‌ರೂಂ ಬಳಸಬಹುದಾ ಎಂದು ಕೇಳಿದೆ. ಇದ್ದಕ್ಕಿದ್ದಂತೆ ನಾನು ಎದ್ದು ಕುಳಿತು ಮಾತನಾಡಿದ್ದನ್ನು ನೋಡಿ ಆ ನರ್ಸ್ ಕಣ್ಣೀರು ಹಾಕುತ್ತಾ ಹೊರಗೆ ಓಡಿಹೋದಳು ಎಂದು ಜಾನ್ ಬರೆದುಕೊಂಡಿದ್ದಾರೆ. ಬಳಿಕ ಆ ನರ್ಸ್ ಕೆಲವು ನಿಮಿಷಗಳ ನಂತರ ನನ್ನಲ್ಲಿ ಕ್ಷಮೆ ಕೇಳಲು ಹಿಂತಿರುಗಿದಳು. ಕಳೆದ 6 ತಿಂಗಳಿನಿಂದ ನಾನು ತೀವ್ರವಾದ ಆಘಾತಕಾರಿ ಮಿದುಳಿನ ಗಾಯದಿಂದಾಗಿ ಕೋಮಾದಲ್ಲಿದ್ದ ವಿಚಾರವನ್ನು ಆಕೆ ನನಗೆ ತಿಳಿಸಿದರು ಎಂದಿರುವ ಅವರು ತಮ್ಮ ಚಿಕಿತ್ಸೆ ವೆಚ್ಚ ಸರಿದೂಗಿಸಲು ಸಹಾಯ ಮಾಡಲು GoFundMe ಪುಟವನ್ನು ರಚಿಸಿದ್ದಾಗಿ ತಿಳಿಸಿದ್ದಾರೆ.

ಚಲಿಸುತ್ತಿದ್ದ ಬಸ್‌ನಲ್ಲಿ ಅಪ್ರಾಪ್ತ ಬಾಲಕಿ ಮೇಲೆ ಗ್ಯಾಂಗ್ ರೇಪ್: ಚಾಲಕ, ನಿರ್ವಾಹಕ ಸೇರಿ 6 ಮಂದಿ ಬಂಧನ



ನವದೆಹಲಿ: ದೆಹಲಿಯಿಂದ ಉತ್ತರಾಖಂಡದ ರಸ್ತೆ ಮಾರ್ಗದ ಬಸ್‌ನಲ್ಲಿ ಅಪ್ರಾಪ್ತ ಬಾಲಕಿ ಮೇಲೆ ಅತ್ಯಾಚಾರವೆಸಗಿದ ಪ್ರಕರಣ ಬೆಳಕಿಗೆ ಬಂದಿದೆ. ಕೃತ್ಯ ಎಸಗಿದ ಬಸ್ ಚಾಲಕ ಮತ್ತು ಕಂಡಕ್ಟರ್ ಸೇರಿದಂತೆ 6 ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ.

ಸಂತ್ರಸ್ತ ಬಾಲಕಿ ಆ.12ರ ರಾತ್ರಿ 12:30 ಕ್ಕೆ ದೆಹಲಿಯ ISBTಯಿಂದ ಉತ್ತರಾಖಂಡ್ ರಸ್ತೆ ಮಾರ್ಗದ ಮೂಲಕ ಡೆಹ್ರಾಡೂನ್‌ಗೆ ಬಸ್‌ನಲ್ಲಿ ಬಾಲಕಿ ತೆರಳಿದ್ದಳು ಎಂದು ಹೇಳಲಾಗುತ್ತದೆ. ಈ ವೇಳೆ ಮಧ್ಯರಾತ್ರಿ ಅಪ್ರಾಪ್ತ ಬಾಲಕಿ ಮೇಲೆ ಅತ್ಯಾಚಾರವೆಸಗಿದ ವಿಷಯ ಬೆಳಕಿಗೆ ಬಂದಿದೆ.

ಆ.13ರಂದು ಮುಂಜಾವು 2ರಿಂದ 2:30ರ ನಡುವೆ ಅಪ್ರಾಪ್ತ ಬಾಲಕಿ ಪ್ರಜ್ಞಾಹೀನ ಸ್ಥಿತಿಯಲ್ಲಿ ಪತ್ತೆಯಾಗಿದ್ದಾಳೆ. ಬಾಲಕಿಯ ಮಾನಸಿಕ ಸ್ಥಿತಿಯೂ ಚೆನ್ನಾಗಿರಲಿಲ್ಲ, ತುಂಬಾನೆ ಆತಂಕಗೊಂಡಿದ್ದಳು. ಆಕೆಯ ದೇಹದ ಮೇಲೆ ಯಾವುದೇ ಗಾಯ ಅಥವಾ ರಕ್ತಸ್ರಾವ ಕಂಡುಬಂದಿಲ್ಲ. ಆದರೆ ಆಂತರಿಕವಾಗಿ ಗಾಯವಿದೆಯೇ ಅಥವಾ ಇಲ್ಲವೇ ಎಂದು ನಾವು ಹೇಳಲು ಸಾಧ್ಯವಿಲ್ಲ ಎಂದು ಐಎಸ್‌ಬಿಟಿಯ ಸಿಡಬ್ಲ್ಯೂಸಿಯ ಮೇಲ್ವಿಚಾರಕಿ ಸರೋಜಿನಿ ಹೇಳಿದ್ದಾರೆ.

ದೇವರ ಹುಂಡಿ ಮೇಲೆ ತನ್ನ ಕ್ಯೂಆರ್ ಕೋಡ್ ಅಂಟಿಸಿ ಲಕ್ಷ ಲಕ್ಷ ದೋಚಿದ್ದ ಖದೀಮ



ಚೀನಾ: ಹಲವಾರು ಬೌದ್ಧ ದೇವಾಲಯಗಳ ಹೆಸರಿನಲ್ಲಿ ದೇಣಿಗೆ ಹಣ ಪಡೆದು ವಂಚಿಸಿದ ಆರೋಪದ ಮೇಲೆ ಚೀನಾದ ವ್ಯಕ್ತಿಯನ್ನು ಬಂಧಿಸಲಾಗಿದೆ. ವರದಿಗಳ ಪ್ರಕಾರ, ಈತ ದೇವಸ್ಥಾನದ ಹುಂಡಿಯ ಮೇಲೆ ತನ್ನ ವೈಯಕ್ತಿಕ ಬ್ಯಾಂಕ್ ಖಾತೆಯ ಕ್ಯೂಆರ್ ಕೋಡ್ ಅಂಟಿಸಿದ್ದ ಎಂದು ತಿಳಿದುಬಂದಿದೆ. ಈ ಖದೀಮ ಪ್ರತಿಷ್ಠಿತ ವಿಶ್ವವಿದ್ಯಾಲಯದಿಂದ ಕಾನೂನಿನಲ್ಲಿ ಸ್ನಾತಕೋತ್ತರ ಪದವಿಯನ್ನು ಪಡೆದಿದ್ದಾನೆ. ಈ ವರ್ಷ ಶಾಂಕ್ಸಿ, ಸಿಚುವಾನ್ ಮತ್ತು ಚಾಂಗ್‌ಕಿಂಗ್ ಪ್ರಾಂತ್ಯಗಳಲ್ಲಿನ ದೇವಾಲಯಗಳಿಂದ 30,000 ಯುವಾನ್ (ಅಂದಾಜು 3.5 ಲಕ್ಷ) ಕದ್ದಿರುವುದಾಗಿ ತನಿಖೆಯ ವೇಳೆ ಒಪ್ಪಿಕೊಂಡಿದ್ದಾನೆ. ತನಿಖಾಧಿಕಾರಿಗಳ ಪ್ರಕಾರ, ಈತ ಕದ್ದ ಎಲ್ಲಾ ಹಣವನ್ನು ಹಿಂದಿರುಗಿಸಿರುವುದಾಗಿ ತಿಳಿದುಬಂದಿದೆ.

ಪೊಲೀಸರು ದೇವಸ್ಥಾನದ ಸಿಸಿಟಿವಿ ದೃಶ್ಯಗಳನ್ನು ಪರಿಶೀಲಿಸಿದಾಗ ದೇವಸ್ಥಾನದಲ್ಲಿ ದೇಣಿಗೆ ನೀಡಲು ಭಕ್ತ ಮೊಬೈಲ್‌ನಿಂದ ಕ್ಯೂಆರ್ ಕೋಡ್ ಅನ್ನು ಸ್ಕ್ಯಾನ್ ಮಾಡಿದಾಗ, ದೇಣಿಗೆ ಮೊತ್ತವನ್ನು ನೇರವಾಗಿ ಆ ವ್ಯಕ್ತಿಯ ಖಾತೆಗೆ ವರ್ಗಾವಣೆಯಾಗಿರುವುದು ಗೊತ್ತಾಗಿದೆ.

ಮುಡಾದಲ್ಲಿ ಭಾರಿ ಹಗರಣ, ಸರ್ಕಾರಕ್ಕೆ ಸಾವಿರಾರು ಕೋಟಿ ನಷ್ಟ

ಇಡಿ ಸ್ವಯಂಪ್ರೇರಿತ ದೂರು ದಾಖಲಿಸಿ, ತನಿಖೆ ನಡೆಸಲಿ

ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾ ರಾಜ್ಯಾಧ್ಯಕ್ಷ ಕೌಟಿಲ್ಯ ರಘು ಆಗ್ರಹ

ಮೈಸೂರು, ಆ.18(ಜಿಎ)–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ)ದಲ್ಲಿ ಕಾನೂನುಬಾಹಿರವಾಗಿ ಆಸ್ತಿ ಹಂಚಿಕೆ ಮಾಡಿ ಸರ್ಕಾರಕ್ಕೆ ಸಾವಿರಕ್ಕೂ ಹೆಚ್ಚು ಕೋಟಿ ರೂ. ಆರ್ಥಿಕ ನಷ್ಟ ಮಾಡಿರುವುದರಿಂದ ಜಾರಿ ನಿರ್ದೇಶನಾಲಯ (ಇಡಿ) ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ತನಿಖೆ ಮಾಡುವಂತೆ ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾ ರಾಜ್ಯಾಧ್ಯಕ್ಷ ಕೌಟಿಲ್ಯ ರಘು ಆಗ್ರಹಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2023ರ ನ.27ರಂದು ಅಂದಿನ ಮೈಸೂರು ಜಿಲ್ಲಾಧಿಕಾರಿ ನಗರಾಭಿವೃದ್ಧಿ ಪ್ರಾಧಿ ಕಾರದ ಕಾರ್ಯದರ್ಶಿಗೆ ಪತ್ರ ಬರೆದು ಮೈಸೂರು ನಗರಾಭಿವೃದ್ಧಿಯಲ್ಲಿ ಹಲವಾರು ಪ್ರಕರಣಗಳಲ್ಲಿ ಭೂಮಾಲೀಕರಿಗೆ ಪರಿಹಾರ ನೀಡಿಲ್ಲವೆಂದು, ಬದಲಿಯಾಗಿ ಅಭಿವೃದ್ಧಿ ಜಾಗದಲ್ಲಿ ಬೆಲೆಬಾಳುವ ಆಸ್ತಿಯನ್ನು ನಿಯಮಬಾಹಿರವಾಗಿ 50:50 ಅನುಪಾತದಲ್ಲಿ ಹಂಚಿಕೆ ಮಾಡಿ, ಪ್ರಾಧಿಕಾರಕ್ಕೆ ಹಾಗೂ ಸರ್ಕಾರಕ್ಕೆ ಸುಮಾರು ಸಾವಿರ ಕೋಟಿಗೂ ಹೆಚ್ಚು ಆರ್ಥಿಕ ನಷ್ಟವುಂಟು ಮಾಡಿದ್ದಾರೆ ಎಂದ ತಿಳಿಸಿದ್ದಾರೆ. ಈ ಪತ್ರದ ಆಧಾರದ ಮೇಲೆ ಇಡಿ ಸ್ವಯಂಪ್ರೇರಿತವಾಗಿ ದೂರು ದಾಖಲಿಸಿಕೊಂಡು ತನಿಖೆ ನಡೆಸಬೇಕು. ಇಲ್ಲವೇ ನಾನೇ ಕೆಲವು ದಿನಗಳ ನಂತರ ಈ ಬಗ್ಗೆ ಇಡಿಗೆ ದೂರು ಸಲ್ಲಿಸುತ್ತೇನೆ ಎಂದರು.


ಕೌಟಿಲ್ಯ ರಘು

ಮುಡಾದ ಹಗಲುದರೋಡೆಯನ್ನು ಈ ಮೊದಲೇ ನಾವು ಗಮನಕ್ಕೆ ತಂದಿದ್ದೆವು. ಪ್ರಕರಣ ಬೆಳಕಿಗೆ ಬಂದಾಗ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ವೀರಾವೇಶದಿಂದ ಮಾತನಾಡಿದ್ದರು. ಈ ವೇಳೆ ಕೆಲ ಅಧಿಕಾರಿಗಳನ್ನು ವರ್ಗ ಮಾಡಿದ್ದನ್ನು ಬಿಟ್ಟರೆ ಬೇರೇನನ್ನೂ ಮಾಡಲಿಲ್ಲ. ವೆಂಕಟಾಚಲಪತಿ ನೇತೃತ್ವದಲ್ಲಿ ತನಿಖಾ ತಂಡ ರಚನೆ ಆಯಿತು. ಬಳಿಕ ದೇಸಾಯಿ ಆಯೋಗ ಸಹ ರಚನೆ ಆಗಿದೆ. ಹೀಗಿದ್ದರೂ ಹಗರಣದಲ್ಲಿ ಕೇಳಿ ಬಂದಿರುವ ಮಾಜಿ ಆಯುಕ್ತರಾದ ಡಿ.ಬಿ.ನಟೇಶ್ ಮತ್ತು ಜಿ.ಟಿ.ದಿನೇಶ್ ಅವರಿಗೆ ನೋಟಿಸ್ ನೀಡಿ, ಕೂಡಲೇ ಬಂಧಿಸಬಹುದಿತ್ತು. ಆದರೆ ಈ ರೀತಿ ಮಾಡದೇ ಸಚಿವರು ಇವರನ್ನು ರಕ್ಷಿಸುತ್ತಿದ್ದಾರೆ ಎಂದು ಆರೋಪಿಸಿದರು.

2020ರಿಂದ 50:50 ಅನುಪಾತದಲ್ಲಿ ನಿವೇಶನ ಪಡೆದುಕೊಂಡಿರುವವರಿಗೆ ಯಾವುದೇ ಬ್ಯಾಂಕ್‌ಗಳು ಲೋನ್ ನೀಡಬಾರದು ಎಂದು ನಾನು ಈಗಾಗಲೇ ಆರ್‌ಬಿಐಗೆ ಪತ್ರ ಬರೆದಿದ್ದು, 50:50 ಅನುಪಾತದ ನಿವೇಶನಕ್ಕೆ ಬ್ಯಾಂಕ್‌ಗಳು ಪರಾಮರ್ಶೆ ಮಾಡಿ ಲೋನ್ ನೀಡಬೇಕು ಎಂದು ಕೌಟಿಲ್ಯ ರಘು ಮನವಿ ಮಾಡಿಕೊಂಡಿದ್ದೇನೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಾನೇನು ತಪ್ಪು ಮಾಡಿಲ್ಲ. ನಾನು ಪರಿಶುದ್ಧ ವ್ಯಕ್ತಿ ಎಂದು ಹೇಳಿಕೊಳ್ಳುತ್ತಾರೆ. ಆದರೆ, ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುತ್ತಿದ್ದಂತೆ ವಕೀಲರ ಮೊರೆ ಹೋಗುತ್ತೇನೆ ಎಂಬುದು ಎಷ್ಟು ಸರಿ ಎಂದು ಪ್ರಶ್ನಿಸಿ, ರಾಮಾಯಣದಲ್ಲಿ ಸೀತೆ ಅಗ್ನಿಪರೀಕ್ಷೆ ಎದುರಿಸಿದ ರೀತಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ ತನಿಖೆಗೆ ಸಹಕರಿಸಿ, ನೀವು ತಪ್ಪು ಮಾಡಿಲ್ಲ ಎಂದು ಸಾಬೀತಾದ ದಿನ ಮತ್ತೆ ಮುಖ್ಯಮಂತ್ರಿಗಳಾಗಿ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮಾಜಿ ಉಪಮೇಯರ್ ಶೈಲೇಂದ್ರ, ಬಿ.ಎಂ.ರಘು, ಗಿರಿಧರ್, ಮಹೇಶ್ ರಾಜೇ ಅರಸ್ ಉಪಸ್ಥಿತರಿದ್ದರು.

ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದವರನ್ನು ಸ್ಮರಿಸಿ

ಪಿಇಎಸ್ ವಿಶ್ವವಿದ್ಯಾಲಯದ ಹಿರಿಯ ವಿಜ್ಞಾನಿ ಡಾ.ಜಿ.ಪಾಂಡುರಂಗಮೂರ್ತಿ ಕರೆ


ಮೈಸೂರಿನ ರುಡ್‌ಸೆಟ್‌ನಲ್ಲಿ ನಡೆದ 78ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಪಿಇಎಸ್ ವಿಶ್ವವಿದ್ಯಾಲಯದ ಹಿರಿಯ ವಿಜ್ಞಾನಿ ಡಾ.ಜಿ.ಪಾಂಡುರಂಗ ಮೂರ್ತಿ ಅವರನ್ನು ಸನ್ಮಾನಿಸಲಾಯಿತು. ಚಿತ್ರದಲ್ಲಿ ಲತಾಮಣಿ, ಯೋಗೇಶ್, ರುಡ್‌ಸೆಟ್ ನಿರ್ದೇಶಕಿ ಕೆ.ಎಸ್.ಸರಿತಾ, ಕೈಗಾರಿಕೋದ್ಯಮಿ ದಯಾನಂದ ಸಾಗರ್, ರಮಾನಾಯಕ್, ಉಪನ್ಯಾಸಕ ಪಾಲ್‌ರಾಜ್ ಇತರರಿದ್ದಾರೆ.

ಮೈಸೂರು, ಆ.18– ಸ್ವಾತಂತ್ರ್ಯೋತ್ಸವದ ಈ ಸಂಭ್ರಮಾಚರಣೆಯಲ್ಲಿ ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ ವೀರಾಗ್ರಣಿಗಳನ್ನು ಸ್ಮರಿಸುವ ಮೂಲಕ ದೇಶಾಭಿಮಾನ ಮೆರೆಯಿರಿ ಎಂದು ಪಿಇಎಸ್ ವಿಶ್ವವಿದ್ಯಾಲಯದ ಹಿರಿಯ ವಿಜ್ಞಾನಿ ಡಾ.ಜಿ.ಪಾಂಡುರಂಗ ಮೂರ್ತಿ ರುಡ್‌ಸೆಟ್ ಸಂಸ್ಥೆಯ ಶಿಬಿರಾರ್ಥಿಗಳಿಗೆ ತಿಳಿಸಿದರು.

ಮೈಸೂರಿನ ರುಡ್‌ಸೆಟ್ (ಧರ್ಮಸ್ಥಳ ಪ್ರಾಯೋಜಿತ ಕಾರ್ಯ ಘಟಕ) ಸಂಸ್ಥೆಯಲ್ಲಿ ನಡೆದ 78ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಅಂದು ಸಂಗೊಳ್ಳಿ ರಾಯಣ್ಣ ಬ್ರಿಟಿಷ್‌ರ ಕುತಂತ್ರದಿಂದ ನೇಣಿಗೆ ಕೊರಳೊಡ್ಡುವ ಮುನ್ನ ಇದು ನನ್ನ ಅಂತ್ಯವಲ್ಲ ಆರಂಭ. ದೇಶಕ್ಕೆ ಸ್ವಾತಂತ್ರ್ಯ ಸಿಗುವವರೆಗೂ ನಾಡಿನ ಪೂಜ್ಯ ಮಾತೆಯರ ಗರ್ಭದಲ್ಲಿ ಮತ್ತೆ ಮತ್ತೆ ಹುಟ್ಟಿ ಬರುತ್ತೇನೆ. ಪ್ರತಿ ಮನೆಯಲ್ಲೂ ರಾಯಣ್ಣ ಮತ್ತೆ ಜನ್ಮ ತಾಳಲಿ ಎಂದಷ್ಟೇ ಪ್ರಾರ್ಥಿಸಿ ಎಂದು ನುಡಿದ ಕ್ರಾಂತಿ ವೀರನ ಉಕ್ತಿಯಂತೆ ಆತನ ಜನ್ಮ ದಿನದಂದೇ ಭಾರತ ಸ್ವತಂತ್ರವಾಯಿತು ಎಂದರು.

ಪ್ರಸ್ತುತ ಭ್ರಷ್ಟ ರಾಜಕೀಯ ವ್ಯವಸ್ಥೆಯಿಂದ ಸಮಾಜ ಮಲೀನಗೊಳ್ಳುತ್ತಿದ್ದು, ಯುವ ಪೀಳಿಗೆ ಇದರಿಂದ ಎಚ್ಚರಗೊಂಡು ಸ್ವಾರ್ಥ, ತ್ಯಾಗ ಮತ್ತು ದೇಶಪ್ರೇಮದ ಧ್ಯೇಯೋದ್ದೇಶಗಳನ್ನು ಪಾಲಿಸುವ ಮೂಲಕ ಜೀವನ ಕಟ್ಟಿಕೊಳ್ಳಬೇಕು ಎಂದು ಸಲಹೆ ನೀಡಿದರು.

ರುಡ್‌ಸೆಟ್ ಸಂಸ್ಥೆ ಕೌಶಲ ತರಬೇತಿಯಲ್ಲಿ ಅಗತ್ಯವಿರುವ ವಿಜ್ಞಾನ ಮತ್ತು ತಂತ್ರಜ್ಞಾನದ ಸಮೀಕರಣಗಳನ್ನು ಪಿಇಎಸ್ ವಿಶ್ವವಿದ್ಯಾಲಯದ ಜಂಟಿ ಸಹಯೋಗದಲ್ಲಿ ನಿರ್ದಿಷ್ಟ ಪ್ರಸ್ತಾವನಾ ಯೋಜನೆಗಳ ಮೂಲಕ ಪ್ರಾಜೆಕ್ಟ್ ಅನುಷ್ಠಾನ ಹಾಗೂ ವಿಚಾರ ವಿನಿಮಯ ಮಾಡಿಕೊಳ್ಳಲು ಚಾಲನೆ ನೀಡಲಾಗುವುದು ಎಂದು ಭರವಸೆ ನೀಡಿದರು.

ನಿವೃತ್ತ ಕಾರ್ಯ ನಿರ್ವಹಣಾಧಿಕಾರಿ ಜಯರಾಂ ಮಾತನಾಡಿ, ಪ್ರಸ್ತುತ ಯುವಕರು ಯೋಗ, ವ್ಯಾಯಾಮಗಳನ್ನು ರೂಢಿಸಿಕೊಂಡು ಆರೋಗ್ಯಯುತ ಭಾರತ ನಿರ್ಮಿಸಲು ಸಹಕರಿಸಬೇಕು ಎಂದು ಕರೆ ನೀಡಿದರು.

ರುಡ್‌ಸೆಟ್ ಸಂಸ್ಥೆ ಪೂರ್ವ ನಿರ್ದೇಶಕ ಡಿ.ಟಿ.ರಾಮನುಜಮ್ ಮಾತನಾಡಿ, ರುಡ್‌ಸೆಟ್ ಸಂಸ್ಥೆ ಸರ್ಕಾರದ ಆರ್ಥಿಕ ಸಹಾಯದ ಮೂಲಕ ಬೆಳೆದು ಬಂದ ದಾರಿ ಮೆಲುಕು ಹಾಕುತ್ತಾ, ಇರುವ ಸಂಪನ್ಮೂಲಗಳನ್ನು ಬಳಸಿಕೊಂಡು ಯುವಕರು ಸ್ವಾವಲಂಬಿಯಾಗಿ ಬದುಕಲು ಮುಂದಾಗಬೇಕು. ಆಗ ಮಾತ್ರ ನಮ್ಮ ಸ್ವತಂತ್ರ ಭಾರತದ ಪ್ರಗತಿಗೆ ನಿಜವಾದ ಶಕ್ತಿ ಬರುತ್ತದೆ ಎಂದರು.

ಕಾರ್ಯಕ್ರಮದಲ್ಲಿ ರುಡ್‌ಸೆಟ್ ಸಂಸ್ಥೆ ನಿರ್ದೇಶಕಿ ಕೆ.ಎಸ್.ಸರಿತಾ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಬಿರಾರ್ಥಿಗಳು ದೇಶ ಭಕ್ತಿ ಕುರಿತಾದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು.

ಇದೇ ವೇಳೆ ಸಮುದಾಯ ಪೂರಕವಾದ ನಿರಂತರ ಸಂಶೋಧನಾ ತಂತ್ರಜ್ಞಾನದ ಕೊಡುಗೆ, ಜೈವಿಕ ಇಂಧನ ತಯಾರಿಕೆ ಮತ್ತು ಸುಸ್ಥಿರ ಅಭಿವೃದ್ಧಿ ಹಾಗೂ ರಾಂಚಿ ವಿವಿಯಿಂದ ನೀಡಲಾದ 2024ರ ವರ್ಷದ ವಿಜ್ಞಾನಿ ಪ್ರಶಸ್ತಿ ಇವುಗಳನ್ನು ಪರಿಗಣಿಸಿ ಕಾರ್ಯಕ್ರಮದಲ್ಲಿ ಪಿಇಎಸ್ ವಿಶ್ವವಿದ್ಯಾಲಯದ ಹಿರಿಯ ವಿಜ್ಞಾನಿ ಡಾ.ಜಿ.ಪಾಂಡುರಂಗ ಮೂರ್ತಿ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಉದ್ಯಮಿಗಳಾದ ದಯಾನಂದ ಸಾಗರ್, ರಾಮನಾಯಕ್, ಉಪನ್ಯಾಸಕ ಯೋಗೇಶ್ ಶಿರೂರು ಇದ್ದರು. ಲತಾಮಣಿ ಕಾರ್ಯಕ್ರಮ ನಿರೂಪಿಸಿದರು. ಹಿರಿಯ ಉಪನ್ಯಾಸಕ ಪಾಲ್‌ರಾಜ್ ವಂದನೆ ಸಲ್ಲಿಸಿದರು.

ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ

ಮೈಸೂರಲ್ಲಿ ರಾಜ್ಯಪಾಲರ ವಿರುದ್ಧ ಪಂಜಿನ ಮೆರವಣಿಗೆ


ಮೈಸೂರಿನಲ್ಲಿ ಭಾನುವಾರ ಸಂಜೆ ರಾಜ್ಯಪಾಲರ ವಿರುದ್ಧ ಪಂಜಿನ ಮೆರವಣಿಗೆ ನಡೆಸಲಾಯಿತು.

ಮೈಸೂರು, ಆ.18(ಪಿಎಂ)– ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಖಂಡಿಸಿ ಸಿದ್ದರಾಮಯ್ಯ ಅಭಿಮಾನಿಗಳು, ವಿವಿಧ ಸಂಘಟನೆಗಳ ಮುಖಂಡರು, ಕಾಂಗ್ರೆಸ್ ಕಾರ್ಯಕರ್ತರು ಭಾನುವಾರ ಸಂಜೆ ಪಂಜಿನ ಮೆರವಣಿಗೆ ನಡೆಸುವ ಮೂಲಕ ಪ್ರತಿಭಟನೆ ನಡೆಸಿದರು.

ಮೈಸೂರಿನ ಚಾಮುಂಡಿಪುರಂ ವೃತ್ತದಿಂದ ಆರಂಭವಾದ ಪಂಜಿನ ಮೆರವಣಿಗೆಯು, ನಾರಾಯಣ ಶಾಸ್ತ್ರಿ ರಸ್ತೆ ಮಾರ್ಗವಾಗಿ ನಂಜುಮಳಿಗೆ (ಕನಕ ವೃತ್ತ) ವೃತ್ತದವರೆಗೆ ನಡೆಯಿತು. ಮಾರ್ಗದುದ್ದಕ್ಕೂ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ವಿರುದ್ಧ ಧಿಕ್ಕಾರದ ಘೋಷಣೆಗಳು ಮೊಳಗಿದವು.

ಪಂಜಿನೊಂದಿಗೆ 'ಸಂವಿಧಾನ ವಿರೋಧಿ ರಾಜ್ಯಪಾಲರಿಗೆ ಧಿಕ್ಕಾರ' ಎಂಬುದೂ ಸೇರಿದಂತೆ ರಾಜ್ಯಪಾಲರ ವಿರುದ್ಧ ವಿವಿಧ ಘೋಷವಾಕ್ಯ ಒಳಗೊಂಡ ಫಲಕಗಳನ್ನಿಡಿದು ಸಾಗಿದ ಪ್ರತಿಭಟನಾಕಾರರು, ಬಿಜೆಪಿ ಹಾಗೂ ಜೆಡಿಎಸ್ ನಾಯಕರ ವಿರುದ್ಧವೂ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಮೆರವಣಿಗೆಯು ನಂಜುಮಳಿಗೆ ವೃತ್ತ ತಲುಪುತ್ತಿದ್ದಂತೆ ರಾಜ್ಯಪಾಲರ ಭಾವಚಿತ್ರ ಒಳಗೊಂಡ ಫಲಕಗಳನ್ನು ಬೆಂಕಿಗಾಹುತಿ ಮಾಡಿ ರಾಜ್ಯಪಾಲರ ವಿರುದ್ಧ ಕಿಡಿಕಾರಿದರು. ಅಲ್ಲದೆ, ಕೆಲಕಾಲ ಪಂಜು ಹಿಡಿದು ಮಾನವ ಸರಪಳಿ ನಿರ್ಮಿಸಿ ರಾಜ್ಯಪಾಲರ ಕ್ರಮ ಖಂಡಿಸಿದರು.


ಬಳಿಕ ಮಾತನಾಡಿದ ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಪ್ರಾಮಾಣಿಕರಾದ ಸಿಎಂ ಸಿದ್ದರಾಮಯ್ಯನವರ ವಿರುದ್ಧ ಸಾವಿರಾರು ಕೋಟಿ ಆಸ್ತಿ ಮಾಡಿದವರೆಲ್ಲಾ ಇಂದು ಮಾತನಾಡುತ್ತಿದ್ದಾರೆ. ಸಿದ್ದರಾಮಯ್ಯನವರ ವ್ಯಕ್ತಿತ್ವ ಮತ್ತು ಜನಪ್ರಿಯತೆ ಸಹಿಸಲಾಗದೇ ಷಡ್ಯಂತರ ಮಾಡಲಾಗಿದೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರು ವಿವಿಧ ರಾಜ್ಯಗಳಲ್ಲಿ ರಾಜ್ಯಪಾಲರ ಮೂಲಕ ಚುನಾಯಿತ ರಾಜ್ಯ ಸರ್ಕಾರಗಳನ್ನು ಅಸ್ಥಿರಗೊಳಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರನ್ನು ಜೈಲಿಗೆ ಹೋಗುವಂತೆ ಮಾಡಿದ್ದಾರೆ. ಈ ರೀತಿ ದೇಶದೆಲ್ಲೆಡೆ ತೊಂದರೆ ಕೊಡುತ್ತಿದ್ದಾರೆ. ರಾಜ್ಯಪಾಲರ ವಿರುದ್ಧ ಇಡೀ ರಾಜ್ಯಾದ್ಯಂತ ಪ್ರತಿಭಟನೆಗಳು ಆರಂಭವಾಗಿವೆ. ರಾಜ್ಯದ ಜನತೆ ದಂಗೆ ಏಳುವ ಪರಿಸ್ಥಿತಿ ನಿರ್ಮಾಣವಾಗಿದೆ. ಸಿದ್ದರಾಮಯ್ಯನವರು ಯಾವುದೇ ಭ್ರಷ್ಟಾಚಾರ ಮಾಡಿಲ್ಲ. ಈ ಪ್ರಕರಣ ಹೈಕೋರ್ಟ್ ಮತ್ತು ಸುಪ್ರಿಂಕೋರ್ಟ್‌ನಲ್ಲಿ ನಿಲ್ಲುವುದಿಲ್ಲ. ಕೇಂದ್ರದ ಬಿಜೆಪಿ ಸರ್ಕಾರ ಇದೇ ರೀತಿ ಮುಂದುವರೆದರೆ ಬಾಂಗ್ಲಾ ದೇಶದ ಪರಿಸ್ಥಿತಿ ದೇಶದಲ್ಲೂ ಉದ್ಭವಿಸಲಿದೆ ಎಂದು ಎಚ್ಚರಿಸಿದರು.

ಕೆ.ಆರ್. ಬ್ಯಾಂಕ್ ಉಪಾಧ್ಯಕ್ಷ ಬಸಪ್ಪ (ಡಿ.ಬಸವರಾಜು) ಮಾತನಾಡಿ, ಸಿದ್ದರಾಮಯ್ಯನವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಮೂಲಕ ರಾಜ್ಯಪಾಲರು ಬಿಜೆಪಿ ಏಜೆಂಟ್‌ರಂತೆ ವರ್ತಿಸಿದ್ದಾರೆ. ಸಿದ್ದರಾಮಯ್ಯನವರು ತಮ್ಮ 40 ವರ್ಷಗಳ ಸುದೀರ್ಘ ರಾಜಕೀಯ ಜೀವನದಲ್ಲಿ ಒಂದು ಕಪ್ಪುಚುಕ್ಕೆ ಸಹ ಹೊಂದಿಲ್ಲ. ಅಂತಹವರಿಗೆ ಕಳಂಕ ತರಲು ಬಿಜೆಪಿ ಮತ್ತು ಜೆಡಿಎಸ್‌ನವರು ಪಿತೂರಿ ಮಾಡಿದ್ದಾರೆ. ಪ್ರಾಮಾಣಿಕರಾದ ಸಿದ್ದರಾಮಯ್ಯ ಇದರಲ್ಲಿ ಗೆದ್ದು ಬರಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ.ರಾಜೀವ್, ಮುಖಂಡರಾದ ಅಶೋಕಪುರಂ ವಿ.ರಾಮಸ್ವಾಮಿ, ನಗರಪಾಲಿಕೆ ಮಾಜಿ ಸದಸ್ಯರಾದ ಕೆ.ವಿ.ಮಲ್ಲೇಶ್, ಸುನೀಲ್, ಕರ್ನಾಟಕ ಪ್ರದೇಶ ಕುರುಬರ ಸಂಘದ ಮಾಜಿ ಅಧ್ಯಕ್ಷ ಬಿ.ಸುಬ್ರಹ್ಮಣ್ಯ, ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಅಧ್ಯಕ್ಷ ಕೆ.ಎಸ್.ಶಿವರಾಮು, ಮುಖಂಡರಾದ ನವೀನ್ ಕೆಂಪಿ, ಅಹಿಂಸ ಜವರಪ್ಪ, ಲೋಕೇಶ್‌ಕುಮಾರ್ ಮಾದಾಪುರ ಸೇರಿದಂತೆ ಹಲವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಹುಬ್ಬಳ್ಳಿ–ಧಾರವಾಡ ಮೇಯರ್‌ಗೆ ಅಭಿನಂದನೆ


ಮೈಸೂರಿಗೆ ಆಗಮಿಸಿದ್ದ ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಮೇಯರ್ ರಾಯಣ್ಣ ಬಡಿಗೇರ್ ಹಾಗೂ ಶ್ರೀಮತಿ ಲಕ್ಷ್ಮೀ ಬಡಿಗೇರ್ ಅವರನ್ನು ಮೈಸೂರು ಜಿಲ್ಲಾ ವಿಶ್ವಕರ್ಮ ಬಡಗಿ ಕೆಲಸಗಾರರ ವತಿಯಿಂದ ಸನ್ಮಾನಿಸಲಾಯಿತು. ಈ ವೇಳೆ ಕೆಪಿಸಿಸಿ ಓಬಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ಮೋಗಣ್ಣಾಚಾರ್, ಶ್ರೀ ವಿಶ್ವಕರ್ಮ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಜಯರಾಮಚಾರಿ, ಅಖಿಲ ಕರ್ನಾಟಕ ವಿಶ್ವಕರ್ಮ ಸಮಾಜದ ಎಸ್.ನಾಗರಾಜು, ಮುಖಂಡರಾದ ಶ್ರೀಮತಿ ರಾಣಿ ಸಿದ್ದಪ್ಪಾಜಿ, ಸಿದ್ದಪ್ಪಾಜಿ, ರುದ್ರೇಶ್, ಮಲ್ಲೇಶ್, ರಘು, ವಿಕ್ರಾಂತ್ ಮತ್ತಿತರರಿದ್ದರು. ರಾಯಣ್ಣ ಬಡಿಗೇರ್ ಅವರು ಹುಬ್ಬಳ್ಳಿ–ಧಾರವಾಡ ಪಾಲಿಕೆಯ ಪ್ರಥಮ ವಿಶ್ವಕರ್ಮ ಸಮುದಾಯದ ಮುಖಂಡರು.

ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ




ಶ್ರೀಮಾನ್ ಶಿವಲಿಂಗೇಗೌಡರವರು

(ಮಾಲೀಕರು : ಶ್ರೀ ಶಿವ ಡ್ರಾಮಾ ಸೀನರಿ ಹಾಗೂ ಮಾಜಿ. ಗ್ರಾ.ಪಂ. ಉಪಾಧ್ಯಕ್ಷರು)

ಇವರು ದಿನಾಂಕ : 10-08-2024ನೇ ಶನಿವಾರ ದೈವಾಧೀನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ತತ್ಸಂಬಂಧ ಮೃತರ ಉತ್ತರ ಕ್ರಿಯಾದಿ ಭೂಶಾಂತಿ ಕಾರ್ಯವನ್ನು ದಿನಾಂಕ : 20-08-2024ನೇ ಮಂಗಳವಾರ ಬೆಳಗ್ಗೆ 11.00 ಘಂಟೆಗೆ ಮೇಲ್ಕಂಡ ಕಾರಸವಾಡಿ ಗ್ರಾಮದ ನಮ್ಮ ಸ್ವಗೃಹದಲ್ಲಿ ನಡೆಸಲು ಗುರು–ಹಿರಿಯರು ನಿಶ್ಚಯಿಸಿರುವುದರಿಂದ ಆಹ್ವಾನ ಪತ್ರಿಕೆ ತಲುಪದವರು ಇದನ್ನೇ ಆಹ್ವಾನವೆಂದು ತಿಳಿದು ತಾವುಗಳು ಮತ್ತು ಸಮಸ್ತ ರಂಗಭೂಮಿ ಕಲಾವಿದರುಗಳು ಸಕಾಲಕ್ಕೆ ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ.

ಇಂತಿ ದುಃಖತಪ್ತರು : ಮೃತರ ತಾಯಿ ನಿಂಗಮ್ಮ ಮತ್ತು ಜಯಮ್ಮ, ಪತ್ನಿ ಎಂ.ಗಾಯಿತ್ರಿ, ಮಗ ಕೆ.ಎಸ್.ವೇದಾನಂದ(ಗುರು) ಶಿವ ಡ್ರಾಮಾ ಸೀನರಿ ಮಾಲೀಕರು, ಶ್ರೀಮತಿ ಪುಣ್ಯವತಿ ಮತ್ತು ಶ್ರೀ ಕೆ.ಸಿ.ಕೃಷ್ಣಗೌಡ ಮತ್ತು ಹೆಣ್ಣುಮಕ್ಕಳಾದ ಕು|| ಕೀರ್ತನ, ಶ್ರೀಮತಿ ಪೂರ್ಣಿಮ ಮತ್ತು ಶ್ರೀ ಎಸ್.ಆರ್. ರಾಜಗೋಪಾಲ್ ಕುಟುಂಬವರ್ಗ, ನಂಜನಗೂಡು, ಶ್ರೀಮತಿ ಪೂಜಾಮಣಿ ಮತ್ತು ಶ್ರೀ ಟಿ.ಲೋಕೇಶ್ ಕುಟುಂಬವರ್ಗ, ಮೈಸೂರು.
ಸೋದರ ಮಾವ ಶ್ರೀಮತಿ ಲಕ್ಷ್ಮಮ್ಮ ಮೈ ಮತ್ತು ಶ್ರೀ ಬಸೀಗೌಡರ ಕುಟುಂಬವರ್ಗ, ಕಾರಸವಾಡಿ.
ಶ್ರೀಮತಿ ಲೇ ಕೆಂಪಮ್ಮ ಮತ್ತು ಶ್ರೀ ಲೇ|| ಗೊರವಿ ದೇವಯ್ಯರವರ ಕುಟುಂಬವರ್ಗ, ಕೆ.ಜಿ.ಕೊಪ್ಪಲು.
ಶ್ರೀಮತಿ ಪುಟ್ಟದೇವಮ್ಮ ಮತ್ತು ಶ್ರೀ ಲೇ|| ಮಾಲಯ್ಯರವರ ಕುಟುಂಬವರ್ಗ, ಕೆ.ಜಿ.ಕೊಪ್ಪಲು.
ಶ್ರೀಮತಿ ಭಾಗ್ಯಮ್ಮ ಮತ್ತು ಶ್ರೀ ಚನ್ನೇಗೌಡರ ಕುಟುಂಬವರ್ಗ, ಬಿ.ಹೊಸಹಳ್ಳಿ.
ಶ್ರೀಮತಿ ಜಯಲಕ್ಷ್ಮಿ ಮತ್ತು ಶ್ರೀ ಬಸವರಾಜುರವರ ಕುಟುಂಬವರ್ಗ, ಜಯನಗರ, ಮೈಸೂರು.
ಶ್ರೀಮತಿ ಲೇ ಲಕ್ಷ್ಮಮ್ಮ ಮತ್ತು ಶ್ರೀ ಲೇ|| ಬೋರಯ್ಯರವರ ಕುಟುಂಬವರ್ಗ, ಮೈಸೂರು.
ಶ್ರೀಮತಿ ಪುಟ್ಟಲಿಂಗಮ್ಮ ಮತ್ತು ಶ್ರೀ ಶಿಂಗೇಗೌಡರ ಕುಟುಂಬವರ್ಗ, ಶ್ರೀರಂಗಪಟ್ಟಣ.
ಶ್ರೀಮತಿ ದೇವಮ್ಮ ಮತ್ತು ಶ್ರೀ ದೇವೆಗೌಡರ ಕುಟುಂಬವರ್ಗ, ಕೆ.ಜಿ.ಕೊಪ್ಪಲು.
ಶ್ರೀಮತಿ ಲೇ ಗಾಯಿತ್ರಮ್ಮ ಮತ್ತು ಶ್ರೀ ಲೇ ಲಿಂಗಯ್ಯ @ ಕರಿಯಪ್ಪರವರ ಕುಟುಂಬವರ್ಗ, ಕಾರಸವಾಡಿ ಮತ್ತು ಕಾರಸವಾಡಿ ಗ್ರಾಮಸ್ಥರು ಹಾಗೂ ಬಂಧು–ಮಿತ್ರರು ಮತ್ತು ಸಮಸ್ತ ರಂಗಭೂಮಿ ಕಲಾವಿದರುಗಳು.ಗ್ರಾಮಸ್ಥರು ಹಾಗೂ ಬಂಧು–ಮಿತ್ರರು ಮತ್ತು ಸಮಸ್ತ ರಂಗಭೂಮಿ ಕಲಾವಿದರುಗಳು.

ವೈಕುಂಠ ಸಮಾರಾಧನೆ



ಇವರು ದಿನಾಂಕ 10-08-2024ನೇ ಶನಿವಾರ ದೈವಾಧೀನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ತತ್ಸಂಬಂಧ ಮೃತರ ವೈಕುಂಠ ಸಮಾರಾಧನೆ ಯನ್ನು ದಿನಾಂಕ : 20-08-2024 ನೇ ಮಂಗಳವಾರ ಬೆಳಗ್ಗೆ 7 ರಿಂದ 9 ಗಂಟೆ ಒಳಗೆ ಮೈಸೂರಿನ ಸ್ವಗೃಹ #40 ವಿಫ್ರೋ ಲೇಔಟ್, ಶ್ಯಾದನಹಳ್ಳಿ ಮುಖ್ಯ ರಸ್ತೆ, ಮೈಸೂರು ಇಲ್ಲಿ ಏರ್ಪಡಿಸಿರುವುದರಿಂದ ತಾವುಗಳು ಸಕಾಲಕ್ಕೆ ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ. ದುಃಖತಪ್ತರು: ಶ್ರೀಮತಿ ಜಯಮ್ಮ ಮಕ್ಕಳು ಅಳಿಯ ಮೊಮ್ಮಕ್ಕಳು ಹಾಗೂ ಬಂಧುಮಿತ್ರರು ಭೋಜನ: ಮ.1 ಗಂಟೆಗೆ

ರವಿ.ಎನ್ (02.02.1949 - 10.08.2024)

4ನೇ ವರ್ಷದ ಪುಣ್ಯಸ್ಮರಣೆ



ನೀವು ನಮ್ಮನ್ನಗಲಿ ಇಂದಿಗೆ 4 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ

ದುಃಖತಪ್ತರು: ಸಹೋದರರು, ಮಗ, ಹೆಣ್ಣುಮಕ್ಕಳು, ಸೊಸೆ, ಅಳಿಯಂದಿರು, ಮೊಮ್ಮಕ್ಕಳು

ಡಾ.ಎಸ್.ಸುಬ್ರಮಣ್ಯಂ

ಜಿಲ್ಲೆಗಳ ವಲಯ ಆರೋಗ್ಯಾಧಿಕಾರಿ ಹಾಗೂ ಜೆಎಸ್‌ಎಸ್ ಆಸ್ಪತ್ರೆಯ ಚರ್ಮರೋಗ ವಿಭಾಗದ ಹಿಂದಿನ ಮುಖ್ಯಸ್ಥರು

9ನೇ ವರ್ಷದ ಪುಣ್ಯಸ್ಮರಣೆ



ಶ್ರೀಮತಿ ಭಾಗ್ಯ ಎನ್.
ಸಹ ಶಿಕ್ಷಕಿ, ಮಂಗಲ
18.06.1974–19.08.2015

ನೀವು ನಮ್ಮನ್ನಗಲಿ 9 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ

ಇಂತಿ ದುಃಖತಪ್ತರು
ಪತಿ: ಆನಂದ. ಸಿ., ತಂಗಿ: ಎನ್. ಪ್ರಭಾ, ಮಕ್ಕಳು: ಎ.ಬಿ.ರೋಶ್ನಿ, ಎ.ಬಿ. ಶಾಶ್ವತ್, ಅಶೋಕನಗರದ ಬೋಗಯ್ಯನ ಕುಟುಂಬವರ್ಗ ಸಂತೇಮರಹಳ್ಳಿ ನಂಜಯ್ಯ ನವರ ಕುಟುಂಬವರ್ಗ

ಪುಣ್ಯಸ್ಮರಣೆ



ಶ್ರೀ ಬದ್ರಿ ಪ್ರಸಾದ್ ರವರು

02-09-1902 to 19-08-1984

ಎಂದೆಂದಿಗೂ ನಿಮ್ಮ ಆಶೀರ್ವಾದ, ಮಾರ್ಗದರ್ಶನ ಮತ್ತು ಪ್ರೀತಿಯನ್ನು ಶಾಶ್ವತವಾಗಿ ಪಾಲಿಸಲಾಗುವುದು

- ಸಂಸ್ಥಾಪಕರು, ಇಂದ್ರ ಗ್ರೂಪ್ ಆಫ್ ಕನ್ಸರ್ನ್ಸ್

ಸಾರ್ವಜನಿಕ ಪ್ರಕಟಣೆ

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ಷೆಡ್ಯೂಲ್‌ನಲ್ಲಿ ನಮೂದಿಸಿರುವ ಸ್ವತ್ತನ್ನು ನನ್ನ ಕಕ್ಷಿದಾರರು ಸದರಿ ಷೆಡ್ಯೂಲ್ ಸ್ವತ್ತಿನ ಮಾಲೀಕರಾದ ಲೇಟ್ ಎಂ.ವಿ. ನಾಗರಾಜ್ ರವರ ಮಕ್ಕಳುಗಳಾದ ಶ್ರೀಮತಿ. ಮಾಲೀನಿ ನಿರಂಜನ್ ಜೋಶಿ ಮತ್ತು ಶ್ರೀಮತಿ. ಜಯಶ್ರೀ ನಾಗರಾಜ್ ರವರುಗಳಿಂದ ಖರೀದಿಸಲು ಉದ್ದೇಶಿಸಿರುತ್ತಾರೆ. ಆದ ಕಾರಣ ಈ ಕೆಳಗೆ ನಮೂದಿಸಿರುವ ಷೆಡ್ಯೂಲ್ ಸ್ವತ್ತಿನ ವಿಚಾರದಲ್ಲಿ ಮೇಲೆ ತಿಳಿಸಿದ ವ್ಯಕ್ತಿಯಲ್ಲದೆ ಬೇರೆ ಯಾರಿಗಾದರೂ, ಯಾವುದೇ ರೀತಿಯ ಹಕ್ಕಾಗಲೀ, ಹಿತಾಸಕ್ತಿಯಾಗಲೀ, ಭಾಗಾಂಶವಾಗಲೀ ಅಥವಾ ಋಣಗಳಾಗಲೀ ಇದ್ದಲ್ಲಿ ನನ್ನನ್ನು ಮೊಬೈಲ್ ನಂ. **9916224750** ರ ಮೂಲಕವಾಗಲೀ ಅಥವಾ ಖುದ್ದಾಗಿ ನನ್ನ ಕಛೇರಿಯ ವಿಳಾಸದಲ್ಲಾಗಲೀ ಈ ದಿನದಿಂದ **ಹದಿನೈದು (15)** ದಿನಗಳ ಒಳಗಾಗಿ ಸಂಭಂದಪಟ್ಟ ದಾಖಲಾತಿಗಳೊಡನೆ ಸಂಪರ್ಕಿಸುವುದು. ಇಲ್ಲವಾದರೆ ಈ ಕೆಳಗೆ ನಮೂದಿಸಿರುವ ಷೆಡ್ಯೂಲ್ ಸ್ವತ್ತಿಗೆ ಸಂಭಂದಪಟ್ಟಂತೆ ಮೇಲೆ ತಿಳಿಸಿದ ವ್ಯಕ್ತಿಯನ್ನು ಹೊರತು ಪಡಿಸಿ ಬೇರೆ ಯಾರಿಗೂ ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿಯಾಗಲೀ ಇಲ್ಲವೆಂದೇ ಪರಿಗಣಿಸಿ ನನ್ನ ಕಕ್ಷಿದಾರರು ಈ ಕೆಳಗೆ ನಮೂದಿಸಿರುವ ಷೆಡ್ಯೂಲ್ ಸ್ವತ್ತನ್ನು ಖರೀದಿಸುತ್ತಾರೆ.

ಷೆಡ್ಯೂಲ್ ಸ್ವತ್ತಿನ ವಿವರ

ಮೈಸೂರು ಸಿಟಿ, ದೇವರಾಜ ಮೊಹಲ್ಲಾ, **ಗೋಕುಲಂ 3ನೇ ಹಂತ, 6ನೇ ಮೇನ್, 11ನೇ** ಕ್ರಾಸ್ ಮನೆ ನಂ. **495** ರಲ್ಲಿ ಅಳತೆ ಪೂರ್ವದಿಂದ ಪಶ್ಚಿಮಕ್ಕೆ **45.00 ಅಡಿಗಳು** ಹಾಗೂ ಉತ್ತರದಿಂದ ದಕ್ಷಿಣಕ್ಕೆ **70.00 ಅಡಿಗಳು** ಹಾಗೂ ಇದರಲ್ಲಿ ನಿರ್ಮಿಸಿರುವ ನೆಲ ಅಂತಸ್ತಿನ ಮನೆ.

ಸಹಿ/– ಡಿ.ಬಿ. ಪ್ರವೀಣ್ ವಕೀಲರು
#178/1, 1ನೇ ಮಹಡಿ, 11ನೇ ಮೇನ್, 5ನೇ ಕ್ರಾಸ್, ಜವರೇಗೌಡ ಪಾರ್ಕ್ ಹತ್ತಿರ, ಸರಸ್ವತಿಪುರಂ, ಮೈಸೂರು.
ಮೊ ನಂ. 9916224750
ಸ್ಥಳ: ಮೈಸೂರು ದಿನಾಂಕ: 18/08/2024